ಸಂಪುಟ: 05 ಸಂಚಿಕೆ: 171 ಪುಟಗಳು: 08 ಗುರುವಾರ 04 ಸೆಪ್ಟೆಂಬರ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಮನಸ್ಸನ್ನು ಶಕ್ತಿಯತವೂ, ಶಿಸ್ತುಬದ್ಧವೂ ಆಗಿಸುವುದರಲ್ಲಿಯೇ ಜ್ಞಾನದ ಮೌಲ್ಯವಿರುವಂಥದ್ದು.

## ಸೆ.22ರಿಂದ ನೂತನ ಜಿಎಸ್‌ಟಿ ಜಾರಿ

## 4ರ ಬದಲಿಗೆ 2 ಸ್ಲ್ಯಾಬ್ ದರಗಳಿಗೆ ಕೇಂದ್ರ ಸರ್ಕಾರ ಅನುಮೋದನೆ






• **ಉದಯವಾಹಿನಿ, ನವದೆಹಲಿ**

ಈ ಹಿಂದೆ ಜಾರಿಯಲ್ಲಿದ್ದ 4 ಜಿಎಸ್‌ಟಿ ಸ್ಲ್ಯಾಬ್‌ಗಳನ್ನು ಕೇಂದ್ರ ಸರ್ಕಾರ 2 ಸ್ಲ್ಯಾಬ್‌ಗಳಿಗೆ ಇಳಿಸಿದೆ. ಈ ಜಿಎಸ್‌ಟಿ ದರಗಳಿಗೆ ಬುಧವಾರ ನಡೆದ ಜಿಎಸ್‌ಟಿ ಮಂಡಳಿಯ ಸಭೆಯಲ್ಲಿ ಅನುಮೋದನೆ ನೀಡಲಾಗಿದೆ. ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅಧ್ಯಕ್ಷತೆಯಲ್ಲಿ ನಡೆದ ಮಂಡಳಿಯ 56ನೇ ಸಭೆಯು ಈ ನಿರ್ಧಾರ ತೆಗೆದುಕೊಂಡಿದೆ. ಅಸ್ತಿತ್ವದಲ್ಲಿರುವ ಶೇ.12 ಮತ್ತು ಶೇ. 28ರ ಸ್ಲ್ಯಾಬ್‌ಗಳನ್ನು ರದ್ದುಗೊಳಿಸಲಾಗಿದೆ. ಹೀಗಾಗಿ, ಇನ್ಮುಂದೆ ಶೇ. 5 ಮತ್ತು ಶೇ. 18ರ ಸ್ಲ್ಯಾಬ್ ದರಗಳು ಮಾತ್ರ ಜಾರಿಯಲ್ಲಿರಲಿವೆ. ಸೆ.22ರಿಂದ ಮಂಡಳಿಯ ನಿರ್ಧಾರಗಳು ಜಾರಿಗೆ ಬರಲಿದೆ. ಆರೋಗ್ಯ, ಜೀವವಿಮೆ ಮೇಲಿನ ಜಿಎಸ್‌ಟಿಯನ್ನು ಸಹ ರದ್ದುಪಡಿಸಲಾಗಿದೆ. ಜಿಒಎಂನ ಎಲ್ಲಾ ಶಿಫಾರಸುಗಳನ್ನು ಜಿಎಸ್ಟಿ ಮಂಡಳಿಯು ಅನುಮೋದಿಸಿದೆ. ಎಲ್ಲಾ ರಾಜ್ಯಗಳು ಈ ಪ್ರಸ್ತಾವನೆಗಳಿಗೆ ಸರ್ವಾನುಮತದಿಂದ ಒಪ್ಪಿಕೊಂಡಿವೆ. ಈ ಮೂಲಕ ದೇಶದ ಜನರಿಗೆ ಬಂಪರ್ ಕೊಡುಗೆ ನೀಡಲಾಗಿದೆ. ನನ್ನ ಸ್ವಾತಂತ್ರ್ಯೋತ್ಸವ ಭಾಷಣದಲ್ಲಿ, ಜಿಎಸ್‌ಟಿಯಲ್ಲಿ ಮುಂದಿನ ಪೀಳಿಗೆಯ ಸುಧಾರಣೆಗಳನ್ನು ತರುವ ನಮ್ಮ ಬಯಕೆಯ ಬಗ್ಗೆ ನಾನು ಮಾತನಾಡಿದ್ದೆ. ಸಾಮಾನ್ಯ ಜನರಿಗೆ ಜೀವನವನ್ನು ಸುಲಭಗೊಳಿಸುವ ಮತ್ತು ಆರ್ಥಿಕತೆಯನ್ನು ಬಲಪಡಿಸುವ ಗುರಿಯನ್ನು ಹೊಂದಿರುವ ಜಿಎಸ್‌ಟಿ ದರಗಳ ಸಮಗ್ರ ಮತ್ತು ತರ್ಕಬದ್ಧ ಸುಧಾರಣೆಗೆ ಕೇಂದ್ರ ಸರ್ಕಾರವು ವಿವರವಾದ ಪ್ರಸ್ತಾವನೆಯನ್ನು ಸಿದ್ಧಪಡಿಸಿದೆ. ಕೇಂದ್ರ ಮತ್ತು ರಾಜ್ಯಗಳನ್ನು ಒಳಗೊಂಡ ಜಿಎಸ್‌ಟಿ ಮಂಡಳಿ, ಕೇಂದ್ರ ಸರ್ಕಾರವು ಸಲ್ಲಿಸಿದ ಜಿಎಸ್‌ಟಿ ಕಡಿತ ಮತ್ತು ಸುಧಾರಣೆಗಳ ಪ್ರಸ್ತಾವನೆಗಳನ್ನು ಸರ್ವಾನುಮತದಿಂದ ಅನುಮೋದಿಸಿದೆ ಎಂದು ತಿಳಿಸಲು ನನಗೆ ಸಂತೋಷವಾಗಿದೆ. ಇದು ಸಾಮಾನ್ಯ ಜನರು, ರೈತರು, ಎಂಎಸ್‌ಎಂಇಗಳು, ಮಧ್ಯಮ ವರ್ಗ, ಮಹಿಳೆಯರು ಮತ್ತು ಯುವಕರಿಗೆ ಪ್ರಯೋಜನವನ್ನು ನೀಡುತ್ತದೆ. ಈ ಸಮಗ್ರ ಸುಧಾರಣೆಗಳು ನಮ್ಮ ನಾಗರಿಕರ ಜೀವನವನ್ನು ಸುಧಾರಿಸುತ್ತದೆ ಮತ್ತು ಎಲ್ಲರಿಗೂ, ವಿಶೇಷವಾಗಿ ಸಣ್ಣ ವ್ಯಾಪಾರಿಗಳು ಮತ್ತು ಕೈಗಾರಿಕೋದ್ಯಮಿಗಳಿಗೆ ವ್ಯಾಪಾರ ಮಾಡುವ ಸುಲಭತೆಯನ್ನು ಖಚಿತಪಡಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಈ ನಿರ್ಧಾರದಿಂದ ಕೇಂದ್ರ ಸರ್ಕಾರಕ್ಕೆ ಅಂದಾಜು 93,000 ಕೋಟಿ ರೂ. ಆದಾಯ ಕಡಿಮೆಯಾಗಲಿದೆ. ದಸರಾ ಹಬ್ಬಕ್ಕೂ ಸ್ವಲ್ಪ ಮುಂಚಿತವಾಗಿ ಅಂದರೆ ಸೆಪ್ಟೆಂಬರ್ 22ರಿಂದ ಹೊಸ ದರಗಳು ಜಾರಿಗೆ ಬರಲಿವೆ ಎಂದು ರಾಜ್ಯ ಹಣಕಾಸು ಸಚಿವರು ತಿಳಿಸಿದ್ದಾರೆ. ಮುಖ್ಯವಾಗಿ, ಯಾವುದೇ ಹೊಸ ಲೆವಿಗಳು ಅಥವಾ ಹೆಚ್ಚುವರಿ ಸೆಸ್‌ಗಳು ಇರುವುದಿಲ್ಲ ಎಂದು ಕೌನ್ಸಿಲ್ ಒಪ್ಪಿಕೊಂಡಿದೆ. ಇದು 2017ರಲ್ಲಿ ಜಾರಿಗೆ ಬಂದ ನಂತರದ ಅತ್ಯಂತ ಮಹತ್ವದ ತೆರಿಗೆ ಸುಧಾರಣೆಗಳಲ್ಲಿ ಒಂದಾಗಿದೆ.

### ದೈನಂದಿನ ಅಗತ್ಯ ವಸ್ತುಗಳು
- ಆಯಿಲ್, ಶಾಂಪೂ, ಟೂತ್‌ಪೇಸ್ಟ್, ಸೋಪ್, ಟೂತ್ ಬ್ರಷ್, ಶೇವಿಂಗ್ ಕ್ರೀಮ್ 18% 5%
- ಬೆಣ್ಣೆ, ತುಪ್ಪ, ಚೀಸ್ ಮತ್ತು ಡೈರಿ ಸ್ಪ್ರೆಡ್‌ಗಳು 12% 5%
- ಪ್ಯಾಕೇಜ್ ಮಾಡಿದ ಕುರುಕಲು ತಿಂಡಿಗಳು 12% 5%
- ಪಾತ್ರೆಗಳು 12% 5% ಹಾಲುಣಿಸುವ ಬಾಟಲ್‌ಗಳು, ಮಕ್ಕಳಿಗಾಗಿ ನ್ಯಾಪ್ ಕಿನ್‌ಗಳು ಮತ್ತು ಕ್ಲಿನಿಕಲ್ ಡೈಪರ್ ಗಳು 12% 5%
- ಹೊಲಿಗೆ ಯಂತ್ರಗಳು ಮತ್ತು ಬಿಡಿ ಭಾಗಗಳು 12% 5%

### ರೈತರು ಮತ್ತು ಕೃಷಿಗೆ ಸಂಬಂಧಿಸಿದ ಉತ್ಪನ್ನಗಳು
- ಟ್ರ್ಯಾಕ್ಟರ್ ಟೈರ್‌ಗಳು ಮತ್ತು ಬಿಡಿಭಾಗಗಳು 18% 5%
- ಟ್ರ್ಯಾಕ್ಟರ್‌ಗಳು 12% 5%
- ನಿರ್ದಿಷ್ಟ ಜೈವಿಕ-ಕೀಟನಾಶಕಗಳು, ಸೂಕ್ಷ್ಮ-ಪೋಷಕಾಂಶಗಳು 12% 5%
- ಹನಿ ನೀರಾವರಿ ವ್ಯವಸ್ಥೆ ಮತ್ತು ಸ್ಪ್ರಿಂಕ್ಲರ್‌ಗಳು 12% 5%
- ಕೃಷಿ, ತೋಟಗಾರಿಕೆ ಅಥವಾ ಅರಣ್ಯ ಯಂತ್ರಗಳು 12% 5%

### ಆರೋಗ್ಯ ವಲಯದ ಉತ್ಪನ್ನಗಳು
- ವೈಯಕ್ತಿಕ ಆರೋಗ್ಯ ಮತ್ತು ಜೀವ ವಿಮೆ 18%
- ಥರ್ಮಾಮೀಟರ್ 18% 5%
- ವೈದ್ಯಕೀಯ ದರ್ಜೆಯ ಆಮ್ಲಜನಕ 12% 5%
- ಎಲ್ಲಾ ಡಯಾಗ್ನೋಸ್ಟಿಕ್ ಕಿಟ್‌ಗಳು ಮತ್ತು ರೀಏಜೆಂಟ್ಸ್ 12% 5%
- ಗ್ಲುಕೋಮೀಟರ್ ಮತ್ತು ಟೆಸ್ಟ್ ಸ್ಟ್ರಿಪ್ ಗಳು 12% 5%
- ದೃಷ್ಟಿ ಸರಿಪಡಿಸುವ ಕನ್ನಡಕಗಳು 12% 5%

### ಆಟೋಮೊಬೈಲ್‌ಗಳು
- ಪೆಟ್ರೋಲ್ ಮತ್ತು ಹೈಬ್ರಿಡ್, ಎಲ್‌ಪಿಜಿ, ಸಿಎನ್‌ಜಿ ಕಾರುಗಳು (1200ಸಿಸಿ 4 ಮೀಟರ್ ಮೀರದಂತೆ)28% 18%
- ಡೀಸೆಲ್ ಮತ್ತು ಹೈಬ್ರಿಡ್ ಕಾರುಗಳು (1500ಸಿಸಿ 4 ಮೀಟರ್ ಮೀರದಂತೆ) 28% 18%
- ತ್ರಿಚಕ್ರ ವಾಹನಗಳು 28% 18%
- ಮೋಟಾರ್ ಸೈಕಲ್‌ಗಳು (350ಸಿಸಿ ಮತ್ತು ಕೆಳಗೆ)28% 18%

### ಶೈಕ್ಷಣಿಕ ಉತ್ಪನ್ನಗಳು
- ಚಾರ್ಟ್‌ಗಳು ಮತ್ತು ಗ್ಲೋಬ್‌ಗಳು 12%
- ಪೆನ್ಸಿಲ್‌ಗಳು, ಶಾರ್ಪನರ್‌ಗಳು, ಕ್ರಯಾನ್‌ಗಳು ಮತ್ತು ಪೇಸ್ಟಲ್‌ಗಳು
- 12% ಅಭ್ಯಾಸ ಪುಸ್ತಕಗಳು ಮತ್ತು ನೋಟ್‌ಬುಕ್‌ಗಳು 12%
- ಎರೇಸರ್ (ಅಳಿಸುವ ರಬ್ಬರ್)

### ಎಲೆಕ್ಟ್ರಾನಿಕ್ ಉಪಕರಣಗಳು
- ವಸ್ತುಗಳು ಹಳೆಯ ದರ ಹೊಸ ದರ ಏರ್ ಕಂಡಿಷನರ್‌ಗಳು (ಎಸಿ) 28% 18%
- ಟೆಲಿವಿಷನ್ 32 ಇಂಚಿಗಿಂತ ಹೆಚ್ಚು (ಎಲ್‌ಇಡಿ ಮತ್ತು ಎಲ್ ಸಿಡಿ ಟಿವಿಗಳು ಸೇರಿದಂತೆ)28% 18%
- ಮಾನಿಟರ್‌ಗಳು ಮತ್ತು ಪ್ರೊಜೆಕ್ಟರ್‌ಗಳು 28% 18% ಪಾತ್ರೆ ತೊಳೆಯುವ ಯಂತ್ರಗಳು (ಡಿಶ್ ವಾಷರ್ ಗಳು) 28% 18%

## ಅಧಿಕಾರ ಸ್ವೀಕರಿಸಿದ ಆಯುಕ್ತರು; ಕಡತ ಹಸ್ತಾಂತರಕ್ಕೆ ಮಾರ್ಗಸೂಚಿ

• **ಉದಯವಾಹಿನಿ, ಬೆಂಗಳೂರು**

ಗ್ರೇಟರ್ ಬೆಂಗಳೂರು ಪ್ರದೇಶದ ವ್ಯಾಪ್ತಿಯಲ್ಲಿ ರಚಿಸಲ್ಪಟ್ಟಿರುವ ಪಂಚ ಪಾಲಿಕೆಗಳು ಹಾಗೂ ಗ್ರೇಟರ್ ಬೆಂಗಳೂರು ಪ್ರಾಧಿಕಾರವು (ಜಿಬಿಎ) ಬುಧವಾರದಿಂದಲೇ ಕೆಲಸ ಆರಂಭಿಸಿದವು. ಬೆಂಗಳೂರು ಕೇಂದ್ರ ನಗರ ಪಾಲಿಕೆ ಆಯುಕ್ತರಾಗಿ ಪಿ. ರಾಜೇಂದ್ರ ಚೋಳನ್, ದಕ್ಷಿಣ ನಗರ ಪಾಲಿಕೆ ಆಯುಕ್ತರಾಗಿ ಕೆ.ಎನ್. ರಮೇಶ್, ಉತ್ತರ ನಗರ ಪಾಲಿಕೆ ಆಯುಕ್ತರಾಗಿ ಪೊಮ್ಮುಲ ಸುನೀಲ್‌ಕುಮಾರ್, ಪಶ್ಚಿಮ ನಗರ ಪಾಲಿಕೆ ಆಯುಕ್ತರಾಗಿ ಡಾ.ಕೆ.ವಿ. ರಾಜೇಂದ್ರ ಹಾಗೂ ಪೂರ್ವ ನಗರ ಪಾಲಿಕೆ ಆಯುಕ್ತರಾಗಿ ಡಿ.ಎಸ್. ರಮೇಶ್ ಅಧಿಕಾರ ಸ್ವೀಕರಿಸಿದರು. ಶೀಘ್ರದಲ್ಲೇ ಆಯಾ ನಗರ ಪಾಲಿಕೆ ಕಚೇರಿಗಳಿಗೆ ನಾಮಫಲಕ ಅಳವಡಿಸಲಾಗುತ್ತದೆ.

ಅಲ್ಲದೆ, ನಗರದಾದ್ಯಂತ ಅಳವಡಿಸಿರುವ ನಾಮಫಲಕಗಳೂ ಬದಲಾಗಲಿವೆ. ಆಯಾ ನಗರ ಪಾಲಿಕೆಗಳ ಹೆಸರಿನ ಫಲಕಗಳನ್ನು ಹಾಕಲಾಗುತ್ತದೆ. ನಗರ ಪಾಲಿಕೆ ಆಯುಕ್ತರು ಅಧಿಕಾರ ಸ್ವೀಕರಿಸಿದ್ದರೂ ಪೂರ್ಣ ಪ್ರಮಾಣದ ಸಿಬ್ಬಂದಿ ನಿಯೋಜನೆಯಾಗಿಲ್ಲ. ಗ್ರೇಟರ್ ಬೆಂಗಳೂರು ಪ್ರಾಧಿಕಾರ ಹಾಗೂ 5 ನಗರ ಪಾಲಿಕೆಗಳಿಗೆ ಅನ್ವಯವಾಗುವಂತೆ ಕಾರ್ಯ ನಿರ್ವಹಿಸುವ ಅಧಿಕಾರಿ, ನೌಕರರ ಹುದ್ದೆಯನುಸಾರ ಇ-ಆಫೀಸ್ ತಂತ್ರಾಂಶದಲ್ಲಿ ಹೊಸದಾಗಿ ಲಾಗಿನ್ ಸೃಜಿಸಲಾಗಿದೆ. ಲಾಗಿನ್ ಮ್ಯಾಪಿಂಗ್ ಕಾರ್ಯವು ಪ್ರಗತಿಯಲ್ಲಿದೆ. ಬಿಬಿಎಂಪಿ ಇ – ಆಫೀಸ್ ಲಾಗಿನ್‌ನಲ್ಲಿರುವ ಕಡತ, ಪತ್ರಗಳನ್ನು ಜಿಬಿಎ ಹಾಗೂ 5 ನಗರ ಪಾಲಿಕೆಗೆ ಸೃಜಿಸಲಾಗಿರುವ ಇ – ಆಫೀಸ್ ಲಾಗಿನ್‌ಗೆ ಕಳುಹಿಸಿಕೊಂಡು ವಿಲೇವಾರಿ ಮಾಡಲು ಆದೇಶಿಸಲಾಗಿದೆ.

## ಮುನಿರತ್ನ ವಿರುದ್ಧದ ಪ್ರಕರಣ: ಮಧ್ಯಂತರ ಆದೇಶ ವಿಸ್ತರಣೆ

• **ಉದಯವಾಹಿನಿ, ಬೆಂಗಳೂರು**

'ಸಾಮೂಹಿಕ ಅತ್ಯಾಚಾರ ಆರೋಪದಡಿ ರಾಜರಾಜೇಶ್ವರಿ ನಗರ ಕ್ಷೇತ್ರದ ಶಾಸಕ ಮುನಿರತ್ನ ವಿರುದ್ಧ ಆರ್.ಎಂ.ಸಿ.ಯಾರ್ಡ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಮುನಿರತ್ನ ಅವರನ್ನು ಬಂಧಿಸಬಾರದು' ಎಂದು ಈ ಹಿಂದೆ ನೀಡಿದ್ದ ಮಧ್ಯಂತರ ತಡೆ ಆದೇಶವನ್ನು ಹೈಕೋರ್ಟ್ ವಿಸ್ತರಿಸಿದೆ.

ಪ್ರಕರಣ ರದ್ದುಪಡಿಸುವಂತೆ ಕೋರಿ ಮುನಿರತ್ನ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಎಂ.ಐ.ಅರುಣ್ ಅವರಿದ್ದ ಏಕಸದಸ್ಯ ನ್ಯಾಯಪೀಠ ಬುಧವಾರ ವಿಚಾರಣೆ ನಡೆಸಿತು. ವಿಚಾರಣೆ ವೇಳೆ ಮುನಿರತ್ನ ಪರ ವಕೀಲರು, 'ಅರ್ಜಿದಾರರ ವಿರುದ್ಧದ ಆರೋಪ ಸಾಬೀತಾಗಿಲ್ಲ ಎಂದು ವಿಶೇಷ ತನಿಖಾ ತಂಡ (ಎಸ್‌ಐಟಿ) ವಿಚಾರಣಾ ನ್ಯಾಯಾಲಯಕ್ಕೆ ಈಗಾಗಲೇ ಬಿ ಅಂತಿಮ ವರದಿ ಸಲ್ಲಿಸಿದೆ' ಎಂದು ನ್ಯಾಯಪೀಠಕ್ಕೆ ತಿಳಿಸಿದರು.

## ಲಿಂಗಾಯತಕ್ಕೆ ಸ್ವತಂತ್ರ ಧರ್ಮದ ಮಾನ್ಯತೆಯೇ ಮುಖ್ಯ ಗುರಿ

• **ಉದಯವಾಹಿನಿ, ರಾಮನಗರ**

ಲಿಂಗಾಯತಕ್ಕೆ ಸ್ವತಂತ್ರ ಧರ್ಮದ ಮಾನ್ಯತೆ ಪಡೆಯುವುದೇ ನಮ್ಮ ಮುಂದಿನ ಮುಖ್ಯ ಗುರಿ ಎಂದು ನಗರದ ಬಿ.ವಿ. ಭೂಮರಡ್ಡಿ ಕಾಲೇಜು ಮೈದಾನದಲ್ಲಿ ಕಿಕ್ಕಿರಿದು ಸೇರಿದ ಜನಸ್ತೋಮದ ನಡುವೆ ಲಿಂಗಾಯತ ಮಠಾಧಿಪತಿಗಳ ಒಕ್ಕೂಟದ ಸ್ವಾಮೀಜಿಗಳು ಘೋಷಿಸಿದರು.

ಲಿಂಗಾಯತ ಮಠಾಧಿಪತಿಗಳ ಒಕ್ಕೂಟ, ಬಸವ ಸಂಸ್ಕೃತಿ ಅಭಿಯಾನದ ಸಮಿತಿ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಬಸವ ಸಂಸ್ಕೃತಿ ಅಭಿಯಾನಕ್ಕೆ ಜಿಲ್ಲೆ ಸೇರಿದಂತೆ ನೆರೆಯ ಜಿಲ್ಲೆಯ ಅಪಾರ ಸಂಖ್ಯೆಯ ಶರಣ-ಶರಣೆಯರು ಆಗಮಿಸಿದ್ದರು. 237 ಮೇಣದ ಬತ್ತಿಗಳಿಂದ ಕೂಡಿದ ಬಸವ ಸಂಸ್ಕೃತಿ ಎಂದು ಕನ್ನಡದಲ್ಲಿ ಬರೆದಿದ್ದ ಅಕ್ಷರಗಳನ್ನು ಬೆಳಗಿಸಿ ಒಕ್ಕೂಟದ ಸ್ವಾಮೀಜಿಗಳು ಕಾರ್ಯಕ್ರಮ ಉದ್ಘಾಟಿಸಿದರು. 'ಬಸವ ಸಂಸ್ಕೃತಿಯ ಪ್ರಕಾರವೇ ಬದುಕುತ್ತೇವೆ' ಎಂಬ ಸಂಕಲ್ಪ ಮಾಡಿದರು. ಅಭಿಯಾನ ಸಮಿತಿ ಅಧ್ಯಕ್ಷ ಬಸವರಾಜ ಧನ್ನೂರ ಮಾತನಾಡಿ, ವಿಶ್ವಗುರು ಬಸವಣ್ಣನವರನ್ನು ಕರ್ನಾಟಕದ ಸಾಂಸ್ಕೃತಿಕ ನಾಯಕರಾಗಿ ಘೋಷಿಸಬೇಕೆಂಬ ಹತ್ತಾರು ವರ್ಷಗಳ ಬೇಡಿಕೆ ಈಡೇರಿದೆ. ಅದಕ್ಕಾಗಿ ರಾಜ್ಯ ಸರ್ಕಾರಕ್ಕೆ ಕೃತಜ್ಞತೆ ಸಲ್ಲಿಸುತ್ತೇನೆ. ಲಿಂಗಾಯತ ಧರ್ಮಕ್ಕೆ ಸ್ವತಂತ್ರ ಧರ್ಮದ ಮಾನ್ಯತೆ ಕೊಡಬೇಕು. ಮಹಾತ್ಮ ಗಾಂಧೀಜಿ, ಡಾ.ಬಿ.ಆರ್. ಅಂಬೇಡ್ಕರ್ ಅವರ ಜಯಂತಿ ಯಾವ ರೀತಿ ರಾಷ್ಟ್ರಮಟ್ಟದಲ್ಲಿ ಆಚರಿಸಲಾಗುತ್ತದೋ ಅದೇ ರೀತಿ ಬಸವಣ್ಣನವರ ಜಯಂತಿ ಕೂಡ ಆಚರಿಸಬೇಕು ಎಂದರು.

# ಡಿಕೆಶಿ–ತಿಮ್ಮಾಪುರ್ ಜಟಾಪಟಿ

## ಯುಕೆಪಿ-3ಗೆ ಉಪಸಮಿತಿ: ಸಚಿವರ ನಡುವೆ ವಾಕ್ಸಮರ

### ಕೃಷ್ಣಾ ಮೇಲ್ದಂಡೆ ಯೋಜನೆಯ ಕಾಮಗಾರಿ ಕುರಿತು ಸಭೆ





### ಸಚಿವರಿಂದ ತರಹೇವಾರಿ ಸಲಹೆ

ಜಲಾಶಯದ ಎತ್ತರ ವಿಸ್ತರಿಸುವುದರಿಂದ ಹಿನ್ನೀರಿನಲ್ಲಿ ಮುಳುಗಡೆ ಆಗುವ ಜಮೀನುಗಳನ್ನು ಒಂದೇ ಹಂತದಲ್ಲಿ ಸ್ವಾಧೀನಪಡಿಸಿಕೊಂಡು ಪರಿಹಾರ ವಿತರಿಸಲು ಸರಕಾರ ಗಂಭೀರ ಚಿಂತನೆ ನಡೆಸಿದ್ದು, ಇದಕ್ಕಾಗಿ ಒಪ್ಪಂದ ಐ-ತೀರ್ಪು ರಚಿಸಲು, ಏಕರೂಪದ ದರ ನಿಗದಿಪಡಿಸಲು ಹಾಗೂ ಇದಕ್ಕೆ ಸಂಬಂಧಿಸಿದ ಇನ್ನಿತರ ಆಡಳಿತಾತ್ಮಕ ಅಂಶಗಳನ್ನು ಬಗ್ಗೆ ಹೆಚ್ಚಿನ ಚರ್ಚೆಯನ್ನು ಮುಂದಿನ ಸಭೆಯಲ್ಲಿ ನಡೆಸಲು ತೀರ್ಮಾನಿಸಿದೆ.

**ಒಂದೇ ಹಂತದಲ್ಲಿ ಭೂಸ್ವಾಧೀನ ಚರ್ಚೆ**

ಹಿನ್ನೀರಿನಲ್ಲಿ ಮುಳುಗಡೆಯಾಗುವ ಗ್ರಾಮಗಳ ಭೂ ಸ್ವಾಧೀನ ಪ್ರಕ್ರಿಯೆಯನ್ನು ಆದ್ಯತೆ ಮೇರೆಗೆ ಒಂದೇ ಹಂತದಲ್ಲಿ ಕೈಗೊಳ್ಳುವ ಹಾಗೂ ಭೂಪರಿಹಾವರನ್ನು ಐ-ತೀರ್ಪಿನನ್ವಯ ನೀಡಲು ಸಲಹೆಗಳು ವ್ಯಕ್ತವಾಗಿದೆ.



### ಡಿಕೆಶಿ ನೇತೃತ್ವದ ಸಮಿತಿಗೆ ವಿರೋಧ

ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3 ಭೂಸ್ವಾಧೀನಕ್ಕಾಗಿ ಏಕರೂಪ ದರಗಳನ್ನು ಅಂತಿಮಗೊಳಿಸಲು ಹಾಗೂ ಅಂತಿಮ ಯೋಜನಾ ವೆಚ್ಚವನ್ನು ಪರಿಶೀಲಿಸಲು ಮತ್ತು ಶಿಫಾರಸು ಮತ್ತು ಶಿಫಾರಸು ಮಾಡಲು ಸಚಿವ ಸಂಪುಟ ಉಪ ಸಮಿತಿಗೆ ವಹಿಸುವ ಬಗ್ಗೆ ಸಾಕಷ್ಟು ಚರ್ಚೆ ನಡೆದಿದೆ. ಜಲಸಂಪನ್ಮೂಲ ಇಲಾಖೆ ಸಚಿವ ಡಿ.ಕೆ. ಶಿವಕುಮಾರ್ ಅಧ್ಯಕ್ಷತೆಯಲ್ಲಿ ಸಂಪುಟ ಉಪಸಮಿತಿ ರಚಿಸಬೇಕೆಂಬ ಸಲಹೆ ನಡುವೆಯೇ ಸ್ಥಳೀಯರಲ್ಲದವರ ಅಧ್ಯಕ್ಷತೆಯಲ್ಲಿ ಉಪಸಮಿತಿ ಬೇಡ ಎಂಬ ಆಕ್ಷೇಪವೂ ವ್ಯಕ್ತವಾಗಿದೆ. ಏತನ್ಮಧ್ಯೆ, ಪರಿಹಾರ ನೀಡುವ ವಿಷಯದಲ್ಲೂ ಸಚಿವರ ನಡುವೆ ಮಾತಿನ ಚಕಮಕಿ ನಡೆದಿದ್ದು, ದೇವನಹಳ್ಳಿಯಲ್ಲಿ ಏರೋಸ್ಪೇಸ್ ಪಾರ್ಕ್ ಮಾಡಲು ಹೆಚ್ಚಿನ ಪರಿಹಾರ ನೀಡುವುದಾಗಿ ಘೋಷಿಸುತ್ತೀರಿ, ಕೃಷ್ಣಾ ಮೇಲ್ದಂಡೆ ಯೋಜನೆಯಿಂದ ಮುಳುಗಡೆ ಆಗುವವರ ವಿಷಯದಲ್ಲಿ ತಾರತಮ್ಯ ಯಾಕೆ ಎಂದು ಕೆಲವು ಸಚಿವರು ಅಸಮಾಧಾನ ಹೊರಹಾಕಿದ್ದಾರೆ ಎನ್ನಲಾಗಿದೆ.

**ಸಚಿವರ ಮಧ್ಯೆ ಚಕಮಕಿ**

### ಸಂಪುಟ ಸಭೆಯಲ್ಲಿ 2 ತಾಸು ಚರ್ಚೆ

**ಹಂತ-3ರ ಅನುಷ್ಠಾನಕ್ಕೆ ಬದ್ಧ**

ಕೃಷ್ಣಾ ಮೇಲ್ದಂಡೆ ಯೋಜನೆಯ ಹಂತ-3ರ ಅನುಷ್ಠಾನಕ್ಕೆ ಕೇಂದ್ರ ಜಲಶಕ್ತಿ ಸಚಿವರಲ್ಲಿ ಮನವಿ ಮಾಡಿದ್ದೇನೆ. ಅವರೂ ಸಹ ಈ ಬಗ್ಗೆ ಶೀಘ್ರದಲ್ಲೇ ಸಭೆ ನಿಗದಿ ಮಾಡಲಾಗುವುದು ಎಂದು ಭರವಸೆ ನೀಡಿದ್ದಾರೆ. ನಮ್ಮ ಸರ್ಕಾರ ಈ ಯೋಜನೆ ಸಾಕಾರಕ್ಕೆ ಬದ್ಧವಾಗಿದೆ. ಎರಡು-ಮೂರು ದಿನಗಳಲ್ಲಿ ಅಂತಿಮ ತೀರ್ಮಾನ ಮಾಡಲಾಗುತ್ತದೆ ಭೂಸ್ವಾಧೀನ, ಪುನರ್ವಸತಿ, ಪುನರ್ನಿರ್ಮಾಣ, ಭೂಪರಿಹಾರದ ಬಗ್ಗೆ ಪರಿಹಾರ ಕಂಡುಹಿಡಿಯಬೇಕು ಎಂದು ಮೂರ್ನಾಲ್ಕು ಸುತ್ತು ಚರ್ಚೆ ನಡೆಸಿದ್ದೇವೆ. ಈ ಹಿಂದಿನ ಸಿಎಂ ಬಸವರಾಜ ಬೊಮ್ಮಾಯಿ ಅವರ ಅಧಿಕಾರವಧಿಯಲ್ಲಿ ಸಂಪುಟ ಸಭೆ,ಉಪ ಸಮಿತಿ ಸಭೆಯಲ್ಲಿ ಪ್ರತಿ ಎಕರೆ ನೀರಾವರಿ ಜಮೀನಿಗೆ ರೂ. 24 ಲಕ್ಷ ರೂ., ಒಣ ಭೂಮಿಗೆ ರೂ. 20 ಲಕ್ಷ ಎಂದು ತೀರ್ಮಾನ ಮಾಡಿದ್ದರು. ಆದರೆ, ಇದನ್ನು ಯಾವ ರೈತರೂ ಒಪ್ಪಲಿಲ್ಲ. ಬದಲಿಗೆ ಧರಣಿ ಕುಳಿತು ಹೋರಾಟ ಮಾಡುತ್ತಿದ್ದರು. ಹಿಂದೆ ಈ ಬಗ್ಗೆ ನಾವೇ ಬೆಳಗಾವಿಯಲ್ಲಿ ಸಭೆ ನಡೆಸಿದ್ದೆವು ಎಂದರು.

• **ಉದಯವಾಹಿನಿ, ಬೆಂಗಳೂರು**

ಕೃಷ್ಣಾ ಮೇಲ್ದಂಡೆ ಯೋಜನೆಯ ಮೂರನೇ ಹಂತದ ಕಾಮಗಾರಿಗಳಿಗೆ ಸಂಬಂಧಿಸಿದಂತೆ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಡಿಸಿಎಂ ಡಿ.ಕೆ.ಶಿವಕುಮಾರ್ ಹಾಗೂ ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ್ ನಡುವೆ ಸಣ್ಣ ವಾಗ್ವಾದ ನಡೆದ ಪ್ರಸಂಗ ವಿಧಾನಸೌಧದಲ್ಲಿ ನಡೆಯಿತು. ಯೋಜನೆಯ 3ನೇ ಹಂತದ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಭೂ ಸ್ವಾಧೀನ, ಪುನರ್ ವಸತಿ, ಪುನರ್ ನಿರ್ಮಾಣ, ಭೂ ಪರಿಹಾರ, ವಿವಿಧ ನ್ಯಾಯಾಲಯಗಳಲ್ಲಿ ಹೆಚ್ಚುವರಿ ಪರಿಹಾರ ಕೋರಿ ದಾಖಲಿಸಿರುವ ಪ್ರಕರಣಗಳ ಕುರಿತು ಜಲಸಂಪನ್ಮೂಲ ಸಚಿವರೂ ಆಗಿರುವ ಡಿಸಿಎಂ ಡಿ.ಕೆ.ಶಿವಕುಮಾರ್ ಸಮ್ಮೇಳನ ಸಭಾಂಗಣದಲ್ಲಿ ಸಭೆ ಕರೆದಿದ್ದರು. ಸಚಿವರಾದ ಪ್ರಿಯಾಂಕ್ ಖರ್ಗೆ, ಎನ್.ಎಸ್.ಬೋಸರಾಜ್, ಶಿವಾನಂದ ಪಾಟೀಲ್, ಆರ್.ಬಿ.ತಿಮ್ಮಾಪುರ್, ಶರಣಬಸಪ್ಪ ದರ್ಶನಾಪುರ್, ಡಿ.ಸುಧಾಕರ್ ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.


ಪ್ರತಿ ಎಕರೆಗೆ 40 ರಿಂದ 50 ಲಕ್ಷ ರೂ. ಗಳವರೆಗೆ ಭೂ ಪರಿಹಾರ ನೀಡಬೇಕು ಎಂದು ತಿಮ್ಮಾಪೂರ್ ಒತ್ತಾಯಿಸಿದರು. ಇದರಿಂದ ಸಿಟ್ಟಾದ ಡಿ.ಕೆ.ಶಿವಕಮಾರ್, ಮಿಸ್ಟರ್ ಮಿನಿಸ್ಟರ್ ಸಂಪುಟದ ಸಚಿವರಾಗಿ ನೀವು ಈ ರೀತಿ ಮಾತನಾಡುವುದು ಸರಿಯಲ್ಲ. ಈ ಹಿಂದೆ ಜಲಸಂಪನ್ಮೂಲ ಸಚಿವರಾಗಿದ್ದ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಭೂ ಪರಿಹಾರಕ್ಕೆ ಒಂದು ದರ ನಿಗದಿ ಮಾಡಿದ್ದಾರೆ. ಈಗ ಸಚಿವರಾಗಿರುವ ನಿಮಗೆ ಗೌರವ ಸಿಗಬೇಕು ಎಂಬ ಕಾರಣಕ್ಕೆ ಅದರ ಮೇಲೆ ಒಂದಿಷ್ಟು ಹೆಚ್ಚಳ ಮಾಡಿ ಪರಿಹಾರ ನೀಡಬಹುದು. ನೀವು ಹೇಳಿದಂತೆ 40 ರಿಂದ 50 ಲಕ್ಷ ರೂ.ಗಳವರೆಗೂ ನೀಡಲು ಸಾಧ್ಯವಿಲ್ಲ ಎಂದು ಖಡಕ್ಕಾಗಿ ಹೇಳಿದರು. ಇದಕ್ಕೆ ಸಚಿವ ತಿಮ್ಮಾಪುರ್, ಜನರ ಅಭಿಪ್ರಾಯಗಳನ್ನು ನಿಮ್ಮ ಗಮನಕ್ಕೆ ತರುವುದು ನನ್ನ ಜವಾಬ್ದಾರಿ. ಆ ಕೆಲಸ ಮಾಡಿದ್ದೇನೆ. ನಿಮ್ಮ ಅನುಭವ ಹಾಗೂ ಅವಕಾಶದಲ್ಲಿ ನಿರ್ಧಾರ ತೆಗೆದುಕೊಳ್ಳಿ ಎಂದು ಅಸಮಾಧಾನದಿಂದಲೇ ಪ್ರತಿಕ್ರಿಯಿಸಿದರು. ಶಾಸಕರು, ರೈತ ಮುಖಂಡರುಗಳು ಮಾತನಾಡಲಿ. ಇಂತಹ ವೇದಿಕೆಯಲ್ಲಿ ನೀವು ಸಚಿವರಾಗಿ ಈ ರೀತಿ ಮಾತನಾಡಬಾರದು ಎಂದು ಡಿ.ಕೆ. ಶಿವಕುಮಾರ್ ಗರಂ ಆದರು. ಮಾಧ್ಯಮಗಳ ಮುಂದೆ ಈ ವಾಗ್ವಾದ ನಡೆಯುತ್ತಿರುವುದನ್ನು ಗಮನಿಸಿದ ಸಚಿವ ಪ್ರಿಯಾಂಕ್ ಖರ್ಗೆ, ಈ ಜಟಾಪಟಿ ಬಹಿರಂಗಗೊಂಡು ಸಾರ್ವಜನಿಕರಲ್ಲಿ ತಪ್ಪು ಅಭಿಪ್ರಾಯ ಸೃಷ್ಟಿಯಾಗಬಾರದು ಎಂಬ ಕಾರಣಕ್ಕಾಗಿ ಮಾಧ್ಯಮಗಳ ಕ್ಯಾಮೆರಾಮನ್‌ಗಳನ್ನು ಹೊರಗೆ ಕಳುಹಿಸಲು ಪ್ರಯತ್ನಿಸಿದರು. ಇದಕ್ಕೂ ಅವಕಾಶ ನೀಡದ ಡಿ.ಕೆ.ಶಿವಕುಮಾರ್ ಮಾಧ್ಯಮಗಳು ಇರಲಿ ಎಂದು ಹೇಳಿ ಅವರು ಮಾತನಾಡಲಿ ಎಂದು ಶಾಸಕರಿಗೆ ಅವಕಾಶ ಮಾಡಿಕೊಟ್ಟರು. ಕೃಷ್ಣಾ ಮೇಲ್ದಂಡೆ 3ನೇ ಹಂತದ ಯೋಜನಾ ವೆಚ್ಚ ದಿನದಿಂದ ದಿನಕ್ಕೆ ಏರಿಕೆಯಾಗುತ್ತಲೇ ಇದೆ. ವರದಿಗಳ ಪ್ರಕಾರ, ಯೋಜನಾ ವೆಚ್ಚ 75 ಸಾವಿರ ಕೋಟಿಯಿಂದ ಒಂದು ಲಕ್ಷ ಕೋಟಿಗೂ ಮಿಗಿಲಾಗಿ ಹೆಚ್ಚಳವಾಗಿದೆ. ಯೋಜನೆಯನ್ನು ಅನುಷ್ಠಾನಕ್ಕೆ ತಂದು ಪೂರ್ಣಗೊಳಿಸುವುದಾಗಿ ಎಲ್ಲಾ ಸರ್ಕಾರಗಳು ಭರವಸೆ ನೀಡುತ್ತಲೇ ಬಂದಿವೆ. ಆದರೆ, ಭೂಸ್ವಾಧೀನದ ಖರ್ಚುವೆಚ್ಚಗಳು ದುಬಾರಿಯಾಗಿರುವ ಕಾರಣಕ್ಕೆ ಯೋಜನೆ ಆರಂಭಿಕ ಹಂತದಲ್ಲೇ ಇದೆ. ಯೋಜನೆಗೆ ತಾರ್ಕಿಕ ಅಂತ್ಯ ಕಾಣಿಸಬೇಕು ಎಂಬ ಕಾರಣಕ್ಕೆ ಡಿ.ಕೆ.ಶಿವಕುಮಾರ್ ಸಭೆ ನಡೆಸಿದರು.


1 ಕೃಷ್ಣಾ ಮೇಲ್ದಂಡೆ ಯೋಜನೆಯ 3ನೇ ಹಂತದ ಕಾಮಗಾರಿಗಳ ಬಗ್ಗೆ ವಿಧಾನಸೌಧದಲ್ಲಿ ಸಭೆ

2 ಡಿಸಿಎಂ ಡಿಕೆಶಿ ಮತ್ತು ಅಬಕಾರಿ ಸಚಿವ ಆರ್. ಬಿ.ತಿಮ್ಮಾಪುರ್ ನಡುವೆ ವಾಗ್ವಾದ

3 ಭೂ ಪರಿಹಾರ ನೀಡಬೇಕು ಎಂದು ತಿಮ್ಮಾಪೂರ್ ಒತ್ತಾಯಿಸಿದರು. ಇದರಿಂದ ಸಿಟ್ಟಾದ ಡಿಕೆಶಿ

### ಧಾರ್ಮಿಕ ಕಾರ್ಯಗಳಿಗೆ ನಾವು ತಲೆಹಾಕಲು





ಕ್ಯಾಬಿನೆಟ್‌ನಲ್ಲಿಯೂ ಚರ್ಚೆ ನಡೆಸಲಾಗುವುದು. ಕಳೆದ ವಾರ ಸಚಿವರಾದ ಹೆಚ್.ಕೆ.ಪಾಟೀಲ್, ಎಂ.ಬಿ.ಪಾಟೀಲ್, ಶಿವಾನಂದ ಪಾಟೀಲ್ ಅವರು ಹಾಗೂ ನಾನು ಸಭೆ ನಡೆಸಿ ಚರ್ಚೆ ನಡೆಸಿದ್ದೆವು'' ಎಂದರು. ಅರಮನೆ ಮೈದಾನದಲ್ಲಿ ಈದ್ ಮಿಲಾದ್ ಧಾರ್ಮಿಕ ಸಮಾರಂಭದ ಬಗ್ಗೆ ಕೇಳಿದಾಗ, ''ನನಗೆ ಈ ಬಗ್ಗೆ ತಿಳಿದಿಲ್ಲ. ಅನೇಕ ಧಾರ್ಮಿಕ ಸಭೆಗಳು ನಡೆಯುತ್ತವೆ. ದೇಶದ ಹಿತಕ್ಕಾಗಿ, ಧಾರ್ಮಿಕ ಹಿತಕ್ಕಾಗಿ ನಡೆಯುವ ಧಾರ್ಮಿಕ ಕಾರ್ಯಗಳಿಗೆ ನಾವು ತಲೆಹಾಕಲು ಹೋಗುವುದಿಲ್ಲ. ಹಿಂದೆಯೂ ಅಂತಾರಾಷ್ಟ್ರೀಯ ಮಟ್ಟದ ಧರ್ಮ ಪ್ರಚಾರಕರು ಬೆಂಗಳೂರಿಗೆ ಬಂದು ಭಾಷಣ ಮಾಡಿದ ಉದಾಹರಣೆ ಇವೆ.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹10,697/Gram24ct ₹9,805/Gram22ct | ಬೆಳ್ಳಿ: ₹127.00/Gram

# ಗ್ರೇಟರ್ ಬೆಂಗಳೂರು ವಾರ್ಡ್‌ಗಳ ಸಂಖ್ಯೆ 500ಕ್ಕೆ ಏರಿಕೆ

## ನ.1ರಂದು ಹೊಸ ಪಾಲಿಕೆಗಳ ಕಟ್ಟಡಗಳ ನಿರ್ಮಾಣಕ್ಕೆ ಭೂಮಿ ಪೂಜೆ

• ಉದಯವಾಹಿನಿ ಬೆಂಗಳೂರು

ನಾಗರಿಕ ಸ್ನೇಹಿ ಸೇವೆ, ಆಡಳಿತ ಮತ್ತು ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ಉದ್ದೇಶದಿಂದ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಜಿಬಿಎ ಅಸ್ತಿತ್ವಕ್ಕೆ ತರಲಾಗಿದ್ದು, ನೂತನ 5 ಪಾಲಿಕೆಗಳಲ್ಲಿ ತಲಾ 100 ರಂತೆ 500 ವಾರ್ಡ್‌ಗಳು ವಿಂಗಡಣೆಯಾಗಲಿವೆ. ಇದರಿಂದ 500 ಮಂದಿ ಯುವ ನಾಯಕರ ಆಯ್ಕೆಗೆ ಅವಕಾಶ ಸಿಗಲಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.



ಹೊಸ ವಾರ್ಡ್ ಶೀಘ್ರವೇ ಅಸ್ತಿತ್ವಕ್ಕೆ - ಡಿಕೆಶಿ

ವಿಧಾನಸೌಧದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನ.1ರಂದು ಹೊಸ ಪಾಲಿಕೆಗಳ ಕಟ್ಟಡಗಳ ನಿರ್ಮಾಣಕ್ಕೆ ಭೂಮಿ ಪೂಜೆ ಮಾಡಲಾಗುವುದು. ಪಾಲಿಕೆಗಳಿಗೆ ಚುನಾವಣೆ ನಡೆಸುವ ಸಂಬಂಧ ಸುಪ್ರೀಂಕೋರ್ಟ್‌ಗೆ ಪ್ರಮಾಣಪತ್ರ ಸಲ್ಲಿಸಲಾಗಿದೆ. ನ.1ರಂದು ವಾರ್ಡ್‌ಗಳ ಪುನರ್ ವಿಂಗಡಣೆಯ ಅಂತಿಮ ಅಧಿಸೂಚನೆ ಹೊರಡಿಸಲಾಗುವುದು. ನ.30ಕ್ಕೆ ವಾರ್ಡ್‌ವಾರು ಮೀಸಲಾತಿ ಪ್ರಕಟಿಸಲಾಗುವುದು, ಎಂದು ಹೇಳಿದರು. (198 ವಾರ್ಡ್‌ಗಳ ವಿಂಗಡಣೆ)

ಆ ಬಳಿಕ ವಾರ, 15 ದಿನಗಳಲ್ಲೇ ಚುನಾವಣೆ ನಡೆಸಲಾಗುವುದು. ಚುನಾವಣೆಗೆ ಪೂರ್ವ ಸಿದ್ಧತೆ ಮಾಡಿಕೊಳ್ಳುವಂತೆ ಚುನಾವಣಾ ಆಯೋಗಕ್ಕೆ ಪತ್ರ ಬರೆಯಲಾಗಿದೆ. ಶೀಘ್ರದಲ್ಲೇ ಮತದಾರರ ಪಟ್ಟಿಯೂ ಸಿದ್ಧವಾಗಲಿದೆ, ಎಂದರು. ನಗರ ಪಾಲಿಕೆ ಕಟ್ಟಡಗಳ ನಿರ್ಮಾಣಕ್ಕೆ ಜಾಗ ಗುರುತಿಸಲು ಸೂಚಿಸಿದ್ದು, ನವೆಂಬರ್ 1 ಕ್ಕೆ ಹೊಸ ಕಚೇರಿಗಳ ಕಟ್ಟಡಗಳಿಗೆ ಭೂಮಿ ಪೂಜೆ ನೆರವೇರಿಸಲಾಗುವುದು. ಕಟ್ಟಡಗಳಿಗೆ ಅತ್ಯುತ್ತಮ ವಾಸ್ತು ಶಿಲ್ಪ ವಿನ್ಯಾಸ ತಯಾರಿಸಿಕೊಟ್ಟವರಿಗೆ 5 ಲಕ್ಷ ರೂ. ಬಹುಮಾನ ನೀಡಲಾಗುವುದು. ಜಿಬಿಎ ಲಾಂಛನಕ್ಕೂ ಸಲಹೆ ನೀಡಲು ಕೋರಲಾಗಿದ್ದು, ಸದ್ಯದಲ್ಲೇ ಪ್ರಕಟಣೆ ಹೊರಡಿಸಲಾಗುವುದು ಎಂದು ತಿಳಿಸಿದರು.

ಜಿಬಿಎ ಮೂಲಕವೇ ಬೃಹತ್ ಯೋಜನೆಗಳನ್ನೂ ಜಾರಿ ಮಾಡಲಾಗುವುದು. ಸರಕಾರದಿಂದ ಒದಗಿಸಿದ ಅನುದಾನವು ಜಿಬಿಎ ಹಾಗೂ ಪಾಲಿಕೆಗಳಿಗೆ ತಲುಪುತ್ತದೆ. ಅಲ್ಲದೆ, ಹೊಸ ಪ್ರದೇಶಗಳನ್ನೂ ಸೇರ್ಪಡೆ ಮಾಡುವುದಕ್ಕೂ ಕಾನೂನಿನಲ್ಲಿ ಅವಕಾಶ ಕಲ್ಪಿಸಲಾಗಿದೆ, ಎಂದರು.

**ಪಾಲಿಕೆಯ ವಿಭಾಗಗಳನ್ನು 27 ರಿಂದ 50ಕ್ಕೆ ಏರಿಸಲಾಗಿದೆ. ಉಪ ವಿಭಾಗಗಳನ್ನು 75 ರಿಂದ 150ಕ್ಕೆ ಹೆಚ್ಚಿಸಲಾಗಿದೆ. ಪ್ರತಿ ಮೂರು ತಿಂಗಳಿಗೊಮ್ಮೆ ಕಡ್ಡಾಯವಾಗಿ ಜಿಬಿಎ ಸಭೆ ನಡೆಯಲಿದೆ. ಪಾಲಿಕೆಗಳ ಕಾರ್ಯಚಟುವಟಿಕೆಗಳು ಎಂದಿನಂತೆ ನಡೆಯಲಿವೆ. ಎಲ್ಲಾ ಪಾಲಿಕೆಗಳ ಮೇಯರ್ ಅಧಿಕಾರವಧಿಯನ್ನು ಎರಡೂವರೆ ವರ್ಷಕ್ಕೆ ಸೀಮಿತಗೊಳಿಸಲಾಗಿದೆ, ಎಂದು ಹೇಳಿದರು.**

**ಡಾ. ಯತೀಂದ್ರ ಮತ ಬೆಂಗಳೂರಿನಲ್ಲಿರಬಹುದು, ಗೊತ್ತಿಲ್ಲ: ಡಿಕೆಶಿ:** ವಿಧಾನ ಪರಿಷತ್ ಸದಸ್ಯ ಡಾ. ಯತೀಂದ್ರ ಸಿದ್ದರಾಮಯ್ಯ ಅವರು ಬೆಂಗಳೂರಿನಲ್ಲೇ ಮತ ಚಲಾಯಿಸುತ್ತಿರಬಹುದು. ಆ ಬಗ್ಗೆ ನನಗೆ ಗೊತ್ತಿಲ್ಲ ಎಂದು ಡಿ.ಕೆ.ಶಿವಕುಮಾರ್ ತಿಳಿಸಿದರು.

ಜಿಬಿಎ ಸದಸ್ಯರಾಗಿ ಯತೀಂದ್ರ ಸಿದ್ದರಾಮಯ್ಯ ನಸೀರ್ ಅಹ್ಮದ್ ನೇಮಕದ ಮಾನದಂಡದ ಬಗ್ಗೆ ಸುದ್ದಿಗಾರರು ಕೇಳಿದ ಪ್ರಶ್ನೆಗೆ, ನಗರದಲ್ಲಿ ಮತದಾರರಾಗಿರುವವರು, ಇಲ್ಲಿನ ಸಂಸ್ಥೆಗಳಿಂದ ಆಯ್ಕೆಯಾಗಿರುವವರು, ಜಿಬಿಎ ವ್ಯಾಪ್ತಿಯಲ್ಲಿವಾಸಿಸುವ ರಾಜ್ಯಸಭೆ, ಲೋಕಸಭೆ, ವಿಧಾನಸಭೆ, ವಿಧಾನ ಪರಿಷತ್ ಸದಸ್ಯರು ಪ್ರಾಧಿಕಾರದ ಸದಸ್ಯರಾಗಿರುತ್ತಾರೆ. ಯತೀಂದ್ರ, ಅವರ ಮತ ಬೆಂಗಳೂರಿನಲ್ಲಿಇರಬಹುದು, ನನಗೆ ಗೊತ್ತಿಲ್ಲ, ಎಂದು ಪ್ರತಿಕ್ರಿಯಿಸಿದರು.

### ಆದಾಯ ಹಂಚಿಕೆ ಇಲ್ಲ

**ಹೊಸ ಪಾಲಿಕೆಗಳ ವ್ಯಾಪ್ತಿಯಲ್ಲಿ ಸಂಗ್ರಹವಾಗುವ ತೆರಿಗೆಯು ಬುಧವಾರದಿಂದಲೇ ಆಯಾ ಪಾಲಿಕೆಗೇ ಸೇರಲಿದೆ. ತೆರಿಗೆ ಹಣವು ಜಿಬಿಎ ಅಥವಾ ಸರಕಾರಕ್ಕೆ ಸಂದಾಯವಾಗುವುದಿಲ್ಲ. ಆಯಾ ಪಾಲಿಕೆಯ ಆದಾಯವು ಅದೇ ಪಾಲಿಕೆಗಳಿಗೆ ಸೇರಲಿದೆ. ಆರ್ಥಿಕವಾಗಿ ದುರ್ಬಲವಿರುವ ಪಾಲಿಕೆಗಳಿಗೆ ಸರಕಾರದಿಂದ ನೆರವು ನೀಡಲಾಗುವುದು. ಸಂವಿಧಾನದ 74ನೇ ತಿದ್ದುಪಡಿಗೆ ಧಕ್ಕೆಯಾಗದಂತೆ, ಪಾಲಿಕೆಗಳಿಗೆ ಸ್ವಾಯತ್ತತೆ ನೀಡಲಾಗಿದೆ, ಎಂದು ಹೇಳಿದರು.**

# ದಾಸ ವೈಭವ ಗಾಯನ

• ಉದಯವಾಹಿನಿ ಬೆಂಗಳೂರು



ಪವಮಾನಪುರದ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀಮಠದ ವಿಚಾರಣಾಕರ್ತರಾದ ಶ್ರೀ ಗಿರಿರಾಜಾಚಾರ್ಯರ ನೇತೃತ್ವದಲ್ಲಿ ಸೆಪ್ಟೆಂಬರ್ 4, ಗುರುವಾರ, ಸಂಜೆ 7-00ಕ್ಕೆ. ದಾಸ ವೈಭವ. ಗಾಯನ : ಶ್ರೀಮತಿ ಸ್ರೋತಸ್ವಿನಿ ಹೊಸಹಳ್ಳಿ, ಕೀ-ಬೋರ್ಡ್: ಶ್ರೀ ಅಮಿತ್ ಶರ್ಮಾ, ತಬಲಾ: ಶ್ರೀ ಅನಂತಕೃಷ್ಣ ಪ್ಯಾಟಿ. ಸ್ಥಳ : ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, ಪವಮಾನಪುರ ಬನಶಂಕರಿ 6ನೇ ಹಂತ ಬೆಂಗಳೂರು.

# ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣಕ್ಕೆ ಸ್ಥಳ ಪರಿಶೀಲನೆ: ಬೈರತಿ ಸುರೇಶ್

• ಉದಯವಾಹಿನಿ ಬೆಂಗಳೂರು

ಹೆಬ್ಬಾಳ ವಿಧಾನಸಭಾ ಕ್ಷೇತ್ರದ ಪಶು ವೈದ್ಯಕೀಯ ಮತ್ತು ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದಲ್ಲಿ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯನ್ನು ನಿರ್ಮಿಸಲು ನಿಗದಿಪಡಿಸಿರುವ ಸ್ಥಳವನ್ನು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಅವರು ಪರಿಶೀಲನೆ ನಡೆಸಿದರು. ನಂತರ ಮಾತನಾಡಿದ ಅವರು, ಕ್ಷೇತ್ರದ ವ್ಯಾಪ್ತಿಯಲ್ಲಿ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯನ್ನು ನಿರ್ಮಿಸಬೇಕೆಂಬ ಸಾರ್ವಜನಿಕರ ಬಹು ದಿನಗಳ ಬೇಡಿಕೆ ಈಗ ಈಡೇರಲಿದೆ. ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜೊತೆಗೆ ಚರ್ಚಿಸಲಾಗಿತ್ತು. ಆಸ್ಪತ್ರೆ ನಿರ್ಮಿಸಲು ರೂ. 200 ಕೋಟಿ ಅನುದಾನ ಮಂಜೂರು ಮಾಡಿದ್ದಾರೆ ಎಂದು ಹೇಳಿದರು. ಆಸ್ಪತ್ರೆ ಕಟ್ಟಡ ನಿರ್ಮಾಣಕ್ಕೆ ಶೀಘ್ರದಲ್ಲಿಯೇ ಭೂಮಿ ಪೂಜೆ ನೆರವೇರಿಸಲಾಗುವುದು. ಯಾವುದೇ ಲೋಪಗಳು ಆಗದಂತೆ ಆಸ್ಪತ್ರೆ ಕಾಮಗಾರಿ ಕೈಗೊಳ್ಳಲಾಗುತ್ತದೆ. ಈ ಆಸ್ಪತ್ರೆಯಲ್ಲಿ ಅತ್ಯಾಧುನಿಕ ಚಿಕಿತ್ಸಾ ಯಂತ್ರೋಪಕರಣಗಳು, ಡಯಾಲಿಸಿಸ್, ಹೃದ್ರೋಗ, ಮಹಿಳಾ, ಮಕ್ಕಳ ಚಿಕಿತ್ಸೆಗೆ ಪ್ರತ್ಯೇಕ ವ್ಯವಸ್ಥೆ, ತಜ್ಞ ವೈದ್ಯರು ಮತ್ತು ಶುಶ್ರೂಷಕರ ತಂಡ ಸೇರಿದಂತೆ ಹತ್ತು ಹಲವಾರು ಚಿಕಿತ್ಸಾ ಸೌಲಭ್ಯಗಳು ಇರಲಿವೆ' ಎಂದು ತಿಳಿಸಿದರು.

# ಮುಂದಿನ ಮೂರ್ನಾಲ್ಕು ದಿನ ಬೆಂಗಳೂರಿಗೆ ಮಳೆ: ಅಲರ್ಟ್

• ಉದಯವಾಹಿನಿ ಬೆಂಗಳೂರು

ಮುಂದಿನ ಮೂರ್ನಾಲ್ಕು ದಿನ ಬೆಂಗ್ಳೂರಿಗೆ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮುಂದಿನ ಮೂರ್ನಾಲ್ಕು ದಿನ ಬೆಂಗಳೂರಿನ ಹಲವೆಡೆ ಹಗುರದಿಂದ ಸಾಧಾರಣ ಮಳೆ ಹಾಗೂ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಸದ್ಯ ನಗರದ ಹಲವೆಡೆ ಮಳೆ ಶುರುವಾಗಿದ್ದು, ವಾಹನ ಸವಾರರು ಪರದಾಡುವಂತಾಗಿದೆ. ವಿಧಾನಸೌಧ, ಚಾಲುಕ್ಯ ಸರ್ಕಲ್, ಕೆ ಆರ್ ಸರ್ಕಲ್, ಕಾರ್ಪೋರೇಷನ್ ಸರ್ಕಲ್, ಕೆ ಆರ್ ಮಾರ್ಕೆಟ್, ಮೆಜೆಸ್ಟಿಕ್, ಮೈಸೂರು ಬ್ಯಾಂಕ್ ಸರ್ಕಲ್ ಸೇರಿದಂತೆ ಹಲವೆಡೆ ಮಳೆಯಾಗುತ್ತಿದೆ. ಇನ್ನೂ ಕರಾವಳಿ ಕರ್ನಾಟಕದ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳ ಕೆಲವೆಡೆ ಭಾರೀ ಮಳೆಯಾಗುವ ಸಾಧ್ಯತೆ ಇದೆ. ಉತ್ತರ ಒಳನಾಡು ಜಿಲ್ಲೆಗಳ ಹಲವೆಡೆ ಬಿರುಗಾಳಿ ಸಹಿತ ಮಳೆಯಾಗುವ ಸಾಧ್ಯತೆ ಇದೆ.

# ರಾಜ್ಯದ 11 ಪ್ರವಾಸಿತಾಣಗಳ ರೋಪ್ ವೇಗೆ ಸರ್ಕಾರ ಅನುಮೋದನೆ

• ಉದಯವಾಹಿನಿ ಬೆಂಗಳೂರು

ಅಂಜನಾದ್ರಿ ಬೆಟ್ಟ ಸೇರಿ ರಾಜ್ಯದ 11 ಪ್ರವಾಸಿ ತಾಣಗಳಿಗೆ ರೋಪ್ ವೇ ನಿರ್ಮಿಸಲು ಸರ್ಕಾರ ಅನುಮೋದನೆ ನೀಡಿದೆ. ಅಂಜನಾದ್ರಿ ಕ್ಷೇತ್ರದ ಅಭಿವೃದ್ಧಿಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಕಾವೇರಿ ನಿವಾಸದಲ್ಲಿ ಮಹತ್ವದ ಸಭೆ ನಡೆಯಿತು. ಈ ವೇಳೆ ಅಂಜನಾದ್ರಿ ಬೆಟ್ಟ ಸೇರಿ ರಾಜ್ಯದ 11 ಪ್ರವಾಸಿ ತಾಣಗಳಿಗೆ ರೋಪ್ ವೇ ನಿರ್ಮಿಸಲು ಸರ್ಕಾರ ಅನುಮೋದನೆ ನೀಡಿದೆ. ಸಾರ್ವಜನಿಕ ಖಾಸಗಿ ಸಹಭಾಗಿತ್ವ ಮಾದರಿಯಲ್ಲಿ ರೋಪ್ ವೇಗಳನ್ನು ಅಭಿವೃದ್ಧಿಪಡಿಸಲು ಸರ್ಕಾರದ ಅನುಮೋದನೆ ನೀಡಲಾಗಿರುತ್ತದೆ ಎಂದು ಸಿಎಂ ಕಚೇರಿ ಮಾಧ್ಯಮ ಪ್ರಕಟಣೆ ತಿಳಿಸಿದೆ. ಅಂಜನಾದ್ರಿ ಬೆಟ್ಟದ ಪ್ರವಾಸೋದ್ಯಮ ಮತ್ತು ಪೌರಾಣಿಕ, ಆಧ್ಯಾತ್ಮಿಕ ಮಹತ್ವವನ್ನು ತಿಳಿಸುವ ರೀತಿಯಲ್ಲಿ ಅಭಿವೃದ್ಧಿಗೊಳಿಸಬೇಕು ಸಿಎಂ ಸೂಚಿಸಿದ್ದಾರೆ. ಅಲ್ಲದೆ ವಯಸ್ಕರು ಬೆಟ್ಟದ ತುದಿಗೆ ತಲುಪಲು ಅಗತ್ಯವಾದ ಸವಲತ್ತುಗಳನ್ನು ಕಲ್ಪಿಸುವುದು ಹಾಗೂ ಇದಕ್ಕಾಗಿ ಪ್ರದಕ್ಷಿಣೆ ಮಾರ್ಗ ನಿರ್ಮಿಸುವ ಬಗ್ಗೆ ಚರ್ಚೆ ನಡೆದಿದೆ.

# ಸಚಿವ ಜಮೀರ್ ಅಕ್ರಮ ಆಸ್ತಿಗಳಿಕೆ ಪ್ರಕರಣ: ಕೆಜಿಎಫ್ ಬಾಬುಗೆ ಲೋಕಾಯುಕ್ತ ನೋಟಿಸ್

• ಉದಯವಾಹಿನಿ ಬೆಂಗಳೂರು



ಸಚಿವ ಜಮೀರ್ ಅಹ್ಮದ್ ವಿರುದ್ಧ ಅಕ್ರಮ ಆಸ್ತಿಗಳಿಕೆ ಪ್ರಕರಣದ ಸಂಬಂಧ ಕೆಜಿಎಫ್ ಬಾಬು ಅವರಿಗೆ ವಿಚಾರಣೆಗೆ ಹಾಜರಾಗುವಂತೆ ಲೋಕಾಯುಕ್ತ ಪೊಲೀಸರು ನೋಟಿಸ್ ನೀಡಿದ್ದಾರೆ. ಈ ಪ್ರಕರಣದ ತನಿಖೆ ವೇಳೆ ಕೆಜಿಎಫ್ ಬಾಬು, ಜಮೀರ್ ಅಹ್ಮದ್ ನಡುವೆ ಹಣದ ವ್ಯವಹಾರ ನಡೆದಿರೋದು ಬೆಳಕಿಗೆ ಬಂದಿತ್ತು. ಈ ಹಿನ್ನೆಲೆಯಲ್ಲಿ ಕೆಜಿಎಫ್ ಬಾಬು ಅವರಿಗೆ ನೋಟಿಸ್ ನೀಡಿರುವ ಲೋಕಾಯುಕ್ತ ಅಧಿಕಾರಿಗಳು, 7 ದಿನಗಳ ಒಳಗೆ ವಿಚಾರಣೆಗೆ ಬರುವಂತೆ ನೋಟಿಸ್ ನೀಡಿದ್ದಾರೆ. ತನಿಖೆ ವೇಳೆ ಜಮೀರ್ ಅಹ್ಮದ್‌ಗೆ ಕೆಜಿಎಫ್ ಬಾಬು ಅವರು 2013ರಲ್ಲಿ ಮನೆ ಖರೀದಿಗೆ 3.70 ಕೋಟಿ ರೂ. ಸಾಲ ನೀಡಿರುವುದು ತಿಳಿದುಬಂದಿದೆ. ಹಾಗಾಗಿ ಯಾವ ಕಾರಣಕ್ಕಾಗಿ ಹಣ ನೀಡಿದ್ದೀರಿ ಇಬ್ಬರ ವ್ಯವಹಾರಗಳೇನು? ಈ ಸಂಬಂಧ ದಾಖಲೆ ಸಮೇತ ವಿಚಾರಣೆಗೆ ಹಾಜರಾಗುವಂತೆ ಸೂಚಿಸಲಾಗಿದೆ.

# ನ್ಯಾ.ನಾಗಮೋಹನ್ ದಾಸ್ ವರದಿ ತಿದ್ದುಪಡಿ ಮಾಡದೆ ಯಥಾವತ್ ಜಾರಿಗೆ ತನ್ನಿ

• ಉದಯವಾಹಿನಿ ಬೆಂಗಳೂರು

ಒಳಮೀಸಲಾತಿ ಸಂಬಂಧ ಜೆ.ಸಿ.ಮಾಧುಸ್ವಾಮಿ ಸಮಿತಿಯ ವರದಿ ಅಥವಾ ನಿವೃತ್ತ ನ್ಯಾಯಮೂರ್ತಿ ಎಚ್.ಎನ್.ನಾಗಮೋಹನದಾಸ್ ಆಯೋಗದ ವರದಿಯನ್ನು ತಿದ್ದುಪಡಿ ಮಾಡದೆ ಯಥಾವತ್ತಾಗಿ ಜಾರಿಗೆ ತರುವಂತೆ ಬಿಜೆಪಿ ಸಂಸದ ಗೋವಿಂದ ಕಾರಜೋಳ ಅವರು ಆಗ್ರಹಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಒಳಮೀಸಲಾತಿಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ನೀಡಿದ್ದ ಆದೇಶಕ್ಕೆ ಅನುಗುಣವಾಗಿಯೇ ನಾಗಮೋಹನದಾಸ್ ಆಯೋಗವು ಶಿಫಾರಸು ಮಾಡಿತ್ತು. ಆದರೆ ಅದನ್ನು ಕಡೆಗಣಿಸಿದ ಸರ್ಕಾರವು, ತನ್ನಿಚ್ಛೆಯಂತೆ ಒಳಮೀಸಲಾತಿಯನ್ನು ಘೋಷಿಸಿದೆ. ಇದು ಸಾಮಾಜಿಕ ನ್ಯಾಯದ ತೀರ್ಮಾನವಲ್ಲ. ಬದಲಿಗೆ ರಾಜಕೀಯ ತೀರ್ಮಾನವಾಗಿದೆ ಎಂದು ಆರೋಪಿಸಿದರು. ನಾಗಮೋಹನ್ ದಾಸ್ ಆಯೋಗದ ವರದಿಯನ್ನು ಸರ್ಕಾರ ಸಂಪೂರ್ಣವಾಗಿ ಒಪ್ಪಿಕೊಳ್ಳಬೇಕು ಅಥವಾ ಬಸವರಾಜ್ ಬೊಮ್ಮಾಯಿ ನೇತೃತ್ವದ ಹಿಂದಿನ ಬಿಜೆಪಿ ಸರ್ಕಾರದ ಜೆಸಿ ಮಾಧುಸ್ವಾಮಿ ನೇತೃತ್ವದ ಸಂಪುಟ ಉಪಸಮಿತಿಯ ಶಿಫಾರಸುಗಳನ್ನು ಒಪ್ಪಿಕೊಳ್ಳಬೇಕು. ನಾಗಮೋಹನ್ ದಾಸ್ ಆಯೋಗದ ವರದಿಗೆ 150 ಕೋಟಿ ರೂಪಾಯಿ ಖರ್ಚು ಮಾಡಿದ ಸರ್ಕಾರ, ಅದರ ಶಿಫಾರಸುಗಳನ್ನು ಮಾರ್ಪಡಿಸುವ ಮೂಲಕ ಅದನ್ನು ಅವಮಾನಿಸಿದೆ. ಸಿದ್ದರಾಮಯ್ಯ ಅವರು ನಿವೃತ್ತ ಅಧಿಕಾರಿಗಳೊಂದಿಗೆ ಸರ್ವಪಕ್ಷ ಸಭೆ ನಡೆಸಿ ಈ ವಿಷಯದ ಬಗ್ಗೆ ಒಮ್ಮತ ನಿರ್ಧಾರಕ್ಕೆ ಬರಬೇಕೆಂದು ಆಗ್ರಹಿಸಿದರು.

# ಜಿಎಸ್‌ಟಿ ಸರಳೀಕರಣದಿಂದಾಗಿ ರಾಜ್ಯಕ್ಕೆ ವಾರ್ಷಿಕ 15,000 ಕೋಟಿ ರೂ ನಷ್ಟ

• ಉದಯವಾಹಿನಿ ಬೆಂಗಳೂರು

ಕೇಂದ್ರ ಸರ್ಕಾರ ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ದರ ಸರಳೀಕರಣ ವ್ಯವಸ್ಥೆ ಪ್ರಸ್ತಾವನೆಯಿಂದ ರಾಜ್ಯಕ್ಕೆ ವಾರ್ಷಿಕ 15,000 ಕೋಟಿ ರೂ. ನಷ್ಟವಾಗಲಿದೆ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಕಳವಳ ವ್ಯಕ್ತಪಡಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಎಸ್‌ಟಿ ತೆರಿಗೆ ವ್ಯವಸ್ಥೆ ಜಾರಿಯಾದ ನಂತರ ರಾಜ್ಯದ ಆದಾಯದಲ್ಲಿ ವಾರ್ಷಿಕ ಸರಾಸರಿ 70 ಸಾವಿರ ಕೋಟಿ ರೂ. ನಷ್ಟವಾಗುತ್ತಿದೆ. ಇದೀಗ ಕೇಂದ್ರ ಸರ್ಕಾರದ ದರ ಸರಳೀಕರಣ ಪ್ರಸ್ತಾವನೆಯಿಂದ ಹೆಚ್ಚುವರಿ 15 ಸಾವಿರ ಕೋಟಿ ರೂ. ನಷ್ಟತರಲಿದ್ದು, ಒಟ್ಟಾರೆ 85,000 ಕೋಟಿ ರೂ. ವಾರ್ಷಿಕ ಆದಾಯ ನಷ್ಟವನ್ನು ಎದುರು ಮಾಡಲಿದೆ ಎಂದು ಹೇಳಿದ್ದಾರೆ.



ಹೊಸ ಯೋಜನೆಯಡಿಯಲ್ಲಿ ಪ್ರತಿ ರಾಜ್ಯವು ಎಷ್ಟು ಕಳೆದುಕೊಳ್ಳಲಿದೆ ಎಂಬುದನ್ನು ವಿವರಿಸಲು ಕೇಂದ್ರವು ಯಾವುದೇ ಅಂದಾಜು ಅಥವಾ ಮಾರ್ಗಸೂಚಿಯನ್ನು ಒದಗಿಸಿಲ್ಲ. ಜಿಎಸ್‌ಟಿ ಆರ್ಥಿಕ ಚಟುವಟಿಕೆಯನ್ನು ಹೆಚ್ಚಿಸುತ್ತದೆ ಎಂದು ಅವರು ಭರವಸೆ ನೀಡಿದ್ದರು.

ಆದರೆ, ಅದು ವರ್ಷದಿಂದ ವರ್ಷಕ್ಕೆ ರಾಜ್ಯದ ಆದಾಯವನ್ನು ಕುಗ್ಗಿಸಿದೆ. ಕಳೆದ 7-8 ವರ್ಷಗಳ ಅನುಭವದಲ್ಲಿ ಈ ಹೇಳಿಕೆ ಸುಳ್ಳು ಎಂದು ಸಾಬೀತಾಗಿದೆ. ಪ್ರತಿ ವರ್ಷವೂ ಎಲ್ಲಾ ರಾಜ್ಯಗಳ ನಿವ್ವಳ ಆದಾಯ ಗಣನೀಯವಾಗಿ ಇಳಿಯುತ್ತಲೇ ಇದೆ.ಜಿಎಸ್‌ಟಿಗೆ ಮುನ್ನ ವ್ಯಾಟ್ ಅಡಿಯಲ್ಲಿ ತೆರಿಗೆ ಸಂಗ್ರಹಿಸುತ್ತಿದ್ದ ಕಾಲದಲ್ಲಿ ದೇಶದ ಜಿಡಿಪಿಗೆ ವ್ಯಾಟ್ ಕೊಡುಗೆ ಶೇ 6.1 ರಷ್ಟು ಇತ್ತು. ಆದರೆ, ಈಗ ಜಿಎಸ್‌ಟಿ ಜಾರಿಯಾದ ಬಳಿಕ ಈ ಪ್ರಮಾಣ ಈವರೆಗೆ ಶೇ. 6.1 ಕ್ಕೆ ತಲುಪಲಾಗಿಲ್ಲ. ಪ್ರಸ್ತುತ ಜಿಡಿಪಿಗೆ ಜಿಎಸ್ಟಿ ಕೊಡುಗೆ ಕೇವಲ ಶೇ. 5.8 ರಷ್ಟು ಮಾತ್ರ. ಒಟ್ಟರೆ ಜಿಎಸ್ಟಿಯಿಂದಾಗಿ ರಾಜ್ಯ ಹಾಗೂ ಕೇಂದ್ರಕ್ಕೆ ಆದಾಯ ನಷ್ಟವಾಗುತ್ತಿರುವುದು ಸ್ಪಷ್ಟವಾಗಿದೆ ಎಂದು ವಿವರಿಸಿದರು. ಜಿಎಸ್‌ಟಿ ಜಾರಿಗೊಂಡ ನಂತರ ಕೇಂದ್ರದ ತೆರಿಗೆಯಲ್ಲಿ ಕರ್ನಾಟಕದ ಪಾಲು 2016-17ರಿಂದ 2024-25ಕ್ಕೆ ಹೋಲಿಸಿದರೆ ವಾರ್ಷಿಕ 21,977 ಕೋಟಿ ಕಡಿತವಾಗಿದೆ. ಕೇಂದ್ರ ಪುರಸ್ಕೃತ ಯೋಜನೆಯಲ್ಲಿ ಕರ್ನಾಟಕಕ್ಕೆ ಬರುವ ಅನುದಾನ ವಾರ್ಷಿಕ 18,870 ಕೋಟಿ ರೂ. ಕಡಿತಗೊಂಡಿದೆ.

ಪ್ರಸ್ತಾವಿತ ಜಿಎಸ್‌ಟಿ ದರ ಸರಳೀಕರಣದಿಂದ ರಾಜ್ಯ ಸರ್ಕಾರಗಳಿಗೆ ಯಾವ ಪ್ರಮಾಣದಲ್ಲಿ ಆದಾಯ ನಷ್ಟವಾಗಬಹುದು ಎಂಬ ಅಂದಾಜಿನ ಕುರಿತು ಕೇಂದ್ರ ಸರ್ಕಾರ ಈವರೆಗೂ ಮಾಹಿತಿ ನೀಡಿಲ್ಲ. ಕೆಲವು ಸರ್ಕಾರಿ ಹಾಗೂ ಖಾಸಗಿ ಸಂಸ್ಥೆಗಳು 2.50 ಲಕ್ಷ ಕೋಟಿ ರೂ.ವರೆಗೆ ನಷ್ಟ ಉಂಟಾಗುವ ಸಾಧ್ಯತೆ ಇದೆ ಎಂದು ಅಂದಾಜಿಸಿವೆ.

**ಕೇಂದ್ರದ ಆದಾಯದಲ್ಲಿ ಜಿಎಸ್‌ಟಿ ಪಾಲು ಕೇವಲ ಶೇ. 28ರಷ್ಟು ಮಾತ್ರ. ಉಳಿದ ಶೇ.72ರಷ್ಟು ಆದಾಯವನ್ನು ಕೇಂದ್ರ ವಿವಿಧ ಮೂಲಗಳಿಂದಗಳಿಸುತ್ತದೆ. ನೇರ ತೆರಿಗೆ , ಆದಾಯ ತೆರಿಗೆ, ಕಸ್ಟಮ್ಸ್, ಡೆವಿಡೆಂಟ್ ಹಾಗೂ ವಿವಿಧ ಸೆಸ್‌ಗಳು ಕೇಂದ್ರದ ಆದಾಯದ ಮೂಲ. ಸೆಸ್ ಮೂಲಕವೇ ಕೇಂದ್ರ ಸರ್ಕಾರ ಶೇ.17 ರಿಂದ ಶೇ.20 ರಷ್ಟು ಆದಾಯಗಳಿಸುತ್ತದೆ. ಸೆಸ್ ಆದಾಯದಲ್ಲಿ ಒಂದು ರೂಪಾಯಿಯನ್ನೂ ಸಹ ಕೇಂದ್ರ ಸರ್ಕಾರ ರಾಜ್ಯಗಳ ಜೊತೆ ಹಂಚಿಕೊಳ್ಳುವುದಿಲ್ಲ. ಆದರೆ, ರಾಜ್ಯಗಳ ಆದಾಯದಲ್ಲಿ ಜಿಎಸ್ಟಿ ಪಾಲು ಶೇ.50 ರಷ್ಟು. ಹೀಗಾಗಿ ಅಭಿವೃದ್ಧಿಗಾಗಿ, ಆದಾಯ ಸಂಗ್ರಹಣೆಗೆ ರಾಜ್ಯಗಳು ಜಿಎಸ್‌ಟಿಯನ್ನೇ ನೆಚ್ಚಿಕೊಂಡಿವೆ. ಇಂತಹ ಸಂದರ್ಭದಲ್ಲಿ ರಾಜ್ಯಗಳ ಆದಾಯದ ಶೇ.20ರಷ್ಟು ಆದಾಯ ನಷ್ಟವಾದರೆ ರಾಜ್ಯಗಳ ಆರ್ಥಿಕ ಸ್ವಾಯತ್ತತೆ ಪ್ರಶ್ನಾರ್ಥಕವಾಗುತ್ತದೆ ಎಂದು ಕಳವಳ ವ್ಯಕ್ತಪಡಿಸಿದರು.**

# ಅಬಕಾರಿ ಇಲಾಖೆ 68.78 ಕೋಟಿ ರೂ ಹೆಚ್ಚುವರಿ ಆದಾಯಗಳಿಕೆ: ಸಚಿವ ತಿಮ್ಮಾಪುರ್

• ಉದಯವಾಹಿನಿ ಬೆಂಗಳೂರು

ಅಬಕಾರಿ ಇಲಾಖೆಯು ಮೊದಲ ಎರಡು ತ್ರೈಮಾಸಿಕಗಳಲ್ಲಿ 68.78 ಕೋಟಿ ರೂ. ಹೆಚ್ಚುವರಿ ಆದಾಯವನ್ನು ಗಳಿಸಿದೆ ಎಂದು ಅಬಕಾರಿ ಸಚಿವ ಆರ್.ಬಿ. ತಿಮ್ಮಾಪುರ ಹೇಳಿದ್ದಾರೆ. ಈ ಅವಧಿಯಲ್ಲಿ 16,290 ಕೋಟಿ ರೂ.ಗಳ ಗುರಿ ಹೊಂದಲಾಗಿದ್ದು, 16,358 ಕೋಟಿ ರೂಪಾಯಿ ಸಂಗ್ರಹಿಸಲಾಗಿದೆ.



ಇಲಾಖೆಯು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಹಲವು ಸುಧಾರಣೆಗಳನ್ನು ಪರಿಚಯಿಸಲಾಗಿದೆ. ಅಧಿಕಾರಿಗಳನ್ನು ಕೌನ್ಸೆಲಿಂಗ್ ಮೂಲಕ ಪಾರದರ್ಶಕ ರೀತಿಯಲ್ಲಿ ವರ್ಗಾಯಿಸಲಾಗಿದೆ. ಸುಧಾರಣೆಗಳು ಭ್ರಷ್ಟಾಚಾರವನ್ನು ಸ್ವಲ್ಪ ಮಟ್ಟಿಗೆ ಕಡಿಮೆ ಮಾಡಲು ಸಹಾಯ ಮಾಡಿವೆ. ಪರವಾನಗಿಗಳ ಆನ್‌ಲೈನ್ ನವೀಕರಣಕ್ಕಾಗಿ ಡಿಜಿಟಲ್ ವ್ಯವಸ್ಥೆಯನ್ನು ಜಾರಿಗೆ ತರಲಾಗುತ್ತಿದೆ ಎಂದರು.

ಮಹಾರಾಷ್ಟ್ರ ಮತ್ತು ಗೋವಾದಿಂದ ಮದ್ಯ ಕಳ್ಳಸಾಗಣೆ ತಡೆಯಲು ಕಠಿಣ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ರಾಜ್ಯದ ಗಡಿಯಲ್ಲಿರುವ ಚೆಕ್‌ಪೋಸ್ಟ್‌ಗಳಲ್ಲಿ ಪ್ರತಿ 15 ದಿನಗಳಿಗೊಮ್ಮೆ ಸಿಬ್ಬಂದಿಯನ್ನು ಬದಲಾಯಿಸುವಂತೆ ಆಯುಕ್ತರಿಗೆ ಆದೇಶ ನೀಡಲಾಗಿದೆ. ಎನ್‌ಡಿಪಿಎಸ್ ಕಾಯ್ದೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲು ಅವರಿಗೆ ನಿರ್ದೇಶನ ನೀಡಲಾಗಿದೆ ಎಂದು ಅವರು ಹೇಳಿದರು.

# ಬೆಂಗಳೂರು ನಗರ ವಿಶ್ವವಿದ್ಯಾಲಯದಲ್ಲಿ -ವಿಕ್ಟರ್ ಹುಗೋ ಕುರಿತು ವಿಚಾರ ಸಂಕಿರಣ, ಸಾಹಿತ್ಯೋತ್ಸವ

• ಉದಯವಾಹಿನಿ ಬೆಂಗಳೂರು

ನಗರ ವಿಶ್ವವಿದ್ಯಾಲಯದ ಜಾಗತಿಕ ಭಾಷೆಗಳ ಕೇಂದ್ರವು ಬುಧವಾರ ಸೆಂಟ್ರಲ್ ಕಾಲೇಜಿನ ಜೆ.ಜೆ. ಸಭಾಂಗಣದಲ್ಲಿ ಹಳೆಯ ವಿದ್ಯಾರ್ಥಿಗಳ ಸಮ್ಮೇಳನದೊಂದಿಗೆ ವಿಕ್ಟರ್ ಹುಗೋ ಕುರಿತ ವಿಚಾರ ಸಂಕಿರಣ, ಸಾಹಿತ್ಯೋತ್ಸವವನ್ನು ಆಯೋಜಿಸಿತು.

ಈ ಕಾರ್ಯಕ್ರಮದಲ್ಲಿ ವಿದೇಶಿ ಭಾಷೆಗಳ ವಿಭಾಗದ ಸಂಸ್ಥಾಪಕರಾದ ಡಾ. ಸುಮನ್ ವೆಂಕಟೇಶ್ ಅವರ ವಿಕ್ಟರ್ ಹುಗೋ ಮತ್ತು ಹಿಂದೂ ತತ್ವಶಾಸ್ತ್ರ ಎಂಬ ಹೊಸ ಕೃತಿಯನ್ನು ಬಿಡುಗಡೆ ಮಾಡಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಡಾ. ವೆಂಕಟೇಶ್ ಅವರು, ಹುಗೋ ಅವರ 19ನೇ ಶತಮಾನದ ಕಾವ್ಯಗಳಲ್ಲಿ ಭಾಗವದ್ಗೀತೆ ಹಾಗೂ ಉಪನಿಷತ್ತುಗಳ ಪ್ರಭಾವ ಗಾಢವಾಗಿ ಕಾಣಸಿಗುತ್ತದೆ ಎಂದು ತಿಳಿಸಿದರು. ಹುಗೋ ಅವರ ಕೃತಿಗಳನ್ನು ಅವರು ''ಸಂಸ್ಕೃತಿಗಳು ಮತ್ತು ಶತಮಾನಗಳನ್ನು ಮೀರಿ ಸತ್ಯ ಮತ್ತು ಆತ್ಮಶೋಧನೆಯ ವಿಶ್ವವ್ಯಾಪಕ ಪ್ರಯಾಣ'' ಎಂದು ವರ್ಣಿಸಿದರು. ಮುಖ್ಯ ಅತಿಥಿಯಾಗಿ ಫ್ರಾನ್ಸ್‌ನ ಕೌನ್ಸಲ್ ಜನರಲ್ ಶ್ರೀ ಮಾರ್ಕ್ ಲಾಮಿ, ಫ್ರೆಂಚ್ ಅಧ್ಯಯನವನ್ನು ಉತ್ತೇಜಿಸುವಲ್ಲಿ ಕೇಂದ್ರದ ಪ್ರಯತ್ನಗಳನ್ನು ಶ್ಲಾಘಿಸಿದರು.




ಇದೇ ಸಂದರ್ಭದಲ್ಲಿ ಅವರು ಫ್ರೆಂಚ್ ಭಾಷೆ ಮತ್ತು ಸಂಸ್ಕೃತಿಯ ವೃದ್ಧಿ ಪ್ರಚಾರಕ್ಕಾಗಿ ನೀಡಿದ ಅಪರೂಪದ ಕೊಡುಗೆಗಾಗಿ ಪ್ರೊ. ಜ್ಯೋತಿ ವೆಂಕಟೇಶ್, ನಿರ್ದೇಶಕರು, ಜಾಗತಿಕ ಭಾಷಾ ಕೇಂದ್ರ ಅವರಿಗೆ ಪ್ರತಿಷ್ಠಿತ 'ಆರ್ಡರ್ ಆಫ್ ಅಕಾಡೆಮಿಕ್ ಪಾಮ್ಸ್ ಪದಕವನ್ನು ಪ್ರದಾನ ಮಾಡಿದರು.

ಅಧ್ಯಕ್ಷೀಯ ಭಾಷಣ ಮಾಡಿದ ಕುಲಪತಿ ಪ್ರೊ. ಜಲಜಾ, ಪ್ರೊ. ವೆಂಕಟೇಶ್ ಅವರನ್ನು ಅಭಿನಂದಿಸಿ, ಭಾಷೆ ಕೇವಲ ಅಭಿವ್ಯಕ್ತಿಯ ಮಾಧ್ಯಮವಲ್ಲದೆ, ಸಮಾಜ ಮತ್ತು ಮಾನವತೆಯನ್ನು ಆಳವಾಗಿ ಗ್ರಹಿಸುವ ಶಕ್ತಿಯುತ ಸಾಧನವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಂಗವಾಗಿ, ವಿದ್ಯಾರ್ಥಿಗಳು ತಯಾರಿಸಿದ ವಿಕ್ಟರ್ ಹುಗೋ ಅವರ ಕವನಗಳ ಕುರಿತ ವಿಡಿಯೋವನ್ನು ಪ್ರದರ್ಶಿಸಲಾಯಿತು. ಜಾಗತಿಕ ಭಾಷೆಗಳ ಕೇಂದ್ರವು ಆಯೋಜಿಸಿದ್ದ ಪೋಸ್ಟರ್ ರಚನಾ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಅಂತಿಮವಾಗಿ, ಸೇಂಟ್ ಜೋಸೆಫ್ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ವಿಕ್ಟರ್ ಹುಗೋ ಅವರ ಹೆರ್ನಾನಿ ನಾಟಕವನ್ನು ರಂಗಪ್ರದರ್ಶನ ಮಾಡಿದರು.

ಈ ಸಂದರ್ಭದಲ್ಲಿ ಗೌರವ ಅತಿಥಿಗಳಾಗಿ ಅಲಿಯಾನ್ಸ್ ಫ್ರಾಂಸೆಸ್ ಡಿ ಬೆಂಗಳೂರು ನಿರ್ದೇಶಕರು ಶ್ರೀ ಜೀನ್-ಮಾರ್ಕ್ ಡೆಪಿಯರ್, ಫ್ರೆಂಚ್ ಭಾಷಾ ಸಹಕಾರಕ್ಕಾಗಿ ಅಟಾಶೇ ಶ್ರೀ ಥಾಮಸ್ ಷಾಮೋಂಟ್, ಮತ್ತು ವೈಜ್ಞಾನಿಕ ಹಾಗೂ ಶೈಕ್ಷಣಿಕ ಸಹಕಾರಕ್ಕಾಗಿ ಅಟಾಶೇ ಶ್ರೀ ಆಂಟೋಯಿನ್ ಗಿಲ್ಲೆಮೆಟ್ ಅವರು, ಬೆಂಗಳೂರು ನಗರ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರು ರೆ.ಡಾ. ಫ್ರಾನ್ಸಿಸ್ ಅಸಿಸಿ ಅಲ್ಮೇಡಾ ಉಪಸ್ಥಿತರಿದ್ದರು.

**ತಮ್ಮ ಬಾಲ್ಯದಲ್ಲಿ ಬ್ರಸೆಲ್ಸ್‌ನಲ್ಲಿ ಕಳೆದ ವರ್ಷಗಳು ಹಾಗೂ ಫ್ರೆಂಚ್ ಸಂಸ್ಕೃತಿಯ ಪರಿಚಯವೇ ತಮ್ಮಲ್ಲಿ ಫ್ರೆಂಚ್ ಸಾಹಿತ್ಯದ ಆಸಕ್ತಿಯನ್ನು ಬೆಳೆಸಿತು ಎಂದು ನೆನೆಸಿಕೊಂಡರು. ಅಂತರಸಾಂಸ್ಕೃತಿಕ ಅನುಭವಗಳು ತಮ್ಮ ದೃಷ್ಟಿಕೋನವನ್ನು ವಿಸ್ತರಿಸಿದೆ. ಭಾರತೀಯ ವಿದ್ಯಾರ್ಥಿಗಳಿಗೆ ಇಂತಹ ಅವಕಾಶಗಳು ಒದಗಿಸಬೇಕೆಂಬುದೇ ಜಾಗತಿಕ ಭಾಷಾ ಕೇಂದ್ರದ ಉದ್ದೇಶ ಎಂದು ಹೇಳಿದರು**

**-ಪ್ರೊ. ವೆಂಕಟೇಶ್**

# ನಿರಂತರ ಮಳೆಗೆ ಬೆಳೆ ಹಾನಿ: ರೈತರ ಸಾಲ ಮನ್ನಾಗೆ ಜೆಡಿಎಸ್ ಆಗ್ರಹ

• ಉದಯವಾಹಿನಿ ಬೆಂಗಳೂರು

ನೆರೆಹಾನಿ ಪ್ರದೇಶಗಳ ರೈತರು, ಸಂತ್ರಸ್ತರ ಸಮಸ್ಯೆಗಳಿಗೆ ಸ್ಪಂದಿಸುವ ಸಲುವಾಗಿ ರಾಜ್ಯ ಪ್ರವಾಸ ಕೈಗೊಳ್ಳುವುದಾಗಿ ಜೆಡಿಎಸ್ ಪಕ್ಷದ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿಯವರು ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯಾದ್ಯಂತ ಭಾರೀ ಮಳೆ, ಪ್ರವಾಹದಿಂದ ವ್ಯಾಪಕ ಬೆಳೆ ಹಾನಿ ಸಂಭವಿಸಿದ್ದು, ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ರೈತರ ಸಾಲ ಮನ್ನಾ ಮಾಡಬೇಕೆಂದು ಒತ್ತಾಯಿಸಿದ್ದಾರೆ. ರಾಜ್ಯದಲ್ಲಿ ಮುಂಗಾರು ಮಳೆಯ ಅತಿವೃಷ್ಟಿಯಿಂದ ಲಕ್ಷಾಂತರ ಹೆಕ್ಟರ್ ಪ್ರದೇಶದಲ್ಲಿ ರೈತರ ಬೆಳೆ ನಷ್ಟವಾಗಿದ್ದು, ನೆರೆಹಾನಿಯಿಂದ ಜನಸಾಮಾನ್ಯರು ಸಹ ಮನೆಗಳನ್ನು ಕಳೆದುಕೊಂಡು ಸಂಕಷ್ಟ ಅನುಭವಿಸುತ್ತಿದ್ದಾರೆ. ರೈತ ವಿರೋಧಿ ಕಾಂಗ್ರೆಸ್ ಸರ್ಕಾರ ಜಿಲ್ಲಾ ಉಸ್ತುವಾರಿ ಮಂತ್ರಿಗಳು ನೆರವಿಗೆ ಧಾವಿಸದೆ, ಪರಿಹಾರಗಳನ್ನು ಒದಗಿಸದೆ ನಿರ್ಲಕ್ಷ್ಯವಹಿಸಿದೆ ಎಂದು ಕಿಡಿಕಾರಿದ್ದಾರೆ.



ಈ ಹಿನ್ನೆಲೆಯಲ್ಲಿ ನೆರೆ ಸಂತ್ರಸ್ತರ ಸಮಸ್ಯೆಗಳನ್ನು ಆಲಿಸಲು ಜನತಾದಳ ಜಾತ್ಯತೀತ ಪಕ್ಷದ ವತಿಯಿಂದ ರಾಜ್ಯ ಪ್ರವಾಸ ಕೈಗೊಳ್ಳಲಾಗಿದ್ದು, ಬೆಳೆ ಹಾನಿ, ಮನೆ ಕುಸಿತ ಪ್ರದೇಶಗಳಿಗೆ ಭೇಟಿ ನೀಡಿ ವಸ್ತು ಸ್ಥಿತಿ ವರದಿಯನ್ನು ರಾಜ್ಯ ಸರ್ಕಾರಕ್ಕೆ ನೀಡಲಿದ್ದೇವೆಂದು ಹೇಳಿದ್ದಾರೆ. ಒಂದು ಹೆಲಿಕಾಪ್ಟರ್ ಸುಮಾರು 80 ಕೋಟಿ ರೂ. ಮತ್ತು ಖಾಸಗಿ ಜೆಟ್ ರೂ. 150 ಕೋಟಿ ವರೆಗೆ ವೆಚ್ಚವಾಗಬಹುದು. ಇವುಗಳ ಖರೀದಿ ಬಗ್ಗೆ ಚರ್ಚಿಸಲು ಸರ್ಕಾರದ ಬಳಿ ಸಮಯವಿದೆ ಎಂದರೆ, ರೈತರ ಬಗ್ಗೆ ಯೋಚಿಸಲು ಸಮಯವೇಕಿಲ್ಲ ಎಂದು ಪ್ರಶ್ನಿಸಿದ್ದಾರೆ.

**ಕರ್ನಾಟಕದ ಕಿತ್ತೂರು, ಕಲ್ಯಾಣ ಕರ್ನಾಟಕ, ಹಾಸನ, ಚಿಕ್ಕಮಗಳೂರು ಶಿವಮೊಗ್ಗದಲ್ಲಿ ಸುಮಾರು ಶೇ.34 ರಷ್ಟು ಅಧಿಕ ಮಳೆಯಾಗಿದ್ದು, ಬೆಳೆ ನಾಶವಾಗಿದೆ, ಆದರೂ ಸಿಎಂ ಮತ್ತು ಡಿಕೆಶಿ ಸೇರಿದಂತೆ ಯಾವುದೇ ಸಚಿವರು ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿಲ್ಲ ಅಥವಾ ಯಾವುದೇ ಹೇಳಿಕೆ ನೀಡಿಲ್ಲ. ರೈತರು ಎದುರಿಸುತ್ತಿರುವ ಸಮಸ್ಯೆಗಳನ್ನು ಪರಿಹರಿಸುವ ಮತ್ತು ಅವರಿಗೆ ಸ್ವಲ್ಪ ಭರವಸೆ ನೀಡುವ ಬದಲು, ರಾಜ್ಯ ಸರ್ಕಾರವು ಸಚಿವರ ಪ್ರಯಾಣಕ್ಕಾಗಿ ಹೆಲಿಕಾಪ್ಟರ್ -ಖಾಸಗಿ ಜೆಟ್ ಖರೀದಿಸುವ ಬಗ್ಗೆ ಚರ್ಚೆ ನಡೆಯುತ್ತಿದೆ.**

# ಬಸ್‌ಗೆ ಸ್ಕೂಟರ್ ಡಿಕ್ಕಿ: ಹಿಂಬದಿ ಸವಾರರೊಬ್ಬರು ಮೃತ

• ಉದಯವಾಹಿನಿ ಬೆಂಗಳೂರು

ಯಲಹಂಕ ಸಮೀಪದ ಬಾಗಲೂರು ಕ್ರಾಸ್‌ನ ಪಾಲನಹಳ್ಳಿ ಬಳಿ ಮಧ್ಯಾಹ್ನ ಸಂಭವಿಸಿದ ಅಪಘಾತದಲ್ಲಿ ಬೈಕ್‌ನ ಹಿಂಬದಿಯ ಸವಾರರೊಬ್ಬರು ಮೃತಪಟ್ಟಿದ್ದಾರೆ. ಕಿರಣ್ ವರ್ಮಾ (32) ಮೃತಪಟ್ಟವರು. ಕೆ.ವಿ. ಸುಬ್ಬರಾಜು ಕಿರಣ್ ವರ್ಮಾ ಅವರು ಹುಣಸಮಾರನಹಳ್ಳಿ ಕಡೆಯಿಂದ ಆರ್‌ಟಿ ನಗರದ ಕಡೆಗೆ ಸ್ಕೂಟಿಯಲ್ಲಿ ತೆರಳುತ್ತಿದ್ದರು. ಪಾಲನಹಳ್ಳಿ ಗೇಟ್ ಬಳಿ ರಸ್ತೆಗೆ ಅಡ್ಡಲಾಗಿ ಖಾಸಗಿ ಬಸ್‌ವೊಂದನ್ನು ನಿಲುಗಡೆ ಮಾಡಲಾಗಿತ್ತು. ಸ್ಕೂಟರ್ ನಿಯಂತ್ರಣ ತಪ್ಪಿ ಬಸ್‌ಗೆ ಡಿಕ್ಕಿ ಹೊಡೆದ ಪರಿಣಾಮ, ಬೈಕ್ ಸವಾರರಿಬ್ಬರು ರಸ್ತೆಯ ಮೇಲೆ ಬಿದ್ದಿದ್ದರು.

ಅದೇ ವೇಳೆ ವೇಗವಾಗಿ ಬಂದ ಬೊಲೆರೊ ವಾಹನದ ಚಕ್ರಗಳು ಬೈಕ್ ಸವಾರರ ಮೇಲೆ ಹರಿದ ಪರಿಣಾಮ ಕಿರಣ್ ವರ್ಮಾ ಅವರು ಸ್ಥಳದಲ್ಲೇ ಮೃತಪಟ್ಟರು. ಸುಬ್ಬರಾಜು ಅವರು ಗಾಯಗೊಂಡಿದ್ದು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಅಪಘಾತದ ಬಳಿಕ ಚಾಲಕ ಬೊಲೆರೊ ವಾಹನವನ್ನು ನಿಲುಗಡೆ ಮಾಡದೇ ಪರಾರಿ ಆಗಿದ್ದಾನೆ. ಖಾಸಗಿ ಬಸ್, ಬೊಲೆರೊ ವಾಹನದ ಚಾಲಕರ ವಿರುದ್ಧ ಯಲಹಂಕ ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಆಸ್ಪತ್ರೆ ರೋಗಿಗಳಿಗೆ ಪೌಷ್ಟಿಕ ಆಹಾರ, ಇಸ್ಕಾನ್ ಜೊತೆ ಆರೋಗ್ಯ ಇಲಾಖೆ ಒಪ್ಪಂದ

## ಮೊದಲ ಹಂತದಲ್ಲಿ ಕೆ.ಸಿ. ಜನರಲ್ ಆಸ್ಪತ್ರೆ, ಸಿ.ವಿ. ರಾಮನ್ ನಗರ ಸರಕಾರಿ ಆಸ್ಪತ್ರೆಗಳಲ್ಲಿ ಆಹಾರ ವಿತರಣೆ ಆರಂಭ

• ಉದಯವಾಹಿನಿ ಬೆಂಗಳೂರು

ರಾಜ್ಯದಲ್ಲಿ ಮೊದಲ ಬಾರಿಗೆ ಸರಕಾರಿ ಆಸ್ಪತ್ರೆಗಳಲ್ಲಿನ ರೋಗಿಗಳಿಗೆ ಪೌಷ್ಟಿಕ ಆಹಾರ ಒದಗಿಸುವ ಯೋಜನೆಗೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಚಾಲನೆ ನೀಡಿದರು.

ಬೆಂಗಳೂರಿನ ಸಿ.ವಿ. ರಾಮನ್ ನಗರ ಆಸ್ಪತ್ರೆಯಲ್ಲಿ ರೋಗಿಗಳಿಗೆ ಆಹಾರ ವಿತರಿಸುವ ಮೂಲಕ ವಿಶೇಷ ಪೌಷ್ಟಿಕ ಆಹಾರ' ಯೋಜನೆಗೆ ಚಾಲನೆ ನೀಡಿ ಮಾತನಾಡಿದ ಅವರು, ರೋಗಿಗಳ ಶೀಘ್ರ ಚೇತರಿಕೆಯಲ್ಲಿ ಚಿಕಿತ್ಸೆ ಜೊತೆಗೆ ಪೌಷ್ಟಿಕ ಆಹಾರ ಸೇವನೆ ಕೂಡ ಮಹತ್ವದ ಪಾತ್ರ ವಹಿಸಲಿದೆ. ಆರೋಗ್ಯ ಸ್ಥಿತಿ ಮತ್ತು ವಯಸ್ಸಿಗೆ ಅನುಗುಣವಾಗಿ ಪೌಷ್ಟಿಕಾಂಶದ ಅಗತ್ಯಗಳು ಭಿನ್ನವಾಗಿರುತ್ತವೆ. ಹೀಗಾಗಿ, ಎಲ್ಲರಿಗೂ ಒಂದೇ ರೀತಿಯ ಆಹಾರ ಸೂಕ್ತವಲ್ಲ. ಆಹಾರ ಪದ್ಧತಿಯನ್ನು ಸಂಪೂರ್ಣವಾಗಿ ಪರಿಷ್ಕರಿಸಲಾಗಿದ್ದು, ರೋಗಿಗಳ ವೈದ್ಯಕೀಯ ಅಗತ್ಯಗಳ ಆಧಾರದ ಮೇಲೆ ಆಹಾರವನ್ನು ವಿಂಗಡಿಸಲಾಗಿದೆ, ಎಂದರು.



ಮೊದಲ ಹಂತದಲ್ಲಿ ಕೆ.ಸಿ. ಜನರಲ್ ಆಸ್ಪತ್ರೆ, ಜಯನಗರ ಹಾಗೂ ಸಿ.ವಿ. ರಾಮನ್ ನಗರ ಸರಕಾರಿ ಸಾರ್ವಜನಿಕ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ವಿಶೇಷ ಪೌಷ್ಟಿಕ ಆಹಾರವನ್ನು ಪ್ರತಿನಿತ್ಯ ಒದಗಿಸಲಾಗುವುದು. ಇಸ್ಕಾನ್ ಸಂಸ್ಥೆಯ ಸಹಭಾಗಿತ್ವದೊಂದಿಗೆ ಈ ಯೋಜನೆ ಜಾರಿಗೊಳಿಸಿದ್ದು, ಮುಂದಿನ ದಿನಗಳಲ್ಲಿ ರಾಜ್ಯದ ಎಲ್ಲಾ ಸರಕಾರಿ ಜಿಲ್ಲಾಸ್ಪತ್ರೆಗಳಲ್ಲಿ ಪೌಷ್ಟಿಕ ಆಹಾರ ನೀಡಲಾಗುವುದು, ಎಂದು ತಿಳಿಸಿದರು.

ಸಾಮಾನ್ಯ ಆಹಾರ ಕ್ರಮದ ಜೊತೆಗೆ ಚಿಕಿತ್ಸಾ ಆಹಾರ ಕ್ರಮವನ್ನು ಈ ಯೋಜನೆಯಡಿ ರೂಪಿಸಲಾಗಿದೆ.

ಗರ್ಭಿಣಿಯರು, ಬಾಣಂತಿಯರ ಆಹಾರ ಕ್ರಮ ಹಾಗೂ ಮಕ್ಕಳ ಆಹಾರ ಕ್ರಮಕ್ಕೆ ಅನುಗುಣವಾಗಿ ಪೌಷ್ಟಿಕ ಆಹಾರ ನೀಡಲಾಗುತ್ತದೆ ಎಂದು ಹೇಳಿದರು.

ವಿಶೇಷ ಪೌಷ್ಟಿಕ ಆಹಾರ ಯೋಜನೆಗೆ ಚಾಲನೆ

**ಊಟದ ಜತೆಗೆ ಉಪಾಹಾರವೂ ವಿತರಣೆ**

ಪ್ರತಿ ಆಸ್ಪತ್ರೆಯಲ್ಲಿನ ಸುಮಾರು 250 ರೋಗಿಗಳಿಗೆ ನಿತ್ಯ ಆಹಾರ ಪೂರೈಸಲು ಇಸ್ಕಾನ್‌ನೊಂದಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆ. ಇದಕ್ಕಾಗಿ 9 ತಿಂಗಳ ಅವಧಿಗೆ 1,37,45,700 ರೂ. ವೆಚ್ಚವನ್ನು ಇಲಾಖೆಯಿಂದ ಭರಿಸಲಾಗುತ್ತದೆ. ನಿತ್ಯ ರೋಗಿಗಳಿಗೆ ಬೆಳಗಿನ ಉಪಾಹಾರ, ಮಧ್ಯಾಹ್ನದ ಊಟ, ಸಂಜೆ ಲಘು ಉಪಾಹಾರ ಹಾಗೂ ರಾತ್ರಿ ಊಟ ನೀಡಲಾಗುತ್ತದೆ.

### ರೋಗನಿರೋಧಕ ಶಕ್ತಿಯ ಆಹಾರ

**ಗರ್ಭಿಣಿಯರು, ಬಾಣಂತಿಯರು ಮತ್ತು ಮಕ್ಕಳು ರೋಗನಿರೋಧಕ ಶಕ್ತಿ ಹೆಚ್ಚಿಸಿಕೊಳ್ಳಲು ಹಾಗೂ ಸರಿಯಾದ ಬೆಳವಣಿಗೆಗೆ ವಿಶೇಷ ಪೌಷ್ಟಿಕಾಂಶಗಳನ್ನು ಪಡೆಯುವುದು ಬಹಳ ಮುಖ್ಯ. ಗರ್ಭಿಣಿಯರಿಗೆ ಗರ್ಭಾವಸ್ಥೆಯ ಆರೋಗ್ಯಕ್ಕೆ ಅಗತ್ಯವಾದ ಕಬ್ಬಿಣ ಮತ್ತು ಫೋಲಿಕ್ ಆಸಿಡ್ ಹೆಚ್ಚಿರುವ ಆಹಾರವನ್ನು ನೀಡಲಾಗುತ್ತದೆ. ಬಾಣಂತಿಯರಿಗೆ ಹಾಲು ಉತ್ಪಾದನೆ ಮತ್ತು ಆರೋಗ್ಯಕ್ಕೆ ಸಹಕಾರಿಯಾಗುವ ಆಹಾರವನ್ನು ಒದಗಿಸಲಾಗುತ್ತದೆ. ಸಮರ್ಪಕ ಪೌಷ್ಟಿಕ ಆಹಾರವು ರೋಗಿಗಳನ್ನು ವೇಗವಾಗಿ ಚೇತರಿಸಿಕೊಳ್ಳಲು ಸಹಾಯ ಮಾಡುತ್ತದೆ.**

# ಬಾನು ಮುಷ್ತಾಕ್‌ಗೆ ದಸರಾ ಉದ್ಘಾಟನೆಗೆ ಆಹ್ವಾನ

**ನಾಡಹಬ್ಬ ದಸರಾ ಸಂಭ್ರಮಕ್ಕೆ ಇನ್ನು ಕೆಲವೇ ದಿನಗಳು ಬಾಕಿ, ಸರ್ಕಾರ ನಿರ್ಧಾರದಿಂದ ಹಿಂದೆ ಸರಿಯದೆ ಅಧಿಕೃತ ಆಹ್ವಾನಕ್ಕೆ ಸಿದ್ಧತೆ**


• **ಉದಯವಾಹಿನಿ ಮೈಸೂರು**

ನಾಡಹಬ್ಬ ದಸರಾ ಸಂಭ್ರಮಕ್ಕೆ ಇನ್ನು ಕೆಲವೇ ದಿನಗಳು ಬಾಕಿ ಇದೆ. ಸೆಪ್ಟೆಂಬರ್ 22ರಂದು ಉದ್ಘಾಟನೆ ಮಾಡಲಾಗುತ್ತದೆ. ಉದ್ಘಾಟಕರಾಗಿ ಆಯ್ಕೆ ಮಾಡಲಾಗಿದೆ. ಇದಕ್ಕೆ ಬಿಜೆಪಿ ನಾಯಕರು ಹಿಂದೂ ಪರ ಸಂಘಟನೆಗಳ ವಿರೋಧವಿದ್ದರೂ ಸಹ, ಯಾವುದಕ್ಕೂ ಜಗ್ಗದ ಸರ್ಕಾರ. (ಸೆ.3)ರಂದು ಮೈಸೂರು ಜಿಲ್ಲಾಡಳಿತದಿಂದ ಅಧಿಕೃತವಾಗಿ ಆಹ್ವಾನಿಸಿದೆ.

ಮೈಸೂರು ದಸರಾ ಮಹೋತ್ಸವದ ಉದ್ಘಾಟಕರಾಗಿ ಆಯ್ಕೆಯಾಗಿರುವ ಬರಹಗಾರ್ತಿ ಬಾನು ಮುಷ್ತಾಕ್ ಅವರನ್ನು ಜಿಲ್ಲಾಡಳಿತದಿಂದ ಅಧಿಕೃತವಾಗಿ ಆಮಂತ್ರಣ ನೀಡಲಾಯತು. ಹಾಸನದ ಅವರ ನಿವಾಸದಲ್ಲಿ ಅಧಿಕಾರಿಗಳು ಆಹ್ವಾನ ನೀಡಿದರು. ಮೈಸೂರು ಪೇಟ ತೊಡಿಸಿ, ಫಲಪುಷ್ಪ ನೀಡಿ ಸಾಂಪ್ರದಾಯಕ ಸ್ವಾಗತಿಸಿದರು.

ದಸರಾ ವಿಶೇಷಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ಜಿ. ಲಕ್ಷ್ಮೀಕಾಂತರೆಡ್ಡಿ, ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಯುಕೇಶ್





ಕುಮಾರ್, ಅಪರ ಜಿಲ್ಲಾಧಿಕಾರಿ ಡಾ. ಪಿ.ಶಿವರಾಜು, ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಎಂ.ಜೆ. ರೂಪಾ ಮತ್ತು ಸ್ವಾಗತ ಸಮಿತಿಯವರು ಪಾಲ್ಗೊಂಡಿದ್ದರು. ಬಾನು ಮುಷ್ತಾಕ್ ಆಯ್ಕೆ ತೀವ್ರ ವಿವಾದ ಪ್ರತಿಭಟನೆಗಳು ನಡೆದಿದ್ದವು ಆದರೆ, ಇದ್ಯಾವುದಕ್ಕೂ ಹಿಂದೆ ಸರಿಯದ ಸಿದ್ದರಾಮಯ್ಯ ಸರ್ಕಾರ ತಮ್ಮ ನಿರ್ಧಾರದಿಂದ ಹಿಂದೆ ಸರಿಯದೆ ಅಧಿಕೃತ ಆಹ್ವಾನಕ್ಕೆ ಸಿದ್ಧತೆ ನಡೆಸಿಕೊಂಡಿದೆ.

**ಕುಂಕುಮ ಹಚ್ಚಿ ಉದ್ಘಾಟಿಸಿ ಅನ್ನೋದು ಸರಿಯಲ್ಲ**

**ಭುವನೇಶ್ವರಿ ಬಗ್ಗೆ ಬಾನು ಮುಷ್ತಾಕ್ ಹೇಳಿಕೆ ವಿಚಾರವಾಗಿ ಬಿಜೆಪಿಯಿಂದ ಟೀಕೆಗಳು ವ್ಯಕ್ತವಾಗುತ್ತಿರುವ ಬಗ್ಗೆ ಸಿದ್ದರಾಮಯ್ಯ ಮಾತನಾಡಿ, ಕುಂಕುಮದ ಬಗ್ಗೆ ಬಾನು ಮುಷ್ತಾಕ್ ಏನು ಮಾತನಾಡಿದ್ದಾರೋ ಅದು ನನಗೆ ಗೊತ್ತಿಲ್ಲ. ಅವರು ಕನ್ನಡದ ಬರಹಗಾರ್ತಿ. ಕನ್ನಡದ ಪ್ರೀತಿ ಅಭಿಮಾನ ಇಲ್ಲದಿದ್ದರೆ ಪುಸ್ತಕಗಳನ್ನ ಬರೆಯುತ್ತಿರಲಿಲ್ಲ. ಕುಂಕುಮ ಹಾಕುವುದು ಅವರ ಧರ್ಮದಲ್ಲಿ ಇದ್ಯಾ?ಮತ್ತೊಂದು ಧರ್ಮದವರನ್ನ ಉದ್ಘಾಟನೆ ಕರೆದು ಕುಂಕುಮ ಹಾಕಿಕೊಳ್ಳಿ ಎಂದು ಹೇಳಲು ಸಾಧ್ಯನಾ? ಎಂದು ಮೈಸೂರಿನಲ್ಲಿ ಸಿಎಂ ಸಿದ್ದರಾಮಯ್ಯ ಕಿಡಿಕಾರಿದ್ದರು.**

**ಜಿಲ್ಲಾಡಳಿತದ ಪ್ರಕಟಣೆಯಲ್ಲಿ ಏನಿದೆ?**

2025 ನೇ ಸಾಲಿನ ವಿಶ್ವ ವಿಖ್ಯಾತ ನಾಡಹಬ್ಬ ಮೈಸೂರು ದಸರಾ ಮಹೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲು ಸರ್ಕಾರವು ತೀರ್ಮಾನಿಸಿದೆ.

ಈ ಹಿನ್ನೆಲೆ ನಾಡಹಬ್ಬ ದಸರಾ ಮಹೋತ್ಸವದ ಉದ್ಘಾಟನೆಯನ್ನು ಕರ್ನಾಟಕದ ಪ್ರತಿಷ್ಠಿತ ಸಾಹಿತಿಗಳು ಹಾಗೂ ಪ್ರತಿಷ್ಠಿತ ಅಂತರ ರಾಷ್ಟ್ರೀಯ ಬುಕರ್ ಪ್ರಶಸ್ತಿ ವಿಜೇತರಾದ ಶ್ರೀಮತಿ ಭಾನು ಮುಷ್ಟಾಕ್‌ರವರಿಂದ ನೆರವೇರಿಸಲು ಸರ್ಕಾರ ನಿರ್ಧರಿಸಿರುವ ಹಿನ್ನೆಲೆ ಭಾನು ಮುಷ್ತಾಕ್ ರವರನ್ನು ಸರ್ಕಾರ ಪರವಾಗಿ, ಮೈಸೂರು ಜಿಲ್ಲಾಡಳಿತದ ವತಿಯಿಂದ ಅಧಿಕೃತವಾಗಿ ಹಾಸನ ನಗರದಲ್ಲಿರುವ ಗೌರವಾನಿತರ ಸ್ವಗೃಹಕ್ಕೆ ತೆರಳಿ ಆಹ್ವಾನಿಸಲಾಗುವುದು ಎಂದು ಬರೆದುಕೊಂಡಿದೆ. ಆ ಮೂಲಕ ಸರ್ಕಾರ ಯಾವುದೇ ವಿರೋಧಕ್ಕೂ ಮಣೆದಿಲ್ಲ ಎಂಬುದು ತಿಳಿದುಬಂದಿದೆ.

ಉದಯವಾಹಿನಿ

**ಪ್ರಾದೇಶಿಕ**

ಗುರುವಾರ
04 ಸೆಪ್ಟೆಂಬರ್ 2025



## ಮಿನಿ ನ್ಯೂಸ್

### ನಾಗಪುರದ ದೀಕ್ಷಾಭೂಮಿ ಯಾತ್ರೆಗೆ ಅರ್ಜಿ ಆಹ್ವಾನ

• **ಉದಯವಾಹಿನಿ ರಾಮನಗರ**

2025-26ನೇ ಸಾಲಿನಲ್ಲಿ ಮಹಾರಾಷ್ಟ್ರದ ನಾಗಪುರದ ದೀಕ್ಷಾ ಭೂಮಿಯಲ್ಲಿ ಅ. 1ರಂದು (ವಿಜಯದಶಮಿ ದಿನದಂದು) ನಡೆಯುವ ದಮ್ಮ ಪ್ರವರ್ತನ ದಿನ ಕಾರ್ಯಕ್ರಮಕ್ಕೆ ಕರ್ನಾಟಕದಿಂದ ಸೆ.30ರಿಂದ ಅ. 4ರವರೆಗೆ ಡಾ. ಬಿ.ಆರ್. ಅಂಬೇಡ್ಕರ್ ಅನುಯಾಯಿಗಳನ್ನು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಾಗಪುರದ ದೀಕ್ಷಾಭೂಮಿ ಯಾತ್ರೆ ಕೈಗೊಳ್ಳಲು ಸಾರಿಗೆ, ರೈಲಿನ ವ್ಯವಸ್ಥೆ ಮೂಲಕ ಕಳುಹಿಸಿ ಕೊಡುವ ಸಲುವಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅನುಯಾಯಿಗಳು ಸಮಾಜ ಕಲ್ಯಾಣ ಇಲಾಖೆಯ ವೆಬ್ ಸೈಟ್‌ನಲ್ಲಿ ದೀಕ್ಷಾ ಭೂಮಿ ಯಾತ್ರಾ https://swd.karnataka.gov.in ಮೂಲಕ ಅವಶ್ಯಕ ದಾಖಲೆಗಳೊಂದಿಗೆ ಸೆ. 9ರೊಳಗೆ ಆನ್‌ಲೈನ್ ಮೂಲಕ ಕಡ್ಡಾಯವಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ದಕ್ಷಿಣ ಜಿಲ್ಲೆ, ಪಂಚಾಯತ್ ಭವನ, ರಾಮನಗರ ಹಾಗೂ ಸಂಬಂಧಪಟ್ಟ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ರಾಮನಗರ, ಚನ್ನಪಟ್ಟಣ, ಕನಕಪುರ, ಮಾಗಡಿ ತಾಲ್ಲೂಕು ಇವರನ್ನು ಸಂಪರ್ಕಿಸುವಂತೆ ಬೆಂಗಳೂರು ದಕ್ಷಿಣ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬಸ್ ನಿಲ್ದಾಣ ಬಳಿ ತೆರೆದ ಚರಂಡಿ

• **ಉದಯವಾಹಿನಿ ಕೊರಟಗೆರೆ**

ಪಟ್ಟಣದ ಹೃದಯ ಭಾಗದಲ್ಲಿರುವ ಸರ್ಕಾರಿ ಬಸ್ ನಿಲ್ದಾಣದ ಬಳಿ ಹಲವು ವರ್ಷಗಳಿಂದ ತೆರೆದ ಸ್ಥಿತಿಯಲ್ಲಿರುವ ದೊಡ್ಡ ಚರಂಡಿ ಅಪಾಯಕ್ಕೆ ಆಹ್ವಾನ ನೀಡುವಂತಿದೆ.ಬಸ್ ಒಳಗೆ ಪ್ರವೇಶಿಸುವ ಹಾಗೂ ಹೊರಗೆ ಬರುವ ಮುಖ್ಯ ದಾರಿಯಲ್ಲಿಯೇ ಬಾಯ್ದೆರೆದುಕೊಂಡಿರುವ ಈ ಚರಂಡಿ ನಿತ್ಯದ ಸಂಚಾರಕ್ಕೆ ಅಡ್ಡಿಯಾಗಿದೆ. ಪ್ರತಿದಿನ ನೂರಾರು ವಾಹನ, ವಿದ್ಯಾರ್ಥಿಗಳು, ಪಾದಚಾರಿಗಳು ಈ ದಾರಿಯಲ್ಲೇ ಸಂಚರಿಸುತ್ತಾರೆ. ರೇಣುಕಾ ಆಸ್ಪತ್ರೆ, ರವೀಂದ್ರ ಭಾರತಿ ಶಾಲೆ, ಕಾಳಿದಾಸ ಪ್ರೌಢಶಾಲೆ ಮೊದಲಾದ ಶಿಕ್ಷಣ ಹಾಗೂ ಆರೋಗ್ಯ ಸಂಸ್ಥೆಗಳ ವಿದ್ಯಾರ್ಥಿಗಳು ಮತ್ತು ರೋಗಿಗಳು ಈ ಮಾರ್ಗವನ್ನು ದಿನಂಪ್ರತಿ ಬಳಸುತ್ತಾರೆ. ಅದೇ ಸ್ಥಳದ ರಸ್ತೆಯಲ್ಲಿ ಇತ್ತೀಚೆಗೆ ದೊಡ್ಡ ಗುಂಡಿ ಬಿದ್ದಿದ್ದು, ಅಪಘಾತಕ್ಕೆ ಇನ್ನಷ್ಟು ಕಾರಣವಾಗಿದೆ. ಹಗಲಿನಲ್ಲಿ ಹೇಗಾದರೂ ಈ ಚರಂಡಿಯನ್ನು ತಪ್ಪಿಸಿಕೊಂಡು ಹೋಗಬಹುದಾದರೂ, ರಾತ್ರಿ ವಾಹನ ಸವಾರರಿಗೆ ಇದು ಸ್ಪಷ್ಟವಾಗಿ ಕಾಣದೇ ಅಪಘಾತ ಸಂಭವಿಸುವ ಸಾಧ್ಯತೆ ಹೆಚ್ಚಾಗಿದೆ. ಈಗಾಗಲೇ ಅನೇಕರು ಈ ಜಾಗದಲ್ಲಿ ಬಿದ್ದು ಗಾಯಗೊಂಡಿದ್ದು, ಕೈಕಾಲು ಮುರಿದುಕೊಂಡಿರುವ ನಿದರ್ಶನಗಳಿವೆ. ಇದೇ ಜಾಗದಲ್ಲೇ ಖಾಸಗಿ ಬಸ್ ನಿಲ್ದಾಣವೂ ಇರುವುದರಿಂದ ಪ್ರಯಾಣಿಕರ ದಟ್ಟಣೆ ದಿನದಿಂದ ದಿನಕ್ಕೆ ಹೆಚ್ಚುತ್ತಲೇ ಇದೆ. ಚರಂಡಿ ದುರಸ್ತಿಗೊಳಿಸಿ ಸುರಕ್ಷಿತ ಸಂಚಾರಕ್ಕೆ ಅನುವು ಮಾಡಿಕೊಡಬೇಕು ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ. ಹಲವು ಬಾರಿ ಸಂಬಂಧಪಟ್ಟವರಿಗೆ ತಿಳಿಸಿದ್ದರೂ ಶಾಶ್ವತ ಪರಿಹಾರ ಸಿಕ್ಕಿಲ್ಲ ಎನ್ನುತ್ತಾರೆ ಸ್ಥಳೀಯರು.

### ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ

• **ಉದಯವಾಹಿನಿ ಚಿಕ್ಕನಾಯಕನಹಳ್ಳಿ**

ನಾಲ್ಕು ದಿನದ ಹಿಂದೆ ತಾಲ್ಲೂಕಿನ ಹಂದನಕೆರೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಬಾಲಕಿಯೊಬ್ಬಳನ್ನು ಅಪಹರಿಸಿ ಲೈಂಗಿಕ ದೌರ್ಜನ್ಯ ಎಸಲಾಗಿದೆ. ಆಗಸ್ಟ್ 30ರಂದು ಬೆಳಗ್ಗೆ ಕಾಲೇಜಿಗೆ ಹೋದ ಬಾಲಕಿ



ಸಂಜೆಯಾದರೂ ಮನೆಗೆ ಮರಳದ ಕಾರಣ ಪೋಷಕರು ಎಲ್ಲಾ ಕಡೆ ಹುಡುಕಾಟ ನಡೆಸಿದ್ದಾರೆ. ಆಗಸ್ಟ್ 31ರಂದು ಮಧ್ಯಾಹ್ನ ಹಂದನಕೆರೆ ಠಾಣೆಗೆ ದೂರು ನೀಡಲು ಹೋಗಿದ್ದಾರೆ. ಈ ವೇಳೆ ಬಾಲಕಿ ಮನೆಗೆ ಮರಳಿದ್ದಾಳೆ. ಗ್ರಾಮದ ಪರಿಚಿತ ಯುವಕನೊಬ್ಬ ತನ್ನ ಅಣ್ಣನ ಮನೆಗೆ ಕರೆದುಕೊಂಡು ಹೋಗಿ ತಮ್ಮ ಮಗಳ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾನೆ ಎಂದು ಪೋಷಕರು ದೂರಿನಲ್ಲಿ ತಿಳಿಸಿದ್ದಾರೆ.

### ನಗರದ ತಹಶೀಲ್ದಾರ್ ಕಚೇರಿ ಎದುರು ಪ್ರತಿಭಟನೆ

• **ಉದಯವಾಹಿನಿ ಕೋಲಾರ**

ಜಿಲ್ಲೆಯ ಮಾಲೂರು ಕೈಗಾರಿಕಾ ಪ್ರದೇಶದಲ್ಲಿರುವ ವರ್ಗಾ ಅಟ್ಯಾಚ್‌ಮೆಂಟ್ ಕಂಪನಿಯು ಸುಳ್ಳು ದಾಖಲೆಗಳನ್ನು ಸೃಷ್ಟಿಸಿ, ನಷ್ಟ ಎಂದು ತೋರಿಸಿ ಅಕ್ರಮವಾಗಿ ಮುಚ್ಚಿದೆ. ಈ ಕೈಗಾರಿಕೆಯನ್ನು ಮತ್ತೆ ಆರಂಭಿಸಬೇಕು' ಎಂದು ಒತ್ತಾಯಿಸಿ ಸಿಪಿಎಂನಿಂದ ನಗರದ ತಹಶೀಲ್ದಾರ್ ಕಚೇರಿ ಎದುರು ಪ್ರತಿಭಟನೆ ನಡೆಸಲಾಯಿತು. ಸಿಪಿಎಂ ತಾಲ್ಲೂಕು ಕಾರ್ಯದರ್ಶಿ ಟಿ.ಎಂ.ವೆಂಕಟೇಶ್ ಮಾತನಾಡಿ, 'ಸುಮಾರು 2006 ರಲ್ಲಿ ಒಂದು ಸಣ್ಣ ಶೆಡ್‌ನಲ್ಲಿ ಆರಂಭವಾದ ವರ್ಗಾ ಕಂಪನಿಯು 2019 ರಲ್ಲಿ ಜಿಲ್ಲೆಯಲ್ಲಿಯೇ ಅತಿ ಹೆಚ್ಚು ವಿದೇಶಕ್ಕೆ ರಫ್ತು ಮಾಡಿದ ಲಾಭದಾಯಕ ಕಂಪನಿ ಎಂಬ ಹೆಗ್ಗಳಿಕೆ ಪಡೆದಿದೆ' ಎಂದರು. ಈ ಕೈಗಾರಿಕೆಯು ಬುಲ್ಡೋಜರ್ ಬಕೆಟ್ಸ್‌ಗೆ ಬೇಕಾಗುವ ಎಕ್ಸ್ ಕವೇಟರ್ ಬಕೆಟ್ಸ್, ರಿಫ್ ಕಪ್ಲರ್ಸ್ 200 ರಿಂದ 1800 ವಿವಿಧ ಸಾಮಗ್ರಿಗಳನ್ನು ತಯಾರಿ ಮಾಡಿ. ಸುಮಾರು 58 ದೇಶಗಳಿಗೆ ರಫ್ತು ಮಾಡುತ್ತಿದೆ. ಲಾಭದಾಯಕವಾಗಿ ನಡೆಯುತ್ತಿರುವ ಕೈಗಾರಿಕೆಯಾಗಿದೆ. ಈ ಕೈಗಾರಿಕೆಯಿಂದ ಬಂದ ಲಾಭದಿಂದ 2018-19 ರಲ್ಲಿ ವರ್ಗಾ 2, ವರ್ಗಾ 3 ನೇ ಘಟಕಗಳನ್ನು ಮಾಲೂರು ಕೈಗಾರಿಕಾ ಪ್ರದೇಶದ 2ನೇ ಹಂತದಲ್ಲಿ ಆರಂಭಿಸಲಾಗಿದೆ. 2023 ರಲ್ಲಿ ವರ್ಗಾ 2 ಮತ್ತು ವರ್ಗಾ 3 ಘಟಕದ ಹೆಸರನ್ನು ವೀರ್ಯ 1 ಮತ್ತು ವೀರ್ಯ 2 ಎಂದು ಬದಲಾವಣೆ ಮಾಡಲಾಗಿದೆ. ವರ್ಗಾ 1 ಘಟಕದಲ್ಲಿ 2019 ರಲ್ಲಿ ದುಡಿಯುತ್ತಿದ್ದ 182 ಕಾರ್ಮಿಕರಿಗೆ ಹಲವು ಆಸೆ ಆಮೀಷ ನೀಡಿ ಹಂತ ಹಂತವಾಗಿ ಕಡಿಮೆ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿದರು.

ವರ್ಗಾ ಕಂಪನಿಯಲ್ಲಿ ಪ್ರಸ್ತುತ ದುಡಿಯುತ್ತಿರುವ 81 ಕಾಯಂ ಕಾರ್ಮಿಕರನ್ನು ಮನೆಗೆ ಕಳುಹಿಸಿ ಗುತ್ತಿಗೆ ಕಾರ್ಮಿಕರಿಗೆ ಕಡಿಮೆ ವೇತನವನ್ನು ನೀಡಿ ಕೆಲಸ ಮಾಡಿಸಿಕೊಳ್ಳುವ ದುರುದ್ದೇಶದಿಂದ ಲಾಭದಾಯಕವಾಗಿರುವ ಕೈಗಾರಿಕೆಯನ್ನು ನಷ್ಟ ಎಂದು ತೋರಿಸಲಾಗುತ್ತಿದೆ ಎಂದು ದೂರಿದರು.

## ದಿನನಿತ್ಯ ರೋಗಿಗಳು ಚೀಟಿ ಪಡೆಯಲು ನೂಕುನುಗ್ಗಲು

• **ಉದಯವಾಹಿನಿ ಬಾಗೇಪಲ್ಲಿ**

ತಾಲ್ಲೂಕು ಕೇಂದ್ರದ ಸರ್ಕಾರಿ ಆಸ್ಪತ್ರೆಗೆ ಚಿಕಿತ್ಸೆಗೆ ಬರುವ ಒಳ, ಹೊರ ರೋಗಿಗಳಿಗೆ ಆನ್‌ಲೈನ್ ಚೀಟಿ ವಿತರಿಸುವ ಇಬ್ಬರು ಸಿಬ್ಬಂದಿ ಇದ್ದಾರೆ. ಇದರಿಂದ ಕೌಂಟರ್ ಮುಂದೆ ರೋಗಿಗಳು ಪ್ರತಿದಿನ ಕಾಯುವ ಸ್ಥಿತಿ ಉಂಟಾಗುತ್ತಿದೆ.

ಕಸಬಾ, ಮಿಟ್ಟೇಮರಿ, ಗೂಳೂರು, ಪಾತಪಾಳ್ಯ ಹೋಬಳಿಗಳ ಗ್ರಾಮಗಳಿಂದ ನೂರಾರು ಜನರು ಚಿಕಿತ್ಸೆಗೆ ಬರುತ್ತಾರೆ. ಆರೋಗ್ಯ ರಕ್ಷಾ ಸಮಿತಿ ನೇತೃತ್ವದಲ್ಲಿ ಹೊರಗುತ್ತಿಗೆ ನೌಕರರನ್ನು ನೇಮಕ ಮಾಡಲಾಗಿದೆ. 400 ರಿಂದ 500 ರೋಗಿಗಳಿಗೆ ಸರ್ಕಾರ ಕನಿಷ್ಠ 4 ನೌಕರರನ್ನು ನೇಮಕ ಮಾಡಬೇಕು. 4 ಮಂದಿಯಲ್ಲಿ ಇಬ್ಬರನ್ನು ವಿವಿಧ ಆರೋಗ್ಯ ಸೇವೆಗೆ ನಿಯೋಜನೆ ಮಾಡಲಾಗಿದೆ. ಇಬ್ಬರು ಆನ್‌ಲೈನ್ ಚೀಟಿ ನೀಡಲು ಇರುವುದರಿಂದ ರೋಗಿಗಳು ಚೀಟಿ ಪಡೆಯಲು ತೊಂದರೆ ಆಗಿದೆ.

ಜನರು ಬೆಳಗ್ಗೆ 9 ಗಂಟೆಗೆ ಆಗಮಿಸಿ ಕೌಂಟರ್ ಮುಂದೆ ಕಾಯುತ್ತಾರೆ. ದಿನನಿತ್ಯ ಚೀಟಿ ಪಡೆಯಲು ನೂಕುನುಗ್ಗಲು ಉಂಟಾಗುತ್ತಿದೆ.

ತುರ್ತು ಚಿಕಿತ್ಸೆ, ಪರೀಕ್ಷೆ ಪಡೆಯಲು ಬರುವ ಗರ್ಭಿಣಿ, ಬಾಣಂತಿಯರು, ಮಕ್ಕಳು, ಹಿರಿಯನಾಗರಿಕರು ಸರತಿಸಾಲಿನಲ್ಲಿ ನಿಲ್ಲಲು ತೊಂದರೆ ಪಡುತ್ತಿದ್ದಾರೆ. ಮತ್ತೊಂದೆಡೆ ಚುಚ್ಚುಮದ್ದು,



ಎಕ್ಸರೇ. ಆಯುಷ್ಮಾನ್ ಭಾರತ್ ಚೀಟಿ ವಿತರಣೆ, ನೊಂದಣಿ, ಶುಶೂಷಕ, ಶುಶೂಷಕಿಯರು, ಕಚೇರಿ ಸಿಬ್ಬಂದಿ, ಚಾಲಕರು ಸೇರಿದಂತೆ ಆರೋಗ್ಯ ಸೇವೆ ಮಾಡಿಸಲು ಸರ್ಕಾರ ಗುತ್ತಿಗೆ, ಹೊರಗುತ್ತಿಗೆ, ದಿನಗೂಲಿ ನೌಕರರಾಗಿ ಕೆಲಸ ಮಾಡಿಸುತ್ತಿದೆ. ಆದರೆ ಸಮಾನ ಕೆಲಸಕ್ಕೆ ಸಮಾನ ವೇತನ ಇಲ್ಲ. ವೇತನ, ಸೇವಾ ಭದ್ರತೆ, ಪಿಎಫ್, ರಜೆ, ಪಿಂಚಣಿ ಇಲ್ಲ. ನೂರಾರು ರೋಗಿಗಳು ಚೀಟಿ ಪಡೆಯುವ ಕೌಂಟರ್‌ನಲ್ಲಿ ಇಬ್ಬರು ಮಾತ್ರ ಚೀಟಿ ವಿತರಿಸಿದರೆ ಹೇಗೆ? ಎಂದು ಪಟ್ಟಣದ ನಿವಾಸಿ ದಸ್ತಗೀರ್ ಪ್ರಶ್ನಿಸಿದರು. ಗುತ್ತಿಗೆ, ಹೊರಗುತ್ತಿಗೆ, ದಿನಕೂಲಿ ಪದ್ಧತಿ ಬೇಡ. ಸಮಾನ ಕೆಲಸಕ್ಕೆ ಸಮಾನ ವೇತನ ನೀಡಬೇಕು. ಇಲಾಖಾವಾರು ಸಿ ಮತ್ತು ಡಿ ನೌಕರರ ಹುದ್ದೆಗಳನ್ನು ಭರ್ತಿ ಮಾಡಬೇಕು ಎಂದು ಬೀದಿಗಿಳಿದು ಸಿಐಟಿಯು ನೇತೃತ್ವದಲ್ಲಿ ಹೋರಾಟ ಮಾಡಲಾಗುತ್ತಿದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರ ಕಣ್ಣಿದ್ದು ಕುರುಡರಂತೆ ವರ್ತಿಸಿದೆ ಎಂದು ಸಿಐಟಿಯು ತಾಲ್ಲೂಕು ಕಾರ್ಯದರ್ಶಿ ಜಿ.ಮುಸ್ತಾಫ ಆರೋಪಿಸಿದರು.

**ಆರೋಗ್ಯ ರಕ್ಷಾ ಸಮಿತಿಯಲ್ಲಿ 5 ಸಿಬ್ಬಂದಿ ಇದ್ದಾರೆ. ಆದರೆ ಇಬ್ಬರನ್ನು ಬೇರೆ ಕೆಲಸಗಳಿಗೆ ನಿಯೋಜನೆ ಮಾಡಲಾಗಿದೆ. ಹೆಚ್ಚುವರಿ ಸಿಬ್ಬಂದಿ ನೇಮಕ ಮಾಡಲು ಸರ್ಕಾರ ಅನುದಾನ ನೀಡುವುದಿಲ್ಲ. ಆಸ್ಪತ್ರೆಯ ಆಡಳಿತದ ಹಣದಲ್ಲಿ ವೇತನ ನೀಡಲು ಆಗಲ್ಲ. ಹೆಚ್ಚುವರಿ ಸಿಬ್ಬಂದಿ ನೇಮಕ ಮಾಡಿಕೊಳ್ಳಲು ಸರ್ಕಾರಕ್ಕೆ ಪತ್ರ ಬರೆಯಲಾಗುವುದು ಎಂದು ತಿಳಿಸಿದರು.**

**ಡಾ.ವಿನಯ್ ಸಾರ್ವಜನಿಕ ಆಸ್ಪತ್ರೆಯ ಆಡಳಿತಾಧಿಕಾರಿ**

ಸರ್ಕಾರ ಕೂಡಲೇ ಸಾರ್ವಜನಿಕ ಆಸ್ಪತ್ರೆಗೆ ಹೆಚ್ಚುವರಿ ಸಿಬ್ಬಂದಿಯನ್ನು ನೇಮಕ ಮಾಡಿಸಬೇಕು. ಖಾಲಿ ಇರುವ ವೈದ್ಯ, ಸಿಬ್ಬಂದಿ ನೇಮಕ ಮಾಡಬೇಕು. ಇಲ್ಲದಿದ್ದಲ್ಲಿ ಹೋರಾಟ ರೂಪಿಸಲಾಗುವುದು ಎಂದು ಸಿಐಟಿಯು ಮುಖಂಡ ಕೆ.ಮುನಿಯಪ್ಪ ತಿಳಿಸಿದರು.

## ಜಿಲ್ಲಾ ಮಟ್ಟದ ಕ್ರೀಡಾಕೂಟ ಉದ್ಘಾಟನೆ

• **ಉದಯವಾಹಿನಿ ಚಿಂತಾಮಣಿ**

ಕ್ರೀಡೆಯನ್ನು ಜೀವನ ಶೈಲಿಯಾಗಿ ರೂಢಿಸಿಕೊಳ್ಳಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ನವೀನ್ ಭಟ್ ಸಲಹೆ ನೀಡಿದರು.ಜಿಲ್ಲಾ ಪಂಚಾಯಿತಿ ಚಿಕ್ಕಬಳ್ಳಾಪುರ. ಪದವಿ ಪೂರ್ವ ಶಿಕ್ಷಣ ಇಲಾಖೆ ಹಾಗೂ ನಗರದ ವೆಂಕಟಾದ್ರಿ ಪಿ.ಯು ಕಾಲೇಜು ಮತ್ತು ವಿಜಯ ಪಿ.ಯು ಕಾಲೇಜಿನ ಆಶ್ರಯದಲ್ಲಿ ಮಂಗಳವಾರ ನಗರದ ಝಾನ್ಸಿ ಮೈದಾನದಲ್ಲಿ ಆಯೋಜಿಸಿದ್ದ ಪದವಿ ಪೂರ್ವ ಕಾಲೇಜುಗಳ ಜಿಲ್ಲಾಮಟ್ಟದ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದರು.

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಅಂಕಗಳ ಹಿಂದೆ ಬಿದ್ದು ಕ್ರೀಡೆ ಮತ್ತಿತರ ಪಠೇತರ ಚಟುವಟಿಕೆಗಳಿಗೆ ಸಮಯಾವಕಾಶ ನೀಡುತ್ತಿಲ್ಲ. ಕ್ರೀಡೆಗಳು ವಿದ್ಯಾಭ್ಯಾಸದ ಅವಿಭಾಜ್ಯ ಅಂಗ. ದೈಹಿಕ ಮತ್ತು ಮಾನಸಿಕ ದೃಢತೆಯ ಜತೆಗೆ ಮನಸ್ಸಿನ ಏಕಾಗ್ರತೆ ಮೂಡುತ್ತದೆ.

ಶರೀರ ಆರೋಗ್ಯಕರವಾಗಿದ್ದರೆ ಯಾವುದೇ ಕಾಯಿಲೆಗಳು ಹತ್ತಿರ ಸುಳಿಯುವುದಿಲ್ಲ ಎಂದರು. ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆದಿಶೇಷರಾವ್ ಮಾತನಾಡಿ, ಕ್ರೀಡೆಯಲ್ಲಿ ಸೋಲು ಗೆಲುವು ಸಾಮಾನ್ಯ. ಕ್ರೀಡಾ ಮನೋಭಾವನೆಯಿಂದ ಆಟವಾಡಿ ಪ್ರತಿಭಾವಂತ ಕ್ರೀಡಾಪಟುಗಳು ರಾಜ್ಯ ಮಟ್ಟದಲ್ಲಿ ಜಿಲ್ಲೆಗೆ ಕೀರ್ತಿ ತರಬೇಕು ಎಂದು ಹೇಳಿದರು.

ಪಿ.ಯು ಕಾಲೇಜು ಉಪನ್ಯಾಸಕರ ಸಂಘದ ಚಿಕ್ಕಬಳ್ಳಾಪುರ ಜಿಲ್ಲಾ ಘಟಕದ ಅಧ್ಯಕ್ಷ ಮುನಿರೆಡ್ಡಿ ಮಾತನಾಡಿದರು.

ತಹಶೀಲ್ದಾರ್ ಸುದರ್ಶನ್ ಯಾದವ್, ಇಒ ಆನಂದ್, ಪೌರಾಯುಕ್ತ ಚಲಪತಿ, ಸತ್ಯೇಂದ್ರ. ವಿಜಿಕುಮಾರ್, ವೆಂಕಟಶಿವರೆಡ್ಡಿ, ಶ್ರೀರಾಮ ರೆಡ್ಡಿ ಭಾಗವಹಿಸಿದ್ದರು.




**ರಾಜ್ಯ ಮತ್ತು ಕೇಂದ್ರ ಸರ್ಕಾರ ಖೇಲೋ ಇಂಡಿಯಾ ಮುಂತಾದ ಹಲವಾರು ಕ್ರೀಡಾ ಯೋಜನೆಗಳನ್ನು ರೂಪಿಸಿ ಕ್ರೀಡೆಗೆ ಹೆಚ್ಚಿನ ಪ್ರೋತ್ಸಾಹ ನೀಡುತ್ತಿವೆ. ವಿದ್ಯಾರ್ಥಿಗಳು ಅದರ ಸದುಪಯೋಗ ಪಡೆದುಕೊಂಡು ಉತ್ತಮ ಕ್ರೀಡಾಪಟುಗಳಾಗಿ ಎಂದು ಕಿವಿಮಾತು ಹೇಳಿದರು.**

## ಶಾಶ್ವತವಾದ ನೀರಾವರಿ ಯೋಜನೆ ಕಲ್ಪಿಸಬೇಕು ಎಂಬುದು ಜನರ ಆಗ್ರಹ

• **ಉದಯವಾಹಿನಿ ಬಾಗೇಪಲ್ಲಿ**

ತಾಲ್ಲೂಕಿನಿಂದ 20 ಕಿ.ಮೀ. ದೂರದಲ್ಲಿರುವ ಆಂಧ್ರಪ್ರದೇಶದ ದೇಮಕೇತಪಲ್ಲಿ ಗ್ರಾಮಕ್ಕೆ ಕೃಷ್ಣಾ ನದಿಯ ನೀರನ್ನು ಕಾಲುವೆ ಮೂಲಕ ಹರಿಸಲಾಗಿದೆ. ಕೃಷ್ಣಾ ನದಿಯ ಬಿ ಯೋಜನೆಯಡಿ ಇದೇ ನೀರನ್ನು ತಾಲ್ಲೂಕಿಗೆ ಹರಿಸಿದಲ್ಲಿ, ಇಲ್ಲಿನ ಅಂತರ್ಜಲ ಮಟ್ಟ ಹೆಚ್ಚಲಿದೆ. ಜನರು, ಜಾನುವಾರುಗಳ ಬಾಯಾರಿಕೆಯ ದಾಹ ನೀಗಲಿದೆ. ಅಲ್ಲದೆ, ಕೃಷಿ ಕ್ಷೇತ್ರಕ್ಕೂ ಸಾಕಷ್ಟು ಸಹಾಯವಾಗಲಿದೆ. ರಾಜ್ಯದ ಕಟ್ಟಕಡೆಯ ಹಾಗೂ ಬೆಂಗಳೂರಿನಿಂದ 100 ಕಿ.ಮೀ. ದೂರದಲ್ಲಿರುವ ಬಾಗೇಪಲ್ಲಿ ತಾಲ್ಲೂಕು ಅತಿ ಹಿಂದುಳಿದ ತಾಲ್ಲೂಕು ಆಗಿದ್ದು, ನೀರಿನ ಮೂಲಗಳೇ ಇಲ್ಲವಾಗಿದೆ. ಇದರಿಂದಾಗಿ ಈ ಭಾಗದ ಜನರು ಮಳೆ ಹಾಗೂ ಕೊಳವೆ ಬಾವಿಗಳನ್ನೇ ನಂಬಿಕೊಂಡು ಕೃಷಿ ಚಟುವಟಿಕೆಯಲ್ಲಿ ತೊಡಗಿದ್ದಾರೆ. ಹೀಗಾಗಿ, ನದಿ ತಿರುವು ಅಥವಾ ಜಲಾಶಯ ನಿರ್ಮಾಣ ಮಾಡುವ ಮೂಲಕ ತಾಲ್ಲೂಕಿಗೆ



ಶಾಶ್ವತವಾದ ನೀರಾವರಿ ಯೋಜನೆ ಕಲ್ಪಿಸಬೇಕು ಎಂಬುದು ಈ ಭಾಗದ ಜನರ ಆಗ್ರಹ.

ಬಾಗೇಪಲ್ಲಿ, ಚೇಳೂರು, ಗುಡಿಬಂಡೆ ತಾಲ್ಲೂಕು ವ್ಯಾಪ್ತಿಯ ಗ್ರಾಮಗಳ ರೈತರು ಕೃಷಿ, ತರಕಾರಿ, ಹೂವು, ಹೈನುಗಾರಿಕೆಯನ್ನೇ ಅವಲಂಬಿಸಿದ್ದಾರೆ. ಉತ್ತಮ ಮಳೆಯಾದರೆ, ಜನರು ಮತ್ತು ಜಾನುವಾರುಗಳಿಗೆ ನೀರು ಸಿಗಲಿದೆ. ಕೆರೆ, ಕುಂಟೆ, ಕಾಲುವೆಗಳು, ಚಿತ್ರಾವತಿ ಮತ್ತು ವಂಡಮಾನ್ ಜಲಾಶಯಗಳು ಭರ್ತಿಯಾಗಲಿವೆ. ಆದರೆ, ಮಳೆಯ ಅನಿಶ್ಚಿತತೆಯಿಂದ ರೈತರು ಸಂಕಷ್ಟಕ್ಕೆ ಸಿಲುಕುತ್ತಾರೆ.

ಕೃಷ್ಣಾ ನದಿಯಿಂದ 420 ಕಿ. ಮೀ ದೂರದಲ್ಲಿರುವ ಸತ್ಯಸಾಯಿ ಜಿಲ್ಲೆಯ ದೇಮಕೇತಪಲ್ಲಿ ಗ್ರಾಮದವರೆಗೆ ಕಾಲುವೆ ಮೂಲಕ ನೀರು ಹರಿಸಲಾಗಿದೆ. ಅದೇ ರೀತಿ ಕೃಷ್ಣಾ ನದಿ ನೀರನ್ನು ಬಯಲುಸೀಮೆ ತಾಲ್ಲೂಕು ಬಾಗೇಪಲ್ಲಿಗೂ ಹರಿಸಿದರೆ, ರೈತರ ಸಂಕಷ್ಟಗಳು ದೂರವಾಗಲಿವೆ. ಆದರೆ, ರಾಜ್ಯ ಸರ್ಕಾರ ಮಾತ್ರ ಈ ಯೋಜನೆ ಕೈಗೆತ್ತಿಕೊಳ್ಳಲು ಮೀನಾಮೇಷ ಎಣಿಸುತ್ತಿದೆ. ಕೃಷ್ಣಾ ನದಿ ನೀರಿನಲ್ಲಿ ರಾಜ್ಯದ ಪಾಲು ಇದ್ದರೂ, ಅದರ ಸದ್ಬಳಕೆಗೆ ಸರ್ಕಾರ ಆಸಕ್ತಿ ತೋರುತ್ತಿಲ್ಲ. ಆಂಧ್ರಪ್ರದೇಶದ ಸರ್ಕಾರದ ಜೊತೆ ಕೃಷ್ಣಾ ನದಿಯ 'ಬಿ' ಯೋಜನೆ ಪಾಲು ಬಗ್ಗೆ ರಾಜ್ಯ ಸರ್ಕಾರ ಈವರೆಗೆ ಚರ್ಚೆ ಮಾಡಿಲ್ಲ ಎಂದು ರೈತರು ಅಸಮಾಧಾನ ವ್ಯಕ್ತಪಡಿಸುತ್ತಾರೆ. ಚಿಕ್ಕಬಳ್ಳಾಪುರ, ಕೋಲಾರ ಸೇರಿದಂತೆ ಬಯಲುಸೀಮೆ ಪ್ರದೇಶವು ಕೃಷ್ಣಾ, ಪೆನ್ನಾರ್ ಕಣಿವೆ ವ್ಯಾಪ್ತಿಗೆ ಒಳಪಟ್ಟಿದೆ. ನದಿ, ನಾಲೆ ಇಲ್ಲದ ತಾಲ್ಲೂಕಿಗೆ ಕೃಷ್ಣಾ ನದಿ ನೀರು ಹರಿಸಬೇಕು. ಇದರಿಂದ ರೈತರು ಸಮೃದ್ಧವಾದ ಬೆಳೆ ಬೆಳೆಯಬಹುದು. ಜನ, ಜಾನುವಾರುಗಳಿಗೆ ಫ್ಲೋರೈಡ್ ರಹಿತ ಶುದ್ಧ ಕುಡಿಯುವ ನೀರು ಸಿಗಲಿದೆ ಎಂದು ಜಿಲಕರಪಲ್ಲಿ ಗ್ರಾಮದ ರೈತ ಶಿವಪ್ಪ ಒತ್ತಾಯಿಸಿದರು.

## ಟ್ರಾಫಿಕ್ ಸಿಗ್ನಲ್ ದೋಷ: ಸವಾರರಿಗೆ ಕಿರಿಕಿರಿ

• **ಉದಯವಾಹಿನಿ ತಿಪಟೂರು**

ನಗರದ ಅಂಬೇಡ್ಕರ್ ವೃತ್ತದ ಬಳಿ ಅಳವಡಿಸಲಾಗಿರುವ ಸಂಚಾರ ದೀಪಗಳು ಕಳೆದ ಕೆಲ ದಿನಗಳಿಂದ ಸರಿಯಾಗಿ ಕಾರ್ಯನಿರ್ವಹಿಸದೆ ಪ್ರತಿದಿನ ವಾಹನ ಸವಾರರು, ಸಾರ್ವಜನಿಕರು ಮತ್ತು ಪಾದಚಾರಿಗಳಿಗೆ ಗೊಂದಲ ಸೃಷ್ಟಿಸುವ ಜತೆಗೆ ಅವ್ಯವಸ್ಥೆ ಮತ್ತು ಅಪಘಾತದ ಭೀತಿಗೆ ಕಾರಣವಾಗಿದೆ. ನಗರದ ಮಾರನಗೆರೆಯಿಂದ ಹಾಲ್ಕುರಿಕೆ ರಸ್ತೆ, ನಗರದಿಂದ ಒಳಗೆ ಹಾಗೂ ಹೊರಗೆ ಹೋಗುವ ಪ್ರಮುಖ ರಸ್ತೆಗಳ ವೃತ್ತಗಳಲ್ಲಿ ಸಂಚಾರ ದೀಪದ ವ್ಯವಸ್ಥೆಯೇ ಇಲ್ಲವಾಗಿದೆ. ಕೆಲವೊಮ್ಮೆ ಕೆಂಪು ದೀಪ ಬಹಳ ಹೊತ್ತು ಹೊಳೆಯುತ್ತಿದ್ದುವಾಹನಗಳು ಅನಗತ್ಯವಾಗಿ ನಿಂತುಕೊಳ್ಳಬೇಕಾದ ಪರಿಸ್ಥಿತಿ ಇದೆ. ಮತ್ತೊಮ್ಮೆ ಯಾವುದೇ ಸೂಚನೆ ನೀಡದೆ ಹಸಿರು ದೀಪ ಹೊಳೆಯುವುದರಿಂದ ಅಡ್ಡ ರಸ್ತೆಯಿಂದ ಬರುತ್ತಿರುವ ವಾಹನ ಸವಾರರಲ್ಲಿ ಗೊಂದಲ ಸೃಷ್ಟಿಯಾಗುತ್ತಿದೆ.

ಇದರಿಂದಾಗಿ ಅಪಘಾತ ಸಂಭವಿಸುತ್ತಿದ್ದು ಸವಾರರು ಒಬ್ಬರನ್ನು ಒಬ್ಬರು ನಿಂದಿಸಿಕೊಂಡು ಸಂಚಾರ ಮಾಡಬೇಕಾಗಿದೆ. ಯಾವುದೇ ವೃತ್ತದಲ್ಲಿ ವಾಹನ ಸಂಚಾರ ನಿಯಂತ್ರಣ ಮಾಡಲು ಹಾಗೂ



ಸರಿಯಾದ ಸಂಚಾರ ದೀಪಗಳ ವ್ಯವಸ್ಥೆ ಸರಿಪಡಿಸಲು ಯಾವ ಪೊಲೀಸ್ ಸಿಬ್ಬಂದಿ ನಿಯೋಜನೆ ಮಾಡದೆ ಇರುವುದರಿಂದ ಸಾರ್ವಜನಿಕರಲ್ಲಿ ಆತಂಕ ಹೆಚ್ಚಾಗಿದೆ.

ಸಾರ್ವಜನಿಕರು ಹಲವು ಬಾರಿ ನಗರಸಭೆಗೆ ದೂರು ಸಲ್ಲಿಸಿದರೂ ನಗರಸಭೆ ಅಧಿಕಾರಿಗಳು 'ಈ ಕಾರ್ಯ ಪೊಲೀಸ್ ಇಲಾಖೆ ಹೊಣೆ ಎಂದು ಹೇಳಿಕೊಂಡರೆ, ಪೊಲೀಸ್ ಇಲಾಖೆ ಇದು ನಗರಸಭೆ ತಾಂತ್ರಿಕ ವಿಭಾಗದ ಕೆಲಸ ಎಂದು ಹೊಣೆ ತಪ್ಪಿಸಿಕೊಂಡಿದ್ದಾರೆ. ಈ ರೀತಿಯಾಗಿ ಒಬ್ಬರ ಮೇಲೊಬ್ಬರು ಜವಾಬ್ದಾರಿ ಹಾಕಿಕೊಳ್ಳುವ ಆಟದಲ್ಲಿ ಸಮಸ್ಯೆ ಬಗೆಹರಿಯದೆ ಜನರಿಗೆ ತೊಂದರೆ ಮಾತ್ರ ಹೆಚ್ಚಾಗಿದೆ.

ಪ್ರತಿದಿನ ಬೆಳಗ್ಗೆ ಮತ್ತು ಸಂಜೆ ವೇಳೆ ಶಾಲಾ ಮಕ್ಕಳು, ಉದ್ಯೋಗಿಗಳು, ವೃದ್ಧರು ಸಂಚಾರ ದಟ್ಟಣೆಯಲ್ಲಿ ಸಿಲುಕಿಕೊಂಡು ಅವ್ಯವಸ್ಥೆ ಅನುಭವಿಸುತ್ತಿರುವುದು ಕಂಡು ಬರುತ್ತಿದೆ. ಸಂಚಾರ ದೀಪ ಅಳವಡಿಸಿದಾಗ ಸಂಚಾರಕ್ಕೆ ಸ್ವಲ್ಪ ನಿಯಂತ್ರಣ ಸಿಗುತ್ತದೆ ಎಂದು ಭಾವಿಸಿದ್ದೇವೆ. ಆದರೆ, ಈಗಿನ ಪರಿಸ್ಥಿತಿ ಹಳೆಯದಕ್ಕಿಂತಲೂ ಗೊಂದಲ ಹೆಚ್ಚಿಸುವಂತಾಗಿದೆ' ಎಂದು ಸ್ಥಳೀಯರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸಾಮಾನ್ಯ ಜನರ ಸುರಕ್ಷತೆ ಹಾಗೂ ಸಂಚಾರದ ಶಿಸ್ತು ಕಾಯ್ದುಕೊಳ್ಳಲು ಸಂಚಾರ ದೀಪ ತುರ್ತಾಗಿ ಸರಿಪಡಿಸಬೇಕೆಂದು ಸಾರ್ವಜನಿಕರು ಒತ್ತಾಯಿಸುತ್ತಿದ್ದಾರೆ.

ಇಲ್ಲವಾದರೆ ಯಾವುದೇ ಸಮಯದಲ್ಲಿ ಗಂಭೀರ ಅಪಘಾತ ಸಂಭವಿಸುವ ಸಾಧ್ಯತೆ ಇದೆ.

## ಸಮಗ್ರ ಕೃಷಿಯಲ್ಲಿ ತೆಂಗಿನ ಬೆಳೆ ಲಾಭ



• **ಉದಯವಾಹಿನಿ ನಂಜನಗೂಡು**

ಕಲ್ಪವೃಕ್ಷ ಎಂದು ಹೆಸರಾಗಿರುವ ತೆಂಗಿನ ಬೆಳೆಗೆ ಇರುವ ಮಹತ್ವ, ತೆಂಗಿನ ಶಕ್ತಿಯನ್ನು ವಿಶ್ವಕ್ಕೆ ಸಾರೋಣ ಎಂದು ನಿವೃತ್ತ ಕೃಷಿ ಅಧಿಕಾರಿ ಕೆ. ಆರ್. ರವೀಂದ್ರ ಹೇಳಿದರು. ತಾಲ್ಲೂಕಿನ ಸುತ್ತೂರು ಕೃಷಿ ವಿಜ್ಞಾನ ಕೇಂದ್ರದಲ್ಲಿ ನಡೆದ ವಿಶ್ವ ತೆಂಗು ದಿನಾಚರಣೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ತೆಂಗು ಬೆಳೆಯನ್ನು ಏಕ ಬೆಳೆ ಪದ್ಧತಿಯಲ್ಲಿ ಬೆಳೆಯುವ ಬದಲು ಬಹು ಬೆಳೆ ಮತ್ತು ಸಮಗ್ರ ಕೃಷಿಯಲ್ಲಿ ತೆಂಗನ್ನು ಅಳವಡಿಸಿಕೊಂಡಲ್ಲಿ ಹೆಚ್ಚು ಉಪಯುಕ್ತವಾಗುತ್ತದೆ. ತೆಂಗಿನ ಬೆಳೆಯಲ್ಲಿ ಬರುವ ಪ್ರಮುಖ ಕೀಟಗಳಾದ ಸುರುಳಿ ಬಿಳಿ ನೊಣ, ಕಪ್ಪು ತಲೆ ಹುಳುಗಳ ಜೈವಿಕ ನಿರ್ವಹಣೆಗಾಗಿ ರಾಷ್ಟ್ರೀಯ ಕೃಷಿ ಕೀಟ ಸಂಪನ್ಮೂಲ ಬ್ಯೂರೋ ಕಾರ್ಯ ನಿರ್ವಹಿಸುತ್ತಿದೆ. ಆಸಕ್ತ ರೈತರು ಪರಭಕ್ಷಕ ಮತ್ತು ಪರಾವಲಂಬಿ ಜೀವಿಗಳ ಉತ್ಪಾದನೆಯ ತರಬೇತಿಯನ್ನು ನೀಡಲಾಗುವುದು ಎಂದು ತಿಳಿಸಿದರು.

**ಇತ್ತೀಚಿನ ದಿನಗಳಲ್ಲಿ ತೆಂಗಿನ ಬೆಳೆಯನ್ನು ಬೆಳೆಯುವ ರೈತರ ಸಂಖ್ಯೆ ಹೆಚ್ಚಾಗುತ್ತಿದ್ದು, ಉತ್ತಮ ಗುಣಮಟ್ಟದ ಸಸಿಗಳನ್ನು ಆಯ್ಕೆಮಾಡುವಲ್ಲಿ ರೈತರು ವಿಫಲರಾಗುತ್ತಿದ್ದಾರೆ. ಸಸಿಗಳ ಲಭ್ಯತೆ ಇಲ್ಲದಿರುವ ಸಮಸ್ಯೆ ಇದೆ. ಈ ನಿಟ್ಟಿನಲ್ಲಿ ರೈತರು ಉತ್ತಮ ಸಸಿಗಳ ಆಯ್ಕೆ, ಬೆಳವಣಿಗೆ, ತೆಂಗಿನ ತೋಟದಲ್ಲಿ ಸಿಗುವ ಕೃಷಿ ತ್ಯಾಜ್ಯವನ್ನು ಉಪಯೋಗಿಸಿಕೊಂಡು ತೋಟವನ್ನು ಸಮಗ್ರವಾಗಿ ನಿರ್ವಹಿಸಬಹುದು ಎಂದು ತಿಳಿಸಿದರು.**

**ಹಿರಿಯ ಕೃಷಿ ವಿಜ್ಞಾನಿ ಗುಂಡಪ್ಪ**


## ಜೆಜೆಎಂ ಗುತ್ತಿಗೆದಾರರಿಗೆ ದಂಡ ವಿಧಿಸಿ: ಸಿ.ಎನ್.ಮಂಜುನಾಥ್

**ಕಾಮಗಾರಿ ಪ್ರಗತಿ ಕುರಿತು ತಾಲ್ಲೂಕು ವ್ಯಾಪ್ತಿಯಲ್ಲಿ ಸಭೆ ಕರೆಯಬೇಕು ಸಭೆಗೆ ಕಾಮಗಾರಿಗಳನ್ನು ನಿರ್ವಹಿಸುತ್ತಿರುವ ಗುತ್ತಿಗೆದಾರರನ್ನು ಆಹ್ವಾನಿಸಬೇಕು**

• **ಉದಯವಾಹಿನಿ ರಾಮನಗರ**

ಜಲಜೀವನ್ ಮಿಷನ್ ಯೋಜನೆಯಡಿ ಜಿಲ್ಲೆಗೆ ನಡೆಯುತ್ತಿರುವ 984 ಕಾಮಗಾರಿಗಳ ಪೈಕಿ, 252 ಯೋಜನೆಗಳು ಹರ್ ಘರ್ ಜಲ್ ಯೋಜನೆಗಳು ಎಂದು ಘೋಷಿಸಲಾಗಿದೆ. 475 ಕಾಮಗಾರಿಗಳು ಇನ್ನೂ ಪ್ರಕ್ರಿಯೆಯಲ್ಲಿವೆ. ಕಾಮಗಾರಿಗಳನ್ನು ವಿಳಂಬ ಮಾಡಿರುವ ಗುತ್ತಿಗೆದಾರರಿಗೆ ದಂಡ ವಿಧಿಸಿ' ಎಂದು ಸಂಸದ ಡಾ.ಸಿ.ಎನ್. ಮಂಜುನಾಥ್ ಅವರು ಗ್ರಾಮೀಣ ಕುಡಿಯುವ ನೀರು, ನೈರ್ಮಲ್ಯ ವಿಭಾಗದ ಕಾರ್ಯಪಾಲಕ ಎಂಜಿನಿಯರ್‌ಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳ ಜಿಲ್ಲಾಮಟ್ಟದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ (ದಿಶಾ) ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬಾಕಿ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಲುಗುತ್ತಿಗೆದಾರರಿಗೆ ಸೂಚಿಸಬೇಕು. ತಪ್ಪಿದ್ದಲ್ಲಿ ಅವರ ವಿರುದ್ಧ ದಂಡಾಸ್ತ್ರ ಪ್ರಯೋಗಿಸಬೇಕು' ಎಂದರು.

'ಕಾಮಗಾರಿ ಪ್ರಗತಿ ಕುರಿತು. ತಾಲ್ಲೂಕು ವ್ಯಾಪ್ತಿಯಲ್ಲಿ ಸಭೆ ಕರೆಯಬೇಕು. ಸಭೆಗೆ ಕಾಮಗಾರಿಗಳನ್ನು ನಿರ್ವಹಿಸುತ್ತಿರುವ ಗುತ್ತಿಗೆದಾರರನ್ನು ಆಹ್ವಾನಿಸಬೇಕು ಎಂದು ನಿರ್ದೇಶನ ನೀಡಿದರು.



**ಆರ್‌ಬಿಐ ಮಾರ್ಗಸೂಚಿಗಳು ಬದಲಾವಣೆ**

**'ಆರೋಗ್ಯ ಇಲಾಖೆಯಲ್ಲಿ ಸಾಕಷ್ಟು ವೈದ್ಯರ ಹುದ್ದೆಗಳು ಖಾಲಿ ಇವೆ. ಜಿಲ್ಲೆಯಲ್ಲಿ ಎನ್.ಎಚ್.ಎಂ ಯೋಜನೆಯಡಿ ಅನಸ್ತೇಶಿಯ, ಆರ್ಥೋಪೆಡಿಕ್ ಇತರೆ ವಿಭಾಗಗಳಲ್ಲಿ ವೈದ್ಯರನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ನೇಮಕ ಮಾಡಿಕೊಂಡು ಸಾರ್ವಜನಿಕರ ಸೇವೆಗೆ ನಿಯೋಜಿಸಬೇಕು' ಎಂದು ತಿಳಿಸಿದರು.**

ಅದಕ್ಕೆ ಪ್ರತಿಕ್ರಿಯಿಸಿದ ಇಂಜಿನಿಯರ್, ಕಾಮಗಾರಿ ವಿಳಂಬಕ್ಕಾಗಿ 208 ಗುತ್ತಿಗೆದಾರರಿಗೆ ದಂಡ ವಿಧಿಸಲಾಗಿದೆ' ಎಂದು ಹೇಳಿದರು.

ಜಿಲ್ಲಾಸ್ಪತ್ರೆಗೆ ಎಂಆರ್‌ಐ ಸ್ಕ್ಯಾನಿಂಗ್ ಯಂತ್ರವನ್ನು ರಾಜ್ಯ ಸರ್ಕಾರ ಪೂರೈಸಲಿದೆ. ಇಕೋ ಹಾಗೂ ಅಲ್ಟ್ರಾಸೌಂಡ್ ಯಂತ್ರಗಳನ್ನು ಜಿಲ್ಲಾಸ್ಪತ್ರೆಗೆ ಸ್ಥಳಾಂತರಿಸಬೇಕು. ಆಸ್ಪತ್ರೆಗೆ ಅಗತ್ಯವಿರುವ ಸ್ಟಾಫ್ ನರ್ಸ್ ಹುದ್ದೆಗಳನ್ನು ಎನ್.ಎಚ್.ಎಂ ಯೋಜನೆಯಡಿಗೆ ನೇಮಿಸಿಕೊಳ್ಳಬೇಕು ಎಂದು ಸೂಚನೆ ನೀಡಿದರು.

'ಆರ್‌ಬಿಐ ಮಾರ್ಗಸೂಚಿಗಳು ಬದಲಾವಣೆಯಾಗಿದ್ದು ಸಾಲ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸುವ ಫಲಾನುಭವಿಗಳ ಅರ್ಜಿಗಳನ್ನು ತಿರಸ್ಕರಿಸುವಂತಿಲ್ಲ. 10 ದಿನಗಳೊಳಗೆ ಸಾಲ ಪ್ರಕ್ರಿಯೆಗೆ ಕ್ರಮ ವಹಿಸಬೇಕು. ಮೈಕ್ರೋ ಫೈನಾನ್ಸ್ ಕಿರುಕುಳ ಕಂಡುಬಂದರೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಕ್ರಮ ಕೈಗೊಳ್ಳಬೇಕು' ಎಂದು ಸೂಚನೆ ನೀಡಿದರು.

### ಸ್ಥಳೀಯ ಉಗ್ರಾಣ ನಿರ್ಮಾಣಕ್ಕೆ ಸೂಚನೆ

**ಬೆಂಬಲ ಬೆಲೆಯಡಿ ಜಿಲ್ಲೆಯಲ್ಲಿ ರಾಗಿ ಖರೀದಿ ಮಾಡಿ ಅದನ್ನು ಅನೇಕಲ್‌ನಲ್ಲಿ ಶೇಖರಿಸಿಡಲಾಗಿದೆ. ಇದನ್ನು ತಪ್ಪಿಸಬೇಕಾದರೆ ಜಿಲ್ಲೆಯಲ್ಲಿಯೇ ಉಗ್ರಾಣ ಸ್ಥಾಪಿಸಲು ಸಂಬಂಧಿಸಿದ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು' ಎಂದು ಸಂಸದರು ಸೂಚಿಸಿದರು. ಅದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ ಉಗ್ರಾಣಕ್ಕೆ ಅಗತ್ಯವಿರುವ ಜಾಗವನ್ನು ಒದಗಿಸಿ ಕೊಡುವೆ. ಉಗ್ರಾಣ ನಿಗಮದ ಅಧಿಕಾರಿಗಳು ಅದಕ್ಕೆ ಸಂಬಂಧಿಸಿದ ಪ್ರಕ್ರಿಯೆಗಳನ್ನು ನಡೆಸಬೇಕು' ಎಂದು ತಿಳಿಸಿದರು.'ಬೆಳೆನಷ್ಟ ಅನುಭವಿಸುವ ರೈತರಿಗೆ ಆಸರೆಯಾಗಲು ಕೇಂದ್ರ ಸರ್ಕಾರ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆ ಜಾರಿಗೆ ತಂದಿದೆ. ರೈತರು ನೋಂದಣಿ ಮಾಡಿಸಿಕೊಂಡು ವಿಮೆಯ ಪ್ರಯೋಜನ ಪಡೆಯಬೇಕು. ವಿಮೆ ಬಗ್ಗೆ ಕೃಷಿ ಇಲಾಖೆಯು ವ್ಯಾಪಕವಾದ ಪ್ರಚಾರ ಹಾಗೂ ಜಾಗೃತಿ ಮೂಡಿಸಬೇಕು. ಈ ವರ್ಷದ ಮುಂಗಾರು ಹಂಗಾಮಿನಲ್ಲಿ ಸಾಕಷ್ಟು ರೈತರು ಈ ಯೋಜನೆಯ ಫಲಾನುಭವಿಗಳಾಗುವಂತೆ ಕ್ರಮ ವಹಿಸಬೇಕು. ಅಂತರ್ಜಲ ವೃದ್ಧಿಗೆ ಪೂರಕವಾಗಿ ರೈತರು ಕೃಷಿ ಹೊಂಡಗಳನ್ನು ನಿರ್ಮಿಸಿಕೊಳ್ಳಲು ಇಲಾಖೆಯು ರೈತರಿಗೆ ಪ್ರೋತ್ಸಾಹ ನೀಡಬೇಕು' ಎಂದು ಸಂಸದರು ಸಲಹೆ ನೀಡಿದರು.**

ಅಂತರಾಳದಿಂದ.. EDITORIAL

# ಜಿಎಸ್‌ಟಿ ಪದ್ಧತಿಯಲ್ಲಿ ಬದಲಾವಣೆ: ರಾಜ್ಯಗಳಿಗೆ ಅನ್ಯಾಯ ಆಗದಿರಲಿ




ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ಪದ್ಧತಿಯು 2017ರಲ್ಲಿ ಜಾರಿಗೊಂಡಾಗ, ದೇಶದಲ್ಲಿ ಏಕರೂಪದ ತೆರಿಗೆ ವ್ಯವಸ್ಥೆಯ ಭರವಸೆಯನ್ನು ಕೇಂದ್ರ ಸರ್ಕಾರ ನೀಡಿತ್ತು. ಆದರೆ, ಜಿಎಸ್‌ಟಿ ಜಾರಿಯಿಂದಾಗಿ ರಾಜ್ಯಗಳು ತೆರಿಗೆ ಸಂಗ್ರಹದಲ್ಲಿನ ತಮ್ಮ ಪಾಲು ಪಡೆಯಲು ಕೇಂದ್ರವನ್ನು ಅವಲಂಬಿಸುವಂತಾಯಿತು. ವರಮಾನ ನಷ್ಟವಾಗುತ್ತದೆನ್ನುವ ರಾಜ್ಯಗಳ ಆತಂಕ ನಿರಾಧಾರವಾದುದೇನೂ ಅಲ್ಲ. ಕೋವಿಡ್ ಸೋಂಕು ತೀವ್ರವಾಗಿದ್ದ ಸಮಯದಲ್ಲಿ ರಾಜ್ಯಗಳ ಜಿಎಸ್‌ಟಿ ಪಾಲನ್ನು ವರ್ಗಾಯಿಸಲು ಕೇಂದ್ರ ಸರ್ಕಾರ ವಿಳಂಬ ಮಾಡಿದುದರಿಂದ ಹಲವು ರಾಜ್ಯಗಳು ತೀವ್ರ ಸಂಕಷ್ಟಕ್ಕೊಳಗಾದವು ಹಾಗೂ ಹೆಚ್ಚಿನ ಸಾಲವನ್ನು ಪಡೆಯಬೇಕಾದ ಅನಿವಾರ್ಯತೆಗೆ ಸಿಲುಕಿದವು. ಕರ್ನಾಟಕದಲ್ಲಿನ ಆರ್ಥಿಕ ಬಿಕ್ಕಟ್ಟಿಗೆ ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಕಾರ್ಯಕ್ರಮಗಳು ಕಾರಣವೇ ಹೊರತು, ಜಿಎಸ್‌ಟಿ ಪದ್ಧತಿಯಲ್ಲ ಎಂದು ಬಿಜೆಪಿ ಹೇಳುತ್ತಿದೆ. ಭಾರತದ ಮಹಾಲೇಖಪಾಲರ (ಸಿಎಜಿ) ವರದಿ ಕೂಡ ಕಲ್ಯಾಣ ಕಾರ್ಯಕ್ರಮಗಳು ರಾಜ್ಯದ ಆರ್ಥಿಕತೆಗೆ ಹೊರೆಯಾಗಿ ಪರಿಣಮಿಸಿವೆ ಎಂದಿದೆ. ಇದಕ್ಕೆ ಪ್ರತಿಯಾಗಿ. ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿನ ನಿರ್ಣಯಗಳನ್ನು ಪ್ರಸಕ್ತ ಹಣಕಾಸಿನ ಬಿಕ್ಕಟ್ಟಿಗೆ ಕಾಂಗ್ರೆಸ್ ಗುರಿಯಾಗಿಸುತ್ತಿದೆ. ಆಯವ್ಯಯದಲ್ಲಿ ಅವಕಾಶ ಕಲ್ಪಿಸದೆ ರೂ.2.7 ಲಕ್ಷ ಕೋಟಿ ಮೊತ್ತದ ಯೋಜನೆಗಳನ್ನು ಹಿಂದಿನ ಸರ್ಕಾರ ಜಾರಿಗೊಳಿಸಿತ್ತು ಹಾಗೂ ರೂ.35 ಸಾವಿರ ಕೋಟಿ ಮೊತ್ತದ ಕಾಮಗಾರಿಗಳ ಬಿಲ್‌ಗಳನ್ನು ಬಾಕಿಯುಳಿಸಿತ್ತು; ಆ ಹೊರೆ ನಮ್ಮ ಸರ್ಕಾರದ ಮೇಲೆ ಬಿದ್ದಿದೆ ಎಂದು ಕಾಂಗ್ರೆಸ್ ಹೇಳಿದೆ.

**ರಾಜ್ಯಗಳ ಆದಾಯದಲ್ಲಿನ ಸಂಭಾವ್ಯ ನಷ್ಟ ತಪ್ಪಿಸಲಿಕ್ಕಾಗಿ ಕೇಂದ್ರ ಸರ್ಕಾರ ಪರಿಚಯಿಸಿದ್ದ ವಿಶೇಷ ಪರಿಹಾರ ಯೋಜನೆಯು 2022ರ ಜೂನ್‌ನಲ್ಲಿ ಕೊನೆಗೊಂಡಿತ್ತು. ಬಳಿಕ ಇದನ್ನು 2026ರ ಮಾರ್ಚ್ ಅಂತ್ಯದವರೆಗೆ ವಿಸ್ತರಿಸಲಾಗಿದೆ. ಈಗ ಜಿಎಸ್‌ಟಿ ತೆರಿಗೆ ಹಂತಗಳನ್ನು ಕೇಂದ್ರ ಸರ್ಕಾರ ಪರಿಷ್ಕರಿಸುತ್ತಿದ್ದು, ಶೇ 5 ಮತ್ತು ಶೇ 18ರ ಎರಡು ಹಂತಗಳಲ್ಲಿ ಸರಕುಗಳನ್ನು ಗುರ್ತಿಸಲು ಉದ್ದೇಶಿಸಿದೆ. ಈ ಪರಿಷ್ಕಾರದಿಂದ ದೊಡ್ಡ ಪ್ರಮಾಣದ ನಷ್ಟ ಉಂಟಾಗುತ್ತದೆನ್ನುವ ಆತಂಕವನ್ನು ರಾಜ್ಯಗಳು ವ್ಯಕ್ತಪಡಿಸಿವೆ. ಈ ಆತಂಕದ ಕಾರಣದಿಂದಾಗಿಯೇ, ರಾಜ್ಯಗಳ ಹಣಕಾಸಿನ ಹಿತಾಸಕ್ತಿ ರಕ್ಷಣೆಗಾಗಿ ಐದು ವರ್ಷಗಳ ವಿಶೇಷ ಪರಿಹಾರ ಯೋಜನೆಯನ್ನು ಹೊಸತಾಗಿ ರೂಪಿಸಬೇಕೆಂದು ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಒತ್ತಾಯಿಸಿದ್ದಾರೆ.**

ಗ್ಯಾರಂಟಿ ಯೋಜನೆಗಳು ಜನಸಾಮಾನ್ಯರ ಕೊಳ್ಳುವ ಶಕ್ತಿ ಹೆಚ್ಚಿಸಿವೆ: ಜಿಎಸ್‌ಟಿ ಸಂಗ್ರಹ ಉತ್ತಮಗೊಳ್ಳಲು ಕಾರಣವಾಗಿವೆ ಎಂದೂ ಸಿದ್ದರಾಮಯ್ಯ ಸರ್ಕಾರ ಹೇಳಿಕೊಂಡಿದೆ.

ತಲಾ ಆದಾಯದಲ್ಲಿ ಕರ್ನಾಟಕ ದೇಶದಲ್ಲೇ ಮುಂಚೂಣಿಯಲ್ಲಿರುವುದಕ್ಕೆ ಸರ್ಕಾರದ ಕಲ್ಯಾಣ ಕಾರ್ಯಕ್ರಮಗಳೂ ಕಾರಣವಾಗಿವೆ ಎನ್ನಲಾಗಿದೆ. ಜಿಎಸ್‌ಟಿ ವ್ಯವಸ್ಥೆಯಲ್ಲಿನ ತೆರಿಗೆ ಹಂತಗಳನ್ನು ಕಡಿಮೆ ಮಾಡುವುದರಿಂದ ಮುಂದಿನ ಐದು ವರ್ಷಗಳ ಅವಧಿಯಲ್ಲಿ ರೂ 90 ಸಾವಿರ ಕೋಟಿ ನಷ್ಟ ಆಗಬಹುದೆಂದು ರಾಜ್ಯ ಸರ್ಕಾರ ಅಂದಾಜಿಸಿದೆ. 15ನೇ ಹಣಕಾಸು ಆಯೋಗವು ಕರ್ನಾಟಕಕ್ಕೆ ರೂ. 5,495 ಕೋಟಿ ವಿಶೇಷ ಅನುದಾನ ನೀಡಲು ಶಿಫಾರಸು ಮಾಡಿತ್ತು. ಇದನ್ನು ಕೇಂದ್ರ ಸರ್ಕಾರ ಪುರಸ್ಕರಿಸಿಲ್ಲ. ದೇಶದ ಜಿಡಿಪಿಗೆ ಶೇ 8.7ರಷ್ಟು ಕೊಡುಗೆ ನೀಡುವ ರಾಜ್ಯಕ್ಕೆ ಆಗಿರುವ ಅನ್ಯಾಯ ಸ್ಪಷ್ಟವಾಗಿ ಗೋಚರಿಸುವಂತಿದೆ. ಜಿಎಸ್‌ಟಿಯ ಪರಿಷ್ಕೃತ ತೆರಿಗೆ ಹಂತ ಜಾರಿಗೆ ಬಂದರೆ ರಾಜ್ಯಕ್ಕೆ ವಾರ್ಷಿಕ ಕನಿಷ್ಠ ರೂ15 ಸಾವಿರ ವರಮಾನ ಖೋತಾ ಆಗಲಿದ್ದು, ಅದನ್ನು ಕೇಂದ್ರ ತುಂಬಿ ಕೊಡಬೇಕು ಎಂಬುದು ರಾಜ್ಯದ ಬೇಡಿಕೆಯಾಗಿದೆ. ರಾಜ್ಯಗಳ ಹಿತಾಸಕ್ತಿ ರಕ್ಷಣೆಗಾಗಿ ಕೇಂದ್ರ ಸರ್ಕಾರ ಸಮತೋಲಿತ ತೆರಿಗೆ ನೀತಿಯನ್ನು ರೂಪಿಸುವುದು ಅಗತ್ಯ. ರಾಷ್ಟ್ರದ ಆರ್ಥಿಕತೆಗೆ ಮಹತ್ವದ ಕೊಡುಗೆ ನೀಡುವ ರಾಜ್ಯಗಳು ಶಿಕ್ಷೆ ಅನುಭವಿಸುವಂತೆ ಕೇಂದ್ರದ ನೀತಿ ಇರಬಾರದು. ಸಾಮಾಜಿಕ ನ್ಯಾಯ ಮಹತ್ವದ್ದಾಗಿದ್ದು, ಬಡ ರಾಜ್ಯಗಳನ್ನು ಬೆಂಬಲಿಸುವುದೂ ಅಗತ್ಯವಾಗಿದೆ. ಆದರೆ, ಈ ಬೆಂಬಲ, ಕಠಿಣ ಶ್ರಮ ಹಾಗೂ ಉತ್ತಮ ನಿರ್ವಹಣೆಯ ರಾಜ್ಯಗಳಿಗೆ ದಂಡ ವಿಧಿಸುವಂತೆ ಇರಬಾರದು. ತೆರಿಗೆ ಸಂಗ್ರಹದಲ್ಲಿ ಉತ್ತಮ ನಿರ್ವಹಣೆ ತೋರದ ರಾಜ್ಯಗಳಿಗೂ ಉತ್ತರದಾಯಿತ್ವ ಇರುವುದು ಅಪೇಕ್ಷಣೀಯ ಆ ರಾಜ್ಯಗಳು ನಿರಂತರವಾಗಿ ಇತರ ರಾಜ್ಯಗಳನ್ನು ಅವಲಂಬಿಸುವಂತೆ ಆಗಬಾರದು. ರಾಜ್ಯದ ಸಂಸದರು, ಮುಖ್ಯವಾಗಿ ಬಿಜೆಪಿ ಸಂಸದರು, ಜಿಎಸ್‌ಟಿ ಸಂಗ್ರಹದಲ್ಲಿನ ನ್ಯಾಯಬದ್ಧ ಪಾಲು ಕರ್ನಾಟಕಕ್ಕೆ ದೊರಕುವಂತೆ ಮಾಡಲು ಧ್ವನಿ ಎತ್ತಬೇಕಾಗಿದೆ: ಜಿಎಸ್‌ಟಿ ತೆರಿಗೆ ಹಂತಗಳ ಪರಿಷ್ಕರಣೆಯಿಂದ ರಾಜ್ಯಕ್ಕೆ ಅನ್ಯಾಯ ಆಗದಂತೆ ನೋಡಿಕೊಳ್ಳಬೇಕಾಗಿದೆ. ಆರ್ಥಿಕ ಒಕ್ಕೂಟ ವ್ಯವಸ್ಥೆಯನ್ನು ರಕ್ಷಿಸುವುದು ರಾಜ್ಯವೊಂದರ ಹಕ್ಕೊತ್ತಾಯ ಮಾತ್ರವಲ್ಲ; ಅದು, ಕೇಂದ್ರ ಸರ್ಕಾರ ನಿರ್ವಹಿಸಲೇಬೇಕಾದ ಸಾಂವಿಧಾನಾತ್ಮಕ ಕರ್ತವ್ಯವೂ ಆಗಿದೆ.

# ರಾಮಾಯಣ



**ಸೀತಾದೇವಿಯು ಶ್ರೀರಾಮನಿಗೆ ಆ ಹಿಂಸಾ ಧರ್ಮವನ್ನು ಹೇಳಿದ್ದು**

• ಹಿಂದಿನ ಸಂಚಿಕೆಯಿಂದ

## 120 ನೆಯ ಅಧ್ಯಾಯ

ಸುತೀಕ್ಷ್ಣ ಮುನಿಯು ಆತನನ್ನು ಕುರಿತು ಶ್ರೀರಾಮ, ನಾನು ಈ ಸಂಗತಿಯನ್ನು ತಿಳುಹಿಸಿ ಸೀತಾಲಕ್ಷ್ಮಣಸಮೇತನಾದ ನಿನ್ನನ್ನು ಅಗಸ್ತ ಮುನೀಶ್ವರನ ಆಶ್ರಮಕ್ಕೆ ಕಳುಹಿಸಬೇಕೆಂದಿದ್ದೆನು. ದೈವಾಧೀನದಿಂದ ನಿನಗೂ ಈ ಬುದ್ಧಿಯು ಹುಟ್ಟಿತು. ನಾನು ಅಗಸ್ತಮುನೀಶ್ವರನಿರುವ ಸ್ಥಳವನ್ನು ಹೇಳುತ್ತೇನೆ ಕೇಳು : ಇಲ್ಲಿಗೆ ತೆಂಕಣದಿಕ್ಕಿನಲ್ಲಿ ನಾಲ್ಕುಗಾವುದ ದಾರಿಯಲ್ಲಿ ಅಗಮುನಿಯ ಆಶ್ರಮವಿದೆ. ಆ ಆಶ್ರಮವು ಪರ್ವತಾದಿಗಳೇನೂ ಇಲ್ಲದ ನೆಲಗಾಡಾಗಿರುವುದು ಇಲ್ಲಿಂದ ಮೂರು ಗಾವುದ ದೂರದಲ್ಲಿ ಅಗಸ್ತಭ್ರಾತೃವಿನ ಆಶ್ರಮವಿದೆ. ಪಿಪ್ಪಲೀಮರಗಳು ಹೇರಳವಾಗಿರುವುದೇಅದಕ್ಕೆ ಕುರುಹು. ಆ ಆಶ್ರಮದಲ್ಲಿ ಕುಸುಮಿತವಾದ ಕಮಲಗಳಿಂದಲೂ ಹಂಸ ಮುಂತಾದ ಪಕ್ಷಿಗಳಿಂದಲೂ ಮೆರೆಯುವ ಕೆರೆಗಳಿರುವುವು. ನೀನು ಸೀತಾಲಕ್ಷ್ಮಣಸಮೇತನಾಗಿ ಆ ಆಶ್ರಮದಲ್ಲಿ ಒಂದು ರಾತ್ರಿಯಿದ್ದು ಅಲ್ಲಿಂದ ಮುಂದೆ ತೆಂಕಲಾಗಿ ಹೋದರೆ ಒಂದು ಗಾವುದದಾರಿ ದೂರದಲ್ಲಿ ಅಗಸ್ತ್ಯಮುನೀಶ್ವರನ ಆಶ್ರಮವಿರುವುದು. ಆ ಆಶ್ರಮವು ಅತಿರಮಣೀಯವಾದದ್ದು. ಅಲ್ಲಿಗೆ ಹೋಗಬೇಕಾದ ಪಕ್ಷದಲ್ಲಿ ಇಂದೇ ಪ್ರಯಾಣ ಬೆಳಸು ಎಂದು ಹೇಳಿದನು.

ಶ್ರೀರಾಮನು ಸೀತಾಲಕ್ಷ್ಮಣಸಮೇತನಾಗಿ ಸುತೀಕ್ಷ್ಣ ಮುನೀಶ್ವರನಿಗೆ ಪ್ರದಕ್ಷಿಣ ನಮಸ್ಕಾರಗಳನ್ನು ಮಾಡಿ ಹೊರಟು ಮಾರ್ಗದಲ್ಲಿ ಮೇಘಮಂಡಲಕ್ಕೆ ಸಮಾನವಾದ ಪರ್ವತಗಳನ್ನೂ ವಿಚಿತ್ರವಾದ ವನಗಳನ್ನೂ ಕೊಳಗಳನ್ನೂ ನದಿಗಳನ್ನೂ ನೋಡುತ್ತ ಸುತೀಕ್ಷ್ಣನು ಹೇಳಿದ ಮಾರ್ಗ ಗೊಂಡು ನಡೆದು ಮೂರುಗಾವುದ ಹೋದನು. ಅಲ್ಲಿ ಅಗಸ್ತ್ಯಮುನಿಯ ಭ್ರಾತೃವನ್ನು ಕಂಡು ಲಕ್ಷ್ಮಣನನ್ನು ಕುರಿತು ಹೀಗೆಂದನು: ಲಕ್ಷ್ಮಣ, ಇದೇ ಮಹಾತ್ಮನಾದ ಅಗಸ್ವಭ್ರಾತೃವಿನ ಪುಣ್ಯಾಶ್ರಮವಾಗಿರಬೇಕು. ಈ ಆಶ್ರಮದಲ್ಲಿ ಫಲಪುಷ್ಪಗಳಿಂದ ಜೋತು ಬಿದ್ದಿರುವ ಮನೋಹರ ವಾದ ವೃಕ್ಷಗಳಿವೆ. ಪರಿಮಳಯುಕ್ತವಾದ ಹೋಮಧೂಮವು ಕಾಣಿಸುತ್ತಿದೆ. ಸಮೀಪದಲ್ಲಿ ಸಂಗ್ರಹಮಾಡಿದ ಸಮಿತ್ತುಗಳ ರಾಶಿಗಳಿವೆ. ಋಷಿಕುಮಾರರು ಕೊಯ್ದುಕೊಂಡುಹೋದ ದರ್ಭೆಯ ಅವಶೇಷಗಳು ಕಾಣಿಸುತ್ತಿವೆ. ಇದೇ ಆಗಸ್ತ್ಯಭ್ರಾತೃವಿನ ಆಶ್ರಮವಾಗಿರಬೇಕು. ತೆಂಕಣ ದಿಗ್ಭಾಗದಲ್ಲಿ ಈ ಆಶ್ರಮವು ಅನೇಕ ಪುಣ್ಯಾತ್ಮರಿಗೆ ಆಶ್ರಯವಾಗಿದೆ. ಈ ಆಶ್ರಮವನ್ನು ಕುರಿತು ಒಂದು ಅದ್ಭುತ ವಾದ ಕಥಾವೃತ್ತಾಂತವನ್ನು ಕೇಳಿದ್ದೇನೆ. ಅದೇನೆಂದರೆ : ಇಲ್ಲಿ ಅಗಸ್ತ್ಯಮುನೀಶ್ವರನು ಬರುವುದಕ್ಕೆ ಮೊದಲು ವಾತಾಪಿ ಇಲ್ವಲರೆಂಬ ಇಬ್ಬರು ದುರಾತ್ಮರಾದ ರಾಕ್ಷಸರು ಬ್ರಾಹ್ಮಣವೇಷವನ್ನು ಧರಿಸಿ ಕೊಂಡು ಬ್ರಾಹ್ಮಣರನ್ನೇ ಕೊಂದು ತಿನ್ನುತ್ತಿದ್ದರು. ಇಲ್ವಲನು ತನ್ನ ಮನೆಯಲ್ಲಿ ಶ್ರಾದ್ಧದಿವಸವೆಂದು ಹೇಳಿಕೊಂಡು ಅನೇಕಮಂದಿ ಬ್ರಾಹ್ಮಣರನ್ನು ಭೋಜನಕ್ಕೆ ಕರೆಯುತ್ತಿದ್ದನು. ಮೇಷದ ರೂಪವನ್ನು ತಾಳಿರುವ ತನ್ನ ತಮ್ಮನಾದ ವಾತಾಪಿಯನ್ನು ಸಂಹರಿಸಿ ಪಾಕಮಾಡಿ ಆ ಬ್ರಾಹ್ಮಣರಿಗೆ ಬಡಿಸುತ್ತಿದ್ದನು. ಅವರು ಭೋಜನ ಮಾಡಿದಮೇಲೆ ವಾತಾಪಿ, ಹೊರಟು ಬಾ ಎಂದು ಕರೆಯುತಿದ್ದನು.

ಮುಂದುವರಿಯುವುದು...

# ಸೆ.6ರಂದು ಅನಂತ ಚತುರ್ದಶಿ ವ್ರತ



ಭಾದ್ರಪದ ಶುಕ್ಲ ಪಕ್ಷ ಚತುರ್ದಶಿಯಂದು ಅನಂತ ಚತುರ್ದಶಿ ವ್ರತವನ್ನು ಆಚರಿಸಲಾಗುತ್ತದೆ. ಇದರ ಅವಧಿ ಹದಿನಾಲ್ಕು ವರ್ಷಗಳು. ನಂತರ ವ್ರತದ ಉದ್ಯಾಪನೆ ಮಾಡಲಾಗುತ್ತದೆ. ಈ ವ್ರತವನ್ನು ಯಾರಾದಾರೂ ಮಾಡಲು ಸೂಚಿಸಿದರೆ ಅಥವಾ ಅನಂತ ವ್ರತದ ದಾರ ದೊರೆತರೆ ಮಾಡುತ್ತಾರೆ. ಅನಂತ ಚತುರ್ದಶಿಯಲ್ಲಿ ಬರುವ ಅನಂತದ ಅರ್ಥವೆಂದರೆ ಅನಾದಿ ಅನಂತ ರೂಪದಲ್ಲಿರುವ, ಎಂದೂ ಕಡಿಮೆಯಾಗದ ಚೈತನ್ಯ ರೂಪದಲ್ಲಿರುವ ಶಕ್ತಿ.

**ಅನಂತ ಚತುರ್ದಶಿ ವ್ರತದ ಉದ್ದೇಶ :** ಲೌಕಿಕ ಇಚ್ಛೆ ಆಕಾಂಕ್ಷೆಗಳನ್ನು ಪೂರೈಸುವ ಉದ್ದೇಶದಿಂದ ಅನಂತ ಚತುರ್ದಶಿ ವ್ರತವನ್ನು ಆಚರಿಸಲಾಗುತ್ತದೆ (ಅಂದರೆ ಇದೊಂದು ಕಾಮ್ಯ ವ್ರತವಾಗಿದೆ). ಮುಖ್ಯವಾಗಿ ಕಳೆದುಹೋದ ಸಮೃದ್ಧಿಯನ್ನು (ಗತವೈಭವವನ್ನು) ಮರಳಿ ಪಡೆಯಲು ಈ ವ್ರತವನ್ನು ಆಚರಿಸಲಾಗುತ್ತದೆ.

ಅನಂತ ಚತುರ್ದಶಿಯ ದಿನ, ಬ್ರಹ್ಮಾಂಡದಲ್ಲಿ ಶ್ರೀ ವಿಷ್ಣುವಿನ ಲಹರಿಗಳು ಸಕ್ರಿಯವಾಗಿರುತ್ತವೆ. ಈ ದಿನ ಸಾಮಾನ್ಯ ಜನರಿಗೂ ಕೂಡ ಈ ಲಹರಿಗಳನ್ನು ಆಕರ್ಷಿಸಲು ಮತ್ತು ಗ್ರಹಿಸಲು ಸುಲಭವಿರುತ್ತದೆ. ಅನಂತಪೂಜೆ ಮಾಡುವುದು ಎಂದರೆ ಶ್ರೀ ವಿಷ್ಣುವಿನ ಕ್ರಿಯಾಶಕ್ತಿಯನ್ನು ಗ್ರಹಿಸಿಕೊಳ್ಳುವುದು. ಸಾಮಾನ್ಯ ಭಕ್ತರು ಶ್ರೀ ವಿಷ್ಣುತತ್ತ್ವದ ಉನ್ನತ ಲಹರಿಗಳನ್ನು ಗ್ರಹಿಸಲು ಸಾಧ್ಯವಿಲ್ಲದ ಕಾರಣ, ಹಿಂದೂ ಧರ್ಮದಲ್ಲಿ ಸಾಮಾನ್ಯ ಜನರಿಗೆ ಅನುಕೂಲವಾಗುವಂತೆ, ಕನಿಷ್ಠ ಪಕ್ಷ ಈ ಲಹರಿಗಳಿಂದಾದರೂ ಲಾಭವಾಗಲಿ ಎಂದು ಅನಂತ ಚತುರ್ದಶಿ ವ್ರತವನ್ನು ಹೇಳಲಾಗಿದೆ. ಅನಂತ ವ್ರತದ ಪ್ರಧಾನ ದೇವರು ಅನಂತ, ಅಂದರೆ ಭಗವಾನ ಶ್ರೀ ವಿಷ್ಣು. ಯಮುನಾ ಮತ್ತು ಶೇಷನಾಗ ದೇವತೆಗಳು ಈ ಪೂಜೆಯ ಗೌಣ ದೇವತೆಗಳಾಗಿರುತ್ತಾರೆ.

**ಅನಂತ ಚತುರ್ದಶಿ ವ್ರತದ ಉದ್ದೇಶ**

**ಅನಂತ ಚತುರ್ದಶಿ ವ್ರತ ಪೂಜೆ :** ಸಾಧ್ಯವಾದಷ್ಟು ಅನಂತನ ವ್ರತದ ಪೂಜೆಯನ್ನು ದಂಪತಿಗಳು ನಡೆಸಬೇಕು. ಅಸಾಧಾರಣ ಸನ್ನಿವೇಷಗಳಲ್ಲಿ ಪುರುಷ ಅಥವಾ ಮಹಿಳೆ ಒಬ್ಬರೇ ಪೂಜೆಯನ್ನು ಮಾಡಬಹುದು. ಪೂಜೆಯನ್ನು ಹೇಗೆ ನಡೆಸಬೇಕು ಎಂದು ಸಂಕ್ಷಿಪ್ತವಾಗಿ ಇಲ್ಲಿ ನೀಡಲಾಗಿದೆ –

ವ್ರತದ ಪೂಜೆಯನ್ನು ಪ್ರಾರಂಭಿಸುವ ಮೊದಲು, ಕಳೆದುಹೋದ ಸಮೃದ್ಧಿಯನ್ನು ಮರಳಿ ಪಡೆಯಲು ಈ ಪೂಜೆಯನ್ನು ಮಾಡುವ ಸಂಕಲ್ಪವನ್ನು ಮಾಡಲಾಗುತ್ತದೆ.

ನಂತರ ಯಮುನಾಪೂಜೆಯಲ್ಲಿ ಶಾಸ್ತ್ರೋಕ್ತವಾಗಿ ಶ್ರೀ ಯಮುನಾ ದೇವಿಯ ಷೋಡಶೋಪಚಾರ ಪೂಜೆ ನಡೆಸಲಾಗುತ್ತದೆ. ಮೊದಲು ಶ್ರೀ ಯಮುನಾ ದೇವಿಗೆ ಆಸನವನ್ನು ನೀಡಬೇಕು.

ಶ್ರೀ ಯಮುನಾ ದೇವಿಯ ಪವಿತ್ರ ಪಾದಗಳನ್ನು ತೊಳೆಯಬೇಕು. ನಂತರ, ಅರ್ಘ್ಯವನ್ನು ನೀಡಬೇಕು. ನಂತರ, ಐದು ಪದಾರ್ಥಗಳೊಂದಿಗೆ ಸ್ನಾನ ಅರ್ಪಿಸಬೇಕು. ದೇವಿಗೆ ನೀರಿನ ಅಭಿಷೇಕವನ್ನು ಮಾಡಬೇಕು. ವ್ರತವನ್ನು ಆಚರಿಸುತ್ತಿರುವ ಮಹಿಳೆ ಅರಿಶಿನ-ಕುಂಕುಮವನ್ನು ಶ್ರೀ ಯಮುನಾ ದೇವಿಗೆ ಅರ್ಪಿಸಬೇಕು. ನಂತರ ಕಳಶದಲ್ಲಿ ಅಕ್ಷತೆಗಳನ್ನು ಅರ್ಪಿಸಿ ಶ್ರೀ ಯಮುನಾ ದೇವಿಯ ಅಂಗ-ಪೂಜೆ ಮಾಡಲಾಗುತ್ತದೆ. ಧೂಪ, ಆರತಿ, ನೈವೇದ್ಯ ಇತ್ಯಾದಿಗಳನ್ನು ಅರ್ಪಿಸುವ ಮೂಲಕ ಪೂಜೆಯನ್ನು ಮುಕ್ತಾಯಗೊಳಿಸಬೇಕು.

**ಅನಂತ ಚತುರ್ದಶಿ ವ್ರತದಲ್ಲಿ ಶೇಷನಾಗನನ್ನು ಪೂಜಿಸುವ ಕಾರಣ :** ಅನಂತ ಚತುರ್ದಶಿಯ ದಿನ, ಶ್ರೀ ವಿಷ್ಣುತತ್ತ್ವಕ್ಕೆ ಸಂಬಂಧಿಸಿದ ಕ್ರಿಯೆಯ ಲಹರಿಗಳು ಬ್ರಹ್ಮಾಂಡದಲ್ಲಿ ಹೊರಸೂಸಲ್ಪಡುತ್ತವೆ. ಶೇಷನಾಗನು ಈ ಲಹರಿಗಳ ಅತ್ಯುತ್ತಮ ವಾಹಕನಾಗಿದ್ದಾನೆ. ಹಾಗಾಗಿ ಅನಂತ ವ್ರತದಲ್ಲಿ ಶೇಷನಾಗನಿಗೆ ಪ್ರಮುಖ ಸ್ಥಾನ ನೀಡಲಾಗಿದೆ. ಈ ದಿನ ಬ್ರಹ್ಮಾಂಡದಲ್ಲಿ ಕಾರ್ಯನಿರ್ವಹಿಸುವ ಕ್ರಿಯಾಶಕ್ತಿಯ ಲಹರಿಗಳುಗಳು ಸುರುಳಿಗಳ ರೂಪದಲ್ಲಿ ಇರುವುದರಿಂದ, ಶೇಷರೂಪದಲ್ಲಿರುವ ದೇವತೆಯ ಪೂಜೆಯೊಂದಿಗೆ ಈ ಲಹರಿಗಳನ್ನು ಅದೇ ರೂಪದಲ್ಲಿ ಪಡೆಯಲು ಸಾಧ್ಯವಾಗುತ್ತದೆ.

**ಅನಂತನ ಸಾಂಕೇತವಾಗಿರುವ ದಾರಗಳ ಪೂಜೆ :** ಶೇಷನಾಗನ ಪೂಜೆಯ ನಂತರ, ಅನಂತನ ಅಂದರೆ ಶ್ರೀ ವಿಷ್ಣುವಿನ ಸಂಕೇತವಾಗಿರುವ ದಾರಗಳ ಪೂಜೆಯನ್ನು ಮಾಡಲಾಗುತ್ತದೆ. ಪೂಜೆ ಮಾಡುವ ಮೊದಲು ದಾರವನ್ನು ಮಂತ್ರಗಳಿಂದ ಶುದ್ಧೀಕರಿಸಲಾಗುತ್ತದೆ.

ಮದನಂತ ದೇವತೆ ಅಂದರೆ ಭಗವಾನ ಶ್ರೀ ವಿಷ್ಣುವನ್ನು ದಾರದಲ್ಲಿ ಆಹ್ವಾನಿಸಲಾಗುತ್ತದೆ. ದಾರದಲ್ಲಿ ಅನಂತನನ್ನು ಆಹ್ವಾನಿಸಿದ ನಂತರ, ಅನಂತನಿಗೆ ಆಸನವನ್ನು ನೀಡಲಾಗುತ್ತದೆ. 14 ಗಂಟುಗಳನ್ನು ಕಟ್ಟಿರುವ ದಾರಕ್ಕೆ ಕುಂಕುಮ ಮಿಶ್ರಿತ ಅಕ್ಷತೆಗಳನ್ನು ಅರ್ಪಿಸಲಾಗುತ್ತದೆ. ಗಂಧೋದಕ ಸ್ನಾನ – ದೇವರಿಗೆ ಶ್ರೀಗಂಧ ಬೆರೆಸಿದ ನೀರಿನಿಂದ ಸ್ನಾನ ಅರ್ಪಿಸಲಾಗುತ್ತದೆ. ಪುಷ್ಪೋದಕ ಸ್ನಾನ – ಹೂವುಗಳನ್ನು ಹೊಂದಿರುವ ನೀರಿನಿಂದ ದೇವರಿಗೆ ಸ್ನಾನ ಅರ್ಪಿಸಲಾಗುತ್ತದೆ. ಫಲೋದಕ ಸ್ನಾನ – ಹಣ್ಣಿನ ರಸದಿಂದ ದೇವರಿಗೆ ಸ್ನಾನ ಅರ್ಪಿಸಲಾಗುತ್ತದೆ. ನಂತರ ಅಮೂಲ್ಯವಾದ ರತ್ನಗಳಿರುವ ನೀರಿನಿಂದ ಸ್ನಾನ ಅರ್ಪಿಸಲಾಗುತ್ತದೆ. ನಂತರ ದಾರಗಳನ್ನು ಪೂಜೆಗಾಗಿ ಇರಿಸಲಾಗುತ್ತದೆ. ದಾರಗಳಿಗೆ ಶಾಸ್ತ್ರೋಕ್ತವಾಗಿ ಪಂಚೋಪಚಾರ ಪೂಜೆಯನ್ನು ಅರ್ಪಿಸಲಾಗುತ್ತದೆ. ನಂತರ ದ್ವಾದಶ ಆವರಣ ಆಚರಣೆಯ ಪೂಜೆಯನ್ನು ನಡೆಸಲಾಗುತ್ತದೆ. ಅದರ ನಂತರ ಬಿಲ್ವ, ಕರವೀರ, ಶಮಿ, ತುಳಸಿ, ದತ್ತೂರಿ ಮುಂತಾದ ಎಲೆಗಳನ್ನು ಅರ್ಪಿಸುವ ಮೂಲಕ ಪತ್ರಪೂಜೆ ಮಾಡಲಾಗುತ್ತದೆ. ಅನಂತ ಪೂಜೆಯ ನಂತರ, ಕುಂಬಳಕಾಯಿಯಿಂದ ತಯಾರಿಸಿದ ಸಿಹಿ ಪೂರಿಗಳ ವಿಶೇಷ ನೈವೇದ್ಯವನ್ನು ನೀಡಲಾಗುತ್ತದೆ. ಪಂಚಪಾತ್ರೆಯಲ್ಲಿ ಇರಿಸಿದ ದಾರಗಳನ್ನು ತೆಗೆದು ತೋಳಿಗೆ ಕಟ್ಟಲಾಗುತ್ತದೆ ಮತ್ತು ಹಳೆಯ ದಾರಗಳನ್ನು ವಿಸರ್ಜಿಸಲಾಗುತ್ತದೆ.

**ಶೇಷನಾಗನ ಪೂಜೆ**

**ಇದರಲ್ಲಿ ದರ್ಭೆಯಿಂದ ಮಾಡಿದ ಏಳು ಹೆಡೆಗಳ ನಾಗರಹಾವನ್ನು ಶೇಷನಾಗನ ಸಂಕೇತವಾಗಿ ತಯಾರಿಸಿ ಅದರ ಶಾಸ್ತ್ರೋಕ್ತ ಪೂಜೆ ನಡೆಸಲಾಗುತ್ತದೆ. ಮೊದಲು ಶೇಷನಾಗನನ್ನು ಆಹ್ವಾನಿಸಲಾಗುತ್ತದೆ. ಶೇಷನಾಗನಿಗೆ ಆಸನವನ್ನು ನೀಡಿ ನಂತರ, ಪಾದ್ಯಪೂಜೆ, ಅರ್ಘ್ಯ ಅರ್ಪಿಸಲಾಗುತ್ತದೆ. ಶೇಷನಾಗನ ಅಂಗ-ಪೂಜೆ ಮಾಡಲಾಗುತ್ತದೆ. ಶೇಷನಾಗನ ಏಳು ಹೆಡೆಳನ್ನು ಪೂಜಿಸಲಾಗುತ್ತದೆ. ನಂತರ ಶೇಷನಾಗನ ನಾಮಪೂಜೆ ಮಾಡಲಾಗುತ್ತದೆ. ಕೊನೆಯಲ್ಲಿ ಧೂಪ, ದೀಪ, ನೈವೇದ್ಯ ಇತ್ಯಾದಿ ಅರ್ಪಿಸಿ ಪೂಜೆಯನ್ನು ಮುಕ್ತಾಯಗೊಳಿಸಲಾಗುತ್ತದೆ.**

# ಗರ್ಭಿಣಿಯರು ಅಪ್ಪಿ ತಪ್ಪಿಯೂ ಈ 5 ಕೆಲಸ ಮಾಡಬೇಡಿ! ಮಗುವಿಗೆ ಕಷ್ಟ ಗ್ಯಾರಂಟಿ



ಪಿತೃ ಪಕ್ಷದಲ್ಲಿ ಗರ್ಭಿಣಿಯರು ಅಪ್ಪಿ ತಪ್ಪಿಯೂ ಈ 5 ಕೆಲಸಗಳನ್ನು ಮಾಡಬೇಡಿ ಮಗುವಿನ ಮೇಲೆ ಕೆಟ್ಟ ಪರಿಣಾಮ ಬೀರಬಹುದು. ಇದೇ ಸೆಪ್ಟೆಂಬರ್ 7 ರಿಂದ ಪಿತೃ ಪಕ್ಷ ಪ್ರಾರಂಭವಾಗುತ್ತದೆ. ಈ ಅವಧಿಯಲ್ಲಿ, ಜನರು ತಮ್ಮ ಪೂರ್ವಜರ ಆತ್ಮಗಳಿಗೆ ಶಾಂತಿ ಸಿಗಲೆಂದು ವಿಶೇಷ ಪೂಜೆ ಮತ್ತು ಆಚರಣೆಗಳನ್ನು ಮಾಡುತ್ತಾರೆ. ಪಿಂಡದಾನ, ತರ್ಪಣದಂತಹ ಕ್ರಿಯೆಗಳನ್ನು ಮಾಡುವುದರಿಂದ ಪಿತೃಗಳ ಆತ್ಮಗಳು ತೃಪ್ತಿಗೊಂಡು ನಮ್ಮನ್ನು ಹರಸುತ್ತವೆ ಎಂಬ ನಂಬಿಕೆಯಿದೆ.

ಈ ಸಮಯದಲ್ಲಿ, ಕೆಲವು ಸಂಪ್ರದಾಯಗಳು ಮತ್ತು ನಿಯಮಗಳನ್ನು ಕಟ್ಟುನಿಟ್ಟಾಗಿ ಅನುಸರಿಸಲಾಗುತ್ತದೆ. ಅದರಲ್ಲೂ ವಿಶೇಷವಾಗಿ, ಗರ್ಭಿಣಿ ಮಹಿಳೆಯರು ಕೆಲವು ನಿರ್ಬಂಧಗಳನ್ನು ಪಾಲಿಸುವುದು ಬಹಳ ಮುಖ್ಯ ಎಂದು ಶಾಸ್ತ್ರಗಳು ಹೇಳುತ್ತವೆ. ಗರ್ಭಿಣಿಯರು ತಿಳಿಯದೆ ಈ ನಿಯಮಗಳನ್ನು ಉಲ್ಲಂಘಿಸಿದರೆ, ಅದು ತಾಯಿ ಮತ್ತು ಹುಟ್ಟಲಿರುವ ಮಗುವಿನ ಮೇಲೆ ಕೆಟ್ಟ ಪರಿಣಾಮ ಬೀರಬಹುದು. ನಂಬಿಕೆಗಳ ಪ್ರಕಾರ, ಕೆಲವು ನಿಯಮಗಳನ್ನು ಪಾಲಿಸುವುದರಿಂದ ತಾಯಿ ಮತ್ತು ಗರ್ಭಸ್ಥ ಶಿಶು ಇಬ್ಬರೂ ಸುರಕ್ಷಿತವಾಗಿರುತ್ತಾರೆ. ಪಿತೃ ಪಕ್ಷದಲ್ಲಿ ಗರ್ಭಿಣಿ ಮಹಿಳೆಯರು ತಪ್ಪದೆ ಪಾಲಿಸಬೇಕಾದ ಐದು ಪ್ರಮುಖ ನಿಯಮಗಳ ಬಗ್ಗೆ ಈ ಲೇಖನದಲ್ಲಿ ತಿಳಿಸಲಾಗಿದೆ. ಗರ್ಭಿಣಿಯರು ಪಿತೃಪಕ್ಷದಲ್ಲಿ ಈ 5 ಕೆಲಸ ಮಾಡಬಾರದು

**ಹುಟ್ಟದ ಮಗುವಿಗೆ ಹೊಸ ಬಟ್ಟೆ ಖರೀದಿಸಬೇಡಿ:** ಪಿತೃ ಪಕ್ಷದ ಸಂದರ್ಭದಲ್ಲಿ ಗರ್ಭಿಣಿ ಮಹಿಳೆಯರು ಮಾಡುವ ಒಂದು ಸಾಮಾನ್ಯ ತಪ್ಪು ಇದು. ಅದುವೇ ಹುಟ್ಟಲಿರುವ ಮಗುವಿಗೆ ಹೊಸ ಬಟ್ಟೆಗಳನ್ನು ಖರೀದಿಸುವುದು. ಆದರೆ, ಈ ಅವಧಿಯಲ್ಲಿ ಹೊಸ ವಸ್ತುಗಳನ್ನು ಖರೀದಿಸುವುದು ಅಶುಭ ಎಂದು ಹೇಳಲಾಗುತ್ತದೆ. ಒಂದು ವೇಳೆ ಈ ಅವಧಿಯಲ್ಲಿ ಮಗು ಜನಿಸಿದರೂ ಸಹ, ಅದು ಅತ್ಯಂತ ಅದೃಷ್ಟಶಾಲಿ ಎಂದು ಪರಿಗಣಿಸಲಾಗುತ್ತದೆ. ಆದರೆ, ಮಗುವಿಗೆ ಹಳೆಯ ಬಟ್ಟೆಗಳನ್ನೇ ತೊಡಿಸಬೇಕು ಎಂದು ಹಿರಿಯರು ಹೇಳಿದ್ದಾರೆ.

**ಶ್ರಾದ್ಧದ ಅಡುಗೆಯಿಂದ ದೂರವಿರಿ:** ಪಿತೃ ಪಕ್ಷದ ಅವಧಿಯಲ್ಲಿ ಪೂರ್ವಜರಿಗಾಗಿ ತಯಾರಿಸುವ ಆಹಾರಕ್ಕೆ ವಿಶೇಷ ಪ್ರಾಮುಖ್ಯತೆ ಇರುತ್ತದೆ. ಈ ಆಹಾರವನ್ನು ಶ್ರದ್ಧೆಯಿಂದ ತಯಾರಿಸಬೇಕು. ಆದ್ದರಿಂದ, ಗರ್ಭಿಣಿ ಮಹಿಳೆಯರು ಪೂರ್ವಜರ ಹೆಸರಿನಲ್ಲಿ ತಯಾರಿಸುವ ಆಹಾರವನ್ನು ಮುಟ್ಟಬಾರದು ಅಥವಾ ತಯಾರಿಸಬಾರದು. ಅಡುಗೆಮನೆಯಲ್ಲಿ ಈ ಆಹಾರ ತಯಾರಾಗುತ್ತಿರುವಾಗ ಅಲ್ಲಿಗೆ ಹೋಗದಿರುವುದು ಉತ್ತಮ. ಈ ನಿಯಮವನ್ನು ಉಲ್ಲಂಘಿಸಿದರೆ ಪಿತೃಗಳು ಕೋಪಗೊಳ್ಳುತ್ತಾರೆ ಎಂಬ ನಂಬಿಕೆ ಇದೆ.

**ಪಿಂಡದಾನ ಮಾಡುವ ಸ್ಥಳಕ್ಕೆ ಹೋಗಬೇಡಿ :** ಪಿತೃ ಪಕ್ಷದಲ್ಲಿ ಪೂರ್ವಜರಿಗೆ ಪಿಂಡದಾನ ಮಾಡಲಾಗುತ್ತದೆ. ಕೆಲವು ಜನರು ಇದನ್ನು ಮನೆಯಲ್ಲಿಯೇ ಮಾಡಿದರೆ, ಇನ್ನು ಕೆಲವರು ಹರಿದ್ವಾರದಂತಹ ಪವಿತ್ರ ಸ್ಥಳಗಳಲ್ಲಿ ಮಾಡುತ್ತಾರೆ. ಪಿಂಡದಾನವು ಒಂದು ಪವಿತ್ರ ಮತ್ತು ಸೂಕ್ಷ್ಮವಾದ ಕ್ರಿಯೆಯಾಗಿದ್ದು, ಇಲ್ಲಿ ಪೂರ್ವಜರ ಆತ್ಮಗಳು ಉಪಸ್ಥಿತರಿರುತ್ತಾರೆ ಎಂಬ ನಂಬಿಕೆಯಿದೆ. ಗರ್ಭಿಣಿ ಮಹಿಳೆಯರು ಇಂತಹ ಸ್ಥಳಗಳಿಗೆ ಹೋಗುವುದು ಮಗುವಿಗೆ ಹಾನಿಕಾರಕ ಎಂದು ಹೇಳಲಾಗಿದೆ.


**ಮಾಂಸಾಹಾರ ಸೇವನೆ ತ್ಯಜಿಸಿ**

**ಪಿತೃ ಪಕ್ಷದಲ್ಲಿ ಸಾಮಾನ್ಯವಾಗಿ ಎಲ್ಲರೂ ತಾಮಿಸ್ಕ ಆಹಾರ, ಮಾಂಸಾಹಾರ ಮತ್ತು ಮದ್ಯಪಾನವನ್ನು ತ್ಯಜಿಸುವುದು ವಾಡಿಕೆ. ಆದರೆ, ಗರ್ಭಿಣಿ ಮಹಿಳೆಯರಿಗೆ ಈ ನಿಯಮವು ಮತ್ತಷ್ಟು ಮುಖ್ಯವಾಗಿದೆ. ಮಾಂಸಾಹಾರ ಸೇವನೆಯು ಗರ್ಭದಲ್ಲಿರುವ ಮಗುವಿನ ಮೇಲೆ ನಕಾರಾತ್ಮಕ ಪರಿಣಾಮ ಬೀರಬಹುದು ಎಂದು ಹೇಳಾಗುತ್ತದೆ. ಆದ್ದರಿಂದ, ಈ ಅವಧಿಯಲ್ಲಿ ಸಂಪೂರ್ಣ ಸಾತ್ವಿಕ ಆಹಾರವನ್ನು ಸೇವಿಸುವುದು ಉತ್ತಮ.**



ಕೂದಲು ಮತ್ತು ಉಗುರು ಕತ್ತರಿಸಬೇಡಿ ಪಿತೃ ಪಕ್ಷದಲ್ಲಿ ಸಾಮಾನ್ಯವಾಗಿ ಎಲ್ಲರೂ ಕೂದಲು ಮತ್ತು ಉಗುರುಗಳನ್ನು ಕತ್ತರಿಸುವುದನ್ನು ನಿಷಿದ್ಧ. ಆದರೆ, ಗರ್ಭಿಣಿ ಮಹಿಳೆಯರಿಗೆ ಈ ನಿಯಮವು ಇನ್ನಷ್ಟು ಕಠಿಣವಾಗಿರುತ್ತದೆ. ಗರ್ಭಿಣಿಯರು ಇದನ್ನು ತಪ್ಪದೇ ಪಾಲಿಸಬೇಕು. ನಿಮ್ಮ ಗರ್ಭದಲ್ಲಿರುವ ಮಗುವಿಗೆ ಪಿತೃಗಳ ಆಶೀರ್ವಾದ ಸಿಗಬೇಕೆಂದರೆ, ಈ ಅವಧಿಯಲ್ಲಿ ಮೇಲೆ ತಿಳಿಸಿದ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದು ಅತ್ಯಗತ್ಯ. ಈ ಆಚರಣೆಗಳನ್ನು ಅನುಸರಿಸುವುದರಿಂದ ತಾಯಿ ಮತ್ತು ಮಗು ಇಬ್ಬರೂ ಸುರಕ್ಷಿತವಾಗಿರುತ್ತಾರೆ. ದಿನ ಈ ಚಟ್ನಿ ತಿಂದ್ರೆ ಶುಗರ್ ಬರಲ್ಲ, ತೂಕ ಹೆಚ್ಚಾಗಲ್ಲ 5 ನಿಮಿಷದಲ್ಲಿ ಮಾಡಿ ಮುಗಿಸಿ ಒಟ್ಟಾರೆಯಾಗಿ, ಪಿತೃಪಕ್ಷವು ಪಿತೃಗಳಿಗೆ ಸಮರ್ಪಿತವಾದ ಆಧ್ಯಾತ್ಮಿಕ ಕಾಲ. ಪಿತೃ ಪಕ್ಷದ ಈ ನಿಯಮಗಳನ್ನು ಅನುಸರಿಸುವುದರಿಂದ, ಗರ್ಭಿಣಿ ಮಹಿಳೆಯರು ತಮ್ಮ ಮತ್ತು ತಮ್ಮ ಮಗುವಿನ ಯೋಗಕ್ಷೇಮವನ್ನು ಕಾಪಾಡಿಕೊಳ್ಳುವುದರ ಜೊತೆಗೆ, ಪಿತೃಗಳ ಆಶೀರ್ವಾದವನ್ನು ಸಹ ಪಡೆಯಬಹುದು.

# ಕಂಪನಿಗಳ ನಿರ್ದೇಶಕರ ಹೆಸರಿನಲ್ಲಿವೆ 19,690 ಬಿಪಿಎಲ್ ಕಾರ್ಡ್‌ಗಳು!




• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ವಿತರಿಸಲಾಗಿರುವ 1.17 ಕೋಟಿ ಬಿಪಿಎಲ್ ಕಾರ್ಡ್‌ಗಳ ಪೈಕಿ ಶಂಕಾಸ್ಪದವಾಗಿರುವ 12 ಲಕ್ಷಕ್ಕೂ ಅಧಿಕ ಪಡಿತರ ಚೀಟಿಗಳನ್ನು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಪತ್ತೆ ಮಾಡಿದೆ.

ಈ ಶಂಕಾಸ್ಪದ ಕಾರ್ಡ್‌ಗಳ ಪೈಕಿ 19,690 ಕಾರ್ಡ್‌ಗಳು ನಾನಾ ಕಂಪನಿಗಳ ನಿರ್ದೇಶಕರ ಹೆಸರಿನಲ್ಲಿರುವುದು ಅಚ್ಚರಿ ಮೂಡಿಸಿದೆ. ಅಲ್ಲದೇ ವಾರ್ಷಿಕ 25 ಲಕ್ಷ ರೂ. ಗಿಂತ ಅಧಿಕ ವಹಿವಾಟು ನಡೆಸುತ್ತಿರುವ 2,684 ಮಂದಿ ಬಳಿಯೂ ಬಿಪಿಎಲ್ ಕಾರ್ಡ್‌ಗಳಿವೆ. ಕೆಲವರು ಮೃತಪಟ್ಟವರ ಹೆಸರು ಮತ್ತು ನಕಲಿ ಕಾರ್ಡ್ ಬಳಸಿ ಪ್ರತಿ ತಿಂಗಳು ನ್ಯಾಯಬೆಲೆ ಅಂಗಡಿಗಳಲ್ಲಿ ಉಚಿತವಾಗಿ ಪಡಿತರ ಪಡೆಯುತ್ತಿರುವುದು ಕೂಡ ಕಂಡುಬಂದಿದೆ. ರಾಷ್ಟ್ರೀಯ ಆಹಾರ ಭದ್ರತಾ ಕಾಯಿದೆ (ಎನ್‌ಎಫ್‌ಎಸ್‌ಎ) ಪ್ರಕಾರ ಗ್ರಾಮೀಣ ಪ್ರದೇಶದಲ್ಲಿ ಶೇ. 76.04, ನಗರ ಪ್ರದೇಶಗಳಲ್ಲಿ ಶೇ. 49.36 ಸೇರಿ ಒಟ್ಟು 3,58,87,666 ಫಲಾನುಭವಿಗಳಿಗೆ 1,03,70,669 ಬಿಪಿಎಲ್ ಕಾರ್ಡ್ ನೀಡಬೇಕೆಂಬ ನಿಯಮವಿದೆ. ಆದರೆ, ರಾಜ್ಯದಲ್ಲಿ 3,93,29,981 ಫಲಾನುಭವಿಗಳಿಗೆ 1,16,51,209 ಬಿಪಿಎಲ್ ಪಡಿತರ ಚೀಟಿ ನೀಡಲಾಗಿದೆ. ನಿಗದಿಗಿಂತ ಹೆಚ್ಚುವರಿಯಾಗಿ 14 ಲಕ್ಷ ಬಿಪಿಎಲ್ ಕಾರ್ಡ್‌ಗಳನ್ನು ವಿತರಿಸಲಾಗಿದೆ. ವಾರ್ಷಿಕ 1.20 ಲಕ್ಷ ರೂ.ಗಿಂತ ಹೆಚ್ಚು ವರಮಾನ ಹೊಂದಿರುವ, ಕಾರು ಹೊಂದಿರುವ, ಆದಾಯ ತೆರಿಗೆ ಪಾವತಿಸುವ, ಏಳೂವರೆ ಎಕರೆ ಒಣ ಅಥವಾ ನೀರಾವರಿ ಭೂಮಿ ಹೊಂದಿರುವವರು, ಅನುದಾನಿತ/ ಅನುದಾನರಹಿತ ಶಾಲಾ-ಕಾಲೇಜು ನೌಕರರು, ನೋಂದಾಯಿತ ಗುತ್ತಿಗೆದಾರರು, ಬಹುರಾಷ್ಟ್ರೀಯ ಕಂಪನಿ, ಕೈಗಾರಿಕೆಗಳಲ್ಲಿಉದ್ಯೋಗದಲ್ಲಿರುವವರು ಹಾಗೂ ಸ್ವಂತಕ್ಕಾಗಿ ಒಂದು ಆಟೊರಿಕ್ಷಾ ಹೊರತುಪಡಿಸಿ 100 ಸಿಸಿ ಮೇಲ್ಪಟ್ಟ ಇಂಧನ ಚಾಲಿತ ದ್ವಿಚಕ್ರ, ತ್ರಿಚಕ್ರ, ಕಾರು ಹೊಂದಿರುವವರು ಸರಕಾರ ಮಾನದಂಡ ಉಲ್ಲಂಘಿಸಿ, ನಿಯಮಬಾಹಿರವಾಗಿ ಬಿಪಿಎಲ್ ಕಾರ್ಡ್ ಪಡೆದಿದ್ದಾರೆ.

**ಹೊರ ರಾಜ್ಯದವರಿಗೂ ಬಿಪಿಎಲ್ ವಿತರಣೆ:** ರಾಜ್ಯದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಹೊರರಾಜ್ಯದವರು ನೆಲೆಸಿದ್ದಾರೆ. ಇವರಲ್ಲಿ 57,864 ಮಂದಿ ನಕಲಿ ಬಿಪಿಎಲ್ ಮಾಡಿಸಿಕೊಂಡಿದ್ದಾರೆ. ಇವರೆಲ್ಲರೂ ಪ್ರತಿ ತಿಂಗಳು ನ್ಯಾಯಬೆಲೆ ಅಂಗಡಿಗಳಲ್ಲಿ ರೇಷನ್ ಪಡೆಯುತ್ತಿರುವುದರಿಂದ ಸರಕಾರಕ್ಕೆ ಕೋಟ್ಯಂತರ ರೂ. ನಷ್ಟವಾಗುತ್ತಿದೆ. ಬೋಗಸ್ ಕಾರ್ಡ್ ಪತ್ತೆ, ಪಡಿತರ ಸೋರಿಕೆ ತಡೆಯುವ ಉದ್ದೇಶದಿಂದ ಇಲಾಖೆಯು ರೇಷನ್ ಕಾರ್ಡ್‌ಗೆ ಆಧಾರ್ ದೃಢೀಕರಣ (ಇ-ಕೆವೈಸಿ) ಜೋಡಣೆ ಮಾಡುವುದನ್ನು ಕಡ್ಡಾಯಗೊಳಿಸಿದೆ. 2019ರ ಜು.19ರಂದು ಪಡಿತರ ಕಾರ್ಡ್‌ನ ಪ್ರತಿ ಸದಸ್ಯರು ಇ-ಕೆವೈಸಿ ಮಾಡಿಸಿಕೊಳ್ಳಬೇಕು ಎಂದು ಸುತ್ತೋಲೆ ಹೊರಡಿಸಿತ್ತು. ಈ ಹಿನ್ನೆಲೆಯಲ್ಲಿ ಶೇ.75ರಷ್ಟು ಕಾರ್ಡ್‌ದಾರರು ಇ-ಕೆವೈಸಿ ಮಾಡಿಸಿಕೊಂಡಿದ್ದರು. ಇದೀಗ ಪಡಿತರ ಚೀಟಿ ಹೊಂದಿರುವ ಕುಟುಂಬಗಳು ಕಡ್ಡಾಯವಾಗಿ ಇ-ಕೆವೈಸಿ ಮಾಡಿಸಬೇಕಿದೆ. 6,16,196 ಕಾರ್ಡ್‌ದಾರರು ಇ-ಕೆವೈಸಿ ಮಾಡಿಸಿಲ್ಲ ಎಂದು ಇಲಾಖೆ ಅಧಿಕಾರಿಯೊಬ್ಬರು ಮಾಹಿತಿ ನೀಡಿದರು.

# ಕೂದಲಿಗೆ ಬಾಳೆಹಣ್ಣಿನ ಹೇರ್‌ಪ್ಯಾಕ್ ಹಚ್ಕೊಂಡ್ರೆ ಎಷ್ಟೆಲ್ಲಾ ಲಾಭಗಳಿವೆ ನೋಡಿ



ಬಾಳೆಹಣ್ಣಿನ ಹೇರ್‌ಪ್ಯಾಕ್ ಹಚ್ಚುವುದರಿಂದ ಕೂದಲಿನ ಬೆಳವಣಿಗೆ ಮಾತ್ರವಲ್ಲದೆ ಕೂದಲಿಗೆ ಸಂಬಂಧಿಸಿದ ನಾನಾ ಸಮಸ್ಯೆಗಳಿಂದ ಪರಿಹಾರ ಸಿಗಬಲ್ಲದು. ಬಾಳೆಹಣ್ಣಿನ ಜೊತೆ ಯಾವುದನ್ನೆಲ್ಲಾ ಮಿಕ್ಸ್ ಮಾಡಿ ಕೂದಲಿಗೆ ಹಚ್ಚಬಹುದು ಎನ್ನುವುದನ್ನು ತಿಳಿಯೋಣ. ತಾಜಾ ಬಾಳೆಹಣ್ಣುಗಳು ಪೌಷ್ಟಿಕಾಂಶದಿಂದ ಸಮೃದ್ಧವಾಗಿವೆ. ಬಾಳೆಹಣ್ಣು ನಾಲಗೆಗೆ ರುಚಿಯನ್ನು ನೀಡುವುದು ಮಾತ್ರವಲ್ಲ ಕೂದಲಿನ ಬೆಳವಣಿಗೆಗೂ ಉತ್ತಮವಾಗಿದೆ. ಬಾಳೆಹಣ್ಣುಗಳು ನಿಮ್ಮ ಕೂದಲಿಗೆ ವಿನ್ಯಾಸ, ದಪ್ಪ ಮತ್ತು ಹೊಳಪನ್ನು ನೀಡಲು ಸಹಕಾರಿಯಾಗಿದೆ. ಬಾಳೆಹಣ್ಣುಗಳು ಸಿಲಿಕಾ ಎಂಬ ಖನಿಜ ಅಂಶವನ್ನು ಹೊಂದಿರುತ್ತವೆ, ಇದು ನಿಮ್ಮ ದೇಹವು ಕಾಲಜನ್ ಅನ್ನು ಸಂಶ್ಲೇಷಿಸಲು ಸಹಾಯ ಮಾಡುತ್ತದೆ ಮತ್ತು ನಿಮ್ಮ ಕೂದಲನ್ನು ಬಲವಾಗಿ ಮತ್ತು ದಪ್ಪವಾಗಿಸುತ್ತದೆ.

**ಕೂದಲು ಬೆಳವಣಿಗೆಗೆ ಬಾಳೆಹಣ್ಣಿನ ಹೇರ್ ಮಾಸ್ಕ್**

ಬಾಳೆಹಣ್ಣಿನಲ್ಲಿರುವ ಉತ್ಕರ್ಷಣ ನಿರೋಧಕಗಳು ನಿಮ್ಮ ನೆತ್ತಿ ಮತ್ತು ಕೂದಲನ್ನು ಬಲವಾದ ರಕ್ಷಣಾ ವ್ಯವಸ್ಥೆಯೊಂದಿಗೆ ತುಂಬಿಸಬಹುದು ಮತ್ತು ಆಕ್ಸಿಡೇಟಿವ್ ಒತ್ತಡವನ್ನು ಕಡಿಮೆ ಮಾಡಬಹುದು. ಕೂದಲು ವಯಸ್ಸಾದಂತೆ ಕಾಣಲು ಪ್ರಮುಖ ಕಾರಣ. ಬಾಳೆಹಣ್ಣಿನ ಮಾಸ್ಕ್‌ಗಳು ಕಾಲಾನಂತರದಲ್ಲಿ, ಕೂದಲು ಕಿರುಚೀಲಗಳು ಬಲಗೊಳ್ಳಲು ಕಾರಣವಾಗಬಹುದು ಮತ್ತು ಕೂದಲ ಬೆಳವಣಿಗೆಗೆ ಸಹಾಯ ಮಾಡಬಲ್ಲದು.

**ತಲೆಹೊಟ್ಟು ನಿವಾರಣೆಗೆ ಬಾಳೆಹಣ್ಣಿನ ಹೇರ್ ಮಾಸ್ಕ್:** ಶತಮಾನಗಳಿಂದ, ಬಾಳೆಹಣ್ಣಿನ ಸಿಪ್ಪೆ, ಎಲೆ, ಹೂವು ಮತ್ತು ಹಣ್ಣನ್ನು ವಿವಿಧ ಸಂಸ್ಕೃತಿಗಳಲ್ಲಿ ವಿವಿಧ ಕಾಯಿಲೆಗಳಿಗೆ ಚಿಕಿತ್ಸೆಯಾಗಿ ಬಳಸಲಾಗುತ್ತಿದೆ. ಬಾಳೆಹಣ್ಣಿನ ವಿವಿಧ ಭಾಗಗಳ ಸಾರಗಳು ಉತ್ಕರ್ಷಣ ನಿರೋಧಕ ಮತ್ತು ಬ್ಯಾಕ್ಟೀರಿಯಾ ವಿರೋಧಿ ಗುಣಗಳನ್ನು ಹೊಂದಿವೆ ಎಂದು ಸಂಶೋಧನೆ ತಿಳಿಸಿದೆ.

ತಲೆಹೊಟ್ಟು ಲಕ್ಷಣಗಳು ಕಿರಿಕಿರಿ, ಶುಷ್ಕತೆ ಹಾಗೂ ಶಿಲೀಂಧ್ರ ಮತ್ತು ಬ್ಯಾಕ್ಟೀರಿಯಾದ ರೋಗಕಾರಕಗಳಿಂದ ಉಂಟಾಗಬಹುದು. ಬಾಳೆಹಣ್ಣಿನ ಮಾಸ್ಕ್‌ಗಳನ್ನು ನಿಮ್ಮ ನೆತ್ತಿಗೆ ಹಚ್ಚುವುದರಿಂದ ತೇವಾಂಶವನ್ನು ಸೇರಿಸಬಹುದು, ಶುಷ್ಕತೆಯನ್ನು ಕಡಿಮೆ ಮಾಡಬಹುದು, ನಿಮ್ಮ ತಲೆಹೊಟ್ಟು ಲಕ್ಷಣಗಳಿಗೆ ಕಾರಣವಾಗುವ ಬ್ಯಾಕ್ಟೀರಿಯಾಗಳಿಂದ ನಿಮ್ಮ ನೆತ್ತಿಯನ್ನು ರಕ್ಷಿಸಬಹುದು.



**ಬಾಳೆಹಣ್ಣು ಮತ್ತು ಮೊಸರಿನ ಹೇರ್ ಪ್ಯಾಕ್:** ಈ ಪ್ಯಾಕ್ ಒಣ ಸುರುಳಿಯಾಕಾರದ ಕೂದಲಿಗೆ ಉತ್ತಮವಾಗಿದೆ. ಬಾಳೆಹಣ್ಣಿನಲ್ಲಿರುವ ತೇವಾಂಶ ಮತ್ತು ಮೊಸರಿನಲ್ಲಿರುವ ಲ್ಯಾಕ್ಟಿಕ್ ಆಮ್ಲವು ಕೂದಲನ್ನು ಮೃದು ಮತ್ತು ನಯವಾಗಿಸುತ್ತದೆ.

**ಬಾಳೆಹಣ್ಣು ಮತ್ತು ಜೇನುತುಪ್ಪದ ಹೇರ್ ಪ್ಯಾಕ್:** ಜೇನುತುಪ್ಪವು ನೈಸರ್ಗಿಕ ಮಾಯಿಶ್ಚರೈಸರ್ ಆಗಿ ಕಾರ್ಯನಿರ್ವಹಿಸುತ್ತದೆ. ಬಾಳೆಹಣ್ಣು ಜೇನುತುಪ್ಪದ ಹೇರ್ ಮಾಸ್ಕ್ ಅನ್ನು ಹಚ್ಚುವುದರಿಂದ ಕೂದಲಿಗೆ ನೈಸರ್ಗಿಕ ಹೊಳಪನ್ನು ನೀಡುತ್ತದೆ ಮತ್ತು ಕೂದಲು ಒಡೆಯುವುದನ್ನು ಕಡಿಮೆ ಮಾಡುತ್ತದೆ.

**ಬಾಳೆಹಣ್ಣು ಮತ್ತು ಅಲೋವೆರಾ ಹೇರ್ ಪ್ಯಾಕ್**

ಅಲೋವೆರಾದಲ್ಲಿರುವ ಆಂಟಿ ಆಕ್ಸಿಡೆಂಟ್‌ಗಳು ಮತ್ತು ವಿಟಮಿನ್‌ಗಳು ಹಾನಿಗೊಳಗಾದ ಕೂದಲನ್ನು ಸರಿಪಡಿಸುತ್ತದೆ. ಬಾಳೆಹಣ್ಣು ಮತ್ತು ಅಲೋವೆರಾ ಹೇರ್ ಪ್ಯಾಕ್ ಅನ್ನು ಹಚ್ಚುವುದರಿಂದ ಕೂದಲು ಆರೋಗ್ಯಕರ ಮತ್ತು ಸಿಲ್ಕಿಯಾಗಿರುತ್ತದೆ.

**ಬಾಳೆಹಣ್ಣು ಮತ್ತು ತೆಂಗಿನ ಎಣ್ಣೆಯ ಹೇರ್ ಪ್ಯಾಕ್**

ತೆಂಗಿನ ಎಣ್ಣೆ ಕೂದಲಿನ ಬೇರುಗಳನ್ನು ಆಳವಾಗಿ ಪೋಷಿಸುತ್ತದೆ. ಬಾಳೆಹಣ್ಣಿನೊಂದಿಗೆ ಬೆರೆಸಿ ಹಚ್ಚುವುದರಿಂದ ಕೂದಲು ಬಲಗೊಳ್ಳುತ್ತದೆ ಮತ್ತು ಕೂದಲಿನ ಬೆಳವಣಿಗೆಯೂ ಹೆಚ್ಚಾಗುತ್ತದೆ.

**ಬಾಳೆಹಣ್ಣು ಮತ್ತು ಮೊಟ್ಟೆಯ ಹೇರ್ ಪ್ಯಾಕ್**

ಮೊಟ್ಟೆಗಳಲ್ಲಿ ಪ್ರೋಟೀನ್ ಸಮೃದ್ಧವಾಗಿದ್ದು ಇದು ಹಾನಿಗೊಳಗಾದ ಕೂದಲನ್ನು ಸರಿಪಡಿಸುತ್ತದೆ ಮತ್ತು ಅವುಗಳನ್ನು ಬಲಗೊಳಿಸುತ್ತದೆ. ಬಾಳೆಹಣ್ಣು, ಮೊಟ್ಟೆಯ ಫೇಸ್ ಮಾಸ್ಕ್ ಅನ್ನು ಹಚ್ಚುವುದರಿಂದ ಕೂದಲು ನಯವಾಗಿ ಮತ್ತು ಹೊಳೆಯುವಂತೆ ಮಾಡುತ್ತದೆ.

### ರಾಜ್ಯದಲ್ಲಿ ಅಭಿವೃದ್ಧಿ ಕುಂಠಿತವಾಗಿದೆ, ಕಾಮಗಾರಿಗಳಿಗೆ ಅನುದಾನ ಬಿಡುಗಡೆಯಾಗುತ್ತಿಲ್ಲ, ಎಲ್ಲೆಡೆ ಭ್ರಷ್ಟಾಚಾರ ತುಂಬಿತುಳುಕುತ್ತಿದೆ

# ಆಡಳಿತ ವೈಫಲ್ಯ ಮುಚ್ಚಿಕೊಳ್ಳಲು ವಿವಾದ ಸೃಷ್ಟಿ: ವಿಶ್ವೇಶ್ವರ ಹೆಗಡೆ ಕಾಗೇರಿ

• **ಉದಯವಾಹಿನಿ ದಾವಣಗೆರೆ**

ರಾಜ್ಯ ಸರ್ಕಾರದ ಆಡಳಿತದ ವೈಫಲ್ಯಗಳನ್ನು ಮುಚ್ಚಿಕೊಳ್ಳಲು ಕಾಂಗ್ರೆಸ್ ಸಾಲುಸಾಲು ವಿವಾದಗಳನ್ನು ಸೃಷ್ಟಿಸುತ್ತಿದೆ. ಈ ಮೂಲಕ ಜನರ ಗಮನವನ್ನು ಬೇರೆಡೆ ಸೆಳೆಯುವ ಪ್ರಯತ್ನ ಮಾಡುತ್ತಿದೆ ಎಂದು ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಆರೋಪಿಸಿದರು.

ರಾಜ್ಯದಲ್ಲಿ ಅಭಿವೃದ್ಧಿ ಕುಂಠಿತವಾಗಿದೆ. ಕಾಮಗಾರಿಗಳಿಗೆ ಅನುದಾನ ಬಿಡುಗಡೆಯಾಗುತ್ತಿಲ್ಲ. ಎಲ್ಲೆಡೆ ಭ್ರಷ್ಟಾಚಾರ ತುಂಬಿತುಳುಕುತ್ತಿದೆ. ಅತಿವೃಷ್ಟಿಯಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಆಡಳಿತದ ಮೇಲೆ ಹಿಡಿತ ಕಳೆದುಕೊಂಡ ಮುಖ್ಯಮಂತ್ರಿ ಸಿದ್ದರಾಮಯ್ಯ, ದಿನಗಳನ್ನು ದೂಡುತ್ತಿದ್ದಾರೆ. ಕುರ್ಚಿ ಉಳಿಸಿಕೊಳ್ಳಲು ಬೇಜವಾಬ್ದಾರಿ ಹೇಳಿಕೆ ನೀಡುತ್ತಿದ್ದಾರೆ' ಎಂದು ಬುಧವಾರ ಸುದ್ದಿಗೋಷ್ಠಿಯಲ್ಲಿ ಅಸಮಾಧಾನ ಹೊರಹಾಕಿದರು. ಬಹುಸಂಖ್ಯಾತ ಹಿಂದೂಗಳ ಭಾವನೆಯನ್ನು ರಾಜ್ಯ ಸರ್ಕಾರ ಧಿಕ್ಕರಿಸಿದೆ. ಧರ್ಮಸ್ಥಳ, ದಸರಾ ಮಹೋತ್ಸವ ಹಾಗೂ ಚಾಮುಂಡಿ ಬೆಟ್ಟದ ವಿಚಾರದಲ್ಲಿ ಇದು ನಿರೂಪಿತವಾಗಿದೆ.

ಸಾಮಾಜಿಕ ಸಾಮರಸ್ಯ ಕದಡುವ ಅಂತರರಾಷ್ಟ್ರೀಯ ಮಟ್ಟದ ಷಡ್ಯಂತ್ರದ ಭಾಗವಾಗಿ ಸರ್ಕಾರ ನಡೆದುಕೊಳ್ಳುತ್ತಿದೆ. ಸಮಾಜ ಒಡೆದರೆ ಡ್ರಗ್ಸ್ ಮಾಫಿಯಾಗೆ ಅನುಕೂಲವಾಗಲಿದೆ' ಎಂದರು. 'ಮುಖ್ಯಮಂತ್ರಿ ಸಿದ್ದರಾಮಯ್ಯ ಎಡಪಂಥೀಯ ಸಂಘಟನೆಗಳ ಕೈಗೊಂಬೆಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಧರ್ಮಸ್ಥಳ ವಿಚಾರದಲ್ಲಿ ಕೆಲ ಸಂಘಟನೆ ಹಾಗೂ ನಾಯಕರ ಒತ್ತಡಕ್ಕೆ ಮಣಿದು ವಿಶೇಷ ತನಿಖಾ ತಂಡ (ಎಸ್ಐಟಿ) ರಚಿಸಿದ್ದಾರೆ. ಹಿಂದೂಗಳ ಪವಿತ್ರ ಕ್ಷೇತ್ರವಾದ ಧರ್ಮಸ್ಥಳದ ವಿರುದ್ಧ ಅಂತರರಾಷ್ಟ್ರೀಯ ಮಟ್ಟದಲ್ಲಿ ಟೂಲ್‌ಕಿಟ್ ರೂಪಿಸಲಾಗಿದೆ. ಹಿಂದೂಗಳ ವಿರುದ್ಧದ ಇಂತಹ ಷಡ್ಯಂತ್ರಗಳಿಗೆ ಫಲ ಸಿಗದು' ಎಂದು ಆಕ್ರೋಶ ವ್ಯಕ್ತಪಡಿಸಿದರು. ಗಣೇಶೋತ್ಸವದ ವಿಚಾರದಲ್ಲಿ ಸಂಘಪರಿವಾರದ ನಾಯಕರಿಗೆ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಬೆದರಿಕೆ ಹಾಕಿದ್ದಾರೆ. ಕೆಲ ಮುಖಂಡರನ್ನು ಗಡಿಪಾರು ಮಾಡುವ ಹುನ್ನಾರ ನಡೆಸಿದ್ದಾರೆ.

ಇಂತಹ ಪ್ರಯತ್ನಕ್ಕೆ ಕೈಹಾಕಿದರೆ ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಕೆ ನೀಡಿದರು. ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಎನ್.ರಾಜಶೇಖರ್, ಮುಖಂಡರಾದ ಧನಂಜಯ ಕಡ್ಲೆಬಾಳು, ಕಲ್ಲೇಶ್, ಹಾಜರಿದ್ದರು.

> ಬಾಲಿಶ ಹೇಳಿಕೆಗಳ ಮೂಲಕ ರಾಹುಲ್ ಗಾಂಧಿ ನಗೆಪಾಟಲಿಗೆ ಈಡಾಗಿದ್ದಾರೆ. ಲೋಕಸಭೆಯ ವಿರೋಧ ಪಕ್ಷದ ಸ್ಥಾನದ ಗಾಂಭೀರ್ಯತೆಯನ್ನು ಹಾಳು ಮಾಡುತ್ತಿದ್ದಾರೆ.
> –ವಿಶ್ವೇಶ್ವರ ಹೆಗಡೆ ಕಾಗೇರಿ, ಸಂಸದ

**ಮಳೆ ಮಾಪನ ದುರಸ್ತಿಗೆ ಆಗ್ರಹ**

'ರಾಜ್ಯದಲ್ಲಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿರುವ ಮಳೆ ಮಾಪನ ಕೇಂದ್ರಗಳು ಹಾಳಾಗಿವೆ. ಇದರಿಂದ ಮಳೆಯ ಕುರಿತು ಅಧಿಕೃತ ದಾಖಲೆ ಲಭ್ಯವಾಗದೇ ರೈತರಿಗೆ ಬೆಳೆವಿಮೆ ಕೈತಪ್ಪುತ್ತಿದೆ. ರೈತರ ಬಗೆಗೆ ಕಾಳಜಿ ಇದ್ದರೆ ಮೊದಲು ಮಳೆಮಾಪನ ಕೇಂದ್ರಗಳನ್ನು ದುರಸ್ತಿಗೊಳಿಸಿ' ಎಂದು ವಿಶ್ವೇಶ್ವರ ಹೆಗಡೆ ಕಾಗೇರಿ ಆರೋಪಿಸಿದರು. ರೈತರ ಹಿತಕಾಯಲು ರಾಜ್ಯ ಸರ್ಕಾರ ಬದ್ಧವಾಗಿದೆ. ಅಡಿಕೆ ಬೆಳೆಯ ವಿಚಾರದಲ್ಲಿ ಸೃಷ್ಟಿಯಾಗಿರುವ ಸಮಸ್ಯೆಗಳನ್ನು ಪರಿಹರಿಸಲು ಹಲವು ರೀತಿಯ ಪ್ರಯತ್ನಗಳನ್ನು ಮಾಡುತ್ತಿದೆ. ಆದರೆ, ರಾಜ್ಯ ಸರ್ಕಾರ ತನ್ನ ಜವಾಬ್ದಾರಿಯನ್ನು ನಿರ್ವಹಿಸುತ್ತಿಲ್ಲ. ತೋಟಗಾರಿಕಾ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಅಡಿಕೆ ಬೆಳೆಗಾರರ ಹಿತಕಾಪಾಡುವ ಪ್ರಯತ್ನಕ್ಕೆ ಮುಂದಾಗಬೇಕು' ಎಂದು ಆಗ್ರಹಿಸಿದರು.



**ಹೊಸ ಜಾತಿ ಸೃಷ್ಟಿ**

ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯನ್ನು ತರಾತುರಿಯಲ್ಲಿ ನಡೆಸಲು ರಾಜ್ಯ ಸರ್ಕಾರ ಮುಂದಾಗಿದೆ. ಜಾತಿ ನಿರ್ಮೂಲನೆ ಪ್ರತಿಪಾದಿಸುವವರೇ ಹೊಸ ಜಾತಿಗಳನ್ನು ಸೃಷ್ಟಿಸಿ ಸಮಾಜದಲ್ಲಿ ಗೊಂದಲ ಸೃಷ್ಟಿಸುವ ಹುನ್ನಾರ ನಡೆಸಿದ್ದಾರೆ' ಎಂದು ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಆರೋಪಿಸಿದರು. ಕೇಂದ್ರ ಸರ್ಕಾರ ಜಾತಿ ಜನಗಣತಿ ನಡೆಸುತ್ತಿದೆ. ಈ ಗಣತಿ ಅಧಿಕೃತ ದಾಖಲೆಯಾಗಲಿದೆ. ರಾಜ್ಯ ಸರ್ಕಾರ ಹಿಂದುಳಿದ ವರ್ಗಗಳನ್ನು ಮತ ಬ್ಯಾಂಕ್ ಮಾಡಿಕೊಳ್ಳಲು ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯನ್ನು 15 ದಿನಗಳಲ್ಲಿ ಮುಗಿಸಲು ಮುಂದಾಗಿದೆ. 1,400 ಜಾತಿಗಳನ್ನು ಹೆಸರಿಸಿ ಸಾಮರಸ್ಯ ಹಾಳುಮಾಡುತ್ತಿದೆ' ಎಂದು ಅಸಮಾಧಾನ ವ್ಯಕ್ತಪಡಿಸಿದರು.'ದೇಶದಲ್ಲಿ ಕಾನೂನುಬದ್ಧ ಧರ್ಮಾಂತರಕ್ಕೆ ಅವಕಾಶವಿದೆ. ಹೊಸ ಧರ್ಮ ಸ್ವೀಕರಿಸಿದವರು ಹಳೆಯ ಜಾತಿ, ಧರ್ಮ ಉಲ್ಲೇಖಿಸುವಂತಿಲ್ಲ. ಆದರೂ, ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಗೆ ಮಾಡಿಕೊಳ್ಳುತ್ತಿರುವ ಸಿದ್ಧತೆಯಲ್ಲಿ ಒಕ್ಕಲಿಗ ಕ್ರಿಶ್ಚಿಯನ್, ಕುರುಬ ಕ್ರಿಶ್ಚಿಯನ್, ವೀರಶೈವ ಕ್ರಿಶ್ಚಿಯನ್‌ನಂತಹ ಜಾತಿಗಳನ್ನು ಉಲ್ಲೇಖಿಸಲಾಗಿದೆ. ಇದನ್ನು ಯಾವುದೇ ಕಾರಣಕ್ಕೂ ಒಪ್ಪಲು ಸಾಧ್ಯವಿಲ್ಲ' ಎಂದರು.

## ಪತ್ರಕರ್ತರ ಹಿತ ಕಾಯಲು ನಾನು ಬದ್ಧ: ಶಾಸಕ ಎನ್.ಹೆಚ್.ಕೋನರೆಡ್ಡಿ

• **ಉದಯವಾಹಿನಿ ನವಲಗುಂದ**

ರಾಜಕೀಯ ಜೀವನದಲ್ಲಿ ನಾನು ಭವಿಷ್ಯ ಕಾಣಲು ಪತ್ರಕರ್ತರ ನಿಸ್ವಾರ್ಥ ಕೊಡುಗೆ ಅಪಾರವಾದದ್ದು, ಪತ್ರಕರ್ತರ ಹಿತ ಕಾಯಲು ನಾನು ಬದ್ಧ ಎಂದು ಶಾಸಕ ಎನ್.ಹೆಚ್.ಕೋನರೆಡ್ಡಿ ಹೇಳಿದರು. ಪಟ್ಟಣದ ತಾಲ್ಲೂಕಾ ಪಂಚಾಯತ್ ಸಭಾಭವನದಲ್ಲಿ ತಾಲ್ಲೂಕು ಕಾರ್ಯನಿರತ ಪತ್ರಕರ್ತರ ಹಾಗೂ ಪತ್ರಿಕಾ ವಿತರಕರ ಸಂಘ ವತಿಯಿಂದ ಆಯೋಜಿಸಲಾದ ಪತ್ರಕರ್ತರ ಮತ್ತು ವಿತರಕರ ದಿನಾಚಾರಣೆಯನ್ನು ಉದ್ಘಾಟಿಸಿ ಮಾತನಾಡಿದ ಅವರು ಸಂವಿಧಾನದ ನಾಲ್ಕನೇ ಅಂಗವಾಗಿರುವ ಪತ್ರಿಕಾರಂಗ ಸರ್ಕಾರ ಮಟ್ಟದಲ್ಲಿ ಉತ್ತಮ ಆಡಳಿತಕ್ಕೆ ನಿರ್ಮಾಣಕ್ಕೆ ಪತ್ರಿಕೆಗಳ ಪಾತ್ರ ದೊಡ್ಡದು. ಪತ್ರಕರ್ತರನ್ನು ನಾನು ಬಹಳ ಸನಿಹದಲ್ಲಿ ಕಂಡಿದ್ದು ಅವರ ಸಾಮಾಜಿಕ ಸೇವೆಗೆ ಚಿರಋಣಿ ಸ್ಥಳೀಯ ಪತ್ರಕರ್ತರಿಗೆ ಕೈಲಾದಷ್ಟು ಅವರಿಗೆ ಸೌಲಭ್ಯ ನೀಡಲು ಪ್ರಮಾಣಬದ್ದಾನಗುವೆ ಎಂದು ಹೇಳಿದರು.

ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಲೋಚಣೇಶ ಹೂಗಾರ ಮಾತನಾಡಿ, ಪತ್ರಕರ್ತರು ಯಾವಾಗಲೂ ಸತ್ಯದ ಪರವಾಗಿ ಇರಬೇಕಿದೆ. ಇದರಿಂದಾಗಿ ಸಮಾಜದಲ್ಲಿ ಬದಲಾವಣೆ ಕಾಣಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಮಾಧ್ಯಮ ಅಕಾಡಮ ಸದಸ್ಯರಾದ ಅಬ್ಬಾಸ ಮುಲ್ಲಾ, ಹಾಗು ಕಾರ್ಯದರ್ಶಿ ವಿರೇಶ ಹಂಡಗಿ ಮಾತನಾಡಿ ಪತ್ರಕರ್ತ ಕಾರ್ಯ ವೈಖರಿ ಮತ್ತು ನಡೆದ ಬಂದ ದಾರಿ ಕುರಿತು ವಿವರಿಸಿ ಸಲಹೆ ನೀಡಿದರು.

ಇದೇ ಸಂದರ್ಭದಲ್ಲಿ ಗುಡಿಸಾಗರ ಗ್ರಾಪಂ ಅಧ್ಯಕ್ಷೆ ರತ್ನವ್ವಾ ಗುಡಸಲಮನಿ, ಮುಖಂಡರಾದ ಶ್ರೀಶೈಲ ಮೂಲಿಮನಿ, ವರ್ದಮಾನಗೌಡ ಹಿರೆಗೌಡರ, ಅಣ್ಣಪ್ಪ ಬಾಗಿ, ವಿತರಕರ ಸಂಘದ ಅಧ್ಯಕ್ಷ ಶಿವು ಹಲಗಿ ಹಾಗು ಕಾರ್ಯದರ್ಶಿ ನಾಗರಾಜ ಕುಲಕರ್ಣಿ ಸೇರಿದಂತೆ ಕಾನಿಪ ಸಂಘದ ಜಿಲ್ಲಾ ಅಧ್ಯಕ್ಷರು ಉಪಾಧ್ಯಕ್ಷರು ಹಾಗೂ ಕಾರ್ಯದರ್ಶಿ ಸೇರಿದಂತೆ ಸದಸ್ಯರನ್ನು ಸನ್ಮಾನಿಸಿ ಗೌರವಿಸಲಾಯಿತು.


ಉದಯವಾಹಿನಿ ಚಿತ್ರ

> ಇಂದಿನ ಪತ್ರಕರ್ತರಲ್ಲಿ ಭಿನ್ನಾಭಿಪ್ರಾಯ ತೋರದೆ ಒಗ್ಗಟ್ಟಿನಲ್ಲಿ ಪತ್ರಿಕೆ ಬಲವನ್ನು ತೋರಿಸಬೇಕು. ಇಂದಿಗೂ ಜನಸಾಮಾನ್ಯನ ಸಮಸ್ಯೆಗಳಿಗೆ, ಅಸಹಾಯಕತೆಗೆ ದನಿ ಆಗುತ್ತಿರುವುದು ಪತ್ರಿಕೆಗಳು ಮಾತ್ರ. ಪತ್ರಿಕೆಗಳಲ್ಲಿ ಬಂದಾಗ ಅದು ಬೀರುವ ಪರಿಣಾಮ ಗಣನೀಯವಾದದ್ದು. ಹೀಗಾಗಿ ಪತ್ರಿಕೆಗಳು ಇಂದು ಹೆಚ್ಚು ಪ್ರಸ್ತುತವಾಗಿವೆ.
> –ಸುಶಿಲೇಂದ್ರಚಾರ್ಯ ಕುಂದರಗಿ, ಕಾನಿಪ ಜಿಲ್ಲಾ ಪ್ರಧಾನ ಕಾರ್ಯದರ್ಶಿ

## ಸಾಂಕ್ರಾಮಿಕ ರೋಗಗಳು ಬಾರದಂತೆ ಮುನ್ನೆಚ್ಚರಿಕೆ ಕ್ರಮ ವಹಿಸಿ: ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್

• **ಉದಯವಾಹಿನಿ ಗದಗ**

ಜಿಲ್ಲೆಯಲ್ಲಿ ಸಾಂಕ್ರಾಮಿಕ ರೋಗಗಳು ಹರಡದಂತೆ ಮುಂಜಾಗ್ರತಾ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಭಾಂಗಣದಲ್ಲಿ ಜಿಲ್ಲಾ ಕಣ್ಗಾವಲು ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ಡೆಂಗ್ಯೂ, ಚುಕ್ಕುನ್ ಗುನ್ಯಾ ರೋಗಗಳ ಹರಡುವಿಕೆ ತಡೆಗಟ್ಟಲು ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು. ನಗರ , ಗ್ರಾಮೀಣ ಪ್ರದೇಶಗಳಲ್ಲಿ ಸ್ವಚ್ಛತೆಯ ಕುರಿತು ಅರಿವು ಮೂಡಿಸಬೇಕು ಎಂದರು. ಗದಗ ಜಿಲ್ಲೆಯು ಕೂಡ ಕೆಎಫ್‌ಡಿ ಬಾಧಿತ ಎಂಡಮಿಕ್ ಜಿಲ್ಲೆಗಳಲ್ಲಿ ಒಂದಾಗಿದ್ದು, ಕೆಎಫ್‌ಡಿ ವೈರಸ್‌ನಿಂದ ಸೋಂಕಿತಗೊಂಡ ಉಣ್ಣೆಯು ಕಚ್ಚುವುದರಿಂದ ಹರಡುವ ವೈರಲ್ ಜ್ವರವಾಗಿದೆ.

ಈ ಕಾಯಿಲೆಗೆ ಯಾವುದೇ ನಿರ್ದಿಷ್ಟ ಚಿಕಿತ್ಸೆ ಇಲ್ಲ. ರೋಗ ಬಾರದಂತೆ ಎಚ್ಚರಿಕೆ ವಹಿಸುವುದು ಅತ್ಯಂತ ಮುಖ್ಯವಾಗಿರುತ್ತದೆ ಎಂದರು.


ಉದಯವಾಹಿನಿ ಚಿತ್ರ

ಜಿಲ್ಲಾ ಸಮೀಕ್ಷಣಾಧಿಕಾರಿ ವೆಂಕಟೇಶ ರಾಠೋಡ ಅವರು ಮಾತನಾಡಿ ಜಿಲ್ಲೆಯಲ್ಲಿ ಜನವರಿ 2025 ರಿಂದ ಜುಲೈ 2025 ರವೆಗೆ ಒಟ್ಟು 2499 ಕರುಳು ಬೇನೆ ಪ್ರಕರಣಗಳು, 2064 ಟೈಫೈಡ್ ಪ್ರಕರಣಗಳು. 22 ಹೆಪಟೈಟೀಸ್ ಎ, 61 ಡೆಂಘಿ ಪ್ರಕರಣಗಳು ವರದಿಯಾಗಿವೆ. ಜನವರಿ 2025 ರಿಂದ ಜುಲೈ 2025 ರವರೆಗೆ ಒಟ್ಟು 206679 ಸಂಶಯಾಸ್ಪದ ಮಲೇರಿಯಾ ರಕ್ತದ ಲೇಪನಗಳನ್ನು ಸಂಗ್ರಹಿಸಿದ್ದು ಅದರಲ್ಲಿ 3 ಖಚಿತ ಪ್ರಕರಣಗಳು ವರದಿಯಾಗಿವೆ. ಜಿಲ್ಲೆಯಲ್ಲಿ ಇಲ್ಲಿಯವರೆಗೆ 5988 ನಾಯಿ ಕಡಿತ ಹಾಗೂ 926 ಇತರೇ ಪ್ರಾಣಿಗಳ ಕಡಿತ ವರದಿಯಾಗಿವೆ ಎಂದರು.

## ಹದಗೆಟ್ಟ ಮುದ್ನಾಳ ರಸ್ತೆ , ಗ್ರಾಮದಲ್ಲಿ ಗುಂಡಿಗಳ ದರ್ಶನ

• **ಉದಯವಾಹಿನಿ ಯಾದಗಿರಿ**

ತಾಲ್ಲೂಕಿನ ಮುದ್ನಾಳ ಗ್ರಾಮದಲ್ಲಿ ಹತ್ತಾರು ಹಳ್ಳಿ ಗೆ ಸಂಪರ್ಕವಿರುವ ಆಂಜನೇಯ ದೇವಸ್ಥಾನದಿಂದ ಬಸವಣ್ಣ ದೇವಸ್ಥಾನದ ಹಿಂಭಾಗದಲ್ಲಿ ಬರುವ ಮೇಡೀಕಲ್ ಕಾಲೇಜುಗೆ ಹೋಗುವ ರಸ್ತೆವರಗೆ ದಿನನಿತ್ಯದ ಧಾರಕಾರ ಸುರಿದ ಮಳೆಗೆ ಸಿಸಿ ರಸ್ತೆ ಮತ್ತು ಚರಂಡಿಗಳಲ್ಲಿ ತಗ್ಗು ಗುಂಡಿಗಳ ಬಿದ್ದು ರಸ್ತೆ ಸಂಪೂರ್ಣ ಹಾಳಾಗಿದೆ. ದಿನವೂ ಜಿಟಿಜಿಟಿ ಸುರಿಯುವ ಮಳೆಯಿಂದ ರಸ್ತೆಯ ಮೇಲೆ ತಗ್ಗು ಗುಂಡಿಗಳು ನಿರ್ಮಾಣವಾಗಿ ವಾಹನ ಸವಾರರು ಪರದಾಡುವ ಸ್ಥಿತಿ ನಿರ್ಮಾಣವಾಗಿ. ದಿನ ನಿತ್ಯ ಸಾರ್ವಜನಿಕರು ದೇವಸ್ಥಾನಕ್ಕೆ ಹೋಗಲು ಕೊಳಚೆ ದಾಟಿಕೊಂಡು ಹೋಗುವ ಸ್ಥಿತಿ ಬಂದಿದೆ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಈ ಪ್ರಮುಖ ರಸ್ತೆಯಲ್ಲಿ ಗ್ರಾಮದಿಂದ ಗ್ರಾಮಗಳಿಗೆ ದಿನ ನಿತ್ಯ ಸಾವಿರಾರು ವಾಹನಗಳು ಸಂಚಾರ ಮಾಡುತ್ತಿದ್ದು ಸಂಬಂಧಪಟ್ಟ ಅಧಿಕಾರಿಗಳು ಕಣ್ಣು ಮುಚ್ಚಿ ಕುಣಿತಿರುವುದು ದುರಷ್ಟಕರ ಸಂಗತಿಯಾಗಿದೆ. ಟ್ಯಾಕ್ಟರ್, ಎತ್ತಿನಬಂಡಿ, ಟಂಟ ಮತ್ತು ಬಸ್‌ಗಳು ಸಂಚರಿಸುತ್ತವೆ. ಸಂಬಂಧಪಟ್ಟ ಅಧಿಕಾರಿಗಳ ದಿವ್ಯನಿರ್ಲಕ್ಷ್ಯದಿಂದ ರಸ್ತೆಯ ಈ ಗತಿಗೆ ಬಂದು ತಲುಪಿದೆ.


ಉದಯವಾಹಿನಿ ಚಿತ್ರ



> ತೆರಿಗೆ ಸಂಗ್ರಹದಲ್ಲಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿದು ಈ ಗ್ರಾಮ ಅಭಿವೃದ್ಧಿಯಲ್ಲಿ ಕೊನೆಯ ಸ್ಥಾನದಲ್ಲಿ ಉಳಿದಿರುವುದು ದುರದೃಷ್ಟಕರ ಸಂಗತಿ, ಅಭಿವೃದ್ಧಿ ಅಧಿಕಾರಿಗಳು ಅಭಿವೃದ್ಧಿ ಮಾಡುವುದನ್ನು ಬೀಟ್ಟು ರಾಜಕೀಯ ಚಮಾಚಗಿರಿ ಮಾಡಿ ತಾವೇ ಅಭಿವೃದ್ಧಿ ಹೊಂದುತ್ತಾರೆ. –ಉಮೇಶ ಕೆ. ಮುದ್ನಾಳ
> ಸಾಮಾಜಿಕ ಹೋರಾಟಗಾರರು

## ವಿಕಲಚೇತನ ಮಕ್ಕಳಿಗೆ ಸರ್ಕಾರದ ಸೌಲಭ್ಯ ತಲುಪಿಸಿ

• **ಉದಯವಾಹಿನಿ ಔರಾದ**

ವಿಕಲಚೇತನರ ಹಿತಾಸಕ್ತಿಗಾಗಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಜಾರಿಗೆ ತಂದಿರುವ ಎಲ್ಲಾ ಕಲ್ಯಾಣ ಯೋಜನೆಗಳ ಬಗ್ಗೆ ಹೆಚ್ಚಿನ ಪ್ರಚಾರ ನೀಡುವ ಮೂಲಕ ವಿಕಲಚೇತನ ವಿದ್ಯಾರ್ಥಿಗಳಿಗೆ ಸರ್ಕಾರದ ಸೌಲಭ್ಯಗಳನ್ನು ತಲುಪಿಸಲು ಪ್ರಮಾಣಿಕ ಪ್ರಯತ್ನ ಮಾಡಬೇಕೆಂದು ಶಾಸಕ ಪ್ರಭು ಬಿ.ಚವ್ಹಾಣ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಶಾಲಾ ಶಿಕ್ಷಣ ಇಲಾಖೆಯ ಸಮಗ್ರ ಶಿಕ್ಷಣ ಯೋಜನೆಯಡಿ ಸಮನ್ವಯ ಶಿಕ್ಷಣ ವಿಭಾಗದಿಂದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಆವರಣದಲ್ಲಿ ಏರ್ಪಡಿಸಿದ್ದ ಪ್ರಾಥಮಿಕ ಮತ್ತು ಪ್ರೌಢ ಶಾಲೆಯಲ್ಲಿ ವ್ಯಾಸಂಗ ಮಾಡುವ ವಿಕಲಚೇತನ ವಿದ್ಯಾರ್ಥಿಗಳಿಗೆ ಸಾಧನ ಸಲಕರಣೆಗಳ ವಿತರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ವಿಕಲಚೇತನ ಮಕ್ಕಳಲ್ಲಿಯೂ ವಿಶೇಷ ಪ್ರತಿಭೆ ಅಡಗಿರುತ್ತದೆ. ಅದನ್ನು ಗುರುತಿಸಿ ಪ್ರೋತ್ಸಾಹಿಸುವ ಕೆಲಸ ಪಾಲಕರು ಮತ್ತು ಶಿಕ್ಷಕರಿಂದ ಆಗಬೇಕು.

ಮಕ್ಕಳು ತಮ್ಮಲ್ಲಿನ ದೌರ್ಬಲ್ಯಗಳ ಬಗ್ಗೆ ತಲೆಕೆಡಿಸಿಕೊಳ್ಳದೇ ಸಾಧನೆಯತ್ತ ಹೆಚ್ಚಿನ ಗಮನ ಹರಿಸಬೇಕು.

ಸರ್ಕಾರದಿಂದ ಇರುವ ಯೋಜನೆಗಳ ಬಗ್ಗೆ ತಿಳಿದುಕೊಂಡು ಸೌಲಭ್ಯಗಳನ್ನು ಪಡೆಯಲು ಯತ್ನಿಸಬೇಕು ಎಂದು ಹೇಳಿದರು.


ಉದಯವಾಹಿನಿ ಚಿತ್ರ

**ವಿದ್ಯಾರ್ಥಿಗಳಿಗೆ ಸಾಧನ ಸಲಕರಣೆಗಳ ವಿತರಣೆ**

> ವಿಕಲಚೇತನ ಮಕ್ಕಳಿಗೆ ವಿಶೇಷ ಗಮನ ಹರಿಸಿ ಅವರಿಗೆ ಉತ್ತಮ ಸೌಲಭ್ಯಗಳನ್ನು ಒದಗಿಸುವುದು ನಮ್ಮೆಲ್ಲರ ಹೊಣೆಯಾಗಿದ್ದು ಈ ದಿಶೆಯಲ್ಲಿ ನಾನು ಪ್ರಮಾಣಿಕವಾಗಿ ಪ್ರಯತ್ನಿಸುತ್ತಿದ್ದೇನೆ. ವಿಕಲಚೇತನರು ಯಾವುದೇ ರೀತಿಯ ಸಮಸ್ಯೆಯಿರಲಿ ನೇರವಾಗಿ ತಮ್ಮನ್ನು ಭೇಟಿಯಾಗಿ ಸಮಸ್ಯೆ ಪರಿಹರಿಸಿಕೊಳ್ಳಬಹುದು ಎಂದರು. ಪಾಲಕರು ಕೂಡ ತಮ್ಮ ವಿಕಲಚೇತನ ಮಕ್ಕಳಿಗೆ ತಾತ್ಸಾರದಿಂದ ಕಾಣದೇ ತಪ್ಪದೆ ಶಾಲೆಗೆ ಕಳುಹಿಸಬೇಕು. ವಿಶೇಷ ಗುರುತಿನ ಚೀಟಿ ಮಾಡಿಸಿಕೊಂಡು ಸರ್ಕಾರದ ಸೌಲಭ್ಯಗಳ ಲಾಭ ಪಡೆಯಬೇಕು
> –ಪ್ರಭು ಬಿ.ಚವ್ಹಾಣ , ಶಾಸಕ

## ಹದಗೆಟ್ಟ ಸಂಪರ್ಕ ರಸ್ತೆ: ಕೆರೆಯ ಕಾಲುವೆಯಿಂದ ತೊಂದರೆ

• **ಉದಯವಾಹಿನಿ, ಹಾನಗಲ್**

ಮೂಲ ಸೌಲಭ್ಯ ವಂಚಿತ ತಾಲ್ಲೂಕಿನ ಯಳ್ಳೂರ ಗ್ರಾಮದಲ್ಲಿ ತ್ಯಾಜ್ಯ ವಿಲೇವಾರಿಯ ಲೋಪದಿಂದಾಗಿ ಜಲಮೂಲ ಕೂಡ ಕಲುಶಿತಗೊಳ್ಳುತ್ತಿದೆ. ಮಳೆಗಾಲದಲ್ಲಿ ಇಲ್ಲಿನ ರಸ್ತೆಗಳು ಕೆಸರುಗದ್ದೆಯಾಗುತ್ತಿವೆ.

ಕೃಷಿ ಕಾರ್ಮಿಕರೇ ಹೆಚ್ಚಿರುವ ಯಳ್ಳೂರ ಗ್ರಾಮದಲ್ಲಿ ಕೋರಂಕಟ್ಟಿ, ಮಟ್ಟಕಟ್ಟಿ ಎಂಬ ಜೋಡು ಕೆರೆ ಇದೆ. ಯಳ್ಳೂರ ಗ್ರಾಮ ಮತ್ತು ಗ್ರಾಮದ ಪ್ಲಾಟ್ ಭಾಗವನ್ನು ಈ ಕೆರೆ ವಿಭಜಿಸುತ್ತದೆ. ಗ್ರಾಮ ಮತ್ತು ಪ್ಲಾಟ್ ಸೇರಿ ಸುಮಾರು ಎರಡು ಸಾವಿರ ಜನಸಂಖ್ಯೆ ಇದೆ. ಪ್ಲಾಟ್ ಭಾಗದಲ್ಲಿ ಜೆಜೆಎಂ ಕಾಮಗಾರಿ ಪೂರ್ಣಗೊಂಡು ಕುಡಿಯುವ ನೀರಿನ ಕೊರತೆ ಇಲ್ಲ. ಆದರೆ ಯಳ್ಳೂರ ಗ್ರಾಮದಲ್ಲಿ ಈತನಕ ಜಲಜೀವನ್ ಮಿಷನ್ ಮುಕ್ತಾಗೊಂಡಿಲ್ಲ. ಕಾಮಗಾರಿ ನೆಪದಲ್ಲಿ ಗ್ರಾಮದ ಓಣಿಗಳ ಸಿಸಿ ರಸ್ತೆಯಲ್ಲಿ ಬಗೆದು ಹಾಕಲಾಗಿದೆ. ಗ್ರಾಮಸ್ಥರು ಮನೆ ಮುಂದೆ ಓಡಾಡಲು ಫಜೀತಿ ಪಡುತ್ತಿದ್ದಾರೆ. ಇಲ್ಲಿ ನರೇಗಾ ಕಾಮಗಾರಿಗಳು ನಿರಂತರವಾಗಿ ನಡೆಯುತ್ತಿಲ್ಲ. ಹೀಗಾಗಿ ಗ್ರಾಮದಲ್ಲಿ ಅಭಿವೃದ್ಧಿ ಕೆಲಸಗಳು ಮರಿಚಿಕೆಯಾಗಿವೆ.

ಕಸ ಸಂಗ್ರಹಣೆಗೆ ಪಂಚಾಯ್ತಿ ವಾಹನ ಬರುತ್ತಿಲ್ಲ. ಮನೆ ತ್ಯಾಜ್ಯ ಕೆರೆ ಅಂಗಳ ಸೇರುತ್ತಿದೆ. ಈಗ ಉತ್ತಮ ಮಳೆಯಿಂದ ಕೆರೆ ತುಂಬಿ ಹರಿಯುತ್ತಿದೆ. ಕೆರೆಯ ಕೋಡಿ ಕಾಲುವೆ ಭಾಗ ಅಲ್ಲಲ್ಲಿ ಅತಿಕ್ರಮಣಗೊಂಡಿದೆ. ಹೆಚ್ಚು ಮಳೆಯಾದಾಗ ಕೋಡಿ ನೀರು ಜನವಸತಿ ಪ್ರದೇಶಕ್ಕೆ ನುಗ್ಗುತ್ತದೆ. ಕೆರೆಯ ಕೋಡಿ ಕಾಲುವೆ ವ್ಯವಸ್ಥೆ ಸುಧಾರಣೆಗೊಳ್ಳಬೇಕು. ಕೆರೆ ತುಂಬಿದರೆ ಪ್ಲಾಟ್ ಭಾಗದ ನಿವಾಸಿಗಳಿಗೆ ಗೋಳು ಎಂದು ಮುನೀರ್‌ಸಾಬ ಕಳಸದ, ಅಬ್ದುಲ್‌ರಷೀದ್ ಬಸರಿಟ್ಟಿ ಹೇಳಿದರು. ಯಳವಟ್ಟಿ ಗ್ರಾಮ ಪಂಚಾಯ್ತಿಗೆ ಸೇರುವ ನಮ್ಮ ಗ್ರಾಮದಲ್ಲಿ ನಾಲ್ಕು ಜನ ಗ್ರಾಮ ಪಂಚಾಯ್ತಿ ಸದಸ್ಯರಿದ್ದಾರೆ. ನಮ್ಮೂರಿನವರೇ ಗ್ರಾಮ ಪಂಚಾಯ್ತಿ ಅಧ್ಯಕ್ಷರಾಗಿದ್ದಾರೆ. ಆದರೆ ಅಭಿವೃದ್ಧಿ ಆಗುತ್ತಿಲ್ಲ. ಶುದ್ಧ ಕುಡಿಯುವ ನೀರಿನ ಘಟಕ ಇಲ್ಲ. ತಡಸ ಶಿಕಾರಿಪೂರ ರಸ್ತೆಯಿಂದ ನಮ್ಮ ಗ್ರಾಮದ ಸಂಪರ್ಕ ರಸ್ತೆ ಹದಗೆಟ್ಟಿದೆ ಎಂದು ಗ್ರಾಮಸ್ಥ ಶಿವಕುಮಾರ ದೇವಿಹೊಸೂರ ಹೇಳಿದರು.


ಉದಯವಾಹಿನಿ ಚಿತ್ರ

> ಮುಖ್ಯರಸ್ತೆಯಿಂದ ಯಳ್ಳೂರ ಗ್ರಾಮದ ಸಂಪರ್ಕ ರಸ್ತೆ ಕಾಮಗಾರಿ ಆರಂಭಿಸಲಾಗಿತ್ತು. ಒಬ್ಬ ರೈತರು ನ್ಯಾಯಾಲಯದ ಮೆಟ್ಟಿಲು ಏರಿದ್ದರಿಂದ ವಿಳಂಬವಾಗಿದೆ. – ದೇವರಾಜ,
> ಎಇಇ, ಜಿಲ್ಲಾ ಪಂಚಾಯಿತಿ

## ಪಿ.ಜಿ.ಕೇಂದ್ರ ಪ್ರಾರಂಭಿಸಲು ಸಂಸದ ಖಂಡ್ರೆಗೆ ಮನವಿ

• **ಉದಯವಾಹಿನಿ, ಚಿಂಚೋಳಿ**

ತಾಲ್ಲೂಕಿನಲ್ಲಿ ಪಿ.ಜಿ ಕೇಂದ್ರ ಪ್ರಾರಂಭಿಸುವಂತೆ ಬೀದರ ಸಂಸದ ಸಾಗರ್ ಖಂಡ್ರೆಗೆ ಭಾರತ ರಾಷ್ಟ್ರೀಯ ವಿದ್ಯಾರ್ಥಿ ಒಕ್ಕೂಟದಿಂದ ಮನವಿಪತ್ರ ಸಲ್ಲಿಸಿದರು.

ಚಿಂಚೋಳಿ ಪಟ್ಟಣದಕ್ಕೆ ಆಗಮಿಸಿದ ಬೀದರ ಸಂಸದ ಸಾಗರ್ ಖಂಡ್ರೆಯವರೆಗೆ ಭಾರತ ರಾಷ್ಟ್ರೀಯ ವಿದ್ಯಾರ್ಥಿ ಒಕ್ಕೂಟದ ತಾಲ್ಲೂಕಾ ಅಧ್ಯಕ್ಷೆ ಅಂಕೀತಾ ಕಮಲಾಕರ್ ನೇತೃತ್ವದಲ್ಲಿ ಚಿಂಚೋಳಿ ತಾಲ್ಲೂಕಿನ ವಿದ್ಯಾರ್ಥಿಗಳಿಗೆ ಅನುಕೂಲವಾಗಲು ಉನ್ನತಮಟ್ಟದ ಶಿಕ್ಷಣ ಪಡೆದುಕೊಳ್ಳಲು ಪಿ.ಜಿ ಕೇಂದ್ರ ಪ್ರಾರಂಭಿಸುವಂತೆ ಮನವಿ ಮಾಡಿದರು. ಅಧ್ಯಕ್ಷೆ ಅಂಕೀತಾ ಕಮಲಾಕರ್ ಮಾತನಾಡಿ ತಾಲ್ಲೂಕಿನಲ್ಲಿ ವಿದ್ಯಾರ್ಥಿಗಳಿಗೆ ಪದವಿ ಮುಗಿಸಿ ಮುಂದಿನ ವಿದ್ಯಾಭ್ಯಾಸಕ್ಕಾಗಿ ಬೇರೆ ಬೇರೆ ಜಿಲ್ಲೆಗಳಿಗೆ ಹೋಗುವಂತಹ ಪರಿಸ್ಥಿತಿ ಬಂದಿದೆ ಹಾಗೂ ಬಡವರ ಮಕ್ಕಳಿಗೆ ಹಾಗೂ ವಿದ್ಯಾರ್ಥಿನಿಯರಿಗೆ ಮುಂದಿನ ವಿದ್ಯಾಭ್ಯಾಸಕ್ಕಾಗಿ ತುಂಬಾ ತೊಂದರೆಯಾಗಿದೆ ವಿದ್ಯಾರ್ಥಿನಿಯರು ಮುಂದಿನ ವಿದ್ಯಾಭ್ಯಾಸಕ್ಕಾಗಿ ಬೇರೆ ಬೇರೆ ಜಿಲ್ಲೆಗಳಿಗೆ ಹೋಗಲು ಅವರ ಪೋಷಕರು ಅನುವು ಮಾಡುತ್ತಿಲ್ಲ ಇದರಿಂದ ವಿದ್ಯಾರ್ಥಿನಿಯರು ಶಿಕ್ಷಣವನ್ನು ಮುಟುಕುಗೊಳಿಸುತ್ತಿದ್ದಾರೆ. ಕಾರಣ ತಾವುಗಳು ವಿಧ್ಯಾರ್ಥಿಗಳ ಮನವಿ ಪರಿಗಣಿಸಿ ಚಿಂಚೋಳಿಯಲ್ಲಿ ಪಿಜಿ ಕೇಂದ್ರ ಸ್ಥಾಪಿಸಬೇಕು ಎಂದರು. ಈ ಸಂದರ್ಭದಲ್ಲಿ ಉಪಾಧ್ಯಕ್ಷ ಅಜರೊದ್ದೀನ್ ಕನಕಪುರ ಸೇರಿದಂತೆ ನೂರಾರು ವಿದ್ಯಾರ್ಥಿಗಳು, ವಿದ್ಯಾರ್ಥಿನಿಯರು ಇದ್ದರು.


ಉದಯವಾಹಿನಿ ಚಿತ್ರ

## ಮಿನಿ ನ್ಯೂಸ್

### ಡಿಜಿಟಲ್ ಸ್ಮಾರ್ಟ್ ಕ್ಲಾಸ್ ಮಕ್ಕಳ ಭವಿಷ್ಯಕ್ಕೆ ಅವಶ್ಯಕ: ಪಾಟೀಲ

• **ಉದಯವಾಹಿನಿ ಚನ್ನಮ್ಮನ ಕಿತ್ತೂರು**

ತಾಲ್ಲೂಕಿನ ಉಗರಖೋಡ ಗ್ರಾಮದ ಸರಕಾರಿ ಮಾದರಿ ಕನ್ನಡ ಶಾಲೆಯಲ್ಲಿ ಡಿಜಿಟಲ್ ಸ್ಮಾರ್ಟ ಕ್ಲಾಸ್ ರೂಂ ಶಾಸಕ ಬಾಬಾಸಾಹೇಬ ಪಾಟೀಲ ಉದ್ಘಾಟಿಸಿದರು. ಸತ್ಕಾರ ಸ್ವೀಕರಿಸಿ ಮಾತನಾಡಿ ಇಂದಿನ ಯುಗದಲ್ಲಿ ಡಿಜಿಟಲ್ ಸ್ಮಾರ್ಟ್ ಕ್ಲಾಸ್ ರೂಂ ಮಕ್ಕಳ ಭವಿಷ್ಯಯಕ್ಕೆ ತುಂಬಾ ಅವಶ್ಯಕ. ಖಾಸಗಿ ಶಾಲೆಗಳಿಗಿಂತ ಸರ್ಕಾರಿ ಶಾಲೆಗಳು ಉತ್ತಮವಾಗಿದ್ದು ಈ ಶಾಲೆಗಳು ಶೈಕ್ಷಣಿಕವಾಗಿ ಅಗ್ರಸ್ಥಾನದಲ್ಲಿವೆ ಅವುಗಳನ್ನು ಬೆಳೆಸುವಲ್ಲಿ ಎಲ್ಲರೂ ಕೈಜೋಡಿಸಬೇಕು. ಮಕ್ಕಳಲ್ಲಿ ವಿದ್ಯೆಯ ಜತೆಯಲ್ಲಿ ಸಂಸ್ಕಾರವೂ ಬಹು ಮುಖ್ಯ. ತಂದೆ-ತಾಯಿ , ಶಾಲೆಯ ಗುರುಗಳನ್ನು ಪೂಜ್ಯ ಭಾವನೆಯಿಂದ ಕಾಣಬೇಕು ಎಂದರು.

### ಪಕ್ಷ ಬಲವರ್ಧನೆಗೆ ಪ್ರಾಮಾಣಿಕ ಪ್ರಯತ್ನ ಅತಿ ಅವಶ್ಯಕ: ಜಾಬಶೆಟ್ಟಿ

• **ಉದಯವಾಹಿನಿ ಬೀದರ**

ಪಕ್ಷ ಬಲವರ್ಧನೆಗೆ ಪ್ರಾಮಾಣಿಕ ಪ್ರಯತ್ನ ಅತಿ ಅವಶ್ಯಕವಾಗಿದೆ. ಈ ಕುರಿತು ಪ್ರತಿಯೊಬ್ಬರು ಕಾರ್ಯಪ್ರವೃತ್ತರಾಗಬೇಕೆಂದು ಜಿಲ್ಲಾ ಕಾಂಗ್ರೆಸ್ ಸಮಿತಿಯ ಜಿಲ್ಲಾಧ್ಯಕ್ಷ ಬಸವರಾಜ ಜಾಬಶೆಟ್ಟಿ ಕರೆ ನೀಡಿದರು. ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಜಿಲ್ಲಾ ಕಾಂಗ್ರೆಸ್ ಸಮಿತಿ (ಪದವೀಧರ ವಿಭಾಗ)ದ ವತಿಯಿಂದ ಹಮ್ಮಿಕೊಂಡ ಕಾರ್ಯಕರ್ತರ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ಪಕ್ಷ ಎಂದರೆ ತಾಯಿ ಇದ್ದಂತೆ. ವ್ಯಕ್ತಿಗಿಂತ ಪಕ್ಷ ಮುಖ್ಯ ಎನ್ನುವ ಭಾವನೆ ಪ್ರತಿಯೊಬ್ಬರಲ್ಲೂ ಬರಬೇಕು. ಪಕ್ಷದಿಂದಲೇ ನಾವೆಲ್ಲರೂ ಎನ್ನುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲಾ ಕಾಂಗ್ರೆಸ್ ಸಮಿತಿಯ ಪದವೀಧರ ವಿಭಾಗದ ಅಧ್ಯಕ್ಷರಾದ ಚಂದ್ರಕಾಂತ ಪಾಟೀಲ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಮುಂಬರುವ ದಿನಗಳಲ್ಲಿ ಗ್ರಾಮ ಮಟ್ಟದಲ್ಲಿ ಸಂಘಟನೆಯನ್ನು ಬೆಳೆಸುವದಾಗಿ ಹೇಳಿದರು. ಸಭೆಯಲ್ಲಿ ಕಾಂಗ್ರೆಸ್ ಪಕ್ಷದ ರಾಜ್ಯ ಉಪಾಧ್ಯಕ್ಷ ಜಾನ್ ವೇಸ್ಲಿ ಪಕ್ಷ ಬಲವರ್ಧನೆ ಕುರಿತು ತಮ್ಮ ಸಲಹೆ ಸೂಚನೆಗಳನ್ನು ನೀಡಿದರು.

### ಕಟಪಾಡಿ ಜಂಕ್ಷನ್ ಓವರ್ ಪಾಸ್ ಕಾಮಗಾರಿ ಆರಂಭಿಸಲು ಸೂಚನೆ

• **ಉದಯವಾಹಿನಿ ಉಡುಪಿ**

ರಾಷ್ಟ್ರೀಯ ಹೆದ್ದಾರಿ 66ಕ್ಕೆ ಸಂಭಂದಿಸಿದಂತೆ ಜಿಲ್ಲಾಧಿಕಾರಿಗಳಾದ ಕೋರ್ಟ್ ಹಾಲ್ ಕಚೇರಿಯಲ್ಲಿ ಇಂದು ಉಡುಪಿ ಸಂಸದರಾದ ಕೋಟ ಶ್ರೀನಿವಾಸ ಪೂಜಾರಿ ಅವರ ಅಧ್ಯಕ್ಷತೆಯಲ್ಲಿ ಸಭೆ ನಡೆಯಿತು. ಸಭೆಯಲ್ಲಿ ಶಾಸಕರಾದ ಗುರ್ಮೆ ಸುರೇಶ್ ಶೆಟ್ಟಿ ಅವರು ಭಾಗವಹಿಸಿದರು ಕಟಪಾಡಿ ಜಂಕ್ಷನ್ ಬಳಿ ಈಗಾಗಲೇ ಓವರ್ ಪಾಸ್ ಮಂಜೂರಾಗಿದ್ದು ಶೀಘ್ರದಲ್ಲೇ ಕಾಮಗಾರಿ ಆರಂಭಿಸುಂತೆ ಜೊತೆಗೆ ಸಂಚಾರಕ್ಕೆ ಬದಲಿ ರಸ್ತೆ ಗುರುತಿಸುವಂತೆ , ಉಚ್ಚಿಲ ಹಾಗೂ ಪಡುಬಿದ್ರಿ ಜಂಕ್ಷನ್ ಬಳಿ ದಿನೇ ದಿನೇ ರಸ್ತೆ ಅಪಘಾತಗಳು ಹೆಚ್ಚುತ್ತಿದ್ದು ಇದರ ತಡೆಗೆ ಬೀದಿ ದೀಪ ಮತ್ತು ಬ್ಯಾರಿಗೇಟ್ ಅಳವಡಿಸುವಂತೆ ಇಲಾಖಾಧಿಕಾರಿಗಳಿಗೆ ಸೂಚಿಸಿದರು.

### ವಿದ್ಯಾರ್ಥಿ ವೇತನ ವಿತರಣೆ

• **ಉದಯವಾಹಿನಿ ಮೂಲ್ಕಿ**

ಶಿಕ್ಷಣದಿಂದ ಉತ್ತಮ ಭವಿಷ್ಯ ಹಾಗೂ ಸಮಾಜ ನಿರ್ಮಾಣ ಸಾಧ್ಯವಿದ್ದು ಆರ್ಥಿಕವಾಗಿ ಸಂಕಷ್ಟದಲ್ಲಿರುವವರನ್ನು ಮೇಲೆತ್ತುವ ಕಾರ್ಯವಾಗಬೇಕು. ವಿದೇಶದಲ್ಲಿ ಕಷ್ಟಪಟ್ಟು ಸಂಪಾದಿಸಿದ ಹಣದಿಂದ ವಿದ್ಯಾರ್ಥಿಗಳಿಗೆ ಸಹಾಯ ಹಸ್ತ ಮಾಡುವ ಕಾರ್ಯ ಅಭಿನಂದನೀಯ ಎಂದು ಬೆಂಗಳೂರಿನ ಆರ್ಯ ಈಡಿಗ ಮಹಾ ಸಂಸ್ಥಾನದ ಪೀಠಾಧಿಪತಿ ಶ್ರೀ ವಿಖ್ಯಾತಾನಂದ ಸ್ವಾಮೀಜಿ ಹೇಳಿದರು.

ಸೌದಿ ಅರೇಬಿಯಾ ಬಿಲ್ಲವ ಎಸೋಸಿಯೇಷನ್ ವತಿಯಿಂದ ರಾಷ್ಟ್ರೀಯ ಬಿಲ್ಲವರ ಮಹಾಮಂಡಲದ ಜಯ ಸಿ ಸುವರ್ಣ ಸಭಾಭವನದಲ್ಲಿ ನಡೆದ ವಿದ್ಯಾರ್ಥಿ ವೇತನ ವಿತರಣಾ ಸಮಾರಂಭದಲ್ಲಿ ಆಶೀರ್ವಚನ ನೀಡಿ ಮಾತನಾಡಿದರು.

ಸೌದಿ ಅರೇಬಿಯಾ ಬಿಲ್ಲವ ಎಸೋಸಿಯೇಷನ್ ಅಧ್ಯಕ್ಷ ಕೆ ಸಿ ಭಾಸ್ಕರ್ ಅಧ್ಯಕ್ಷತೆಯನ್ನು ವಹಿಸಿದ್ದು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಶಾಸಕ ಉಮಾನಾಥ ಕೋಟ್ಯಾನ್ ಮಾತನಾಡಿ ವಿದ್ಯಾರ್ಥಿಗಳು ದೇಶದ ಆಸ್ತಿಯಾಗಿದ್ದು ಶೈಕ್ಷಣಿಕ ಸಾಧನೆ ಮೂಲಕ ಅಶಕ್ತರ ಮತ್ತು ಬಡವರ ಕಣ್ಣೀರೊರೆಸುವ ಕಾರ್ಯ ಮಾಡಬೇಕು ಎಂದು ಹೇಳಿದರು. ರಾಷ್ಟ್ರೀಯ ಬಿಲ್ಲವರ ಮಹಾಮಂಡಲದ ಅಧ್ಯಕ್ಷ ಡಾ. ರಾಜಶೇಖರ ಕೋಟ್ಯಾನ್, ರಾಷ್ಟ್ರೀಯ ಬಿಲ್ಲವರ ಮಹಾಮಂಡಲದ ಮಹಿಳಾ ಘಟಕದ ಅಧ್ಯಕ್ಷ ಗೀತಾಂಜಲಿ ಸುವರ್ಣ, ಮಂಗಳೂರು ರಾಷ್ಟ್ರೋತ್ಥಾನ ವಿದ್ಯಾ ಕೇಂದ್ರದ ಮುಖ್ಯ ಅಧೀಕ್ಷಕ ಡಾ.ಅರುಣ್ ಉಳ್ಳಾಲ, ಸೌದಿ ಅರೇಬಿಯಾ ಬಿಲ್ಲವ ಎಸೋಸಿಯೇಷನ್‌ನ ಗೌರವಾಧ್ಯಕ್ಷ ಭಾಸ್ಕರ್ ಸಾಲ್ಯಾನ್ ಉಪಸ್ಥಿತರಿದ್ದರು.

# ತುಂಗಭದ್ರಾ ಜಲಾಶಯ ಕ್ರಸ್ಟ್‌ಗೇಟ್‌ಗಳ ಸಮಸ್ಯೆ: ಎರಡನೇ ಬೆಳೆಗೆ ನೀರು ಅನುಮಾನ

### ಮಾನ್ಸೂನ್ ಆರಂಭವಾಗಿ ಜೂನ್‌ನಲ್ಲಿಯೇ ತುಂಗಭದ್ರಾ ಜಲಾಶಯ ತುಂಬಿದ್ದರೂ, ನದಿಯಲ್ಲಿಯೇ ಹೆಚ್ಚು ವ್ಯರ್ಥವಾಗಿ ಹರಿದು ಹೋಗುತ್ತಿದೆ

• **ಉದಯವಾಹಿನಿ, ಮುನಿರಾಬಾದ್**

ತುಂಗಭದ್ರಾ ಜಲಾಶಯ ಭರ್ತಿಯಾಗಿದ್ದರೂ, ಪೂರ್ಣಪ್ರಮಾಣದ ನೀರು ಸಂಗ್ರಹಿಸಲು ಸಾಮರ್ಥ್ಯ ಇಲ್ಲದಂತಾಗಿದೆ. ಅಣೆಕಟ್ಟೆಯ ಕ್ರಸ್ಟ್‌ಗೇಟ್‌ಗಳ ಸಮಸ್ಯೆ ಆಗಿರುವುದರಿಂದ ಲಕ್ಷಾಂತರ ಕ್ಯೂಸೆಕ್ ನೀರು ವ್ಯರ್ಥವಾಗಿ ಹರಿದು ಹೋಗುತ್ತಿದೆ. ಹೀಗಾಗಿ ರೈತರಿಗೆ ಎರಡನೇ ಬೆಳೆಗೆ ನೀರು ಸಿಗುವುದು ಅನುಮಾನವಾಗಿದೆ. ಇದು ರೈತರನ್ನು ಚಿಂತೆಗೀಡು ಮಾಡಿದೆ.

ತುಂಗಭದ್ರಾ ಜಲಾಶಯದ ನೀರು ಸಂಗ್ರಹಣಾ ಸಾಮರ್ಥ್ಯ ಇರುವುದು 105 ಟಿಎಂಸಿ ಅಡಿಯಷ್ಟು. ಆದರೆ ಕ್ರಸ್ಟ್ ಗೇಟ್‌ಗಳ ಸಮಸ್ಯೆಯಿಂದಾಗಿ ಈಗ ಸಾಮರ್ಥ್ಯ ಇರುವುದು 80 ಟಿಎಂಸಿ ಅಡಿಯಷ್ಟು ಮಾತ್ರ.

ಮಾನ್ಸೂನ್ ಆರಂಭವಾಗಿ ಜೂನ್‌ನಲ್ಲಿಯೇ ತುಂಗಭದ್ರಾ ಜಲಾಶಯ ತುಂಬಿದ್ದರೂ, ನದಿಯಲ್ಲಿಯೇ ಹೆಚ್ಚು ವ್ಯರ್ಥವಾಗಿ ಹರಿದು ಹೋಗುತ್ತಿದೆ. ಇದಕ್ಕೆ ತುಂಗಭದ್ರಾ ಅಣೆಕಟ್ಟೆ ಆಡಳಿತ ಮಂಡಳಿ ಅಧಿಕಾರಿಗಳ ಹೊಣೆಗೇಡಿತನವೇ ಕಾರಣ ಎಂದು ರೈತರು ಆರೋಪಿಸುತ್ತಿದ್ದಾರೆ.

**ದುರಸ್ತಿಯಾಗದ ಗೇಟ್:** ಕಳೆದ ವರ್ಷ ಆಗಸ್ಟ್‌ನಲ್ಲಿ ಜಲಾಶಯದ ಗೇಟ್ ನಂ.19 ಕೊಚ್ಚಿ ಹೋಗಿ ಜಲಾಶಯದ ಸುರಕ್ಷತೆಗೆ ಸವಾಲು ಒಡ್ಡಿತ್ತು. ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿ ನೇತೃತ್ವದಲ್ಲಿ ಮುನಿರಾಬಾದ್‌ನಲ್ಲಿ ಸಭೆ ನಡೆಸಿದ ರಾಜ್ಯ ಸರ್ಕಾರ 6 ತಿಂಗಳಲ್ಲಿ ಎಲ್ಲ ಗೇಟುಗಳನ್ನು ಬದಲಿಸುವುದಾಗಿ ಘೋಷಿಸಿತ್ತು. ಆದರೆ ಈವರೆಗೂ ದುರಸ್ತಿಯಾಗಿಲ್ಲ ಎಂದು ಈ ಭಾಗದ ರೈತರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

**80 ಟಿಎಂಸಿ ಅಡಿ ನೀರು ಸಂಗ್ರಹ ಸಾಮರ್ಥ್ಯ:** ಮೊದಲು ಒಂದು ಗೇಟ್ ಮಾತ್ರ ಕೊಚ್ಚಿಹೋಗಿತ್ತು. ಈಗ ಮತ್ತೆ 7-8 ಕ್ರಸ್ಟ್ ಗೇಟ್‌ಗಳು ನೀರಿನ ಒತ್ತಡಕ್ಕೆ ಬಾಗಿವೆ. ಜಲಾಶಯಕ್ಕೆ ಈಗ 105 ಟಿಎಂಸಿ ಅಡಿಯಷ್ಟು ನೀರು ಸಂಗ್ರಹ ಸಾಮರ್ಥ್ಯ ಇಲ್ಲ. ಹೀಗಾಗಿ 80 ಟಿಎಂಸಿ ಅಡಿ ನೀರು ಮಾತ್ರ ಸಂಗ್ರಹಿಸಬಹುದು ಎಂದು ತಜ್ಞರು ಹೇಳುತ್ತಾರೆ.ತಜ್ಞರ ವರದಿ ಉಲ್ಲೇಖಿಸಿ, ಅಚ್ಚುಕಟ್ಟು ಪ್ರದೇಶದ ಭತ್ತದ ಎರಡನೇ ಬೆಳೆಗೆ ನೀರು ಸಿಗುವುದಿಲ್ಲ' ಎಂದು ಜಲಸಂಪನ್ಮೂಲ ಇಲಾಖೆ ಮೂಲಗಳು ತಿಳಿಸಿವೆ. ಎಲ್ಲಾ 33 ಕ್ರಸ್ಟ್‌ಗೇಟುಗಳನ್ನು ಬದಲಿಸುವಂತೆ ನೀರಾವರಿ ತಜ್ಞರು ನೀಡಿರುವ ಸೂಚನೆಯಿಂದ, ಭತ್ತ ಬೆಳೆಗಾರರ ಆತಂಕವನ್ನು ಇನ್ನೂ ಹೆಚ್ಚಿಸಿದೆ.


ಉದಯವಾಹಿನಿ ಚಿತ್ರ

> ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳ ನಿರ್ಲಕ್ಷ್ಯದಿಂದ ನಮಗೆ ನೀರು ಸಿಗುತ್ತಿಲ್ಲ. ಸರ್ಕಾರ ರೈತರಿಗೆ ಪರಿಹಾರ ನೀಡಬೇಕಾಗುತ್ತದೆ.
> – ಪ್ರಭುರಾಜ ಪಾಟೀಲ, ಬಿಜೆಪಿ ಜಿಲ್ಲಾ ಮುಖಂಡ


ಉದಯವಾಹಿನಿ ಚಿತ್ರ

**ರಾಯಚೂರು ಭಾಗಕ್ಕೆ ನೀರಿಲ್ಲ**

ಕುಡಿಯುವ ನೀರಿಗಾಗಿ ರಾಯಚೂರು ಜಿಲ್ಲೆ ಜಲಾಶಯ ಅವಲಂಬಿಸಿದೆ. ಈ ವರ್ಷ ಕುಡಿಯುವ ನೀರಿಗೆ ಪರಿತಪಿಸಬೇಕಾಗುತ್ತದೆ ಎಂದು ಜನರು ಆಡಿಕೊಳ್ಳುತ್ತಿದ್ದಾರೆ. ಜಲಾಶಯ ನೆಚ್ಚಿಕೊಂಡಿರುವ ಜಲ ವಿದ್ಯುತ್ ಉತ್ಪಾದನೆ ಮತ್ತು ನೀರು ಅವಲಂಬಿಸಿರುವ ವಿಜಯನಗರ ಮತ್ತು ಕೊಪ್ಪಳ ಜಿಲ್ಲೆಯ ಸುಮಾರು 10 -15 ಕೈಗಾರಿಕೆಗಳು ನೀರಿಗಾಗಿ ಪರಿತಪಿಸುವಂತಾಗಿದೆ.

**ವಿಜಯನಗರ ಕಾಲುವೆಗೆ ನೀರು ಬೇಕು**

ಸಾಕಷ್ಟು ಮಳೆಯಾಗಿ ಜಲಾಶಯ ತುಂಬಿದೆ. ಆದರೆ 2ನೇ ಬೆಳೆಗೆ ನೀರು ಸಿಗುತ್ತಿಲ್ಲ ಎಂದು ಅಧಿಕಾರಿಗಳು ಹೇಳುತ್ತಿದ್ದಾರೆ. ಆದರೆ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳ ನಿರ್ಲಕ್ಷ್ಯದಿಂದ ನೀರು ನದಿಗೆ ವ್ಯರ್ಥವಾಗಿ ಹರಿದು ಹೋಗುತ್ತಿದೆ. ಜಲಾಶಯ ಮುಂಭಾಗದ ಮುನಿರಾಬಾದ್, ಹುಲಿಗಿ, ಶಿವಪುರ, ಬಂಡಿ ಹರ್ಲಾಪುರ, ಸಾಣಾಪುರ ಮತ್ತು ಆನೆಗೊಂದಿವರೆಗೆ ಇರುವ ವಿಜಯನಗರ ಕಾಲುವೆಗಳಿಗೆ ನೀರು ಹರಿಸಬೇಕು. 2 ವರ್ಷದ ಹಿಂದೆ ಜಲಾಶಯದಲ್ಲಿ 7 ಟಿಎಂಸಿ ಅಡಿ ನೀರು ಉಳಿದಿರುವಾಗ ಕೂಡ ಹೋರಾಟ ಮಾಡಿ, ವಿಜಯನಗರ ಕಾಲುವೆಗೆ ನೀರು ಪಡೆದಿದ್ದೇವೆ. ಈ ಬಾರಿ ನೀರು ಹರಿಸದಿದ್ದರೆ ಹೋರಾಟಕ್ಕೆ ಇಳಿ ಯುತ್ತೇವೆ' ಎಂದು ಬಿಜೆಪಿ ಮುಖಂಡ ಪ್ರಭುರಾಜ ಪಾಟೀಲ ಎಚ್ಚರಿಕೆ ನೀಡಿದ್ದಾರೆ.

ಉದಯ ವಾಹಿನಿ
ದೇಶ/ವಿದೇಶ
ಗುರುವಾರ 04 ಸೆಪ್ಟೆಂಬರ್ 2025


## ಭಾರತದ ಜೊತೆ ವ್ಯವಹಾರವಿಲ್ಲ

**ವಾಷಿಂಗ್ಟನ್:** ಅಮೆರಿಕಾದ ಉತ್ಪನ್ನಗಳಿಗೆ ''ಭಾರತ ಹೆಚ್ಚಿನ ಸುಂಕ ವಿಧಿಸುತ್ತಿದೆ. ಇದು ವಿಶ್ವದಲ್ಲೇ ಅತಿ ಹೆಚ್ಚು ಎಂದು ಹೇಳಿರುವ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಈ ಕಾರಣಕ್ಕಾಗಿಯೇ ಭಾರತದೊಂದಿಗೆ ವ್ಯವಹಾರ ಮಾಡುತ್ತಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಭಾರತ, ನಮ್ಮೊಂದಿಗೆ ವ್ಯಾಪಾರ ಮಾಡುತ್ತಿದ್ದರು. ಹೀಗಾಗಿ ನಾವು ಅವರಿಗೆ ಶುಲ್ಕ ವಿಧಿಸುತ್ತಿರಲಿಲ್ಲ, ಈ ವಿಷಯದಲ್ಲಿ ನಮ್ಮದೂ ಮೂರ್ಖತನವೂ ಇರಬಹುದು, ಆದರೆ ಅಮೆರಿಕಾದ ಉತ್ಪನ್ನಗಳಿಗೆ ಭಾರತದಲ್ಲಿ ಅತಿ ಹೆಚ್ಚು ಸುಂಕ ವಿಧಿಸಲಾಗುತ್ತಿದೆ ಎಂದಿದ್ದಾರೆ.

ಶ್ವೇತಭವನದಲ್ಲಿ ಸುದ್ದಿಗಾರೊಂದಿಗೆ ಮಾತನಾಡಿದ ಅವರು ಅಮೆರಿಕಾದ ಉತ್ಪನ್ನಗಳ ಮೇಲೆ ಹೆಚ್ಚಿನ ಸುಂಕ ವಿಧಿಸಿದ ಹಿನ್ನಲೆಯಲ್ಲಿ ನಾವೂ ಕೂಡ ಭಾರತದ ಉತ್ಪನ್ನಗಳ ಮೇಲೆ ಹೆಚ್ಚಿನ ಸುಂಕ ವಿಧಿಸಿದ್ದೇವೆ ಎಂದು ತಮ್ಮ ನಿರ್ಧಾರವನ್ನು ಸಮರ್ಥಿಸಿಕೊಂಡಿದ್ದಾರೆ. ಹಾರ್ಲೆ ಡೇವಿಡ್ಸನ್ ಮೋಟಾರ್ಸೈಕಲ್‌ಗಳ ಉದಾಹರಣೆ ನೀಡಿದ ಅವರು ಭಾರತದಲ್ಲಿ ಶೇಕಡಾ 200ರಷ್ಟು ಸುಂಕ ವಿಧಿಸಲಾಗುತ್ತಿದೆ. ಈ ಹಿನ್ನಲೆಯಲ್ಲಿ ಮೋಟಾರು ಬೈಕ್ ಕಂಪನಿ ಭಾರತದಲ್ಲಿ ಮಾರಾಟ ಮಾಡಲು ಸಾಧ್ಯವಿಲ್ಲ ಎಂದು ಹೇಳಿದೆ, ನಮ್ಮ ದೇಶದ ಉತ್ಪನ್ನಗಳ ಬಗ್ಗೆ ತೆರಿಗೆ ವಿಧಿಸಲಾಗಿದೆ ಎಂದಿದ್ದಾರೆ.

## ಹಿಮಾಚಲದಲ್ಲಿ ಭಾರೀ ಮಳೆ

**ಶಿಮ್ಲಾ:** ಹಿಮಾಲಯದ ನಗರಿ ಹಿಮಾಚಲ ಪ್ರದೇಶದಲ್ಲಿ ಭಾರಿ ಮಳೆಯಿಂದಾಗಿ ಹಾನಿ ಸಂಭವಿಸಿದೆ. ಧಾರಾಕಾರ ಮಳೆ ಮತ್ತು ಪ್ರವಾಹ ಪರಿಸ್ಥಿತಿಯಿಂದಾಗಿ ಮನೆ ಕುಸಿದ ಘಟನೆಗಳಲ್ಲಿ ಐದು ಜನರು ಮೃತಪಟ್ಟಿದ್ದಾರೆ. ನಾಲ್ಕು ರಾಷ್ಟ್ರೀಯ ಹೆದ್ದಾರಿಗಳು ಸೇರಿ 1,337 ರಸ್ತೆಗಳನ್ನು ನಿರ್ಬಂಧಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ನಿರಂತರ ಮಳೆಯಿಂದಾಗಿ ಹವಾಮಾನ ಇಲಾಖೆ ಆರೆಂಜ್ ಅಲರ್ಟ್ ನೀಡಿದೆ. ಜತೆಗೆ ಉನಾ ಮತ್ತು ಬಿಲಾಸ್ಪುರ ಜಿಲ್ಲೆಗಳಲ್ಲಿ ಧಾರಾಕಾರ ಮಳೆಯಾಗುವ ಕುರಿತು ಯೆಲ್ಲೋ ಅಲರ್ಟ್ ಘೋಷಿಸಿದೆ. ಸೋಲನ್ ಜಿಲ್ಲೆಯ ಸಮ್ಲೋಹ್ ಗ್ರಾಮದಲ್ಲಿ, ತಡರಾತ್ರಿ ಸುರಿದ ಭಾರಿ ಮಳೆಯಿಂದಾಗಿ ಕುಸಿದ ಮನೆಯ ಅವಶೇಷಗಳಡಿಯಲ್ಲಿ ಮಹಿಳೆಯೊಬ್ಬರು ಹೂತುಹೋಗಿ ಮೃತಪಟ್ಟಿದ್ದಾರೆ. ಮೃತರನ್ನು ಹೇಮಲತಾ ಎಂದು ಗುರುತಿಸಲಾಗಿದೆ. ಆಕೆಯ ಪತಿ ಹೀಮ್ ರಾಮ್, ನಾಲ್ವರು ಮಕ್ಕಳು ಮತ್ತು 85 ವರ್ಷದ ಅಂಗವಿಕಲ ಅತ್ತೆ ಸಣ್ಣಪುಟ್ಟ ಗಾಯಗಳೊಂದಿಗೆ ಪಾರಾಗಿದ್ದಾರೆ. ಮತ್ತೊಂದು ಘಟನೆಯಲ್ಲಿ ಕುಲ್ಲುವಿನ ಧಲ್ಪುರದಲ್ಲಿ ಮನೆಯ ಅವಶೇಷದಡಿ ಸಿಲುಕಿದ ಮಹಿಳೆಯೊಬ್ಬರು ಮೃತಪಟ್ಟಿದ್ದಾರೆ.

### • 2026–27ರ ನಡುವೆ ಭಾರತಕ್ಕೆ ಬರಲಿವೆ ಎರಡೂ ಎಸ್–400 ಘಟಕಗಳು

# ರಷ್ಯಾದಿಂದ ಭಾರತಕ್ಕೆ ಮತ್ತೆರಡು ಎಸ್-400 ಕ್ಷಿಪಣಿ

**ಮಾಸ್ಕೋ:** ಪಾಕಿಸ್ತಾನದ ವಿರುದ್ಧದ ಯುದ್ಧದ ಸಮಯದಲ್ಲಿ, ಭಾರತಕ್ಕೆ ವಾಯು ರಕ್ಷಣಾ ವ್ಯವಸ್ಥೆಯ ಅಭೇದ್ಯ ಗುರಾಣಿಯಾಗಿ ಎಸ್-400 ಹೊರಹೊಮ್ಮಿತ್ತು. ಇದೀಗ ರಷ್ಯಾ ಎಸ್-400ನ ಹೆಚ್ಚಿನ ಘಟಕಗಳನ್ನು ಭಾರತಕ್ಕೆ ತಲುಪಿಸಲು ಮುಂದಾಗಿದ್ದು, ಉಭಯ ರಾಷ್ಟ್ರಗಳ ನಡುವೆ ಕ್ಷಿಪಣಿ ರಕ್ಷಣಾ ವ್ಯವಸ್ಥೆಯ ವಿತರಣೆಯನ್ನು ತ್ವರಿತಗೊಳಿಸುವ ಬಗ್ಗೆ ಮಾತುಕತೆಗಳು ನಡೆಯುತ್ತಿವೆ.

ಮೂಲಗಳ ಪ್ರಕಾರ ಎಸ್-400 ಕ್ಷಿಪಣಿ ರಕ್ಷಣಾ ವ್ಯವಸ್ಥೆಯ ಒಂದು ಘಟಕವನ್ನು 2026ರ ವೇಳೆಗೆ ಮತ್ತು ಇನ್ನೊಂದು ಘಟಕವನ್ನು 2027ರ ವೇಳೆಗೆ, ರಷ್ಯಾ ಭಾರತಕ್ಕೆ ತಲುಪಿಸುವ ನಿರೀಕ್ಷೆಯಿದೆ. 2018ರಲ್ಲಿ ಭಾರತವು ಒಟ್ಟು ಐದು ಎಸ್-500 ಕ್ಷಿಪಣಿ ರಕ್ಷಣಾ ವ್ಯವಸ್ಥೆಗಳನ್ನು ಪೂರೈಸುವಂತೆ ರಷ್ಯಾವನ್ನು ಕೇಳಿಕೊಂಡಿತ್ತು, ಅದರಂತೆ ರಷ್ಯಾ ಈಗಾಗಲೇ ಮೂರು ಘಟಕಗಳನ್ನು ರವಾನಿಸಿದ್ದು, ಇನ್ನುಳಿದ ಎರಡು ಘಟಕಗಳನ್ನು ಭಾರತಕ್ಕೆ ಕಳುಹಿಸುವ ಪ್ರಕ್ರಿಯೆಗೆ ಚಾಲನೆ ನೀಡಿದೆ.

ಕಳೆದ ವರ್ಷ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ತಮ್ಮ ರಷ್ಯಾ ಭೇಟಿಯ ಸಮಯದಲ್ಲಿ, ಎಸ್-400 ಕ್ಷಿಪಣಿ ರಕ್ಷಣಾ ಘಟಕಗಳ ವಿತರಣೆಯಲ್ಲಿ ವಿಳಂಬವನ್ನು ಪ್ರಸ್ತಾಪಿಸಿದ್ದರು. ಇತ್ತೀಚಿಗೆ ನಡೆದ ಭಾರತ-ರಷ್ಯಾ ದ್ವಿಪಕ್ಷೀಯ ಮಾತುಕತೆಯಲ್ಲಿ, ಬಾಖಿ ಉಳಿದಿರುವ ಎರಡು ಘಟಕಗಳನ್ನು ಶೀಘ್ರವೇ ರವಾನಿಸುವುದಾಗಿ ರಷ್ಯಾ ಭರವಸೆ ನೀಡಿದೆ ಎಂದು ಮೂಲಗಳು ಖಚಿತಪಡಿಸಿವೆ. ಭಾರತವು ಈಗಾಗಲೇ ನಮ್ಮ ಎಸ್-400 ವ್ಯವಸ್ಥೆಯನ್ನು ಹೊಂದಿದೆ. ರಕ್ಷಣಾ ಕ್ಷೇತ್ರದಲ್ಲಿ ನಮ್ಮ ಸಹಕಾರವನ್ನು ವಿಸ್ತರಿಸುವ ದೃಷ್ಟಿಯಿಂದ, ಬಾಕಿ ಉಳಿದಿರುವ ಎಸ್-400 ವ್ಯವಸ್ಥೆಯ ಎರಡು ಘಟಕಗಳು ಭಾರತಕ್ಕೆ ಶೀಘ್ರದಲ್ಲೇ ರವಾನೆ ಆಗಲಿವೆ ಎಂದು ರಷ್ಯಾದ ಫೆಡರಲ್ ಸರ್ವಿಸ್ ಫಾರ್ ಮಿಲಿಟರಿ-ಟೆಕ್ನಿಕಲ್ ಕೋ ಆಪರೇಷನ್‌ನ ಮುಖ್ಯಸ್ಥ ಡಿಮಿಟ್ರಿ ಶುಗಾಯೇವ್ ಹೇಳಿದ್ದಾರೆ. ಏರ್ ಚೀಫ್ ಮಾರ್ಷಲ್ ಎಪಿ ಸಿಂಗ್ ಅವರು ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆಯಲ್ಲಿ, ಎಸ್-400 ಕ್ಷಿಪಣಿ ರಕ್ಷಣಾ ವ್ಯವಸ್ಥೆಯನ್ನು ಗೇಮ್-ಚೇಂಜರ್ ಎಂದು ಕರೆದಿದ್ದರು. ಎಸ್-400 ಭಾರತೀಯ ಪಡೆಗಳಿಗೆ ಅಮೂಲ್ಯವಾದ ಆಸ್ತಿಯಾಗಿದೆ. ಇತ್ತೀಚಿನ ಸಂಘರ್ಷದ ಸಮಯದಲ್ಲಿ ಪಾಕಿಸ್ತಾನವು ಭಾರತವನ್ನು ಗುರಿಯಾಗಿಸಿ ಬಹು ಸ್ಫೋಟಕಗಳನ್ನು ಹಾರಿಸಿದರೂ, ಎಸ್-400 ಕ್ಷಿಪಣಿ ವ್ಯವಸ್ಥೆಯನ್ನು ಭೇದಿಸಲು ಅದಕ್ಕೆ ಸಾಧ್ಯವಾಗಲಿಲ್ಲ. ಈ ಕ್ಷಿಪಣಿ ವ್ಯವಸ್ಥೆಯು 600 ಕಿ.ಮೀ ದೂರದಿಂದಲೇ ಶತ್ರು ಚಟುವಟಿಕೆಯನ್ನು ಪತ್ತೆ ಮಾಡುತ್ತದೆ. ಏಕಕಾಲದಲ್ಲಿ 100ಕ್ಕೂ ಹೆಚ್ಚು ಗುರಿಗಳನ್ನು ಪತ್ತೆಹಚ್ಚುವ ಸಾಮರ್ಥ್ಯ ಹೊಂದಿರುವ ಎಸ್-400, 400 ಕಿ.ಮೀ ವರೆಗಿನ ದಾಳಿಯ ವ್ಯಾಪ್ತಿಯನ್ನು ಒಳಗೊಂಡಿದೆ. ಇದು ಬಾಂಬರ್‌ಗಳು, ಫೈಟರ್ ಜೆಟ್‌ಗಳು, ಡ್ರೋನ್‌ಗಳುಮತ್ತು ಬ್ಯಾಲಿಸ್ಟಿಕ್ ಕ್ಷಿಪಣಿಗಳನ್ನು ಸಹ ನಾಶಪಡಿಸುವ ಸಾಮರ್ಥ್ಯ ಹೊಂದಿದೆ. ಎಸ್-400 ವ್ಯವಸ್ಥೆಯ ಪ್ರತಿಯೊಂದು ರೆಜಿಮೆಂಟ್ ಅಥವಾ ಘಟಕವು ಎಂಟು ಉಡಾವಣಾ ವಾಹನಗಳನ್ನು ಹೊಂದಿದ್ದು, ಪ್ರತಿಯೊಂದೂ ಘಟಕವೂ ನಾಲ್ಕು ಕ್ಷಿಪಣಿ ಕೊಳವೆಗಳನ್ನು ಹೊಂದಿವೆ. 2021 ಮತ್ತು 2023ರ ನಡುವೆ ಮೂರು ಖ-400 ಘಟಕಗಳನ್ನು ಸ್ವೀಕರಿಸಲಾಯಿತು.



ಏನೋ ಇದೆ ಗುರು ವಿಷ್ಯಾ

- ಭಾರತಕ್ಕೆ ಬಾಕಿ ಉಳಿದಿರುವ ಎಸ್-400 ಕ್ಷಿಪಣಿ ರಕ್ಷಣಾ ವ್ಯವಸ್ಥೆ ಪೂರೈಸಲಿದೆ ರಷ್ಯಾ.
- ಭಾರತ-ರಷ್ಯಾ ಎಸ್-400 ಕ್ಷಿಪಣಿ ರಕ್ಷಣಾ ವ್ಯವಸ್ಥೆ ಪೂರೈಕೆ ಒಪ್ಪಂದ.
- 2026-27ರ ನಡುವೆ ಭಾರತಕ್ಕೆ ಬರಲಿವೆ ಎರಡೂ ಎಸ್-400 ಘಟಕಗಳು.

**39,000 ಕೋಟಿ ರೂ. ಮೌಲ್ಯದ ಒಪ್ಪಂದ**

ಪಾಕಿಸ್ತಾನ ಮತ್ತು ಚೀನಾದ ಬೆದರಿಕೆಗಳನ್ನು ಎದುರಿಸಲು ಭಾರತವು 2018ರಲ್ಲಿ ರಷ್ಯಾದಿಂದ ಎಸ್-400 ಕ್ಷಿಪಣಿ ರಕ್ಷಣಾ ವ್ಯವಸ್ಥೆಯನ್ನು ಖರೀದಿಸುವ ಒಪ್ಪಂದ ಮಾಡಿಕೊಂಡಿತ್ತು. ಒಟ್ಟು 39,000 ಕೋಟಿ ರೂ. ಮೌಲ್ಯದ ಈ ಒಪ್ಪಂದದ ಪ್ರಕಾರ, ರಷ್ಯಾ ಭಾರತಕ್ಕೆ ಐದು ಎಸ್-400 ಟ್ರಯಂಫ್ ವ್ಯವಸ್ಥೆಯನ್ನು ಕಳಿಹಿಸಬೇಕಿದೆ.



ಆದರೆ ಉಳಿದ ಎರಡು ಘಟಕಗಳನ್ನು ಕಳುಹಿಸುವಲ್ಲಿ ರಷ್ಯಾ ವಿಳಂಬ ಮಾಡಿದೆ. ಸದ್ಯ ಭಾರತ ಹೊಂದಿರುವ ಮೂರು ಘಟಕಗಳನ್ನು ಪೂರ್ವ ವಲಯದ ಆದಂಪುರ (ಪಂಜಾಬ್) ಮತ್ತು ಪಶ್ಚಿಮ ವಲಯದಲ್ಲಿ ನಿಯೋಜಿಸಲಾಗಿದೆ. ಇತ್ತೀಚಿಗೆ ಚೀನಾದ ಟಿಯಾಂಜಿನ್‌ನಲ್ಲಿ ನಡೆದ ಶಾಂಘೈ ಸಹಕಾರ ಒಕ್ಕೂಟದ ಶೃಂಗಸಭೆಯಲ್ಲಿ, ಪ್ರಧಾನಮಂತ್ರಿ ನರೇಂದ್ರ ಮೋದಿ ಮತ್ತು ವ್ಲಾಡಿಮಿರ್ ಪುಟಿನ್ ನೇತೃತ್ವದಲ್ಲಿ ಭಾರತ ಮತ್ತು ರಷ್ಯಾ ದ್ವಿಪಕ್ಷೀಯ ಮಾತುಕತೆ ನಡೆದಿತ್ತು. ಈ ಸಭೆಯಲ್ಲಿ ಉಭಯ ರಾಷ್ಟ್ರಗಳ ನಡುವಿನ ಸಾಮರಿಕ ಸಂಬಂಧವನ್ನು ಗಟ್ಟಿಗೊಳಿಸುವ ಬಗ್ಗೆ ಚರ್ಚೆ ನಡೆಸಲಾಗಿತ್ತು.

## ಮಿನಿ ನ್ಯೂಸ್

### ರಷ್ಯಾ ಅಧ್ಯಕ್ಷ ಪುಟಿನ್ ವರ್ತನೆ ನಿರಾಶೆ ತಂದಿದೆ: ಅಧ್ಯಕ್ಷ ಡೊನಾಲ್ಡ್ ಟ್ರಂಪ್

**ವಾಷಿಂಗ್ಟನ್:** ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರ ವರ್ತನೆ ನಿರಾಶೆ ತಂದಿದೆ ಎಂದು ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಹೇಳಿದ್ದಾರೆ. ರೇಡಿಯೋ ಸಂದರ್ಶನವೊಂದರಲ್ಲಿ ಮಾತನಾಡಿರುವ ಟ್ರಂಪ್ ಅವರು, ಅಲಾಸ್ಕಾದಲ್ಲಿ ನಡೆದ ಶೃಂಗಸಭೆಯ ನಂತರ ಉಕ್ರೇನ್ ಜೊತೆಗಿನ ಶಾಂತಿ ಒಪ್ಪಂದ ಕುರಿತು ಪುಟಿನ್ ನಿರ್ಧಾರ ಕೈಗೊಳ್ಳದಿರುವುದು ನಿರಾಶೆ ತರಿಸಿದೆ ಎಂದು ಹೇಳಿದ್ದಾರೆ.

ಉಕ್ರೇನ್ ಕುರಿತ ನಿರ್ಧಾರ ಕೈಗೊಳ್ಳದೆ ಪುಟಿನ್ ದ್ರೋಹ ಮಾಡಿದ್ದಾರಾ ಎಂಬ ಪ್ರಶ್ನೆಗೆ ಉತ್ತರಿಸಿರುವ ಅವರು, ನಮ್ಮ ಹಾಗೂ ರಷ್ಯಾ ನಡುವೆ ಉತ್ತಮ ಸಂಬಂಧವಿತ್ತು. ಆದರೆ, ಇದೀಗ ನಿರಾಶೆಗೊಂಡಿದ್ದೇನೆಂದು ತಿಳಿಸಿದ್ದಾರೆ. ಶಾಂತಿ ಒಪ್ಪಂದಕ್ಕಾಗಿ 2 ವಾರಗಳ ಗಡುವು ನಿಗದಿಪಡಿಸಿದ್ದರೂ ರಷ್ಯಾ ಯಾವುದೇ ನಿರ್ಧಾರ ಕೈಗೊಂಡಿಲ್ಲ. ಇದರಿಂದ ನಿರಾಶೆಗೊಂಡಿದ್ದೇನೆಂದು ಹೇಳಿದ್ದಾರೆ. ಆದರೆ, ರಷ್ಯಾ ಯಾವ ರೀತಿಯ ಪರಿಣಾಮ ಎದುರಿಸಲಿದೆ ಎಂಬುದರ ಕುರಿತು ಟ್ರಂಪ್ ಸ್ಪಷ್ಟಪಡಿಸಿಲ್ಲ.

### ವರದಕ್ಷಿಣೆ ಕಿರುಕುಳ ತಾಳಲಾರದೆ ಟೆರೇಸಿನಿಂದ ಹಾರಿದ ಮೇಲೂ ಥಳಿಸಿದ ಅತ್ತೆ-ಮಾವ

**ಅಲಿಗಢ:** ಉತ್ತರ ಪ್ರದೇಶದ ಅಲಿಗಢ ಜಿಲ್ಲೆಯಲ್ಲಿ ಆಘಾತಕಾರಿ ಘಟನೆ ನಡೆದಿದೆ. ಈ ಘಟನೆಯ ವಿಡಿಯೋ ಹೊರಬಿದ್ದಿದ್ದು, ಗಾಯಗೊಂಡ ಮಹಿಳೆ ತನ್ನ 2 ಅಂತಸ್ತಿನ ಮನೆಯ ಟೆರೇಸಿನಿಂದ ಜಿಗಿದ ನಂತರ ಆಕೆಯ ಮಾವಂದಿರು ಆಕೆಯನ್ನು ಥಳಿಸುತ್ತಿರುವುದನ್ನು ನೋಡಬಹುದು. ವರದಿಗಳ ಪ್ರಕಾರ, ಅಲಿಗಢ ಜಿಲ್ಲೆಯ ಇಗ್ಲಾಸ್ ತೆಹಸಿಲ್ ಅಡಿಯಲ್ಲಿನ ದಮ್ಕೌಲಿ ಗ್ರಾಮದಲ್ಲಿ ಈ ಘಟನೆ ನಡೆದಿದೆ. ಗಂಭೀರವಾಗಿ ಗಾಯಗೊಂಡ ಮಹಿಳೆಯನ್ನು ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ಸೇರಿಸಲಾಗಿದೆ.

ಮೊಬೈಲ್ ಕ್ಯಾಮೆರಾದಲ್ಲಿ ಸೆರೆಯಾದ ಈ ಘಟನೆಯಲ್ಲಿ, ಒಬ್ಬರು ಮಹಿಳೆ ಮನೆಯ ಟೆರೇಸಿನ ಅಂಚಿನಲ್ಲಿ ನಿಂತಿರುವುದನ್ನು ನೋಡಬಹುದು. ಆಗ ಕೆಳಗೆ ನಿಂತಿದ್ದ ಆಕೆಯ ಅತ್ತೆ-ಮಾವಂದಿರು ಪದೇ ಪದೇ ಕೆಳಗೆ ಹಾರುವಂತೆ ಆಕೆಯನ್ನು ಒತ್ತಾಯಿಸಿದ್ದಾರೆ. ಆಗ ಅರ್ಚನಾ ಎಂಬ ಆ ಮಹಿಳೆ 2 ಅಂತಸ್ತಿನ ಟೆರೇಸಿನಿಂದ ಕೆಳಗೆ ಹಾರಿದ್ದಾರೆ. ಗಾಯಗೊಂಡು ಬಿದ್ದ ಆಕೆಯನ್ನು ಮತ್ತೆ ಥಳಿಸಿರುವ ಅತ್ತೆ-ಮಾವ ಆಕೆಯನ್ನು ನೆಲಕ್ಕೆ ಹಾಕಿ ಕಾಲಿನಿಂದ ಒದ್ದಿದ್ದಾರೆ. ವರದಕ್ಷಿಣೆಗಾಗಿ ಆಕೆಗೆ ಈ ರೀತಿ ಕಿರುಕುಳ ನೀಡಲಾಗಿದೆ ಎನ್ನಲಾಗಿದೆ.

### ಕೆ.ಸಿ.ಆರ್ ಪುತ್ರಿ ರಾಜೀನಾಮೆ



**ಹೈದರಾಬಾದ್:** ತೆಲಂಗಾಣದ ಬಿಆರ್‌ಎಸ್ ಪಕ್ಷದಿಂದ ಅಮಾನತುಗೊಂಡಿದ್ದ ಕೆ.ಸಿ. ಚಂದ್ರಶೇಖರ ರಾವ್ ಅವರ ಪುತ್ರಿ ಕೆ. ಕವಿತಾ ಅವರು ಪಕ್ಷ ಮತ್ತು ವಿಧಾನ ಪರಿಷತ್ ಸದಸ್ಯ ಸ್ಥಾನಕ್ಕೆ ಬುಧವಾರ ರಾಜೀನಾಮೆ ಸಲ್ಲಿಸಿದ್ದಾರೆ.ಕೆ ಕವಿತಾ ಅವರನ್ನು ಭಾರತ ರಾಷ್ಟ್ರ ಸಮಿತಿ ಪಕ್ಷದಿಂದ ಪಕ್ಷದ ಮುಖ್ಯಸ್ಥ ಕೆ ಚಂದ್ರಶೇಖರ ರಾವ್ ಅವರು ಅಮಾನತುಗೊಳಿಸಿದ್ದರು.

ಕವಿತಾ ಅವರ ಇತ್ತೀಚಿನ ನಡೆ ಮತ್ತು ಅವರ ಪಕ್ಷ ವಿರೋಧಿ ಚಟುವಟಿಕೆಗಳು ಬಿಆರ್‌ಎಸ್‌ಗೆ ಇರಿಸುಮುರಿಸು ಉಂಟು ಮಾಡಿದ್ದವು. ಇದರಿಂದಾಗಿ ಅವರನ್ನು ಅಮಾನತು ಮಾಡುವ ನಿರ್ಧಾರವನ್ನು ಪಕ್ಷ ತೆಗೆದುಕೊಂಡಿದೆ' ಎಂದು ಪಕ್ಷದ ಪ್ರಧಾನ ಕಾರ್ಯದರ್ಶಿ ಟಿ.ರವೀಂದರ್ ರಾವ್ ಅವರು ಹೇಳಿದ್ದರು.

ಇದರ ಬೆನ್ನಲ್ಲೇ ಪಕ್ಷ ಹಾಗೂ ಎಂಎಲ್‌ಸಿ ಸ್ಥಾನಕ್ಕೆ ಕವಿತಾ ಅವರು ರಾಜೀನಾಮೆ ನೀಡಿದ್ದಾರೆ. ರಾಜೀನಾಮೆ ಪತ್ರ ಸಲ್ಲಿಸಿದ ಬಳಿಕ ಬೆಂಬಲಿಗರೊಂದಿಗೆ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಹರೀಶ್ ರಾವ್ ಅವರು ಕೆಸಿಆರ್ ಕುಟುಂಬದ ವಿರುದ್ಧ ಪಿತೂರಿ ನಡೆಸುತ್ತಿದ್ದಾರೆ. ಮುಖ್ಯಮಂತ್ರಿ ಎ ರೇವಂತ್ ರೆಡ್ಡಿ ಅವರೊಂದಿಗೆ ಕೈಜೋಡಿಸಿದ್ದಾರೆ, ಈ ಪಿತೂರಿಗಳ ಬಗ್ಗೆ ನನ್ನ ಸಹೋದರ ಮತ್ತು ಬಿಆರ್‌ಎಸ್ ಕಾರ್ಯಾಧ್ಯಕ್ಷ ಕೆ ಟಿ ರಾಮರಾವ್ ಎಚ್ಚರಿಕೆಯಿಂದ ಇರಬೇಕು ಎಂದು ಹೇಳಿದ್ದಾರೆ. ನಾನು ಯಾವುದೇ ಹುದ್ದೆಗಳಿಗೆ ಎಂದಿಗೂ ಆಕಾಂಕ್ಷಿಯಾಗಿರಲಿಲ್ಲ. ಅಧ್ಯಕ್ಷರಿಗೆ ರಾಜೀನಾಮೆ ಪತ್ರವನ್ನು ಕಳುಹಿಸುತ್ತಿದ್ದೇನೆ. ಬಿಆರ್‌ಎಸ್‌ನ ಪ್ರಾಥಮಿಕ ಸದಸ್ಯತ್ವಕ್ಕೂ ನಾನು ರಾಜೀನಾಮೆ ಕಳುಹಿಸುತ್ತಿದ್ದೇನೆಂದು ಹೇಳಿದ್ದಾರೆ.

ಇದೇ ವೇಳೆ ಕಾಳೇಶ್ವರಂ ನೀರಾವರಿ ಯೋಜನೆಯಲ್ಲಿ ಕೇಳಿ ಬಂದ ಅಕ್ರಮ ಕೂಡ ಹರೀಶ್ ರಾವ್ ಮತ್ತು ಸಂತೋಷ್ ರಾವ್ ಅವರೇ ನಡೆಸಿದ್ದು ಎಂದೂ ಕವಿತಾ ಆರೋಪಿಸಿದ್ದಾರೆ.

## ಮುಸ್ಲಿಮರನ್ನು ಹೊರತುಪಡಿಸಿ ಪಾಸ್‌ಪೋರ್ಟ್ ಇಲ್ಲದೆ 2024ಕ್ಕಿಂತ ಮೊದಲು ಭಾರತಕ್ಕೆ ಬಂದವರಿಗೆ ಉಳಿಯಲು ಅವಕಾಶ

**ನವದೆಹಲಿ:** ಧಾರ್ಮಿಕ ಕಿರುಕುಳದಿಂದ ತಪ್ಪಿಸಿಕೊಳ್ಳಲು 2024ರ ಡಿಸೆಂಬರ್ ಒಳಗೆ ಭಾರತಕ್ಕೆ ಬಂದ ಹಿಂದೂಗಳು, ಸಿಖ್ಖರು, ಬೌದ್ಧರು, ಜೈನರು, ಪಾರ್ಸಿಗಳು ಮತ್ತು ಕ್ರಿಶ್ಚಿಯನ್ನರಿಗೆ ಪಾಸ್‌ಪೋರ್ಟ್ ಅಥವಾ ಇತರ ಪ್ರಯಾಣ ದಾಖಲೆಗಳಿಲ್ಲದೆ ದೇಶದಲ್ಲಿ ಉಳಿಯಲು ಅವಕಾಶ ನೀಡಲಾಗುವುದು ಎಂದು ಕೇಂದ್ರ ಗೃಹ ಸಚಿವಾಲಯ ತನ್ನ ಆದೇಶದಲ್ಲಿ ತಿಳಿಸಿದೆ. ಇತ್ತೀಚಿನ ವಲಸೆ ಮತ್ತು ವಿದೇಶಿಯರ ಕಾಯ್ದೆಗೆ ಸಂಬಂಧಿಸಿದ ಆದೇಶವು ಡಿಸೆಂಬರ್ 2024 ರವರೆಗೆ ಬಂದವರಿಗೆ ಪಾಸ್‌ಪೋರ್ಟ್ ಇಲ್ಲದೆ ಉಳಿಯಲು ಅವಕಾಶ ನೀಡುತ್ತದೆ ಮತ್ತು ಪೌರತ್ವವನ್ನು ಖಾತರಿಪಡಿಸುವುದಿಲ್ಲ. ಇತ್ತೀಚೆಗೆ ಅಂಗೀಕರಿಸಲಾದ ವಲಸೆ ಮತ್ತು ವಿದೇಶಿಯರ ಕಾಯ್ದೆ, 2025ಕ್ಕೆ ಸಂಬಂಧಿಸಿದಂತೆ ಸಚಿವಾಲಯ ಹೊರಡಿಸಿದ ಅನೇಕ ಆದೇಶಗಳಲ್ಲಿ ಈ ಆದೇಶವೂ ಸೇರಿದೆ, ಇದು ಸೋಮವಾರದಿಂದ ಜಾರಿಗೆ ಬಂದಿದೆ.

ಇದು ಮೂರು ದೇಶಗಳ ಅಲ್ಪಸಂಖ್ಯಾತರಿಗೆ ಪರಿಹಾರವಾಗಿದೆ ಏಕೆಂದರೆ ಕಳೆದ ವರ್ಷ ಜಾರಿಗೆ ಬಂದ ಈ ಹಿಂದೆ ತಂದ ಕಾನೂನು ಪೌರತ್ವ ತಿದ್ದುಪಡಿ ಕಾಯ್ದೆ ಡಿಸೆಂಬರ್ 31, 2014 ರಂದು ಅಥವಾ ಅದಕ್ಕೂ ಮೊದಲು ಭಾರತಕ್ಕೆ ಬಂದವರಿಗೆ ಮಾತ್ರ ಪೌರತ್ವ ಪಡೆಯಲು ಅರ್ಹತೆಗಾಗಿ ಅನ್ವಯಿಸುತ್ತದೆ.

ಖಚಿತವಾಗಿ ಹೇಳುವುದಾದರೆ, ಇತ್ತೀಚಿನ ವಲಸೆ ಮತ್ತು ವಿದೇಶಿಯರ ಕಾಯ್ದೆಗೆ ಸಂಬಂಧಿಸಿದ ಆದೇಶವು ಡಿಸೆಂಬರ್ 2024 ರವರೆಗೆ ಬಂದವರಿಗೆ ಪಾಸ್‌ಪೋರ್ಟ್ ಇಲ್ಲದೆ ಉಳಿಯಲು ಅವಕಾಶ ನೀಡುತ್ತದೆ ಮತ್ತು ಪೌರತ್ವವನ್ನು ಖಾತರಿಪಡಿಸುವುದಿಲ್ಲ. ಇದು ಹೆಚ್ಚಿನ ಸಂಖ್ಯೆಯ ಜನರಿಗೆ, ವಿಶೇಷವಾಗಿ ಪಾಕಿಸ್ತಾನದಿಂದ ಹಿಂದೂಗಳಿಗೆ, 2014 ರ ನಂತರ ಭಾರತಕ್ಕೆ ದಾಟಿ ತಮ್ಮ ಭವಿಷ್ಯದ ಬಗ್ಗೆ ಚಿಂತಿತರಾಗಿದ್ದವರಿಗೆ ಪರಿಹಾರವಾಗಿ ಬರುತ್ತದೆ. ನೇಪಾಳ ಮತ್ತು ಭೂತಾನ್ ನಾಗರಿಕರು ಹಾಗೂ ಎರಡು ನೆರೆಯ ದೇಶಗಳಿಂದ ಭೂಮಿ ಅಥವಾ ವಾಯುಮಾರ್ಗದ ಮೂಲಕ ಭಾರತಕ್ಕೆ ಪ್ರವೇಶಿಸುವ ಭಾರತೀಯರು ಮೊದಲಿನಂತೆ ಪಾಸ್‌ಪೋರ್ಟ್ ಅಥವಾ ವೀಸಾವನ್ನು ಒದಗಿಸುವ ಅಗತ್ಯವಿಲ್ಲ.ಭಾರತಕ್ಕೆ ಕರ್ತವ್ಯದ ಮೇಲೆ ಪ್ರವೇಶಿಸುವ ಅಥವಾ ನಿರ್ಗಮಿಸುವ ಭಾರತದ ನೌಕಾ, ಮಿಲಿಟರಿ ಅಥವಾ ವಾಯುಪಡೆಯ ಸದಸ್ಯರು ಮತ್ತು ಅಂತಹ ಯಾವುದೇ ವ್ಯಕ್ತಿಯ ಕುಟುಂಬ ಸದಸ್ಯರು ಸರ್ಕಾರಿ ಸಾರಿಗೆಯಲ್ಲಿ ಅಂತಹ ವ್ಯಕ್ತಿಯೊಂದಿಗೆ ಹೋಗುವಾಗ ಪಾಸ್‌ಪೋರ್ಟ್ ಅಥವಾ ವೀಸಾವನ್ನು ಕೊಂಡೊಯ್ಯುವ ಅಗತ್ಯವಿಲ್ಲ ಎಂದು ಗೃಹ ಸಚಿವಾಲಯ ವಲಸೆ ಮತ್ತು ವಿದೇಶಿಯರ ಕಾಯ್ದೆ, 2025 ರ ಜಾರಿಯ ನಂತರ ಹೊರಡಿಸಿದ ಆದೇಶದಲ್ಲಿ ತಿಳಿಸಲಾಗಿದೆ.




### ಭಯದಿಂದ ಭಾರತದಲ್ಲಿ ಆಶ್ರಯ

**ಧಾರ್ಮಿಕ ಕಿರುಕುಳ ಅಥವಾ ಧಾರ್ಮಿಕ ಕಿರುಕುಳದ ಭಯದಿಂದ ಭಾರತದಲ್ಲಿ ಆಶ್ರಯ ಪಡೆಯಬೇಕಾದ ಅಫ್ಘಾನಿಸ್ತಾನ, ಬಾಂಗ್ಲಾದೇಶ ಮತ್ತು ಪಾಕಿಸ್ತಾನದಲ್ಲಿ ಅಲ್ಪಸಂಖ್ಯಾತ ಸಮುದಾಯಕ್ಕೆ ಸೇರಿದ ಜನರು ಹಿಂದೂಗಳು, ಸಿಖ್ಖರು, ಬೌದ್ಧರು, ಜೈನರು, ಪಾರ್ಸಿಗಳು ಮತ್ತು ಕ್ರಿಶ್ಚಿಯನ್ನರು ಡಿಸೆಂಬರ್ 31, 2024 ರಂದು ಅಥವಾ ಅದಕ್ಕೂ ಮೊದಲು ಮಾನ್ಯ ದಾಖಲೆಗಳಿಲ್ಲದೆ ಅಥವಾ ಅವಧಿ ಮೀರಿದ ದಾಖಲೆಗಳೊಂದಿಗೆ ದೇಶವನ್ನು ಪ್ರವೇಶಿಸಿದರು ಎಂಬುದಕ್ಕೆ ಆದೇಶದ ವ್ಯಾಪ್ತಿಗೆ ಬರಲಿದೆ.**

## ಜಮ್ಮು ಮತ್ತು ಕತ್ರಾ ನಡುವೆ ರೈಲುಗಳ ಸಂಚಾರ ರದ್ದು

**ಶ್ರೀನಗರ:** ದಕ್ಷಿಣ ಭಾರತದಲ್ಲಿ ಮಳೆಯ ಅಬ್ಬರ ಕಡಿಮೆಯಾಗಿದ್ದರೂ ಈಶಾನ್ಯ ಭಾರತದಲ್ಲಿ ಭಾರೀ ಮಳೆಯಾಗುತ್ತಿದೆ. ಹೀಗಾಗಿ ಸೆ.30ರವರೆಗೆ ಜಮ್ಮು ಮತ್ತು ಕತ್ರಾ ನಿಲ್ದಾಣದಿಂದ ಬರುವ 68 ಒಳ-ಹೊರಹೋಗುವ ರೈಲುಗಳನ್ನು ರದ್ದುಗೊಳಿಸಲಾಗಿದ್ದು, ಈಗಾಗಲೇ ರದ್ದುಗೊಂಡಿದ್ದ 24 ರೈಲುಗಳು ಪುನರಾರಂಭಗೊಳ್ಳಲಿವೆ ಎಂದು ಭಾರತೀಯ ರೈಲ್ವೆ ತಿಳಿಸಿದೆ.

ಭಾರೀ ಮಳೆ ಮತ್ತು ಹಠಾತ್ ಪ್ರವಾಹದಿಂದಾಗಿ, ಪಠಾಣ್ಕೋಟ್-ಜಮು ವಿಭಾಗದ ಅನೇಕ ಸ್ಥಳಗಳಲ್ಲಿ ಸಮಸ್ಯೆ ಮತ್ತು ಬಿರುಕುಗಳಿಂದಾಗಿ ಕಳೆದ ಎಂಟು ದಿನಗಳಿಂದ ಜಮು ರೈಲ್ವೆ ವಿಭಾಗದಲ್ಲಿ ಟ್ರೈಲ್ ಸಂಚಾರವನ್ನು ಸ್ಥಗಿತಗೊಳಿಸಲಾಗಿದೆ. ಕತ್ರಾದ ಮಾತಾ ವೈಷ್ಣೋದೇವಿ ದೇಗುಲದ ಬಳಿ ಸಂಭವಿಸಿದ ಭೂಕುಸಿತದಲ್ಲಿ 34 ಜನರು ಸಾವನ್ನಪ್ಪಿದ್ದಾರೆ. ಜಮು ಪ್ರದೇಶದಲ್ಲಿ 1910ರಿಂದೀಚೆಗೆ ವೇಳೆಗೆ 380 ಮಿ.ಮೀ. ಮಳೆಯಾಗಿದ್ದು, ಅತಿಹೆಚ್ಚು ಮಳೆಯಾಗಿದೆ. ಸಿಕ್ಕಿಬಿದ್ದ ಪ್ರಯಾಣಿಕರ ಸಂಚಾರಕ್ಕೆ ಅನುಕೂಲವಾಗುವಂತೆ, ಈ ಕೆಳಗಿನ ರೈಲು ಸೇವೆಗಳನ್ನು ನಡೆಸಲಾಗುತ್ತಿದೆ. ಜಮು ತಾವಿ- ಶ್ರೀ ಮಾತಾ ವೈಷ್ಣೋ ದೇವಿ ಕತ್ರಾ (2 ಶಟಲ್ ಸೇವೆಗಳು), ಜಮು ತಾವಿ-ಕೋಲ್ಕತ್ತಾ, ಮತ್ತು ಶ್ರೀ ಮಾತಾ ವೈಷ್ಣೋದೇವಿ ಕತ್ರಾ-ನವದೆಹಲಿಗೆ ಎಂದು ಅಧಿಕಾರಿಯೊಬ್ಬರು ಪಿಟಿಐಗೆ ತಿಳಿಸಿದ್ದಾರೆ. ಜಮು-ಕತ್ರಾ ವಿಭಾಗದಲ್ಲಿ ನಾಲ್ಕು ರೈಲುಗಳನ್ನು ಸೇರಿಸಲಾಗಿದೆ. ಸೆಪ್ಟೆಂಬರ್ 1ರಿಂದ 15ರವರೆಗೆ ಕಾರ್ಯನಿರ್ವಹಿಸುವ ಶಟಲ್ ಸೇವೆಗಾಗಿ ಜಮು-ಕತ್ರಾ ವಿಭಾಗದಲ್ಲಿ ನಾಲ್ಕು ರೈಲುಗಳನ್ನು ಸೇರಿಸಿಕೊಳ್ಳಲಾಗಿದೆ ಎಂದು ಅಧಿಕಾರಿ ತಿಳಿಸಿದ್ದಾರೆ.



ರೈಲ್ವೆಯು ಸಂಪರ್ಕ ಕ್ರಾಂತಿ ಮತ್ತು ಸೀಲ್ದಾ ಎಕ್ಸ್‌ಪ್ರೆಸ್ ರೈಲುಗಳು, ಕಾಂತ್ರಿ ಎಕ್ಸ್‌ಪ್ರೆಸ್, ವಂದೇ ಭಾರತ್, ತಿರುವನಂತಪುರ ಎಕ್ಸ್‌ಪ್ರೆಸ್ ಮತ್ತು ಶಟಲ್ ಸೇವೆಗಳ ಕಾರ್ಯಾಚರಣೆಯನ್ನು ಪುನಃ ಸ್ಥಾಪಿಸಿದೆ. ವಂದೇ ಭಾರತ್ ರೈಲು ಸೆಪ್ಟೆಂಬರ್ 7ರಿಂದ ಪುನರಾರಂಭಗೊಳ್ಳಲಿದೆ.

## ಅಣೆಕಟ್ಟಿನ ಒಂದು ಭಾಗ ಕುಸಿದು ಪ್ರವಾಹ

**ರಾಯ್‌ಪುರ:** ಛತ್ತೀಸ್‌ಗಢದ ಬಲರಾಂಪುರ ಜಿಲ್ಲೆಯಲ್ಲಿ ಅಣೆಕಟ್ಟಿನ ಒಂದು ಭಾಗ ಕುಸಿದು ಪ್ರವಾಹ ಉಂಟಾಗಿ ಕನಿಷ್ಠ ನಾಲ್ವರು ಜನರು ಸಾವನ್ನಪ್ಪಿ, ಮೂವರು ನಾಪತ್ತೆಯಾಗಿದ್ದಾರೆ. ಧನೇಶ್‌ಪುರ ಗ್ರಾಮದಲ್ಲಿರುವ ಲೂಟಿ ಜಲಾಶಯದಲ್ಲಿ ತಡರಾತ್ರಿ ಭಾರೀ ಮಳೆಯಾಗಿದ್ದರಿಂದ ಅಣೆಕಟ್ಟೆ ಒಡೆದಿದೆ. ಮನೆಯಲ್ಲಿ ಮಲಗ್ಗಿದ್ದ ಒಬ್ಬ ಮಹಿಳೆ ಮತ್ತು ಆಕೆಯ ಅತ್ತೆ ಸೇರಿದಂತೆ ನಾಲ್ವರು ಸಾವನ್ನಪ್ಪಿದ್ದಾರೆ.

ಮೂವರು ನಾಪತ್ತೆಯಾಗಿದ್ದು, ಶೋಧ ಕಾರ್ಯ ನಡೆಯುತ್ತಿದೆ. ಜಿಲ್ಲಾಡಳಿತ ಮತ್ತು ಪೊಲೀಸ್ ತಂಡಗಳು ಸ್ಥಳಕ್ಕೆ ಧಾವಿಸಿದ್ದು, ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ ಎಂದು ಸರ್ಕಾರಿ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

1980ರ ದಶಕದ ಆರಂಭದಲ್ಲಿ ನಿರ್ಮಿಸಲಾದ ಈ ಜಲಾಶಯದ ನೀರು, ಒಡಕಿನ ಮೂಲಕ ಹತ್ತಿರದ ಮನೆಗಳು ಮತ್ತು ಕೃಷಿ ಹೊಲಗಳಿಗೆ ಇಳಿದು, ದಿಢೀರ್ ಪ್ರವಾಹಕ್ಕೆ ಕಾರಣವಾಯಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಈ ಮಧ್ಯೆ, ಛತ್ತೀಸ್‌ಗಢ ಮುಖ್ಯಮಂತ್ರಿ ವಿಷ್ಣು ದೇವ್ ಸಾಯಿ ಈ ವಾರದ ಆರಂಭದಲ್ಲಿ ಬಸ್ತಾರ್ ವಿಭಾಗದ ಪ್ರವಾಹ ಪೀಡಿತ ಬಸ್ತಾರ್ ಮತ್ತು ದಂತೇವಾಡ ಜಿಲ್ಲೆಗಳ ವೈಮಾನಿಕ ಮತ್ತು ಭೂ ಸಮೀಕ್ಷೆಗಳನ್ನು ನಡೆಸಿದ್ದಾರೆ.



ಭೇಟಿಯ ನಂತರ, ಮುಖ್ಯಮಂತ್ರಿಗಳು ಅಧಿಕಾರಿಗಳಿಗೆ ಪರಿಹಾರ ಮತ್ತು ಪುನರ್ವಸತಿ ಕ್ರಮಗಳನ್ನು ತ್ವರಿತಗೊಳಿಸುವಂತೆ ನಿರ್ದೇಶನ ನೀಡಿದರು, ಪ್ರವಾಹ ಪೀಡಿತ ಕುಟುಂಬಗಳಿಗೆ ಸಕಾಲಿಕ ನೆರವು ನೀಡುವ ಬಗ್ಗೆ ರಾಜ್ಯದ ಆದ್ಯತೆಯನ್ನು ಒತ್ತಿ ಹೇಳಿದರು ಎಂದು ಸರ್ಕಾರಿ ಹೇಳಿಕೆ ತಿಳಿಸಿದೆ.

ಕಳೆದ ವಾರದ ಆರಂಭದಲ್ಲಿ ಸತತ ಮಳೆಯಿಂದ ದಂತೇವಾಡ, ಸುಕಾ, ಬಿಜಾಪುರ ಮತ್ತು ಬಸ್ತಾರ್ ಜಿಲ್ಲೆಗಳಲ್ಲಿ ಹಠಾತ್ ಪ್ರವಾಹ ಉಂಟಾಗಿ ವಿಶಾಲ ಪ್ರದೇಶಗಳು ಮುಳುಗಿದ ನಂತರ 2,000 ಕ್ಕೂ ಹೆಚ್ಚು ಜನರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಯಿತು.

## ವಿಶೇಷ ಪರಿಹಾರ ಪ್ಯಾಕೇಜ್ ಘೋಷಿಸುವಂತೆ ರಾಹುಲ್ ಮನವಿ

**ನವದೆಹಲಿ:** ಪ್ರವಾಹ ಪೀಡಿತ ಪಂಜಾಬ್, ಜಮ್ಮು ಮತ್ತು ಕಾಶ್ಮೀರ, ಉತ್ತರಾಖಂಡ ಮತ್ತು ಹಿಮಾಚಲ ಪ್ರದೇಶಗಳಿಗೆ ವಿಶೇಷ ಪರಿಹಾರ ಪ್ಯಾಕೇಜ್ ಅನ್ನು ತಕ್ಷಣ ಘೋಷಿಸುವಂತೆ ರಾಹುಲ್‌ಗಾಂಧಿ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿಕೊಂಡಿದ್ದಾರೆ. ಮೋದಿಜೀ, ಪಂಜಾಬ್‌ನಲ್ಲಿ ಪ್ರವಾಹವು ಭಾರಿ ವಿನಾಶವನ್ನುಂಟುಮಾಡಿದೆ. ಜಮ್ಮು ಮತ್ತು ಕಾಶ್ಮೀರ, ಹಿಮಾಚಲ ಪ್ರದೇಶ ಮತ್ತು ಉತ್ತರಾಖಂಡದ ಪರಿಸ್ಥಿತಿಯೂ ಸಹ ಅತ್ಯಂತ ಚಿಂತಾಜನಕವಾಗಿದೆ ಹೀಗಾಗಿ ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಗಳನ್ನು ಚುರುಕುಗೊಳಿಸುವಂತೆ ಅವರು ಒತ್ತಾಯಿಸಿದರು.

ಇಂತಹ ಕಷ್ಟದ ಸಮಯದಲ್ಲಿ, ನಿಮ್ಮ ಗಮನ ಮತ್ತು ಕೇಂದ್ರ ಸರ್ಕಾರದ ಸಕ್ರಿಯ ಸಹಾಯವು ಅತ್ಯಂತ ಅವಶ್ಯಕವಾಗಿದೆ. ಸಾವಿರಾರು ಕುಟುಂಬಗಳು ತಮ್ಮ ಮನೆಗಳು, ಜೀವಗಳು ಮತ್ತು ಪ್ರೀತಿಪಾತ್ರರನ್ನು ಉಳಿಸಲು ಹೆಣಗಾಡುತ್ತಿವೆ ಎಂದು ಅವರು ಎಕ್ಸ್ ಮಾಡಿದ್ದಾರೆ. ಈ ರಾಜ್ಯಗಳಿಗೆ, ವಿಶೇಷವಾಗಿ ರೈತರಿಗೆ ವಿಶೇಷ ಪರಿಹಾರ ಪ್ಯಾಕೇಜ್ ಅನ್ನು ತಕ್ಷಣ ಘೋಷಿಸಬೇಕೆಂದು ನಾನು ಒತ್ತಾಯಿಸುತ್ತೇನೆ ಮತ್ತು ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಗಳನ್ನು ಚುರುಕುಗೊಳಿಸಬೇಕು ಎಂದು ಮಾಜಿ ಕಾಂಗ್ರೆಸ್ ಮುಖ್ಯಸ್ಥರು ತಿಳಿಸಿದ್ದಾರೆ.

ಜನರು ತಮ್ಮ ಕುಟುಂಬಗಳನ್ನು ಉಳಿಸಲು ಹೆಣಗಾಡುತ್ತಿರುವುದನ್ನು ನೋಡಲು ದುಃಖವಾಗುತ್ತದೆ.


**ಜನರನ್ನು ರಕ್ಷಿಸುವುದು ಸರ್ಕಾರದ ಜವಾಬ್ದಾರಿ**

ಮೋದಿ ಜಿ, ಜನರನ್ನು ರಕ್ಷಿಸುವುದು ಸರ್ಕಾರದ ಜವಾಬ್ದಾರಿ. ಈ ಜನರ ರಕ್ಷಣೆಗಾಗಿ ತಕ್ಷಣ ವಿಶೇಷ ಪರಿಹಾರ ಪ್ಯಾಕೇಜ್ ಸಿದ್ಧಪಡಿಸಿ ಎಂದು ಗಾಂಧಿ ತಮ್ಮ ವಿಡಿಯೋ ಸಂದೇಶದಲ್ಲಿ ತಿಳಿಸಿದ್ದಾರೆ.

ಕಳೆದ ಕೆಲವು ವಾರಗಳಿಂದ ಸತತ ಮಳೆಯಿಂದಾಗಿ ಉತ್ತರ ಭಾರತದಲ್ಲಿ ಸಂಕಷ್ಟದ ವಾತಾವರಣ ನಿರ್ಮಾಣವಾಗಿದ್ದು, ಭೂಕುಸಿತ ಮತ್ತು ಪ್ರವಾಹ ಉಂಟಾಗಿದ್ದು, ನದಿಗಳು ಉಕ್ಕಿ ಹರಿಯುತ್ತಿದ್ದು, ಹಳಿಗಳು ಮತ್ತು ರಸ್ತೆ ಸಂಚಾರ ಅಸ್ತವ್ಯಸ್ತವಾಗಿದೆ ಮತ್ತು ಶಾಲೆಗಳು ಮುಚ್ಚಲ್ಪಟ್ಟಿವೆ. 1988 ರ ನಂತರದ ಅತ್ಯಂತ ಭೀಕರ ಪ್ರವಾಹವನ್ನು ಎದುರಿಸುತ್ತಿರುವ ಪಂಜಾಬ್‌ನಲ್ಲಿ, ಸಟ್ಲೆಜ್, ಬಿಯಾಸ್ ಮತ್ತು ರಾವಿ ನದಿಗಳು ಮತ್ತು ಕಾಲೋಚಿತ ನದಿಗಳು ಅವುಗಳ ಮೇಲ್ಭಾಗದಲ್ಲಿ ಭಾರೀ ಮಳೆಯಿಂದಾಗಿ ಉಕ್ಕಿ ಹರಿಯುತ್ತಿರುವುದರಿಂದ ಪರಿಸ್ಥಿತಿ ಅನಿಶ್ಚಿತವಾಗಿದೆ.

ಹನ್ನೆರಡು ಜಿಲ್ಲೆಗಳು ಈಗಾಗಲೇ 29 ಜೀವಗಳನ್ನು ಬಲಿ ತೆಗೆದುಕೊಂಡಿರುವ ಪ್ರವಾಹಕ್ಕೆ ತುತ್ತಾಗಿವೆ, 2.56 ಲಕ್ಷಕ್ಕೂ ಹೆಚ್ಚು ಜನರ ಮೇಲೆ ಪರಿಣಾಮ ಬೀರಿದೆ.ಹಿಮಾಲಯನ್ ರಾಜ್ಯಗಳಲ್ಲಿ, ಉತ್ತರಾಖಂಡ್ ಮತ್ತೊಂದು ಮಳೆಯ ದಿನವನ್ನು ಎದುರಿಸಿತು, ವಿವಿಧ ಪ್ರದೇಶಗಳಲ್ಲಿ ಭಾರೀ ಮಳೆಯಾಗಿದೆ.

ಹಿಮಾಲಯನ್ ಪ್ರದೇಶದಲ್ಲಿ ಇಬ್ಬರು ಮಹಿಳೆಯರು ಸಾವನ್ನಪ್ಪಿದ್ದು, ಭಾರೀ ಮಳೆಯಿಂದಾಗಿ ಭೂಕುಸಿತ ಮತ್ತು ಹಠಾತ್ ಪ್ರವಾಹ ಉಂಟಾಗಿ 1,000 ಕ್ಕೂ ಹೆಚ್ಚು ರಸ್ತೆಗಳು ಮುಚ್ಚಿ ಹೋಗಿವೆ.



# ಚೀನಾ ರಾಜಧಾನಿ ಬೀಜಿಂಗ್‌ನಲ್ಲಿ ಬೃಹತ್ ಮಿಲಿಟರಿ ಪರೇಡ್ ಆಯೋಜನೆ

### • ಮೂವರ ಪವರ್‌ಫುಲ್ ಕಮ್ಯೂನ್ ಮತ್ತು ಕೊನೆಯಲ್ಲೊಬ್ಬ ಹೋಳು ಉಪ್ಪಿನಕಾಯಿ: ಇನ್ನೂ ಬಿಟ್ಟಿಲ್ವಾ ಶಾಂಘೈ

**ಬೀಜಿಂಗ್:** ಚೀನಾದ ರಾಜಧಾನಿ ಬೀಜಿಂಗ್ ಅಕ್ಷರಶಃ ಮಿಲಟರಿ ಸಮವಸ್ತ್ರದಲ್ಲಿ ಕಂಗೊಳಿಸುತ್ತಿತ್ತು. ಎರಡನೇ ಮಹಾಯುದ್ಧದ 80ನೇ ವಾರ್ಷಿಕೋತ್ಸವವನ್ನು ಗುರುತಿಸಲು ಆಯೋಜಿಸಲಾಗಿದ್ದ ಬೃಹತ್ ಮಿಲಿಟರಿ ಪರೇಡ್, ಚೀನಾದ ಸಾಮರಿಕ ಶಕ್ತಿಯ ಪ್ರದರ್ಶನಕ್ಕೆ ಸಾಕ್ಷಿಯಾಯಿತು.

ಎರಡನೇ ಮಹಾಯುದ್ಧದಲ್ಲಿ ಜಪಾನ್ ಶರಣಾಗತಿಯನ್ನು ಆಚರಿಸುವ ಉದ್ದೇಶ ಹೊಂದಿದ್ದ ಬೃಹತ್ ಮಿಲಿಟರಿ ಪರೇಡ್‌ನಲ್ಲಿ, ಚೀನಾದ ಅಧ್ಯಕ್ಷ ಕ್ಸಿ ಜಿನ್‌ಪಿಂಗ್, ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್, ಉತ್ತರ ಕೊರಿಯಾ ಸರ್ವಾಧಿಕಾರಿ ಕಿಮ್ ಜಾಂಗ್ ಉನ್ ಸೇರಿದಂತೆ ಹಲವು ರಾಷ್ಟ್ರಗಳ ಮುಖ್ಯಸ್ಥರು ಭಾಗವಹಿಸಿದ್ದರು. ಈ ಸಮಾರಂಭದಲ್ಲಿ ಪಾಕಿಸ್ತಾನ ಪ್ರಧಾನಿ ಶೆಹಬಾಜ್ ಷರೀಫ್ ಅವರ ಉಪಸ್ಥಿತಿಗೆ ಅಷ್ಟೇನೂ ಮಹತ್ವ ಕಾಣಲಿಲ್ಲ.

ಬೀಜಿಂಗ್‌ನಲ್ಲಿ ನಡೆದ ಸಾಮೂಹಿಕ ಮಿಲಿಟರಿ ಪರೇಡ್ ನೇತೃತ್ವವಹಿಸಿದ್ದ ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್, ಪೀಪಲ್ಸ್ ಲಿಬರೇಶನ್ ಆರ್ಮಿ (ಪಿಎಲ್‌ಎ)ಯ ಸಾಮರಿಕ ಶಕ್ತಿಯನ್ನು ಜಗತ್ತಿಗೆ ತೋರಿಸುವಲ್ಲಿ ನಿರತರಾಗಿದ್ದರು. ಚೀನಾದ ಮೂರೂ ರಕ್ಷಣಾ ಪಡೆಗಳು, ಅರೆಸೈನಿಕ ದಳಗಳು ಮತ್ತು ಇತರ ರಕ್ಷಣಾ ಸಂಘಟನೆಗಳು ಈ ಪರೇಡ್‌ನಲ್ಲಿ ಭಾಗವಹಿಸಿದ್ದರು.

ಈ ಮಿಲಿಟರಿ ಪರೇಡ್‌ನಲ್ಲಿ ಚೀನಾದ ಪೀಪಲ್ಸ್ ಲಿಬರೇಶನ್ ಆರ್ಮಿ ತನ್ನ ಬೆಳೆಯುತ್ತಿರುವ ಪರಾಕ್ರಮವನ್ನು ತೋರಿಸಲು, ಅನೇಕ ಬಗೆಯ ಅತ್ಯಾಧುನಿಕ ಶಸ್ತ್ರಾಸ್ತ್ರಗಳ ಪ್ರದರ್ಶನ ಏರ್ಪಡಿಸಿತ್ತು. ಅವುಗಳನ್ನು ಈ ಕೆಳಗಿನಂತೆ ನೋಡೋಣ.





**ಶಕ್ತಿ ಪ್ರದರ್ಶಿಸಿದ ಚೀನಾ**

**1. ಕ್ಷಿಪಣಿಗಳು:** ಚೀನಾ ಸಮುದ್ರ, ಭೂಮಿ ಮತ್ತು ಆಕಾಶದಿಂದ ಒಟ್ಟಿಗೆ ಉಡಾಯಿಸಬಹುದಾದ ಪರಮಾಣು ಸಾಮರ್ಥ್ಯದ ಕ್ಷಿಪಣಿಗಳನ್ನು ಪ್ರದರ್ಶಿಸಿತು.

ಇದೇ ಮೊದಲ ಬಾರಿಗೆ ಚೀನಾ ತನ್ನ ಪರಮಾಣು-ಸಿದ್ಧ ಸಾಮರ್ಥ್ಯಗಳ ತ್ರಿವಳಿ ಶಕ್ತಿಯನ್ನು ಹೊರಜಗತ್ತಿಗೆ ಪ್ರದರ್ಶಿಸಿದೆ. ವಾಯು-ಆಧಾರಿತ,ದೀರ್ಘ-ಶ್ರೇಣಿಯ ಕ್ಷಿಪಣಿ ಜಿಂಗ್ಲೀ -1, ಜಲಾಂತರ್ಗಾಮಿ-ಉಡಾವಣಾ ಖಂಡಾಂತರ ಕ್ಷಿಪಣಿ ಜುಲಾಂಗ್-3 ಮತ್ತು ಭೂ-ಆಧಾರಿತ ಖಂಡಾಂತರ ಕ್ಷಿಪಣಿಗಳಾದ ಡಾಂಗ್‌ಫೆಂಗ್-61 (ಡಿಎಫ್-61) ಮತ್ತು ಡಾಂಗ್‌ಫೆಂಗ್-31 ಕ್ಷಿಪಣಿಗಳನ್ನು ಪ್ರದರ್ಶಿಸಲಾಗಿದೆ. ಇವು ದೇಶದ ಸಾರ್ವಭೌಮತ್ವ ಮತ್ತು ಘನತೆಯನ್ನು ಕಾಪಾಡಲು ಚೀನಾದ ಕಾರ್ಯತಂತ್ರದ ಶಕ್ತಿಯಾಗಿದೆ ಎಂದು ಕ್ಸಿನ್ಹುವಾ ವರದಿ ಮಾಡಿದೆ.

- ಚೀನಾ ರಾಜಧಾನಿ ಬೀಜಿಂಗ್‌ನಲ್ಲಿ ಬೃಹತ್ ಮಿಲಿಟರಿ ಪರೇಡ್ ಆಯೋಜನೆ.
- ಎರಡನೇ ಮಹಾಯುದ್ಧದ ಅಂತ್ಯದ 80ನೇ ವಾರ್ಷಿಕೋತ್ಸವ ಆಚರಣೆ.
- ಪುಟಿನ್, ಕಿಮ್ ಜಾಮಗ್ ಉನ್ ಸೇರಿದಂತೆ ಹಲವು ಜಾಗತಿಕ ಗಣ್ಯರು ಭಾಗಿ.
- ಮಿಲಿಟಿ ಪರೇಡ್ ಆಯೋಜನೆ ನೆಪದಲ್ಲಿ ಸಾಮರಿಕ ಶಕ್ತಿ ಪ್ರದರ್ಶಿಸಿದ ಚೀನಾ.

ಡಾಂಗ್‌ಫೆಂಗ್-5ಅ 1970ಎ ದಶಕದಲ್ಲಿ ಚೀನಾ ಪ್ರಾರಂಭಿಸಿದ ಕ್ಷಿಪಣಿ ಕಾರ್ಯಕ್ರಮದ ಇತ್ತೀಚಿನ ಆವೃತ್ತಿಯಾಗಿದೆ. ಈ ಕ್ಷಿಪಣಿ ದ್ರವ ಇಂಧನದಿಂದ ಚಾಲಿತವಾಗಿದ್ದು, ಒಂದೇ ಗುರಿಯ ಮೇಲೆ ಬಹು ಮತ್ತು ಸ್ವತಂತ್ರ ಸಿಡಿತಲೆಗಳನ್ನು ಬಿಡುಗಡೆ ಮಾಡುವ ಸಾಮರ್ಥ್ಯವನ್ನು ಹೊಂದಿದೆ. ಈ ಮೆರವಣಿಗೆಯಲ್ಲಿ ಚೀನಾ ತನ್ನ ಹೈಪರ್‌ಸಾನಿಕ್ ಹಡಗು ವಿರೋಧಿ ಕ್ಷಿಪಣಿಗಳನ್ನು ಪ್ರದರ್ಶಿಸಿದ್ದು, ಯಿಂಗ್‌ಜಿ-19, ಯಿಂಗ್‌ಜಿ-17 ಮತ್ತು ಯಿಂಗ್‌ಜಿ-20 ಇವುಗಳಲ್ಲಿ ಸೇರಿವೆ. ಇತರ ಕ್ಷಿಪಣಿಗಳಲ್ಲಿ ಚಾಂಗ್ಜಿಯಾನ್-20ಂ, ಯಿಂಗ್ಜಿ-18ಎ, ಚಾಂಗ್ಜಿಯಾನ್-1000 – ಕ್ರೂಸ್ ಕ್ಷಿಪಣಿಗಳು ಮತ್ತು ಇತರ ಹೈಪರ್‌ಸಾನಿಕ್ ಕ್ಷಿಪಣಿಗಳಾದ ಯಿಂಗ್ಜಿ-21, ಡಾಂಗ್‌ಫೆಂಗ್-17 ಮತ್ತು ಡಾಂಗ್‌ಫೆಂಗ್-26ಆ ಪ್ರದರ್ಶನ ಗಮನ ಸೆಳೆದಿದೆ.

2. ಲೇಸರ್ ಶಸ್ತ್ರಾಸ್ತ್ರಗಳು: ಡ್ರೋನ್ ದಾಳಿಯ ವಿರುದ್ಧ ರಕ್ಷಣೆಯಾಗಿ ಚೀನಾ ಲೇಸರ್ ಶಸ್ತ್ರಾಸ್ತ್ರಗಳನ್ನು ಅಭಿವೃದ್ಧಿಪಡಿಸುತ್ತಿದೆ. ಈ ಬಾರಿಯ ಮಿಲಿಟರಿ ಪರೇಡ್‌ನಲ್ಲಿ

ಪ್ರದರ್ಶಿಸಲಾದ ಅದರ ಡ್ರೋನ್ ವಿರೋಧಿ ವ್ಯವಸ್ಥೆಗಳ ಸಂಪೂರ್ಣ ಶ್ರೇಣಿಯಲ್ಲಿ, ಕ್ಷಿಪಣಿ ಗನ್, ಹೆಚ್ಚಿನ ಶಕ್ತಿಯ ಲೇಸರ್ ಶಸ್ತ್ರಾಸ್ತ್ರಗಳು ಮತ್ತು ಹೆಚ್ಚಿನ ಶಕ್ತಿಯ ಮೈಕ್ರೋವೇವ್ ಶಸ್ತ್ರಾಸ್ತ್ರಗಳು ಸೇರಿವೆ. ಪೀಪಲ್ಸ್ ಲಿಬರೇಶನ್ ಆರ್ಮಿ ಹೊಂದಿರುವ ಡ್ರೋನ್ ವಿರೋಧಿ ವ್ಯವಸ್ಥೆಗಳಲ್ಲಿ ಟ್ರಯಾಡ್ ಅತ್ಯಂತ ಪ್ರಮುಖವಾಗಿದೆ.


### ಜಾಗತಿಕ ಮಟ್ಟದಲ್ಲಿ ಸದ್ದು

**ಒಟ್ಟಿನಲ್ಲಿ ಚೀನಾ ತನ್ನ ವಾರ್ಷಿಕ ಮಿಲಿಟರಿ ಪರೇಡ್ ಮತ್ತು ಎರಡನೇ ಮಹಾಯುದ್ಧದ ಅಂತ್ಯದ ಸ್ಮರಣಾರ್ಥ ಹಮ್ಮಿಕೊಂಡಿದ್ದ ಬೃಹತ್ ಮಿಲಿಟರಿ ಪರೇಡ್, ಡ್ರ್ಯಾಗನ್ ರಾಷ್ಟ್ರದ ಬೃಹತ್ ಸಾಮರಿಕ ಶಕ್ತಿಯನ್ನು ಜಗತ್ತಿಗೆ ಪರಿಚಯಿಸಿದೆ. ಬೀಜಿಂಗ್‌ನಲ್ಲಿ ಆಯೋಜನೆಗೊಂಡಿದ್ದ ಈ ಬೃಹತ್ ಮಿಲಿಟರಿ ಪರೇಡ್‌ನಲ್ಲಿ ವ್ಲಾಡಿಮಿರ್ ಪುಟಿನ್ ಮತ್ತು ಕಿಮ್ ಜಂಗ್ ಉನ್ ಭಾಗಿ ಆಗಿದ್ದು ಜಾಗತಿಕ ಮಟ್ಟದಲ್ಲಿ ಗಮನ ಸೆಳೆದಿದೆ.**



## ಮೊದಲ ಬಾರಿ ವಿದೇಶಕ್ಕೆ ಹೊರಟ ಪ್ರಶಾಂತ್ ನೀಲ್

ಅವರಿಗಾಗಿ ಪಕ್ಕಾ ಆಕ್ಷನ್ ಸಿನಿಮಾ ಒಂದರ ನಿರ್ದೇಶನ ಮಾಡುತ್ತಿದ್ದಾರೆ. ಸಿನಿಮಾದ ಚಿತ್ರೀಕರಣ ಭರದಿಂದ ಸಾಗಿದೆ. ಸಾಮಾನ್ಯವಾಗಿ ಸೆಟ್‌ಗಳಲ್ಲಿಯೇ ಹೆಚ್ಚಾಗಿ ಶೂಟ್ ಮಾಡುವ ಪ್ರಶಾಂತ್ ನೀಲ್ ಇದೇ ಮೊದಲ ಬಾರಿಗೆ ವಿದೇಶದಲ್ಲಿ ಸಿನಿಮಾ ಚಿತ್ರೀಕರಣಕ್ಕೆ ಮುಂದಾಗಿದ್ದಾರೆ. ಪ್ರಶಾಂತ್ ನೀಲ್ ಸಿನಿಮಾಗಳು ಭಿನ್ನವಾದ ಬಣ್ಣ, ಗುಣಮಟ್ಟ ಮತ್ತು ನಿರೂಪಣಾ ವಿಧಾನವನ್ನು ಹೊಂದಿರುತ್ತವೆ. ಸಂಭಾಷಣೆಗಳು ಬಹಳ ಕಡಿಮೆ, ಪ್ರತಿಯೊಂದು ಪಾತ್ರದ ಮಾತುಗಳು ಗುಂಡು ಹೊಡೆದಂತಿರುತ್ತದೆ. ಕತೆ ನಡೆಯುವ ಸ್ಥಳವೂ ಭಿನ್ನವಾಗಿರುತ್ತದೆ. ಅವರ ಸಿನಿಮಾಗಳು ಬಣ್ಣಗಳಿಂದ ತುಂಬಿರುವುದಿಲ್ಲ ಬದಲಿಗೆ ಕಪ್ಪು-ಬಿಳಿಯನ್ನು ಮಿಶ್ರಣ ಮಾಡಿದಂಥೆ ಕಾಣುತ್ತವೆ. ನೀಲ್ ಅವರು ತಮ್ಮ ಸಿನಿಮಾದ ಚಿತ್ರೀಕರಣವನ್ನು ಬಹುತೇಕ ಸೆಟ್‌ಗಳಲ್ಲಿಯೇ ಮಾಡುತ್ತಾರೆ. ಅದ್ದೂರಿ ಲೊಕೇಶನ್, ಹಸಿರು ತುಂಬಿದ ಹಿನ್ನೆಲೆಯ ದೃಶ್ಯಗಳು ಅವರ ಸಿನಿಮಾದಲ್ಲಿ ಇರುವುದಿಲ್ಲ. ಆದರೆ ಇದೇ ಮೊದಲ ಬಾರಿಗೆ ಪ್ರಶಾಂತ್ ನೀಲ್, ತಮ್ಮ 'ಕಂಪರ್ಟ್ ಜೋನ್' ನಿಂದ ಹೊರಗೆ ಬಂದಂತಿದೆ. ಇದೇ ಮೊದಲ ಬಾರಿಗೆ ಅವರು ತಮ್ಮ ಸಿನಿಮಾದ ಚಿತ್ರೀಕರಣವನ್ನು ವಿದೇಶದಲ್ಲಿ ಮಾಡಲು ಮುಂದಾಗಿದ್ದಾರೆ. ಜೂ ಎನ್ ಟಿಆರ್ ನಟಿಸುತ್ತಿರುವ ಸಿನಿಮಾದ ಚಿತ್ರೀಕರಣದಲ್ಲಿ ಪ್ರಶಾಂತ್ ನೀಲ್ ತಮ್ಮನ್ನು ತೊಡಗಿಸಿಕೊಂಡಿದ್ದಾರೆ.







## ರೆಸ್ಟೋರೆಂಟ್‌ಗೆ ಬೀಗ ಹಾಕಿದ ಶಿಲ್ಪಾ ಶೆಟ್ಟಿ

ಶಿಲ್ಪಾ ಶೆಟ್ಟಿ ಅವರ ಬಾಸ್ಟಿನ್ ಬಾಂದ್ರಾ ರೆಸ್ಟೋರೆಂಟ್ 9 ವರ್ಷಗಳ ನಂತರ ಮುಚ್ಚಲಾಗುತ್ತಿದೆ. 2016 ರಲ್ಲಿ ಆರಂಭವಾದ ಈ ಐಷಾರಾಮಿ ರೆಸ್ಟೋರೆಂಟ್, ಮುಂಬೈನಲ್ಲಿ ಜನಪ್ರಿಯವಾಗಿತ್ತು. ರೆಸ್ಟೋರೆಂಟ್ ಮುಚ್ಚಲು ನಿಖರ ಕಾರಣ ತಿಳಿದುಬಂದಿಲ್ಲವಾದರೂ, ಶಿಲ್ಪಾ ಶೆಟ್ಟಿ ಮತ್ತು ರಾಜ್ ಕುಂದ್ರಾ ಅವರ ಮೇಲಿರುವ ಹಣಕಾಸಿನ ಆರೋಪಗಳನ್ನು ಕಾರಣವೆಂದು ಅನೇಕರು ಅನುಮಾನಿಸುತ್ತಿದ್ದಾರೆ. ಸೆಲೆಬ್ರಿಟಿಗಳಿಗೆ ತಮ್ಮದೇ ಆದ ರೆಸ್ಟೋರೆಂಟ್ ಹೊಂದಿರೋದು ಒಂದು ಪ್ರತಿಷ್ಠೆಯ ಪ್ರತೀಕವಾಗಿರುತ್ತದೆ. ಶಿಲ್ಪಾ ಶೆಟ್ಟಿ ಕೂಡ ಮುಂಬೈನ ಐಷಾರಾಮಿ ಜಾಗ ಎನಿಸಿಕೊಂಡಿರೋ ಬಾಂದ್ರಾದಲ್ಲಿ 'ಬಾಸ್ಟಿನ್ ಬಾಂದ್ರಾ,' ಹೆಸರಿನ ರೆಸ್ಟೋರೆಂಟ್ ಆರಂಭಿಸಿದ್ದರು. ಜನ ಸಾಮಾನ್ಯರಿಂದ ಹಿಡಿದು ಅನೇಕ ಸೆಲೆಬ್ರಿಟಿಗಳು ಇಲ್ಲಿಗೆ ಬರುತ್ತಿದ್ದರು. ಈಗ ಈ ರೆಸ್ಟೋರೆಂಟ್ ಆರಂಭ ಆಗಿ 9 ವರ್ಷಗಳ ಬಳಿಕ ಇದನ್ನು ಮುಚ್ಚಲಾಗುತ್ತಿದೆ. 'ಬಾಸ್ಟಿನ್ ಬಾಂದ್ರಾ,' ಆರಂಭ ಆಗಿದ್ದು 2016ರಲ್ಲಿ. ಇದು ಆರಂಭದಲ್ಲಿ ಪಶ್ಚಿಮ ಬಾಂದ್ರಾದಲ್ಲಿ ಆರಂಭ ಆಯಿತು. ನಂತರ 2023ರಲ್ಲಿ ಇದನ್ನು ಬೇರೆಡೆ ಸ್ಥಳಾಂತರಿಸಲಾಯಿತು. ಈ ವೇಳೆ ದೊಡ್ಡ ಜಾಗದಲ್ಲಿ ಇದನ್ನು ಆರಂಭಿಸಲಾಯಿತು. ಇಲ್ಲಿ, ಸಮುದ್ರದ ಫುಡ್‌ಗಳು ಇಲ್ಲಿನ ಮೆನುವಿನ ಹೈಲೈಟ್. ಇದಲ್ಲದೆ, ಸಸ್ಯಾಹಾರಿ ಹಾಗೂ ವಿವಿಧ ಮಾಂಸಾಹಾರದ ಅಡುಗೆಗಳು ಇಲ್ಲಿ ಲಭ್ಯ ಇದ್ದವು. ಮುಂಬೈನ ದುಬಾರಿ ಹೋಟೆಲ್ ಎಂಬ ಖ್ಯಾತಿ ಇದಕ್ಕೆ ಇತ್ತು. ಈಗ ಈ ರೆಸ್ಟೋರೆಂಟ್ ಕ್ಲೋಸ್ ಆಗುತ್ತಿದೆ. ಸೆಪ್ಟೆಂಬರ್ 4 ಇದರ ಕೊನೆಯ ದಿನ ಆಗಿರಲಿದೆ.

## ಮಲಯಾಳಂನ ನಟಿಯ ಅವಮಾನಿಸಿದ ಬಾಲಿವುಡ್

ಜಾನ್ವಿ ಕಪೂರ್, ಸಿದ್ಧಾರ್ಥ್ ಮಲ್ಹೋತ್ರಾ ನಟನೆಯ 'ಪರಮ್ ಸುಂದರಿ' ಸಿನಿಮಾ ಕೆಲ ದಿನಗಳ ಹಿಂದಷ್ಟೆ ಬಿಡುಗಡೆ ಆಗಿದ್ದು, ಕೇರಳದ ಸ್ಥಳೀಯತೆಗೆ ಆದ್ಯತೆ ನೀಡದೇ ಇರುವ ಬಗ್ಗೆ ಈಗಾಗಲೇ ಟೀಕೆಗೆ ಗುರಿಯಾಗಿದೆ. ಇದೀಗ ಸಿನಿಮಾನಲ್ಲಿ ಕೇರಳದ ಜನಪ್ರಿಯ ನಟಿಯೊಬ್ಬರಿಗೆ ಅವಮಾನ ಮಾಡಿರುವುದು ಕೇರಳಿಗರನ್ನು ಮತ್ತಷ್ಟು ಕೆರಳಿಸಿದೆ. ಬಾಲಿವುಡ್ ಮೊದಲಿನಿಂದಲೂ ದಕ್ಷಿಣ ಭಾರತದವರನ್ನು ತಮಾಷೆಯ ವಸ್ತುವಾಗಿಯೇ ಸಿನಿಮಾಗಳಲ್ಲಿ ತೋರಿಸುತ್ತಾ ಬಂದಿದೆ. ದಶಕಗಳ ಹಿಂದೆಯೂ ಇದು ಇತ್ತು ಈಗಲೂ ಮುಂದುವರೆದಿದೆ. ಇತ್ತೀಚೆಗೆ ಬಿಡುಗಡೆ ಆದ 'ಪರಮ್ ಸುಂದರಿ' ಹೆಸರಿನ ಬಾಲಿವುಡ್ ಸಿನಿಮಾ ಇನ್ನೂ ಒಂದು ಹೆಜ್ಜೆ ಮುಂದೆ ಹೋಗಿದೆ. ಕೇರಳದ ಯುವತಿ ದೆಹಲಿಯ ಯುವಕನ ಜೊತೆಗೆ ಪ್ರೇಮದಲ್ಲಿ ಬೀಳುವ ಕತೆ. ಎಲ್ಲಾ ಬಾಲಿವುಡ್ ಮಸಾಲಾಗಳು ಇರುವ ಈ ಸಿನಿಮಾನಲ್ಲಿ ಸೂಕ್ಷ್ಮತೆ ಎಂಬುದು ಹುಡುಕಿದರೂ ಸಿಗದು ಎಂದು ವಿಮರ್ಶಕರು ಈಗಾಗಲೇ ಜಾಡಿಸಿದ್ದಾರೆ. ಆದರೆ ಇದರ ಜೊತೆಗೆ ಮಲಯಾಳಂ ಚಿತ್ರರಂಗದ ಜನಪ್ರಿಯ ನಟಿಗೆ ಅವಮಾನ ಮಾಡಿರುವುದನ್ನು ನೆಟ್ಟಿಗರು ಇದೀಗ ಗುರುತಿಸಿ ಬಾಲಿವುಡ್ ಮೇಲೆ ಉರಿದು ಬಿದ್ದಿದ್ದಾರೆ. ಪ್ರಿಯಾ ಪ್ರಕಾಶ್ ವಾರಿಯರ್, ಮಲಯಾಳಂ ಚಿತ್ರರಂಗದ ಜನಪ್ರಿಯ ನಟಿ. 'ಒರು ಅಡಾರ್ ಲವ್' ಸಿನಿಮಾದ ಸಣ್ಣ ಕಣ್ಮಿಟುಕಿಸುವ ಸೀನ್‌ನಿಂದ ರಾತ್ರೋರಾತ್ರಿ ಜನಪ್ರಿಯರಾದ ಪ್ರಿಯಾ ಪ್ರಕಾಶ್ ವಾರಿಯರ್ ಆ ಬಳಿಕ ಕನ್ನಡ ಸೇರಿದಂತೆ ದಕ್ಷಿಣದ ಹಲವು ಸಿನಿಮಾಗಳಲ್ಲಿ ನಟಿಸಿದರು. ಪವನ್ ಕಲ್ಯಾಣ್, ತಮಿಳಿನ ಅಜಿತ್ ಅವರುಗಳೊಟ್ಟಿಗೂ ನಟಿಸಿದ್ದಾರೆ.

## ವಿಷ್ಣುಗೆ ಕರ್ನಾಟಕ ರತ್ನ ಕೊಡಿ

ಸಿಎಂಗೆ ಭಾರತಿ ಮನವಿ

ವಿಷ್ಣುವರ್ಧನ್ ಅವರ ಅಭಿನವ್ ಸ್ಟುಡಿಯೋದಲ್ಲಿನ ಸಮಾಧಿ ಕೆಡವಿದ್ದಾರೆ. ಸ್ಮಾರಕ ನಿರ್ಮಾಣಕ್ಕಾಗಿ 10 ಗುಂಟೆ ಜಾಗ ನೀಡುವಂತೆ ಭಾರತಿ ವಿಷ್ಣುವರ್ಧನ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ್ದಾರೆ.

ಅಲ್ಲದೆ, ವಿಷ್ಣುವರ್ಧನ್ ಅವರಿಗೆ ಕರ್ನಾಟಕ ರತ್ನ ಪ್ರಶಸ್ತಿ ನೀಡುವಂತೆ ಅಭಿಮಾನಿಗಳ ಮನವಿಯನ್ನೂ ಅವರು ಮುಂದಿಟ್ಟಿದ್ದಾರೆ. ಬೆಂಗಳೂರಿನ ಅಭಿನವ್ ಸ್ಟುಡಿಯೋದಲ್ಲಿರೋ ವಿಷ್ಣುವರ್ಧನ್ ಸಮಾಧಿ ಕೆಡವಿದ ವಿಚಾರ ಸಾಕಷ್ಟು ಚರ್ಚೆಗಳನ್ನು ಹುಟ್ಟುಹಾಕಿತ್ತು. ಸ್ಟುಡಿಯೋದ 10 ಗುಂಟೆ ಜಾಗ ತಮಗೆ ನೀಡುವಂತೆ ಅಭಿಮಾನಿಗಳು ಒತ್ತಾಯಿಸಿದ್ದರು. ಭಾರತಿ ವಿಷ್ಣುವರ್ಧನ್ ಅವರು ಈ ವಿಚಾರವಾಗಿ ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದ್ದಾರೆ. ವಿಷ್ಣು ಅಳಿಯ ಅನಿರುದ್ಧ್ ಜತ್ಕರ್ ಕೂಡ ಈ ಸಂದರ್ಭದಲ್ಲಿ ಇದ್ದರು. ಭಾರತಿ ಅವರು ಸಿಎಂ ಬಳಿ ಮನವಿಯನ್ನು ಇಟ್ಟಿದ್ದಾರೆ. ಸಿಎಂ ಸಿದ್ದರಾಮಯ್ಯ ಭೇಟಿ ಬಳಿಕ ಮಾತನಾಡಿದ ಹಿರಿಯ ನಟಿ ಭಾರತಿ ವಿಷ್ಣುವರ್ಧನ್, 'ಅಭಿಮಾನಿಗಳಿಗಾಗಿ ಸ್ಟುಡಿಯೋದಲ್ಲಿ ಜಾಗ ಕೊಡಿ ಎಂದು ಸಿಎಂ ಬಳಿ ಕೇಳಿದ್ದೇವೆ. ಅಭಿಮಾನಿಗಳ ಬಂದು ನಮಸ್ಕಾರ ಮಾಡಿ ಹೋಗಲು ಅವಕಾಶ ಮಾಡಿ ಕೊಡಬೇಕು ಎಂಬುದು ನಮ್ಮ ಮನವಿ' ಎಂದಿದ್ದಾರೆ ಭಾರತಿ. ವಿಷ್ಣುವರ್ಧನ್‌ಗೆ ಕರ್ನಾಟಕ ರತ್ನ ಕೊಡಬೇಕು ಎಂಬುದು ಹಲವು ವರ್ಷಗಳ ಕೋರಿಕೆ. ಅಭಿಮಾನಿಗಳು ಈ ಬೇಡಿಕೆಯನ್ನು ಸರ್ಕಾರದ ಮುಂದೆ ಇಡುತ್ತಲೇ ಬರುತ್ತಿದ್ದರು. ಈಗ ಅಭಿಮಾನಿಗಳ ಪರವಾಗಿ ಭಾರತಿ ಕೂಡ ಈ ರೀತಿಯ ಮನವಿ ಮಾಡಿದ್ದಾರೆ. 'ಕರ್ನಾಟಕ ರತ್ನ ಕೊಡಬೇಕು ಎಂದು ನಾನು ಕೇಳುವುದಿಲ್ಲ. ಅಭಿಮಾನಿಗಳು ಕೇಳುತ್ತಿದ್ದಾರೆ. ಅವರ ಕೋರಿಕೆಯನ್ನು ಈಡೇರಿಸಬೇಕು' ಎಂದು ಭಾರತಿ ಸಿಎಂ ಬಳಿ ಹೇಳಿದ್ದಾರೆ.

ಅಭಿಮಾನ್ ಸ್ಟುಡಿಯೋದ 10 ಗುಂಟೆ ಜಾಗ ಬೇಕು ಎಂಬ ವಿಚಾರದಲ್ಲಿ ಈಗಾಗಲೇ ಭಾರತಿ ಅವರು ಅರಣ್ಯ ಇಲಾಖೆಯ ಬಳಿಯೂ ಮಾತನಾಡಿದ್ದಾರಂತೆ. ಮಂಟಪವನ್ನು ತಾವೇ ಕಟ್ಟಿಸಿಕೊಳ್ಳೋದಾಗಿ ಹೇಳಿದ್ದಾರೆ.



## ಉಪೇಂದ್ರ ಜೊತೆ ನಟಿಸಿದ್ದ ಸುರೇಶ್ ಅಕಾಲಿಕ ಮರಣ

ಅಮೆರಿಕದಲ್ಲಿ ಸಂಭವಿಸಿದ ಕಾರು ಅಪಘಾತದಲ್ಲಿ ಮೃತ

ಸಾವು ಯಾವಾಗ ಹೇಗೆ ಬರುತ್ತದೆ ಎಂದು ಹೇಳಲು ಸಾಧ್ಯವೇ ಇಲ್ಲ. ಈಗ ಫಿಟ್ನೆಸ್ ಟ್ರೇನರ್ ಆಗಿ ಹಾಗೂ ಕಲಾವಿದನಾಗಿ ನಟಿಸಿದ್ದ ಕೋಲಾರದ ಸುರೇಶ್ ಕುಮಾರ್ ಅವರು ಅಮೆರಿಕದಲ್ಲಿ ನಿಧನ ಹೊಂದಿದ್ದಾರೆ. ಕಾರು ಅಪಘಾತದಲ್ಲಿ ಅವರು ಮೃತಪಟ್ಟಿದ್ದಾರೆ. ಆ ಬಗ್ಗೆ ಇಲ್ಲಿದೆ ವಿವರ. ಉಪೇಂದ್ರ ನಟನೆಯ 'ಉಪ್ಪಿ 2' ಚಿತ್ರದಲ್ಲಿ ಒಂದು ಸೈಡ್ ಕ್ಯಾರೆಕ್ಟರ್‌ನಲ್ಲಿ ಕಾಣಿಸಿಕೊಂಡಿದ್ದ ಸುರೇಶ್ ಕುಮಾರ್ ಹೆಸರಿನ ಕೋಲಾರ ಮೂಲದ ವ್ಯಕ್ತಿ ಅಮೆರಿಕದಲ್ಲಿ ಸಂಭವಿಸಿದ ಕಾರು ಅಪಘಾತದಲ್ಲಿ ಮೃತಪಟ್ಟಿದ್ದಾರೆ. ಈ ವಿಚಾರ ಅವರ ಕುಟುಂಬಕ್ಕೆ ಶಾಕ್ ತಂದಿದೆ. ಸುರೇಶ್ ಕುಮಾರ್‌ಗೆ ಈಗ 42 ವರ್ಷ ಆಗಿತ್ತು. ಅವರು ಕೋಲಾರದಲ್ಲೇ ಹುಟ್ಟಿ ಬೆಳೆದಿದ್ದರು. ನಂತರ ಅವರು ಬೆಂಗಳೂರಿಗೆ ಬಂದರು. ಇಲ್ಲಿ ಕೆಲ ಕಾಲ ನೆಲೆಸಿದರು. ಈ ವೇಳೆ ಅವರು ಬಾಡಿ ಬಿಲ್ಡಿಂಗ್ ಆರಂಭಿಸಿದರು. ಅವರು ಉಪೇಂದ್ರ ಮೊದಲಾದ ಕಲಾವಿದರಿಗೆ ಫಿಟ್ನೆಸ್ ಟ್ರೇನಿಂಗ್ ಕೊಟ್ಟಿದ್ದರು. ಸುರೇಶ್ ಕುಮಾರ್ ಅವರು ನಂತರ ಮಾಡೆಲಿಂಗ್ ಕಡೆ ಹೊರಳಿದರು. ಈ ವೇಳೆ ಕೆಲವು ಜಾಹೀರಾತುಗಳಲ್ಲಿ ಕಾಣಿಸಿಕೊಂಡರು. ಬಹುಭಾಷಾ ನಟಿ ಪ್ರಿಯಾಮಣಿ, ಕನ್ನಡದ ನಟಿ ಪ್ರೇಮಾ ಸೇರಿದಂತೆ ಅನೇಕರ ಜೊತೆ ಸುರೇಶ್ ಕುಮಾರ್ ಜಾಹೀರಾತುಗಳಲ್ಲಿ ಕಾಣಿಸಿಕೊಂಡರು. ದೆಹಲಿ ಮೂಲದ ಹುಡುಗಿಯನ್ನು ಸುರೇಶ್ ವಿವಾಹ ಆದರು.



## 50 ವರ್ಷಗಳ ಬಳಿಕ ಅತ್ಯಂತ ಹೀನಾಯವಾಗಿ ಸೋತ ಇಂಗ್ಲೆಂಡ್

ಕ್ಯಾರಿ ಕೂಡ ಸರಣಿಗೆ ಅಲಭ್ಯ

ಸೌತ್ ಆಫ್ರಿಕಾ ವಿರುದ್ಧದ ಮೊದಲ ಏಕದಿನ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಇಂಗ್ಲೆಂಡ್ ತಂಡವು 24.3 ಓವರ್‌ಗಳಲ್ಲಿ 131 ರನ್‌ಗಳಿಸಿ ಆಲೌಟ್ ಆಗಿತ್ತು. ಈ ಗುರಿಯನ್ನು ಬೆನ್ನತ್ತಿದ ಸೌತ್ ಆಫ್ರಿಕಾ ತಂಡವು 20.5 ಓವರ್‌ಗಳಲ್ಲಿ 137 ರನ್‌ಗಳಿಸಿ 7 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ. ಈ ಗೆಲುವಿನೊಂದಿಗೆ ಮೂರು ಪಂದ್ಯಗಳ ಸರಣಿಯಲ್ಲಿ ಸೌತ್ ಆಫ್ರಿಕಾ 1-0 ಅಂತರದಿಂದ ಮುನ್ನಡೆ ಸಾಧಿಸಿದೆ. ಸೌತ್ ಆಫ್ರಿಕಾ ವಿರುದ್ಧದ ಮೊದಲ ಏಕದಿನ ಪಂದ್ಯದಲ್ಲಿ ಇಂಗ್ಲೆಂಡ್ ತಂಡ ಸೋಲನುಭವಿಸಿದೆ. ಲೀಡ್ಸ್‌ನ ಹೆಡಿಂಗ್ಲೆ ಮೈದಾನದಲ್ಲಿ ನಡೆದ ಈ ಪಂದ್ಯದಲ್ಲಿ ಟಾಸ್ ಗೆದ್ದ ಸೌತ್ ಆಫ್ರಿಕಾ ತಂಡದ ನಾಯಕ ಟೆಂಬಾ ಬವುಮಾ ಬೌಲಿಂಗ್ ಆಯ್ದುಕೊಂಡಿದ್ದರು. ನಾಯಕನ ನಿರ್ಧಾರವನ್ನು ಸಮರ್ಥಿಸುವಂತೆ ದಾಳಿ ಸಂಘಟಿಸಿದ ಸೌತ್ ಆಫ್ರಿಕಾ ಬೌಲರ್‌ಗಳು 44 ರನ್‌ಗಳಿಗೆ 2 ವಿಕೆಟ್ ಕಬಳಿಸಿದ್ದರು. ಈ ಹಂತದಲ್ಲಿ ಜವಾಬ್ದಾರಿಯುತ ಬ್ಯಾಟಿಂಗ್ ಪ್ರದರ್ಶಿಸಿದ ಜೇಮಿ ಸ್ಮಿತ್ ತಂಡವನ್ನು ಆರಂಭಿಕ ಆಘಾತದಿಂದ ಪಾರು ಮಾಡಿದರು. ಪರಿಣಾಮ ಇಂಗ್ಲೆಂಡ್ ಮೊದಲ 100 ಎಸೆತಗಳಲ್ಲಿ 3 ವಿಕೆಟ್ ಕಳೆದುಕೊಂಡು 100 ರನ್ ಕಲೆಹಾಕಿತು. ಆದರೆ ಆ ಬಳಿಕ 31 ರನ್‌ಗಳಿಸುವಷ್ಟರಲ್ಲಿ ಇಂಗ್ಲೆಂಡ್ ತಂಡದ ಏಳು ಬ್ಯಾಟರ್‌ಗಳನ್ನು ಪೆವಿಲಿಯನ್‌ಗೆ ಕಳಿಸುವಲ್ಲಿ ಸೌತ್ ಆಫ್ರಿಕಾ ಬೌಲರ್‌ಗಳು ಯಶಸ್ವಿಯಾದರು. ಪರಿಣಾಮ ಇಂಗ್ಲೆಂಡ್ 24.3 ಓವರ್‌ಗಳಲ್ಲಿ 131 ರನ್‌ಗಳಿಗೆ ಆಲೌಟ್ ಆಯಿತು.

ಅಚ್ಚರಿ ಎಂದರೆ ಕಳೆದ 50 ವರ್ಷಗಳಲ್ಲಿ ಲೀಡ್ಸ್‌ನಲ್ಲಿ ಇಂಗ್ಲೆಂಡ್ ಕಲೆಹಾಕಿದ ಕನಿಷ್ಠ ಸ್ಕೋರ್. ಅಂದರೆ 1975 ರಲ್ಲಿ ಲೀಡ್ಸ್‌ನ ಹೆಡಿಂಗ್ಲೆ ಮೈದಾನದಲ್ಲಿ ನಡೆದ ಆಸ್ಟ್ರೇಲಿಯಾ ವಿರುದ್ಧ ಪಂದ್ಯದಲ್ಲಿ 93 ರನ್‌ಗಳಿಗೆ ಆಲೌಟ್ ಆದ ಬಳಿಕ ಇಂಗ್ಲೆಂಡ್ ಈ ಪಿಚ್‌ನಲ್ಲಿ ಕಡಿಮೆ ಮೊತ್ತಕ್ಕೆ ಸರ್ವಪತನ ಕಂಡಿರಲಿಲ್ಲ.

ಆದರೆ ಸೌತ್ ಆಫ್ರಿಕಾ ತಂಡವು ಆತಿಥೇಯರನ್ನು ಕೇವಲ 131 ರನ್‌ಗಳಿಗೆ ಆಲೌಟ್ ಮಾಡಿ 50 ವರ್ಷಗಳ ಬಳಿಕ ಹೀನಾಯ ಸೋಲುಣಿಸುವಲ್ಲಿ ಯಶಸ್ವಿಯಾಗಿದ್ದಾರೆ.



## ಅಗ್ರಸ್ಥಾನಕ್ಕೇರಿದ ಜಿಂಬಾಬ್ವೆಯ ಅನುಭವಿ ಆಲ್‌ರೌಂಡರ್

ಐಸಿಸಿ ಬಿಡುಗಡೆ ಮಾಡಿದ ನೂತನ ಏಕದಿನ ಆಲ್‌ರೌಂಡರ್ ಶ್ರೇಯಾಂಕದಲ್ಲಿ ಜಿಂಬಾಬ್ವೆ ಆಟಗಾರ ಸಿಕಂದರ್ ರಾಝಾ ಅಗ್ರಸ್ಥಾನಕ್ಕೇರಿದ್ದು, ಅಫ್ಘಾನಿಸ್ತಾನದ ಅಜ್ಮತುಲ್ಲಾ ಉಮರ್‌ಜೈ ಅವರನ್ನು ಹಿಂದಿಕ್ಕಿದ್ದಾರೆ. ಶ್ರೀಲಂಕಾ ವಿರುದ್ಧದ ಸರಣಿಯಲ್ಲಿ ಜಿಂಬಾಬ್ವೆ ಸೋತರೂ, ರಾಝಾ ಅವರ ಅದ್ಭುತ ಬ್ಯಾಟಿಂಗ್ ಮತ್ತು ಬೌಲಿಂಗ್ ಪ್ರದರ್ಶನ ಗಮನ ಸೆಳೆದಿದೆ. ಟಾಪ್ 10 ರಲ್ಲಿ ಭಾರತದ ರವೀಂದ್ರ ಜಡೇಜಾ 9ನೇ ಸ್ಥಾನದಲ್ಲಿದ್ದಾರೆ. ಐಸಿಸಿ ಬಿಡುಗಡೆ ಮಾಡಿರುವ ನೂತನ ಏಕದಿನ ಆಲ್‌ರೌಂಡರ್‌ಗಳ ರ್‍ಯಾಂಕಿಂಗ್ ಪಟ್ಟಿಯಲ್ಲಿ ಜಿಂಬಾಬ್ವೆ ಆಟಗಾರರು ಸಂಪೂರ್ಣ ಪಾರುಪತ್ಯ ಸಾಧಿಸಿದ್ದಾರೆ. ಇತ್ತೀಚೆಗೆ ಜಿಂಬಾಬ್ವೆ ಹಾಗೂ ಶ್ರೀಲಂಕಾ ನಡುವೆ ಎರಡು ಪಂದ್ಯಗಳ ಏಕದಿನ ಸರಣಿ ನಡೆಯಿತು. ಈ ಸರಣಿಯನ್ನು ಜಿಂಬಾಬ್ವೆ ತಂಡ 0-2 ಅಂತರದಿಂದ ಕಳೆದುಕೊಂಡರೂ ತಂಡದ ಆಲ್‌ರೌಂಡರ್ ಸಿಕಂದರ್ ರಾಝು ಪ್ರದರ್ಶನ ಗಮನಾರ್ಹವಾಗಿತ್ತು. ಅದರಂತೆ ಐಸಿಸಿ ಬಿಡುಗಡೆ ಮಾಡಿರುವ ಆಲ್‌ರೌಂಡರ್‌ಗಳ ರ್‍ಯಾಂಕಿಂಗ್‌ನಲ್ಲಿ ಜಿಂಬಾಬ್ವೆಯ ಅನುಭವಿ ಆಟಗಾರ ಸಿಕಂದರ್ ರಾಝು ಏಕದಿನ ಕ್ರಿಕೆಟ್‌ನಲ್ಲಿ ವಿಶ್ವದ ನಂಬರ್ ಒನ್ ಆಲ್‌ರೌಂಡರ್ ಎನಿಸಿಕೊಂಡಿದ್ದಾರೆ. ಅವರು ಅಫ್ಘಾನಿಸ್ತಾನದ ಅಜ್ಮತುಲ್ಲಾ ಉಮರ್‌ಜೈ ಅವರನ್ನು ಹಿಂದಿಕ್ಕಿ ಅಗ್ರಸ್ಥಾನಕ್ಕೇರಿದ್ದಾರೆ. ಶ್ರೀಲಂಕಾ ವಿರುದ್ಧದ ಮೊದಲ ಏಕದಿನ ಪಂದ್ಯದಲ್ಲಿ 92 ರನ್‌ಗಳ ಅದ್ಭುತ ಇನ್ನಿಂಗ್ಸ್ ಆಡಿದ್ದ ರಾಝು, ಎರಡನೇ ಏಕದಿನ ಪಂದ್ಯದಲ್ಲಿ 55 ಎಸೆತಗಳಲ್ಲಿ ಅಜೇಯ 59 ರನ್ ಬಾರಿಸಿದ್ದರು. ಬೌಲಿಂಗ್‌ನಲ್ಲಿಯೂ ಉತ್ತಮ ಪ್ರದರ್ಶನ ನೀಡಿದ್ದರು. ಆದಾಗ್ಯೂ ಶ್ರೀಲಂಕಾ ವಿರುದ್ಧದ ಏಕದಿನ ಸರಣಿಯಲ್ಲಿ ಜಿಂಬಾಬ್ವೆ 2-0 ಸೋಲನ್ನು ಎದುರಿಸಬೇಕಾಯಿತು. ಸಿಕಂದರ್ ರಾಝು ಒಟ್ಟು 302 ರೇಟಿಂಗ್ ಪಾಯಿಂಟ್‌ಗಳೊಂದಿಗೆ ಅಗ್ರಸ್ಥಾನವನ್ನು ಪಡೆದುಕೊಂಡಿದ್ದರೆ, ಅಫ್ಘಾನಿಸ್ತಾನದ ಉಮರ್ಜೈ ಈಗ ಎರಡನೇ ಸ್ಥಾನಕ್ಕೆ ಕುಸಿದಿದ್ದು, 296 ರೇಟಿಂಗ್ ಪಾಯಿಂಟ್‌ಗಳನ್ನು ಹೊಂದಿದ್ದಾರೆ. ಮೊಹಮ್ಮದ್ ನಬಿ ಕೂಡ ಒಂದು ಸ್ಥಾನ ಕಳೆದುಕೊಂಡು 292 ರೇಟಿಂಗ್ ಪಾಯಿಂಟ್‌ಗಳೊಂದಿಗೆ ಮೂರನೇ ಸ್ಥಾನಕ್ಕೆ ಬಂದಿದ್ದಾರೆ. ಉಳಿದಂತೆ ಬಾಂಗ್ಲಾದೇಶದ ಆಲ್‌ರೌಂಡರ್ ಮೆಹದಿ ಹಸನ್ ಮಿರ್ಜಾ ನಾಲ್ಕನೇ ಸ್ಥಾನದಲ್ಲಿದ್ದಾರೆ.



## ವಿರಾಟ್ ಕೊಹ್ಲಿಗೆ ಇಂಗ್ಲೆಂಡ್‌ನಲ್ಲಿ ಫಿಟ್‌ನೆಸ್ ಟೆಸ್ಟ್..!

ಭಾರತ ಮತ್ತು ಆಸ್ಟ್ರೇಲಿಯಾ ನಡುವಣ ಏಕದಿನ ಸರಣಿಯು ಅಕ್ಟೋಬರ್ 19 ರಿಂದ ಶುರುವಾಗಲಿದ್ದು, ಈ ಸರಣಿಯಲ್ಲಿ ಉಭಯ ತಂಡಗಳು ಮೂರು ಪಂದ್ಯಗಳನ್ನಾಡಲಿದೆ. ಈ ಸರಣಿಯ ಬಳಿಕ ಉಭಯ ತಂಡಗಳು 5 ಪಂದ್ಯಗಳ ಟಿ20 ಸರಣಿ ಆಡಲಿದೆ. ಈ ಸರಣಿಗೂ ಮುನ್ನ ಎಲ್ಲಾ ಆಟಗಾರರು ಫಿಟ್‌ನೆಸ್ ಟೆಸ್ಟ್‌ಗೆ ಒಳಗಾಗಲಿದ್ದಾರೆ. ಟೀಮ್ ಇಂಡಿಯಾದ ಸ್ಟಾರ್ ಬ್ಯಾಟರ್ ವಿರಾಟ್ ಕೊಹ್ಲಿ ಆಸ್ಟ್ರೇಲಿಯಾ ವಿರುದ್ಧದ ಏಕದಿನ ಸರಣಿಗೆ ಸಜ್ಜಾಗುತ್ತಿದ್ದಾರೆ. ಅದರ ಮೊದಲ ಭಾಗವಾಗಿ ಇದೀಗ ಫಿಟ್‌ನೆಸ್ ಟೆಸ್ಟ್ ಪೂರೈಸಿದ್ದಾರೆ. ಅದು ಕೂಡ ಲಂಡನ್‌ನಲ್ಲಿ ಎಂಬುದು ವಿಶೇಷ.

ಮುಂಬರುವ ಸರಣಿಗೂ ಮುನ್ನ ಎಲ್ಲಾ ಆಟಗಾರರು ಫಿಟ್‌ನೆಸ್ ಟೆಸ್ಟ್‌ನಲ್ಲಿ ಪಾಲ್ಗೊಳ್ಳುವಂತೆ ಬಿಸಿಸಿಐ ನಿರ್ದೇಶಿಸಿತ್ತು. ಅದರಂತೆ ರೋಹಿತ್ ಶರ್ಮಾ ಸೇರಿದಂತೆ ಹಲವು ಆಟಗಾರರು ಇತ್ತೀಚೆಗಷ್ಟೇ ಬೆಂಗಳೂರಿನಲ್ಲಿರುವ ಬಿಸಿಸಿಐ ಸೆಂಟರ್ ಆಫ್ ಎಕ್ಸಲೆನ್ಸ್ ನಲ್ಲಿ ಫಿಟ್‌ನೆಸ್ ಟೆಸ್ಟ್‌ನಲ್ಲಿ ಪಾಲ್ಗೊಂಡಿದ್ದರು. ಆದರೆ ವಿರಾಟ್ ಕೊಹ್ಲಿ ಮಾತ್ರ ಲಂಡನ್‌ನಲ್ಲಿ ಫಿಟ್‌ನೆಸ್ ಟೆಸ್ಟ್ ನೀಡಿದ್ದಾರೆ. ದೈನಿಕ್ ಜಾಗರಣ್ ವರದಿ ಪ್ರಕಾರ, ವಿರಾಟ್ ಕೊಹ್ಲಿ ಇಂಗ್ಲೆಂಡ್‌ನಲ್ಲಿ ಫಿಟ್‌ನೆಸ್ ಟೆಸ್ಟ್‌ನಲ್ಲಿ ಪಾಲ್ಗೊಂಡಿದ್ದಾರೆ. ಅಲ್ಲದೆ ಈ ಟೆಸ್ಟ್‌ನಲ್ಲಿ ಪಾಸಾಗಿದ್ದಾರೆ. ವಿರಾಟ್ ಕೊಹ್ಲಿ ಪ್ರಸ್ತುತ ತಮ್ಮ ಕುಟುಂಬದೊಂದಿಗೆ ಲಂಡನ್‌ನಲ್ಲಿದ್ದಾರೆ. ಹೀಗಾಗಿ ಇಂಗ್ಲೆಂಡ್‌ನಲ್ಲಿ ಫಿಟ್‌ನೆಸ್ ಪರೀಕ್ಷೆ ನಡೆಸಲು ಅವರು ಭಾರತೀಯ ಕ್ರಿಕೆಟ್ ಮಂಡಳಿಯಿಂದ ಪೂರ್ವಾನುಮತಿ ಪಡೆದಿದ್ದರು. ಅದರಂತೆ ಮಂಡಳಿಯ ಮೇಲ್ವಿಚಾರಣೆಯಲ್ಲಿ ಇದೀಗ ಲಂಡನ್‌ನಲ್ಲಿ ಫಿಟ್‌ನೆಸ್ ಟೆಸ್ಟ್ ಅನ್ನು ಪೂರ್ಣಗೊಳಿಸಿದ್ದು, ಈ ವರದಿಯಲ್ಲಿ ಬಿಸಿಸಿಐಗೆ ಸಲ್ಲಿಸಲಾಗಿದೆ. ಅಲ್ಲದೆ ಎಲ್ಲಾ ದೈಹಿಕ ಪರೀಕ್ಷೆಯಲ್ಲೂ ಪಾಸ್ ಆಗಿರುವ ಕಾರಣ ಕೊಹ್ಲಿ ಮುಂಬರುವ ಆಸ್ಟ್ರೇಲಿಯಾ ವಿರುದ್ಧದ ಏಕದಿನ ಸರಣಿಯಲ್ಲಿ ಕಾಣಿಸಿಕೊಳ್ಳಲಿದ್ದಾರೆ.

**ಫಿಟ್‌ನೆಸ್ ಟೆಸ್ಟ್‌ನಲ್ಲಿ ಪಾಸ್ ಆದವರು:** ಬೆಂಗಳೂರಿನಲ್ಲಿರುವ ಬಿಸಿಸಿಐ ಸೆಂಟರ್ ಆಫ್ ಎಕ್ಸಲೆನ್ಸ್ ನಲ್ಲಿ ಫಿಟ್‌ನೆಸ್ ಟೆಸ್ಟ್‌ನಲ್ಲಿ ಪಾಲ್ಗೊಂಡಿದ್ದ ಭಾರತ ಏಕದಿನ ತಂಡದ ನಾಯಕ ರೋಹಿತ್ ಶರ್ಮಾ, ಮೊಹಮ್ಮದ್ ಸಿರಾಜ್, ಶುಭ್‌ಮನ್ ಗಿಲ್, ಜಿತೇಶ್ ಶರ್ಮಾ, ಪ್ರಸಿದ್ಧ್ ಕೃಷ್ಣ, ರುತುರಾಜ್ ಗಾಯಕ್ವಾಡ್, ಅಭಿಷೇಕ್ ಶರ್ಮಾ, ಹರ್ಷಿತ್ ರಾಣಾ, ಶ್ರೇಯಸ್ ಅಯ್ಯರ್, ರಿಂಕು ಸಿಂಗ್, ಅಕ್ಷರ್ ಪಟೇಲ್, ರಜತ್ ಪಾಟಿದಾರ್, ರವಿ ಬಿಷ್ಣೋಯ್, ಸಂಜು ಸ್ಯಾಮ್ಸನ್, ಶಿವಂ ದುಬೆ, ಮೊಹಮ್ಮದ್ ಶಮಿ, ವರುಣ್ ಚಕ್ರವರ್ತಿ, ಮುಖೇಶ್ ಕುಮಾರ್, ಸರ್ಫರಾಝ್ ಖಾನ್, ತಿಲಕ್ ವರ್ಮಾ, ಅಭಿಮನ್ಯು ಈಶ್ವರನ್, ಅರ್ಷದೀಪ್ ಸಿಂಗ್, ಕುಲ್ದೀಪ್ ಯಾದವ್, ಧ್ರುವ್ ಜುರೆಲ್, ಶಾರ್ದೂಲ್ ಠಾಕೂರ್, ವಾಷಿಂಗ್ಟನ್ ಸುಂದರ್ ಮತ್ತು ಯಶಸ್ವಿ ಜೈಸ್ವಾಲ್ ಫಿಟ್‌ನೆಸ್ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದಾರೆ ಎಂದು ತಿಳಿದು ಬಂದಿದೆ. ಇನ್ನು ರವೀಂದ್ರ ಜಡೇಜಾ, ಕೆಎಲ್ ರಾಹುಲ್, ರಿಷಭ್ ಪಂತ್, ಆಕಾಶ್ ದೀಪ್ ಮತ್ತು ನಿತೀಶ್ ರೆಡ್ಡಿ ಈ ತಿಂಗಳು ಫಿಟ್‌ನೆಸ್ ಟೆಸ್ಟ್‌ನಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ವರದಿಯಾಗಿದೆ.



## ಏಷ್ಯಾಕಪ್‌ಗಾಗಿ ಟೀಂ ಇಂಡಿಯಾ ಸೇರಿದ ಶಾಸಕರ ಅಳಿಯ

ಯುಎಇ ವಿರುದ್ಧ ಮೊದಲ ಪಂದ್ಯ

ಭಾರತ ಕ್ರಿಕೆಟ್ ತಂಡದ ಏಷ್ಯಾಕಪ್ 2025 ಅಭಿಯಾನಕ್ಕಾಗಿ ಪಿವಿಆರ್ ಪ್ರಶಾಂತ್ ಅವರನ್ನು ಹೊಸ ಮ್ಯಾನೇಜರ್ ಆಗಿ ನೇಮಿಸಲಾಗಿದೆ. ಅವರು ಆಂಧ್ರಪ್ರದೇಶ ಕ್ರಿಕೆಟ್ ಅಸೋಸಿಯೇಷನ್‌ನ ಉಪಾಧ್ಯಕ್ಷರಾಗಿದ್ದರು. ತಂಡವು ಸೆಪ್ಟೆಂಬರ್ 4 ರಂದು ಯುಎಇಗೆ ಪ್ರಯಾಣಿಸಲಿದೆ ಮತ್ತು ಸೆಪ್ಟೆಂಬರ್ 10 ರಂದು ತನ್ನ ಮೊದಲ ಪಂದ್ಯವನ್ನು ಆಡಲಿದೆ.

2025 ರ ಏಷ್ಯಾಕಪ್ ಸೆಪ್ಟೆಂಬರ್ 9 ರಿಂದ ಯುಎಇಯಲ್ಲಿ ಆರಂಭವಾಗಲಿದ್ದು, ಭಾರತ ತಂಡ ಸೆಪ್ಟೆಂಬರ್ 10 ರಂದು ತನ್ನ ಮೊದಲ ಪಂದ್ಯವನ್ನು ಆಡಲಿದೆ. ಆದರೆ ಅಲ್ಲಿನ ಪರಿಸ್ಥಿತಿಗಳಿಗೆ ಹೊಂದಿಕೊಳ್ಳುವ ಸಲುವಾಗಿ ಸೂರ್ಯಕುಮಾರ್ ಪಡೆ ಸೆಪ್ಟೆಂಬರ್ 4 ರಂದು ಪ್ರಯಾಣ ಬೆಳೆಸಲಿದೆ. ಇಡೀ ತಂಡ ಯುಎಇಗೆ ತೆರಳುವ ಮೊದಲು, ತಂಡಕ್ಕೆ ಮತ್ತೊಬ್ಬ ಹೊಸ ಸದಸ್ಯರನ್ನು ಸೇರಿಸಲಾಗಿದ್ದು, ಅವರು ಏಷ್ಯಾಕಪ್‌ನಲ್ಲಿ ತಂಡದಲ್ಲಿ ದೊಡ್ಡ ಪಾತ್ರ ವಹಿಸಲಿದ್ದಾರೆ. ವಾಸ್ತವವಾಗಿ ಬಿಸಿಸಿಐ, ಏಷ್ಯಾಕಪ್‌ಗಾಗಿ ಭಾರತ ತಂಡಕ್ಕೆ ಆಂಧ್ರಪ್ರದೇಶ ಕ್ರಿಕೆಟ್ ಅಸೋಸಿಯೇಷನ್‌ನ ಉಪಾಧ್ಯಕ್ಷರಾಗಿದ್ದ ಪಿವಿಆರ್ ಪ್ರಶಾಂತ್ ಅವರನ್ನು ನೂತನ ಮ್ಯಾನೇಜರ್ ಆಗಿ ನೇಮಿಸಿದೆ.



ಟೀಂ ಇಂಡಿಯಾದ ಹೊಸ ಮ್ಯಾನೇಜರ್ ಆಗಿ ನೇಮಕಗೊಂಡಿರುವ ಪಿವಿಆರ್ ಪ್ರಶಾಂತ್ ಬಗ್ಗೆ ಕುತೂಹಲಕಾರಿ ವಿಷಯವೆಂದರೆ ಅವರು ಶಾಸಕರ ಕುಟುಂಬಕ್ಕೆ ಸೇರಿದವರು. ಅವರ ತಂದೆ ಶಾಸಕರಾಗಿದ್ದು, ಅವರ ಮಾವ ಕೂಡ ಶಾಸಕರಾಗಿದ್ದಾರೆ. ಪ್ರಶಾಂತ್ ಅವರ ತಂದೆ ಪುಲ್ಪರ್ತಿ ರಾಮಾಂಜನೇಯುಲು ಅವರು 2009 ರಿಂದ 2014 ರವರೆಗೆ ಶಾಸಕರಾಗಿದ್ದರು. ಆ ಬಳಿಕ ಅವರು ಮಾರ್ಚ್ 2024 ರಲ್ಲಿ ಪವನ್ ಕಲ್ಯಾಣ್ ಅವರ ಜನಸೇನಾ ಪಕ್ಷವನ್ನು ಸೇರಿದರು. ಇತ್ತ ಪ್ರಶಾಂತ್ ಅವರ ಮಾವ ಜಿ. ಶ್ರೀನಿವಾಸ್ ರಾವ್ ಅವರು ಆಂಧ್ರಪ್ರದೇಶದ ತೆಲುಗು ದೇಶಂ ಪಕ್ಷದ ನಾಯಕರಾಗಿದ್ದು, 2024 ರಲ್ಲಿ ಭೀಮ್ಲಿಯಿಂದ ಶಾಸಕರಾಗಿ ಆಯ್ಕೆಯಾಗಿದ್ದು, ಪ್ರಸ್ತುತ ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವರೂ ಆಗಿದ್ದಾರೆ. ಪಿವಿಆರ್ ಪ್ರಶಾಂತ್ ಅವರ ಕ್ರಿಕೆಟ್ ವೃತ್ತಿಜೀವನದ ಬಗ್ಗೆ ಹೇಳುವುದಾದರೆ, ಓಲ್ಡ್ ವೆಸ್ಟ್ ಗೋದಾವರಿ ತಂಡದಿಂದ ಜಿಲ್ಲಾ ಮಟ್ಟದಲ್ಲಿ ಕ್ರಿಕೆಟ್ ಆಡಿದ್ದು, ಈ ಹಿಂದೆ ಆಂಧ್ರಪ್ರದೇಶ ಕ್ರಿಕೆಟ್ ಅಸೋಸಿಯೇಷನ್‌ನ ಉಪಾಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ.

ತಂಡದ ನೂತನ ಮ್ಯಾನೇಜರ್ ಆಗಿ ಆಯ್ಕೆಯಾಗಿರುವ ಪ್ರಶಾಂತ್ ಅವರು ಏಷ್ಯಾ ಕಪ್ ಸಮಯದಲ್ಲಿ ಆಟಗಾರರ ಪ್ರತಿಯೊಂದು ಅಗತ್ಯವನ್ನು ನೋಡಿಕೊಳ್ಳುತ್ತಾರೆ. ಅಲ್ಲದೆ ಅವರು ಬಿಸಿಸಿಐ ಮತ್ತು ತಂಡದ ನಡುವೆ ಸೇತುವೆಯಾಗಿ ಕೆಲಸ ಮಾಡುತ್ತಾರೆ. ಏಷ್ಯಾಕಪ್‌ನಲ್ಲಿ ಭಾರತ ತಂಡದ ಅಭಿಯಾನ ಸೆಪ್ಟೆಂಬರ್ 10 ರಿಂದ ಆರಂಭವಾಗುತ್ತಿದೆ. ಯುಎಇ ವಿರುದ್ಧ ಮೊದಲ ಪಂದ್ಯವನ್ನು ಆಡಿದ ನಂತರ, ಭಾರತ ತಂಡ ಸೆಪ್ಟೆಂಬರ್ 14 ರಂದು ಎರಡನೇ ಪಂದ್ಯದಲ್ಲಿ ಪಾಕಿಸ್ತಾನವನ್ನು ಎದುರಿಸಲಿದೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966